ಸಂಪುಟ: 21, ಸಂಚಿಕೆ: 359, ಪುಟಗಳು: 8, ಭಾನುವಾರ, 6 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ವೇಣು ಸಾರಥ್ಯದಲ್ಲಿ...

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಗಿಡ ಯಾವತ್ತೂ ಉದುರಿ ಹೋದ ಎಲೆ, ಹೂವುಗಳ ಬಗ್ಗೆ ಯೋಚಿಸುವುದಿಲ್ಲ. ಹೊಸ ಹೂವಿನ ಸೃಷ್ಟಿಯೇ ಅದರ ಧ್ಯಾನ. ಕಳೆದು ಹೋದುದಕ್ಕೆ ಚಿಂತೆ ಬೇಡ. ಹೊಸತನ್ನು ಸೃಷ್ಟಿಸುವ ಉತ್ಸಾಹವಿರಲಿ.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಭಾನುವಾರ 6, ಅಕ್ಟೋಬರ್-2024)

- ಕ್ರೋಧಿನಾಮ ಸಂವತ್ಸರ ದಕ್ಷಿಣಾಯನ,
- ಆಶ್ವಯುಜ ಮಾಸ, ಶುಕ್ಲ ಪಕ್ಷ ತದಿಗೆ ತಿಥಿ ವಿಶಾಖ ನಕ್ಷತ್ರ
- ರಾಹುಕಾಲ : 04:36 ರಿಂದ 06:06 ವರೆಗೆ
- ಗುಳಿಕಕಾಲ : 03:06 ರಿಂದ 04:36 ವರೆಗೆ
- ಯಮಗಂಡಕಾಲ : 12:07 ರಿಂದ 01:37 ವರೆಗೆ

## ಸಂಕ್ಷಿಪ್ತ ಸುದ್ದಿ

### ತಿರುಪತಿಯ ಪ್ರಸಾದದಲ್ಲಿ ಹುಳುಗಳು ಪತ್ತೆ



**ಹೈದರಾಬಾದ್:** ತಿರುಪತಿ ಲಡ್ಡುಗಳಲ್ಲಿ ಪ್ರಾಣಿಗಳ ಕೊಬ್ಬು ಪತ್ತೆಯಾಗಿದೆ ಎನ್ನುವ ಆರೋಪದ ಹಿಂದೆಯೇ ಮತ್ತೊಂದು ಆರೋಪ ಕೇಳಿಬಂದಿದೆ. ತಿರುಪತಿಯ ಪ್ರಸಾದದಲ್ಲಿ ಹುಳುಗಳು ಸಿಕ್ಕಿವೆ ಎಂದು ಭಕ್ತರು ಆರೋಪಿಸಿದ್ದಾರೆ. ದೇವಾಲಯವನ್ನು ನೋಡಿಕೊಳ್ಳುವ ಟ್ರಸ್ಟ್ ತಿರುಮಲ ತಿರುಪತಿ ದೇವಸ್ಥಾನಮ್ (ಟಿಟಿಡಿ) ಈ ಆರೋಪವನ್ನು ತಳ್ಳಿಹಾಕಿದೆ. ಇದು ಸ್ವೀಕಾರಾರ್ಹವಲ್ಲ ಮತ್ತು ಟಿಟಿಡಿ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ತೋರುತ್ತಿದೆ ಎಂದು ಭಕ್ತರೊಬ್ಬರು ಹೇಳಿದ್ದಾರೆ. ಇದಕ್ಕೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಆಗ್ರಹಿಸುತ್ತೇವೆಂದು ಹೇಳಿದ್ದಾರೆ. ಭಕ್ತರೊಬ್ಬರು ಮಾತನಾಡಿ, ನಾನು ವಾರಂಗಲ್ ನಿಂದ ತಿಮ್ಮಪ್ಪನ ದರ್ಶನಕ್ಕೆಂದು ತೆರಳಿದ್ದೆ, ಮೊಸರನ್ನ ಊಟ ಮಾಡುವ ಸಮಯದಲ್ಲಿ ಊಟದಲ್ಲಿ ಹುಳು ಸಿಕ್ಕಿತ್ತು. ಈ ವಿಚಾರವನ್ನು ಸಿಬ್ಬಂದಿಗೆ ತಿಳಿಸಿದೆ ಆದರೆ ಅವರ ಪ್ರತಿಕ್ರಿಯೆ ಆಘಾತಕಾರಿಯಾಗಿತ್ತು,ಇದು ಕೆಲವೊಮ್ಮೆ ಸಂಭವಿಸುತ್ತದೆ. ಸರ್ಕಾರ ಬದಲಾದರೂ ಈ ಸಮಸ್ಯೆಗಳು ಹಾಗೆಯೇ ಉಳಿದಿವೆ ಎಂದು ಉತ್ತರ ಕೊಟ್ಟಿದ್ದರು. ಪುಟ 2

### ಹೊಸ ವರ್ಷದಿಂದ್ಲೇ ಎಲೆಕ್ಟ್ರಾನಿಕ್ ಸಿಟಿಗೆ ಮೆಟ್ರೋ



**ಬೆಂಗಳೂರು:** ಸಿಲಿಕಾನ್ ಸಿಟಿ ಜನರಿಗೆ ನಮ್ಮ ಮೆಟ್ರೋ ಮತ್ತೊಂದು ಗುಡ್‌ನ್ಯೂಸ್ ಕೊಟ್ಟಿದೆ. 2025ರ ಜನವರಿಯಿಂದ ಎಲೆಕ್ಟ್ರಾನಿಕ್ ಸಿಟಿಗೆ ಮೆಟ್ರೋ ರೈಲು ಆರಂಭವಾಗಲಿದೆ ಎಂದು ತಿಳಿದುಬಂದಿದೆ. ಪುಟ 2

## ದರ್ಶನ್, ಪವಿತ್ರಾಗೌಡ ಮೊಬೈಲ್ ರಿಟ್ರೀವ್ ಆಗಿಲ್ಲ!



**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದ ಹಿನ್ನೆಲೆ ಸಿಎಫ್‌ಎಸ್‌ಎಲ್ ವರದಿ ಇನ್ನೊಂದು ವಾರದಲ್ಲಿ ಬರಲಿದ್ದು, ಮೊಬೈಲ್ ರಿಟ್ರೀವ್ ಆಗುವ ಸಾಧ್ಯತೆಯಿದೆ. ವರದಿಯ ಬಳಿಕ ಪೊಲೀಸರು ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಸಲಿದ್ದಾರೆ. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಹಿನ್ನೆಲೆ ಕಾಮಾಕ್ಷಿಪಾಳ್ಯ ಪೊಲೀಸರಿಂದ 3991 ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆಯಾಗಿತ್ತು. ಈ ವೇಳೆ ಹತ್ತು ಆರೋಪಿಗಳ ಮೊಬೈಲ್ ರಿಟ್ರೀವ್‌ಗಾಗಿ ಹೈದಾರಬಾದ್‌ಗೆ ಕಳುಹಿಸಲಾಗಿತ್ತು. ಆದರೆ ನಟ ದರ್ಶನ್ ಹಾಗೂ ಪವಿತ್ರಾಗೌಡ ಇಬ್ಬರದ್ದು ಐಫೋನ್ ಆಗಿರುವ ಹಿನ್ನೆಲೆ ಮೊಬೈಲ್ ರಿಟ್ರೀವ್ ಆಗಿರಲಿಲ್ಲ. ಪುಟ 2

## ಶಬರಿಮಲೆ ಯಾತ್ರೆಗೆ ಆನ್‌ಲೈನ್ ಬುಕ್ಕಿಂಗ್ ಕಡ್ಡಾಯ



ದಿನಕ್ಕೆ 80,000 ಭಕ್ತರಿಗೆ ದರ್ಶನಕ್ಕೆ ಅವಕಾಶ

**ತಿರುವನಂತಪುರಂ:** ಶಬರಿಮಲೆಯಲ್ಲಿ ನವೆಂಬರ್ ನಿಂದ ಪ್ರಾರಂಭವಾಗುವ ಎರಡು ತಿಂಗಳ ಮಂಡಲಂ-ಮಕರವಿಳಕ್ಕು ತೀರ್ಥಯಾತ್ರಾ ಹಿನ್ನೆಲೆ ಈ ವರ್ಷ ಆನ್‌ಲೈನ್ ಬುಕ್ಕಿಂಗ್ ಮಾಡಿದವರಿಗೆ ಮಾತ್ರ ಶಬರಿಮಲೆ ಪ್ರವೇಶಕ್ಕೆ ಅನುಮತಿ ನೀಡಲಾಗುವುದು ಎಂದು ಕೇರಳ ಸರ್ಕಾರ ತಿಳಿಸಿದೆ. ಪುಟ 2

### ಇಂದು ಸಹ ಬೆಂಗಳೂರು ಸೇರಿ ಹಲವೆಡೆ ಭಾರೀ ಮಳೆ ಸಾಧ್ಯತೆ

# 11 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್



**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ಸುರಿದ ಧಾರಾಕಾರ ಮಳೆಯು ಭಾರೀ ಅನಾಹುತವನ್ನುಂಟು ಮಾಡಿದೆ. ನಗರದ ಬಿನ್ನಿಪೇಟೆಯಲ್ಲಿ ಕಾಂಪೌಂಡ್ ಕುಸಿದಿದ್ದು, ಹತ್ತಾರು ಗಾಡಿಗಳು ಜಖಂಗೊಂಡಿವೆ. ನಾಲ್ಕೈದು ಮನೆಗಳಿಗೆ ನೀರು ನುಗ್ಗಿದೆ. ಕಾಂಪೌಂಡ್ ಕುಸಿತ ಪರಿಣಾಮ 16 ಮನೆಗಳಿಗೆ ಜಲದಿಗ್ಬಂಧನ ಉಂಟಾಗಿದೆ. ಎಡೆಬಿಡದೆ ಸುರಿದ ಮಳೆಗೆ ಕೆ.ಆರ್. ಮಾರ್ಕೆಟ್‌ನ ರಸ್ತೆಯೆಲ್ಲಾ ಜಲಾವೃತ್ತವಾಗಿತ್ತು. ಪುಟ 2

## ಬೆಂಗಳೂರಿನಲ್ಲಿ 36 ಮಿ.ಮೀ ಮಳೆ

**ರಾಜಧಾನಿ ಬೆಂಗಳೂರಿನಲ್ಲಿ ಕಳೆದ ಮೂರು ದಿನಗಳಿಂದ ಮಳೆಯಾಗುತ್ತಿದೆ. ಭಾರೀ ಮಳೆಯಿಂದಾಗಿ ನಗರದ ಹಲವೆಡೆ ತಗ್ಗು ಪ್ರದೇಶಗಳು ಜಲಾವೃತವಾಗಿವೆ. ತಡೆಗೋಡೆ ಕುಸಿದು ಅಪಾರ್ಟ್ ಮೆಂಟ್ ಒಳಗೆ ನೀರು ನುಗ್ಗಿದೆ. ಸರಾಸರಿ 36 ಮಿಲಿ ಮೀಟರ್ ಮಳೆ ದಾಖಲಾಗಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ಕಳೆದ ರಾತ್ರಿ ಸುರಿದ ಭಾರೀ ಮಳೆಗೆ ನಗರದ ಬಿನ್ನಿಪೇಟೆಯಲ್ಲಿ ಕಂಪೌಂಡ್ ಕುಸಿದು ಹತ್ತಾರು ಗಾಡಿಗಳು ಜಖಂಗೊಂಡಿವೆ. ನಾಲ್ಕೈದು ಮನೆಗಳಿಗೆ ನೀರು ನುಗ್ಗಿದೆ. ಕಂಪೌಂಡ್ ಕುಸಿದು 16 ಮನೆಗಳಿಗೆ ಜಲದಿಗ್ಬಂಧನ ಉಂಟಾಗಿದೆ. ರಸ್ತೆಗಳೆಲ್ಲ ಹಳ್ಳಗಳಂತಾಗಿ ವಾಹನ ಸವಾರರು ಪರದಾಡಿದರು. ತಡರಾತ್ರಿವರೆಗೂ ಮಳೆ ಸುರಿದಿದ್ದರಿಂದ ವಾಹನ ಸವಾರರು ಸಂಕಷ್ಟಕ್ಕೆ ಸಿಲುಕಿದರು. ಅಲ್ಲದೇ ಕೆಲವು ಕಡೆ ಟ್ರಾಫಿಕ್ ಆಗಿ ಡ್ರೈವರ್?ಗಳು ಸಮಸ್ಯೆ ಅನುಭವಿಸಿದರು.ವರುಣನ ಅಬ್ಬರಕ್ಕೆ ಸಿಲಿಕಾನ್ ಸಿಟಿ ತತ್ತರಿಸಿದೆ. ರಾತ್ರಿಯಿಂದ ಸುರಿದ ಭಾರೀ ಮಳೆಗೆ ಬೆಂಗಳೂರು ಸ್ತಬ್ಧವಾಗಿದೆ. ಸಂಜೆಯಿಂದ ಜೋರು ಮಳೆ ಬಿದ್ದಿದ್ದು ಹಲವು ಕಡೆ ಜನಜೀವನ ತೀವ್ರ ಸಂಕಷ್ಟಕ್ಕೆ ಒಳಗಾದರು.ಕೆ.ಆರ್ ಮಾರುಕಟ್ಟೆ, ರಾಜಾಜಿನಗರ,**



**ವಿಜಯನಗರ, ಬನಶಂಕರಿ, ಮೆಜೆಸ್ಟಿಕ್, ಮಲ್ಲೇಶ್ವರಂ, ವೈಟ್ ಫೀಲ್ಡ್, ಹೆಬ್ಬಾಳ, ಕಾರ್ಪೊರೇಷನ್, ಕೋರಮಂಗಲ, ಸೇರಿ ಹಲವು ಕಡೆ ಭಾರಿ ಮಳೆಯಾಗಿದೆ. ಬೆಂಗಳೂರಿನ ಬಹುತೇಕ ರಸ್ತೆಗಳು ಜಲಾವೃತವಾಗಿವೆ. ಮಲ್ಲೇಶ್ವರಂ, ಶಾಂತಿನಗರ, ರಾಜಾಜಿನಗರ, ವೈಟ್‌ಫೀಲ್ಡ್, ಮೆಜೆಸ್ಟಿಕ್, ಕೆಆರ್ ಮಾರ್ಕೆಟ್ ಸೇರಿದಂತೆ ಹಲವು ರಸ್ತೆಗಳಲ್ಲಿ ನೀರು ತುಂಬಿ ವಾಹನ ಸವಾರರು ಪರದಾಡಿದರು.** ಪುಟ 2

### ಜಿಟಿ ದೇವೇಗೌಡ ಆಯ್ತು, ಈಗ ಬಿಜೆಪಿ ನಾಯಕರ ಸರದಿ!

## ಸಿಎಂ ಪರ ಮಾಜಿ ಸಂಸದ ಬ್ಯಾಟಿಂಗ್

**ಚಿಕ್ಕೋಡಿ:** ರಾಜ್ಯ ರಾಜಕಾರಣದಲ್ಲಿ ಆಡಳಿತ ಹಾಗೂ ವಿರೋಧ ಪಕ್ಷದ ನಾಯಕರ ಹೇಳಿಕೆ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಸದ್ಯ ರಾಜಕೀಯ ವಲಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ ಪ್ರಕರಣ ಭಾರೀ ಸದ್ದು ಮಾಡುತ್ತಿದೆ. ಮುಡಾ ವಿಚಾರ ಸಿಎಂ ವಿರುದ್ಧ ತನಿಖೆ ನಡೆಯುತ್ತಿದ್ದು, ಈ ನಡುವೆ ಹಲವು ನಾಯಕರು ಸಿಎಂ ಪರ ಮಾತನಾಡುತ್ತಿದ್ದಾರೆ. ವಿಶೇಷವೇನೆಂದರೆ ವಿರೋಧ ಪಕ್ಷದ ನಾಯಕರು ಸಿದ್ದರಾಮಯ್ಯ ಪರ ಮಾತನಾಡುತ್ತಿರುವುದು ಬಹಳ ಕುತೂಹಲಕ್ಕೆ ಎಡೆ ಮಾಡಿಕೊಟ್ಟಿದೆ. ಸದ್ಯ ಜೆಡಿಎಸ್‌ನ ಜಿಟಿ ದೇವೇಗೌಡ ಅವರು ಸಿಎಂ ಪರ ಮಾತನಾಡಿದ್ದರು. ಇದೀಗ ಬಿಜೆಪಿ ಅವರ ಸರದಿ ಬಂದಿದೆ. ಸಿಎಂ ಸಿದ್ದರಾಮಯ್ಯ ಅವರು ಸ್ವಚ್ಛ ಧಕ್ಷ ಆಡಳಿತಗಾರ ಎಂದು ಬಿಜೆಪಿ ಮಾಜಿ ಸಂಸದ ಹೇಳಿದ್ದಾರೆ.

ಬಿಜೆಪಿ ಮುಖಂಡ ಹಾಗೂ ಮಾಜಿ ಸಂಸದರಾದ ರಮೇಶ್ ಕತ್ತಿ ಅವರು ಸಿಎಂ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿದ್ದಾರೆ. ಸಿದ್ದರಾಮಯ್ಯ ಒಬ್ಬ ಒಳ್ಳೆ ವ್ಯಕ್ತಿ. ಈಗ ಅವರ



ಮೇಲೆ ಮುಡಾ ಹಗರಣದ ಸಂಬಂಧ ಅವರ ಮೇಲೆ ಗೂಬೆ ಕೂರಿಸಲಾಗುತ್ತಿದೆ. ಇಂದಿನ ರಾಜಕಾರಣ ಬಹಳ ಬದಲಾವಣೆ ಆಗಿದೆ ಎಂದು ಬಿಜೆಪಿ ಮಾಜಿ ಸಂಸದ ರಮೇಶ ಕತ್ತಿ ಅವರು ಹುಕ್ಕೇರಿ ತಾಲೂಕಿನ ಬೆಲ್ಲದ ಬಾಗೇವಾಡಿ ಗ್ರಾಮದಲ್ಲಿ ಸಿಎಂ ಪರ ಮಾತನಾಡಿದ್ದಾರೆ. ಅಂದಿನ ರಾಜಕಾರಣದ ವ್ಯಾಖ್ಯಾನ, ಇಂದಿನ ರಾಜಕಾರಣ ವ್ಯಾಖ್ಯಾನ ಬೇರೆ ಇದೆ. ಆಗಿನ ರಾಜಕಾರಣಕ್ಕೂ, ಈಗಿನ ರಾಜಕಾರಣಕ್ಕೂ ತುಂಬಾನೇ ವ್ಯತ್ಯಾಸವಿದೆ. ಸಿದ್ದರಾಮಯ್ಯ ಒಬ್ಬರೇ ಅಲ್ಲ ಯಡಿಯೂರಪ್ಪ ಹಾಗೂ ಕುಮಾರಸ್ವಾಮಿ ಅವರ ಮೇಲೆಯೂ ಸಾಕಷ್ಟು ಕಳಂಕ ಬಂದಿದೆ. ಇಂದಿನ ರಾಜಕಾರಣದಲ್ಲಿ ಯಾರು ತಾವು ಬೆಳೆಯಲು ಪ್ರಯತ್ನ ಮಾಡುತ್ತಿಲ್ಲ. ಬದಲು ಬೇರೆ ಅವರನ್ನ ತುಳಿಯಲು ಪ್ರಯತ್ನ ಮಾಡುತ್ತಿದ್ದಾರೆ ಅಂತ ಕತ್ತಿ ಹೇಳಿದ್ರು.

ಕತ್ತಿ ಸಹೋದರರು ನೋಡದ ಪಕ್ಷವೇ ಇಲ್ಲ: ಆಡು ಮುಟ್ಟದ ಸೊಪ್ಪಿಲ್ಲ ಕತ್ತಿ ಸಹೋದರರು ನೋಡದ ಪಕ್ಷ ಇಲ್ಲ. ನಾವು ಎಲ್ಲ ಪಕ್ಷಗಳ ಜೊತೆ ಒಡನಾಟ ಹೊಂದಿದ್ದೇವೆ ಎಂದು ರಮೇಶ್ ಕತ್ತಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

ರಾಜಕಾರಣವೇ ಸರಿಯಿಲ್ಲ ಎಂದ ಕತ್ತಿ: ಇಂದಿನ ರಾಜಕಾರಣದ ಸ್ಥಿತಿ ಸರಿಯಿಲ್ಲ. ರಾಜಕೀಯ ನಿರ್ಧಾರದ ಬಗ್ಗೆ ಹಿರಿಯರ ಜೊತೆ ಚರ್ಚಿಸಿ ಮುಂದಿನ ರಾಜಕಾರಣದ ಕುರಿತು ತೀರ್ಮಾನ ಮಾಡುತ್ತೇವೆ. ಆದರೆ ಕತ್ತಿ ರಾಜಕಾರಣದಲ್ಲಿ ಇದ್ದರೂ, ಇರದೇ ಇದ್ದರೂ ಜನರ ಪರ ಇದ್ದಾರೆ. ಆದರೆ ದಿನಗಳು ಉರುಳುತ್ತಿದ್ದಂತೆ ರಾಜಕಾರಣದ ಬೇರೆ ಹಾದಿಯನ್ನೇ ಹಿಡಿದಿದೆ. ರಾಜಕೀಯ ಕ್ಷೇತ್ರ ಅಥವಾ ರಾಜಕಾರಣ ಎಂದರೆ ಜನರಿಗೆ ವಾಕರಿಕೆ ಬರುವಂತಾಗಿದೆ. ಆ ರೀತಿ ರಾಜಕಾರಣ ಹಾಳಾಗಿದೆ ಎಂದು ಹೇಳಿದರು.

## ಮಾಜಿ ಶಾಸಕ ಮೊಯಿದ್ದೀನ್ ಬಾವ ಸಹೋದರ ಮುಮ್ತಾಜ್ ಅಲಿ ನಾಪತ್ತೆ





**ಮಂಗಳೂರು:** ಮಾಜಿ ಶಾಸಕ ಮೊಯಿದ್ದೀನ್ ಬಾವ ಸಹೋದರ ಮುಮ್ತಾಜ್ ಅಲಿ (52) ನಾಪತ್ತೆಯಾಗಿದ್ದಾರೆ. ಮಂಗಳೂರಿನ ಕುಳೂರಿನ ಸೇತುವೆ ಮೇಲೆ ಮುಮ್ತಾಜ್ ಕಾರು ಪತ್ತೆ ಪತ್ತೆಯಾಗಿದ್ದು, ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಸ್ಥಳಕ್ಕೆ ಮಾಜಿ ಶಾಸಕ ಮೊಯಿದ್ದೀನ್ ಬಾವ ಸೇರಿದಂತೆ ಕುಟುಂಬಸ್ಥರು ಭೇಟಿ ನೀಡಿದ್ದಾರೆ. ನದಿಯಲ್ಲಿ ಎಸ್‌ಡಿಆರ್ ಎಫ್, ಎನ್‌ಡಿಆರ್‌ಎಫ್, ಅಗ್ನಿಶಾಮಕದಳ ಸಿಬ್ಬಂದಿ ಹುಡುಕಾಟ ನಡೆಸುತ್ತಿದ್ದಾರೆ. ಬೆಳಗ್ಗೆ ಮೂರು ಗಂಟೆಗೆ ಮುಮ್ತಾಜ್ ಅಲಿ ಮನೆಯಿಂದ ಹೊರಟ್ಟಿದ್ದರು. ಬೆಳಗ್ಗೆ 6 ಗಂಟೆಗೆ ಕುಳೂರು ಸೇತುವೆ ಮೇಲೆ ಮುಮ್ತಾಜ್ ಕಾರು ಪತ್ತೆಯಾಗಿದೆ. ಪುಟ 2

### ದಾಖಲಾತಿ ನೀಡದ ವಿಜಯ್ ಟಾಟಾ

## ಕುಮಾರಸ್ವಾಮಿಗೆ ಸದ್ಯಕ್ಕಿಲ್ಲ ತನಿಖೆ ತಲೆಬಿಸಿ

**ಬೆಂಗಳೂರು:** ಉದ್ಯಮಿ ವಿಜಯ್ ಟಾಟಾಗೆ ಬೆದರಿಕೆ ಕೇಸ್‌ನಲ್ಲಿ ಕೇಂದ್ರ ಸಚಿವ ಹೆಚ್ .ಡಿ.ಕುಮಾರಸ್ವಾಮಿ ಮತ್ತು ಜೆಡಿಎಸ್ ಮಾಜಿ ಎಂಎಲ್ಸಿ ರಮೇಶ್ ಗೌಡ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಆದರೆ ದೂರುದಾರ ವಿಜಯ್ ಟಾಟಾ, ಅಮೃತಹಳ್ಳಿ ಪೊಲೀಸರ ಮುಂದೆ ಹಾಜರಾಗಿ ಹೇಳಿಕೆ ಅಷ್ಟೇ ನೀಡಿದ್ದಾರೆ ಹೊರತು ಯಾವುದೇ ಪ್ರಾಥಮಿಕ ದಾಖಲಾತಿ ನೀಡಿಲ್ಲವೆಂಬುವುದು ಪೊಲೀಸ್ ಮೂಲಗಳಿಂದ ಮಾಹಿತಿ ನೀಡಲಾಗಿದೆ. ಹೀಗಾಗಿ ಸದ್ಯ ಹೆಚ್.ಡಿ. ಕುಮಾರಸ್ವಾಮಿಗೆ ಯಾವುದೇ ತನಿಖೆ ತಲೆಬಿಸಿ ಇಲ್ಲ.

ಪ್ರಾಥಮಿಕ ದಾಖಲಾತಿ ಸಿಗದೆ ಮುಂದಿನ ತನಿಖೆ ಕಷ್ಟ ಎನ್ನಲಾಗುತ್ತಿದೆ. ಹೀಗಾಗಿ ಪ್ರಾಥಮಿಕ ದಾಖಲಾತಿಗಳನ್ನು ನೀಡುವಂತೆ ಉದ್ಯಮಿ ವಿಜಯ್ ಟಾಟಾಗೆ ಪೊಲೀಸರು ಸೂಚಿಸಿದ್ದಾರೆ.



50 ಕೋಟಿ ರೂ. ಡಿಮ್ಯಾಂಡ್ ಮಾಡಿ ಬೆದರಿಕೆ ಹಾಕಿದ್ದಾರೆಂದು ಇತ್ತೀಚೆಗೆ ವಿಜಯ್ ಟಾಟಾ ಆರೋಪ ಮಾಡಿದ್ದರು. ಅವರ ದೂರಿನ ಅನ್ವಯ ಮಾಜಿ ಎಂಎಲ್‌ಸಿ ರಮೇಶ್ ಗೌಡ ಹಾಗೂ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಬೆಂಗಳೂರಿನ ಅಮೃತಹಳ್ಳಿ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು.

ಇನ್ನು ರಮೇಶ್ ಗೌಡ ಕೂಡ 5 ಕೋಟಿ ರೂ. ಡಿಮ್ಯಾಂಡ್ ಮಾಡಿ ಬೆದರಿಸಿದ್ದಾರೆ ಅಂತ ಕೂಡ ದೂರು ನೀಡಲಾಗಿತ್ತು. ರಮೇಶ್ ಗೌಡ ವಾಟ್ಸಪ್ ಚಾಟ್ ಕೂಡ ಮಾಡಿದ್ದರು ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಆದರೆ ವಾಟ್ಸಪ್ ಚಾಟ್ ಹಾಗೂ ಫೋನ್ ಕರೆ ಬಗ್ಗೆ ದೂರುದಾರ ವಿಜಯ್ ಟಾಟಾ ಯಾವುದೇ ದಾಖಲಾತಿ ನೀಡಿಲ್ಲ. ಪೊಲೀಸರ ಮುಂದೆ ಹಾಜರಾದ ವೇಳೆ ಪ್ರಾಥಮಿಕ ದಾಖಲೆ ಒದಗಿಸಿಲ್ಲ ಎಂಬ ಮಾಹಿತಿ ಲಭ್ಯವಾಗಿದೆ. 2019ರ ಲೋಕಸಭಾ ಚುನಾವಣೆಯಲ್ಲಿ ಕೋಟ್ಯಾಂತರ ರೂಪಾಯಿ ಖರ್ಚಿನ ಬಗ್ಗೆ ಕೂಡ ದೂರಿನಲ್ಲಿ ಉಲ್ಲೇಖಿಸಲಾಗಿದೆ. ನಿಖಿಲ್ ಕುಮಾರಸ್ವಾಮಿ ಪರ ಸೋಶಿಯಲ್ ಮೀಡಿಯಾ ಪ್ರಚಾರ ಮಾಡಲಾಗಿತ್ತು. ಪ್ರಚಾರಕ್ಕೆ ತಮ್ಮ ಕೈಯಿಂದ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿದ್ದಾಗಿ ದೂರಿನಲ್ಲಿ ತಿಳಿಸಿದ್ದಾರೆ. ಅದಕ್ಕೆ ಸಂಬಂಧಪಟ್ಟಂತೆ ಯಾವ ದಾಖಲಾತಿ ನೀಡಿಲ್ಲವಂತೆ. ಹೀಗಾಗಿ ಮಾಡಿರುವ ಆರೋಪಕ್ಕೆ ಪ್ರಾಥಮಿಕ ದಾಖಲಾತಿ ನೀಡದ ಕಾರಣ ತನಿಖೆಗೆ ವೇಗವಿಲ್ಲದಂತಾಗಿದೆ. ಪ್ರಾಥಮಿಕ ದಾಖಲಾತಿ ನೀಡಿದ ನಂತರ ತನಿಖೆಯ ಮುಂದಿನ ಪ್ರಕ್ರಿಯೆ ಶುರುವಾಗಲಿದೆ. ಬಳಿಕ 41(ಎ) ಅಡಿ ವಿಚಾರಣೆಗೆ ಹಾಜರಾಗಿ ಎಂದು ಹೆಚ್.ಡಿ ಕುಮಾರಸ್ವಾಮಿ ಹಾಗೂ ರಮೇಶ್ ಗೌಡಗೆ ನೋಟಿಸ್ ನೀಡುವ ಸಾಧ್ಯತೆ ಇದೆ. ಸದ್ಯ ಮುಂದಿನ ತನಿಖಾ ಪ್ರಕ್ರಿಯೆಗೆ ದೂರುದಾರರ ವಿಳಂಬ ಅಡ್ಡಿಯಾಗಿದೆ.

## ಮನೆಗೆ ಬೆಂಕಿ ತಗುಲಿ ಕುಟುಂಬದ ಐವರು ಸಾವು

ಮುಂಬೈ: ಮುಂಬೈನ ಚೆಂಬೂರಿನಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದೆ. ಅಪಘಾತದಲ್ಲಿ 5 ಮಂದಿ ಸಜೀವ ದಹನವಾಗಿರುವ ಬಗ್ಗೆ ವರದಿಯಾಗಿದೆ. ಇಂದು ಮುಂಜಾನೆ ಚೆಂಬೂರಿನ ಸಿದ್ಧಾರ್ಥ್ ಕಾಲೋನಿಯಲ್ಲಿರುವ ಅಂಗಡಿಯೊಂದರಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದೆ. ಇಡೀ ಅಂಗಡಿಗೆ ಬೆಂಕಿ ಆವರಿಸಿದ್ದು, ಅದರ ಮೇಲಿನ ಮಹಡಿಯಲ್ಲಿ ವಾಸಿಸುತ್ತಿದ್ದ ಕುಟುಂಬದ ಐವರು ಸುಟ್ಟು ಕರಕಲಾಗಿದ್ದಾರೆ.

ಬೆಂಕಿ ಅವಘಡದ ಬಗ್ಗೆ ಮಾಹಿತಿ ಪಡೆದ ತಕ್ಷಣ ಅಗ್ನಿಶಾಮಕ ದಳದವರು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನಿಸಿದರೂ ಒಳಗೆ ಸಿಲುಕಿದ್ದವರನ್ನು ರಕ್ಷಿಸಲು ಸಾಧ್ಯವಾಗಲಿಲ್ಲ. ಪ್ರಾಥಮಿಕ ತನಿಖೆಯ ಪ್ರಕಾರ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಅವಘಡ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ. ಸದ್ಯ



ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ.

ಗ್ರೌಂಡ್ ಪ್ಲಸ್ ಒನ್ (ಜಿ+1) ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಮಾಹಿತಿಯ ಪ್ರಕಾರ, ಬೆಂಕಿ ಮೀಟರ್ ಬಾಕ್ಸ್‌ಗೆ ತಗುಲಿತು ಮತ್ತು ಶೀಘ್ರದಲ್ಲೇ ಕಟ್ಟಡದ ಇತರ ಭಾಗಗಳಿಗೆ ಹರಡಿತು. ನೆಲ ಮಹಡಿಯಲ್ಲಿ ಅಂಗಡಿಯಿದ್ದು, ಮೇಲಿನ ಮಹಡಿಯಲ್ಲಿ ಕುಟುಂಬ ವಾಸವಾಗಿತ್ತು.

## ಸಿಎಂ ಸಿದ್ದರಾಮಯ್ಯ ಏನ್ ದೆವ್ವನಾ ನಾನು ಹೆದರೋಕೆ; ಕುಮಾರಸ್ವಾಮಿ ತಿರುಗೇಟು

**ಬೆಂಗಳೂರು:** ಸಿದ್ದರಾಮಯ್ಯನಂತಹ ಲಕ್ಷ ಜನ ಬಂದರೂ ನಾನು ಹೆದರುವುದಿಲ್ಲ ಎಂದು ಕೇಂದ್ರ, ಬೃಹತ್ ಕೈಗಾರಿಕಾ ಸಚಿವ ಹೆಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ. ಕುಮಾರಸ್ವಾಮಿಗೆ ನನ್ನನ್ನು ಕಂಡರೆ ಭಯ ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಾನು ಯಾಕೆ ಸಿದ್ದರಾಮಯ್ಯಗೆ ಹೆದರಬೇಕು. ನಾನು ಸಿದ್ದರಾಮಯ್ಯ ನೆರಳಲ್ಲಿ ರಾಜಕೀಯಕ್ಕೆ ಬಂದಿದ್ದೀನಾ? ಸ್ವಂತ ದುಡಿಮೆಯಲ್ಲಿ, ಕಾರ್ಯಕರ್ತರ ದುಡಿಮೆಯಲ್ಲಿ ಬಂದಿದ್ದೇನೆ. ಸಿದ್ದರಾಮಯ್ಯ ಹೆಸರಲ್ಲಿ ರಾಜಕೀಯ ಮಾಡಿಲ್ಲ, ದೇವೇಗೌಡರ ನೆರಳಲ್ಲಿ ಬಂದ ನಾನು ನಾಡಿನ ಜನರಿಗೆ ಮಾತ್ರ ಹೆದರುತ್ತೇನೆ ಎಂದು ತಿಳಿಸಿದರು. ಸಿಎಂ ಅವರು ದೆವ್ವ ಹಾಗಿದ್ದರೆ ಭಯ ಬೀಳಬೇಕು. ದೆವ್ವ ಅಲ್ಲವಲ್ಲ,ನಾನ್ಯಾಕೆ ಭಯ ಬೀಳಲಿ. ನನ್ನ ಜೆಡಿಎಸ್ ದುರ್ಬಲ ಆಗುತ್ತೋ ಬಲಗೊಳ್ಳುತ್ತೋ ಎನ್ನುವುದನ್ನು ದೇವರು ನೋಡಿಕೊಳ್ಳುತ್ತಾನೆ. ಮೊದಲು ಸಮಸ್ಯೆಯಲ್ಲಿರುವುದನ್ನು ಬಗೆಹರಿಸಿಕೊಳ್ಳಿ. ಕುಮಾರಸ್ವಾಮಿ ಹೆದರುವುದು ಕೇವಲ ದೇವರಿಗೆ ಮತ್ತು ಜನರಿಗೆ ಮಾತ್ರ ಎಂದರು.



## ಕಾಂಗ್ರೆಸ್‌ನದು 80 ಪರ್ಸೆಂಟ್ ಭ್ರಷ್ಟಾಚಾರ ಸರ್ಕಾರ

**ಮಂಗಳೂರು:** ಬಿಜೆಪಿ ಸರ್ಕಾರದ ವಿರುದ್ಧ 40 ಪರ್ಸೆಂಟ್ ಭ್ರಷ್ಟಾಚಾರದ ಆರೋಪ ಮಾಡಿದ್ದ ಕಾಂಗ್ರೆಸ್ ಇದೀಗ 80 ಪರ್ಸೆಂಟ್ ಸರ್ಕಾರವಾಗಿದೆ. ಇದು ಕಳ್ಳರ, ಭ್ರಷ್ಟಾಚಾರಿಗಳ ಸರ್ಕಾರ ಎಂದು ಮಾಜಿ ಸಂಸದ, ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ವಾಗ್ದಾಳಿ ನಡೆಸಿದ್ದಾರೆ.

ಮಂಗಳೂರಿನಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ಸಂವಿಧಾನದ ಹೆಸರಲ್ಲಿ ಮಾತನಾಡುವ ಸಿಎಂ ನೈತಿಕತೆಯಿಂದ ರಾಜೀನಾಮೆ ನೀಡಬೇಕು. ತನಿಖೆಗೆ ಆದೇಶ ಆಗಿದೆ. ರಾಜ್ಯಪಾಲರ ಆದೇಶವನ್ನೇ ಪ್ರಶ್ನೆ ಮಾಡಿದ್ರೆ, ಅರ್ಥವೇ ಇಲ್ಲ ಎನ್ನುವಂತೆ. ಇನ್ನು ಆತ್ಮಸಾಕ್ಷಿ ಎಲ್ಲಿಂದ ಬಂತು ಎಂದು ವ್ಯಂಗ್ಯವಾಡಿದರು. ಸಿದ್ದರಾಮಯ್ಯ ಮೊದಲಿಗೆ ರಾಜೀನಾಮೆ ಕೊಟ್ಟು ತನಿಖೆಗೆ ಆದೇಶ ಮಾಡಬೇಕಿತ್ತು. ಆಗ ಅವರ ಆದರ್ಶಗಳ ಮೇಲೆ ಇನ್ನಷ್ಟು ಗೌರವ ಹೆಚ್ಚಾಗುತ್ತಿತ್ತು ಎಂದು ಟಾಂಗ್ ಕೊಟ್ಟರು. ಚುನಾವಣಾ ಬಾಂಡ್ ಪ್ರಕರಣದಲ್ಲಿ ನಿರ್ಮಲಾ ಸೀತಾರಾಮನ್ ಹಾಗೂ ನಮ್ಮೆಲ್ಲರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕೇಸ್ ಹಾಕಿದವರು ಯಾರೋ ಸಂಬಂಧವೇ ಇಲ್ಲದ ಮೂರನೇ ವ್ಯಕ್ತಿ. ಸದ್ಯ ಎಫ್‌ಐಆರ್‌ಗೆ ತಡೆಯಾಜ್ಞೆ ಸಿಕ್ಕಿದೆ. ಚುನಾವಣಾ ಬಾಂಡ್ ಸಂಬಂಧ ಸುಪ್ರೀಂ ಕೋರ್ಟ್ ಹೇಳಿದೆ. ಸಿದ್ದರಾಮಯ್ಯ ಕೇಸ್ ಹಾಗಲ್ಲ, ಮುಡಾ ಹಾಗೂ ವಾಲ್ಮೀಕಿ ಹಗರಣ ಸೇರಿ ಎರಡರಲ್ಲೂ ಸಿಕ್ಕಿ ಬಿದ್ದಿದ್ದಾರೆ ಎಂದು ಹೇಳಿದರು.



### ಕಾಂಗ್ರೆಸ್‌ನಲ್ಲಿ ಮತ್ತೆ ಪರ-ವಿರೋಧಕ್ಕೆ ವೇದಿಕೆ ಸಜ್ಜು

# ಮುಡಾಸ್ತ್ರಕ್ಕೆ ಜಾತಿ ಜನಗಣತಿ ಪ್ರತ್ಯಾಸ್ತ್ರ ಬಿಟ್ಟ ಸಿಎಂ

ಬೆಂಗಳೂರು: ಮುಡಾ ಬಿಕ್ಕಟ್ಟಿನ ನಡುವೆಯೇ ಜಾತಿ ಜನಗಣತಿ ವರದಿಯನ್ನು ಜಾರಿ ಮಾಡಲು ಒತ್ತಡ ಹೆಚ್ಚಾಗಿದ್ದು ಮತ್ತೆ ಕಾಂಗ್ರೆಸ್‌ನಲ್ಲಿ ಪರ-ವಿರೋಧಕ್ಕೆ ವೇದಿಕೆ ಸಜ್ಜಾಗಿದೆ.

ಸೋಮವಾರದಿಂದ ಜಾತಿ ಜನಗಣತಿ ಅಭಿಯಾನಕ್ಕೆ ಕಾಂಗ್ರೆಸ್‌ನ ಕೆಲ ಶಾಸಕರಿಂದಲೇ ಅಧಿಕೃತ ಚಾಲನೆ ಸಿಗುವ ಸಾಧ್ಯತೆಯಿದೆ. ಜಾತಿ ಜನಗಣತಿಗೆ ಬೇರೆ ಸಮುದಾಯದ ಸ್ವಪಕ್ಷೀಯ ನಾಯಕರ ವಿರೋಧ ವ್ಯಕ್ತವಾದರೂ ಹೈಕಮಾಂಡ್ ಮಧ್ಯಸ್ಥಿಕೆ ಮೂಲಕ ಸಮಾಧಾನ ಪಡಿಸುವ ಲೆಕ್ಕಾಚಾರವನ್ನು ಸಿಎಂ ಹಾಕಿದ್ದಾರೆ. ಅಷ್ಟೇ ಅಲ್ಲದೇ ಡಿಸೆಂಬರ್ ಅಧಿವೇಶನದಲ್ಲಿ ಮಾಸ್ಟರ್ ಸ್ಟ್ರೋಕ್ ನೀಡಲು ಮುಂದಾಗಿದ್ದಾರೆ ಎನ್ನಲಾಗುತ್ತಿದೆ. ಅಕ್ಟೋಬರ್ 10 ರಂದು ರಾಜ್ಯ ಸಚಿವ ಸಂಪುಟ ಸಭೆ ನಡೆಯುವ ಸಾಧ್ಯತೆಯಿದ್ದು, ಈ ಸಭೆಯಲ್ಲಿ ಕಾಂತರಾಜು ವರದಿ ಬಗ್ಗೆ ಚರ್ಚೆಗೆ ಸಿಎಂ ಸಿದ್ದರಾಮಯ್ಯ ಮುಂದಾಗಿದ್ದಾರೆ ಎನ್ನಲಾಗಿದೆ.

ಕಳೆದ ಫೆಬ್ರವರಿಯಲ್ಲಿ ಮಾಜಿ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಕೆ ಮಾಡಿದ್ದರು. ಆದರೆ ಈವರೆಗೂ ಸಂಪುಟದಲ್ಲಿ ವರದಿ ಕುರಿತು ಸರ್ಕಾರ ಚರ್ಚೆ ನಡೆಸಿರಲಿಲ್ಲ. ಈಗ ಮುಡಾ ಕಾನೂನು ಕಂಟಕ ವೇಳೆ ಜಾತಿ ಜನಗಣತಿ ವರದಿ ಮೇಲೆ ಸಿಎಂ ಕಣ್ಣಿಟ್ಟಿದ್ದಾರೆ. ವರದಿ ಜಾರಿ ಕುರಿತು ಸಿಎಂ ಹೇಳಿಕೆ ಬಳಿಕ ಪಕ್ಷದೊಳಗೆ ಮತ್ತು ಹೊರಗೆ ಪರ ವಿರೋಧ ಚರ್ಚೆ ಆರಂಭವಾಗಿದೆ. ಅಹಿಂದ ವರ್ಗಗಳ ಕೈ ನಾಯಕರು ಆದಷ್ಟು ಬೇಗ ವರದಿ ಜಾರಿಗೆ ಒತ್ತಾಯಿಸುತ್ತಿದ್ದಾರೆ. ಆದರೆ ಸಿಎಂ ಮತ್ತು ಅಹಿಂದ ನಾಯಕರ ಆತುರಕ್ಕೆ ಮೇಲ್ವರ್ಗದ ನಾಯಕರ ಬೇಸರ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಸಂಪುಟ ಸಭೆಯಲ್ಲಿ ವರದಿ ಜಾರಿಯ ಬಗ್ಗೆ ಸಚಿವರ ಅಭಿಪ್ರಾಯವನ್ನು ಸಿಎಂ ಪಡೆಯಲಿದ್ದಾರೆ.

ಜಾತಿ ಜನಗಣತಿ ವರದಿ ಜಾರಿ ಸಂಬಂಧ ಸಿಎಂ ಸಂಪುಟ ಉಪಸಮಿತಿ ರಚನೆ ಮಾಡುವ ಸಾಧ್ಯತೆಯಿದೆ. ವರದಿ ಜಾರಿಯ ಸಾಧಕ ಬಾಧಕ ಬಗ್ಗೆ ಗಡುವಿನೊಳಗೆ ಸಂಪುಟ ಉಪಸಮಿತಿ ವರದಿ ಪಡೆಯಲು ಚಿಂತನೆ ನಡೆದಿದೆ ಎನ್ನಲಾಗುತ್ತಿದೆ.

ಈಗಾಗಲೇ ಜಾತಿ ಗಣತಿ ವಿಚಾರದಲ್ಲಿ ಎಚ್ಚರಿಕೆ ಹೆಜ್ಜೆ ಇಡುವಂತೆ ಈಗಾಗಲೇ ಮಾಜಿ ಸಂಸದ ಡಿಕೆ ಸುರೇಶ್ ಅಪಸ್ವರ ಎತ್ತಿದ್ದಾರೆ. ಅಗತ್ಯ ಮಾನದಂಡ ಬಳಸಿ ಸಮೀಕ್ಷೆ ಮಾಡಿದರೆ ಯಾವುದೇ ಗೊಂದಲ ಇರುವುದಿಲ್ಲ. ಹೀಗಾಗಿ ಕೇಂದ್ರದ ಜನಗಣತಿವರೆಗೂ ಕಾಯುವುದು ಉತ್ತಮ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈಗಾಗಲೇ ಜಾತಿ ಜನಗಣತಿ ಜಾರಿ ಮಾಡಬೇಕೆಂದು ಹಲವು ಜಿಲ್ಲೆಗಳಲ್ಲಿ ಪ್ರತಿಭಟನೆ ನಡೆದಿದೆ. ಹೀಗಾಗಿ ಸಂಪುಟ ಸಭೆ ನಂತರ ಕಾಂಗ್ರೆಸ್ ಒಳಗಡೆಯೇ ಜಾತಿ ಜನಗಣತಿ ಕಿಚ್ಚು ಹೆಚ್ಚಾಗುವ ನಿರೀಕ್ಷೆಯಿದೆ.




### ಜಾತಿ ಗಣತಿ ಉದ್ದೇಶ ಏನಿತ್ತು?

**1931ರ ಜನಗಣತಿಯ ನಂತರ ಯಾವುದೇ ಜನಗಣತಿ ದಾಖಲೆಗಳಿಂದ ಜಾತಿ / ಸಮುದಾಯವಾರು ಜನಸಂಖ್ಯೆಯ ಅಂಕಿ-ಅಂಶಗಳು ಖಚಿತವಾಗಿ ದೊರೆಯುತ್ತಿಲ್ಲ. ಜಾತಿವಾರು ಜನಗಣತಿ ಅಂಕಿ-ಅಂಶಗಳು ಲಭ್ಯವಿಲ್ಲದೇ ಇರುವುದರಿಂದ ಕಾರ್ಯಕ್ರಮಗಳ ಮುಖಾಂತರ ಸೌಲಭ್ಯಗಳನ್ನು ಸಾಮಾಜಿಕ ನ್ಯಾಯ ತತ್ವದ ಆಧಾರದ ಮೇಲೆ ಒದಗಿಸುವುದು ಸರ್ಕಾರಕ್ಕೆ ಕಷ್ಟವಾಗುತ್ತಿತ್ತು. ಸಮುದಾಯಗಳ ಈಗಿರುವ ಸ್ಥಿತಿಗಳಿಗೆ ಸಂಬಂಧಿಸಿದಂತೆ ವೈಜ್ಞಾನಿಕವಾದ ವಿಶ್ಲೇಷಣೆ ನಡೆಸುವುದು, ಜನಸಂಖ್ಯೆಯ ಪ್ರಮಾಣವನ್ನು ತಿಳಿಯುವುದು ಅಗತ್ಯವಾಗಿದೆ ಎಂಬ ಉದ್ದೇಶಕ್ಕಾಗಿ ಆಗಿನ ಸಿದ್ದರಾಮಯ್ಯ ಸರ್ಕಾರ ಸಮೀಕ್ಷೆಗೆ ಆದೇಶಿಸಿತ್ತು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಜಾತಿಗಳು ಹಾಗೂ ಇತರ ಜಾತಿಗಳನ್ನೊಳಗೊಂಡತೆ ರಾಜ್ಯದ ಪ್ರತಿಯೊಂದು ಕುಟುಂಬದ ಸಮಗ್ರ ಸಮೀಕ್ಷೆಯನ್ನು ಕೈಗೊಂಡು ವಿವಿಧ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಬಗ್ಗೆ ವಿಶ್ಲೇಷಣೆ ಮಾಡಿ, ಹಿಂದುಳಿದ ವರ್ಗಗಳ ಪಟ್ಟಿಯನ್ನು ಪರಿಷ್ಕರಿಸುವ ಕುರಿತು ಸರ್ಕಾರಕ್ಕೆ ಶಿಫಾರಸು ಮಾಡುವ ಜವಾಬ್ದಾರಿಯನ್ನು ಆಯೋಗಕ್ಕೆ ನೀಡಲಾಗಿತ್ತು. ರಾಜ್ಯದ ಎಲ್ಲ ವರ್ಗಗಳ / ಜಾತಿಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಔದ್ಯೋಗಿಕ ಸ್ಥಿತಿಗತಿಗಳ ಕುರಿತು ಸಮೀಕ್ಷೆ ಮುಖಾಂತರ ಸಮಗ್ರ ಅಂಕಿ-ಅಂಶಗಳನ್ನು ಸಂಗ್ರಹಣೆಗೆ ಸೂಚಿಸಲಾಗಿತ್ತು.**

### ಏನಿದು ಕಾಂತರಾಜು ವರದಿ?

**2013-18ರ ಐದು ವರ್ಷದ ಅವಧಿಯಲ್ಲಿ ಅಧಿಕಾರದಲ್ಲಿದ್ದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದ ಎಲ್ಲ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಯನ್ನು ಅರಿಯಲು 158.47 ಕೋಟಿ ರೂ. ವೆಚ್ಚದಲ್ಲಿ ಹೆಚ್. ಕಾಂತರಾಜು ನೇತೃತ್ವದ ಹಿಂದುಳಿದ ವರ್ಗಗಳ ಆಯೋಗ ರಚಿಸಿತ್ತು. ಈ ಆಯೋಗ 2015ರಲ್ಲಿ ಸಮೀಕ್ಷೆ ನಡೆಸಿತ್ತು. ಈ ಆಯೋಗದ ಅವಧಿ ಮುಕ್ತಾಯವಾದ ಸಂದರ್ಭದಲ್ಲಿ ವರದಿಯನ್ನು ಅಧಿಕೃತವಾಗಿ ಸರ್ಕಾರಕ್ಕೆ ಸಲ್ಲಿಸಿರಲಿಲ್ಲ. ಈ ಫೆಬ್ರವರಿಯಲ್ಲಿ ಜಯಪ್ರಕಾಶ್ ಹೆಗ್ಡೆ ಅಧ್ಯಕ್ಷತೆಯ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ವಿವಿಧ ವಿಷಯಕ್ಕೆ ಸಂಬಂಧಿಸಿದ ಟಿಪ್ಪಣಿಗಳೊಂದಿಗೆ 2015ರ ಸಮೀಕ್ಷಾ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಲ್ಲಿಸಿತ್ತು.**

# ಮುನಿರತ್ನ ಪರಪ್ಪನ ಅಗ್ರಹಾರ ಜೈಲಿಗೆ

**ಬೆಂಗಳೂರು:** ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ರಾಜರಾಜೇಶ್ವರಿ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನಗೆ ಕೋರ್ಟ್ ನ್ಯಾಯಾಂಗ ಬಂಧನ ವಿಧಿಸಿದೆ. ನಿನ್ನೆ ಎಸ್‌ಐಟಿ ಕಸ್ಟಡಿ ಅಂತ್ಯವಾದ ಹಿನ್ನಲೆಯಲ್ಲಿ ಜನಪ್ರತಿನಿಧಿಗಳ ವಿಶೇಷ ಕೋರ್ಟ್, ಮುನಿರತ್ನಗೆ 14 ದಿನ(ಅಕ್ಟೋಬರ್ 19ರ ವರೆಗೆ) ನ್ಯಾಯಾಂಗ ಬಂಧನಕ್ಕೆ ನೀಡಿ ಆದೇಶ ಹೊರಡಿಸಿದೆ.



ಬಿಜೆಪಿ ಶಾಸಕ ಮುನಿರತ್ನ ಎಸ್‌ಐಟಿ ಕಸ್ಟಡಿ ಇಂದು ಅಂತ್ಯವಾಗಿದೆ. ಈ ಹಿನ್ನಲೆ ಎಸ್‌ಐಟಿ ಅಧಿಕಾರಿಗಳು ಮುನಿರತ್ನ ಅವರಿಗೆ ವೈದ್ಯಕೀಯ ಪರೀಕ್ಷೆ ಮಾಡಿಸಿ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಹಾಜರು ಪಡಿಸಿದ್ದು, ಮತ್ತೆ ಮುನಿರತ್ನರನ್ನು ಕಸ್ಟಡಿಗೆ ನೀಡುವಂತೆ ಎಸ್‌ಐಟಿ ಅಧಿಕಾರಿಗಳು ಕೋರ್ಟ್‌ಗೆ ಮನವಿ ಮಾಡಿದರು. ಆದ್ರೆ, ಕೋರ್ಟ್, 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ನೀಡಿ ಆದೇಶ ಹೊರಡಿಸಿದೆ. ಇನ್ನು ಮುನಿರತ್ನಗೆ ಮನೆ ಊಟಕ್ಕೆ ಅವಕಾಶ ಮಾಡಿಕೊಡುವಂತೆ ವಕೀಲರು ಕೋರ್ಟ್‌ಗೆ ಮನವಿ ಮಾಡಿದರು. ಈ ಬಗ್ಗೆ ಜೈಲು ಅಧಿಕಾರಿಗಳಿಗೆ ಮನವಿ ಮಾಡಲು ಕೋರ್ಟ್ ಸೂಚಿಸಿದ್ದು, ಒಂದು ವೇಳೆ ಅನುಮತಿ ನೀಡದಿದ್ದರೆ ಕೋರ್ಟ್‌ನಲ್ಲಿ ಅರ್ಜಿ ಹಾಕಿ ಎಂದು ಹೇಳಿದೆ.

ಅತ್ಯಾಚಾರ, ಲೈಂಗಿಕ ಕಿರುಕುಳ ಮತ್ತು ಕ್ರಿಮಿನಲ್ ಬೆದರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಎನ್ ಮುನಿರತ್ನ ಅವರನ್ನು ಶುಕ್ರವಾರ ಬಂಧಿಸಲಾಗಿತ್ತು. ಕಗ್ಗಲಿಪುರ ಪೊಲೀಸ್ ಠಾಣಾ ವ್ಯಾಪ್ತಿಯ ಖಾಸಗಿ ರೆಸಾರ್ಟ್‌ನಲ್ಲಿ ಘಟನೆ ನಡೆದಿದೆ ಎಂದು ಆರೋಪಿಸಿ 40 ವರ್ಷದ ಮಹಿಳೆಯೊಬ್ಬರು ನೀಡಿದ ದೂರಿನ ಮೇರೆಗೆ ಬಂಧನಕ್ಕೊಳಪಡಿಸಲಾಗಿತ್ತು.

ಇದಕ್ಕೂ ಮೊದಲು ಬಿಬಿಎಂಪಿ ಗುತ್ತಿಗೆದಾರರೊಬ್ಬರಿಗೆ ಬೆದರಿಕೆ ಮತ್ತು ಜಾತಿ ನಿಂದನೆ ಮಾಡಿದ ಆರೋಪದ ಮೇಲೆ ಮುನಿರತ್ನ ಅವರು ಜೈಲುಪಾಲಾಗಿದ್ದರು. ಬಳಿಕ ಜಾಮೀನಿನ ಮೇಲೆ ಜೈಲಿನಿಂದ ಆಚೆ ಬಂದಿದ್ದರು. ಇನ್ನೇನು ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗುತ್ತಿದ್ದಂತೆಯೇ ಅತ್ಯಾಚಾರ ಪ್ರಕರಣದಲ್ಲಿ ಕಗ್ಗಲಿಪುರ ಪೊಲೀಸರು ಮುನಿರತ್ನ ಅವರನ್ನು ಬಂಧಿಸಿದ್ದರು.

# ಸರ್ಕಾರಿ ಭೂಮಿ ಸಕ್ರಮಗೊಳಿಸಲು ಮುಂದಾದ ಸರ್ಕಾರ

**ಬೆಂಗಳೂರು:** ಸರ್ಕಾರಿ ಜಮೀನುಗಳಲ್ಲಿ ಅನಧಿಕೃತ ಸಾಗುವಳಿಯನ್ನು ಸಕ್ರಮಗೊಳಿಸುವ ಬಗರ್ ಹುಕುಂ ಯೋಜನೆಯಡಿಯಲ್ಲಿ ತಿರಸ್ಕೃತಗೊಂಡಿದ್ದ ಅರ್ಜಿಗಳನ್ನು ಪುನರ್ ಪರಿಶೀಲಿಸಲಾಗುವುದು ಎಂದು ಇತ್ತೀಚೆಗೆ ಕಂದಾಯ ಇಲಾಖೆ ಸಚಿವ ಕೃಷ್ಣಬೈರೇಗೌಡ ಹೇಳಿದ್ದರು. ಅದರಂತೆಯೆ ಇದೀಗ ಸರ್ಕಾರಿ ಭೂಮಿ ಸಕ್ರಮಗೊಳಿಸುವ ಅರ್ಜಿಗಳ ಇತ್ಯರ್ಥಕ್ಕೆ ನಿರ್ಧಾರ ಮಾಡಲಾಗಿದೆ. ಆ ಮೂಲಕ ರೈತರಿಗೆ ಸರ್ಕಾರ ಗುಡ್‌ನ್ಯೂಸ್ ನೀಡಿದೆ.

ಈ ಬಗ್ಗೆ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವ ಕೃಷ್ಣಬೈರೇಗೌಡ, ಸರ್ಕಾರಿ ಭೂಮಿ ಸಕ್ರಮಗೊಳಿಸುವ ಅರ್ಜಿಗಳ ಇತ್ಯರ್ಥಕ್ಕೆ ನಿರ್ಧಾರ ಮಾಡಲಾಗಿದೆ. ಸಾಗುವಳಿ ಮಾಡುತ್ತಿರುವರುವ 14 ಲಕ್ಷ ರೈತರು ಅರ್ಜಿ ಹಾಕಿದ್ದಾರೆ. ಸರ್ಕಾರಿ ಭೂಮಿ ಸಕ್ರಮಗೊಳಿಸುವಂತೆ ಅರ್ಜಿಗಳನ್ನು ಸಲ್ಲಿಸಿದ್ದಾರೆ. ಈ ಸಂಬಂಧ ತಹಶೀಲ್ದಾರ್‌ಗಳ ಜೊತೆ ಸಭೆ ನಡೆಸಿದ್ದೇನೆ. ನಾಲ್ಕೈದು ತಿಂಗಳಲ್ಲಿ ಎಲ್ಲಾ ರೈತರ ಅರ್ಜಿ ಇತ್ಯರ್ಥ ಮಾಡಲು ಸೂಚನೆ ನೀಡಿರುವುದಾಗಿ ಹೇಳಿದ್ದಾರೆ.

ಈ ಬಾರಿ ಬಗರ್ ಹುಕಂ ಕಮಿಟಿಯಲ್ಲಿ ಸಕ್ರಮದ ಜೊತೆ ಸಾಗುವಳಿ ಚೀಟಿ ಮತ್ತು ಭೂಮಿ ಸರ್ವೆ ಮಾಡಿ ರೈತರ ಹೆಸರಿಗೆ ನೋಂದಣಿ ಕೂಡ ಮಾಡಿಕೊಡುತ್ತೇವೆ. ರೈತರ ಎಲ್ಲಾ ದಾಖಲೆಗಳನ್ನು ಡಿಜಿಟಲ್ ಮಾಡಿಕೊಡುತ್ತೇವೆ ಎಂದು ತಿಳಿಸಿದ್ದಾರೆ.





ಹಿಂದೆ ಭೂಮಿ ಮಂಜೂರಾಗಿ ಪೋಡಿ ದುರಸ್ತಿ ಆಗದ 10 ಲಕ್ಷ ಪ್ರಕರಣಗಳಿವೆ. ಇವರೆಲ್ಲರ ದುರಸ್ತಿ ಪ್ರಕ್ರಿಕೆಯೆಗೆ ಚಾಲನೆ ನೀಡಿದ್ದೇವೆ ಎಂದು ಹೇಳಿದ್ದಾರೆ.

ಜಾತಿ ಜನಗಣತಿ ವರದಿ ಜಾರಿ ಬಗ್ಗೆ ನಾನು ನನ್ನ ಅಭಿಪ್ರಾಯ ಸಭೆಯಲ್ಲಿ ಹೇಳುತ್ತೇನೆ ಎಂದ ಕೃಷ್ಣಬೈರೇಗೌಡ

ಜಾತಿ ಜನಗಣತಿ ವರದಿ ಜಾರಿ ವಿಚಾರವಾಗಿ ಮಾತನಾಡಿ ಅವರು, ಪರ ವಿರೋಧ ಚರ್ಚೆ ಆಗಲಿ. ಯಾರಿಗೆ ಆಗಲಿ ಅಭಿಪ್ರಾಯ ಹೇಳುವ ಅವಕಾಶ ಇದೆ. ಸಚಿವ ಸಂಪುಟ ಸಭೆಯಲ್ಲಿ ಅಭಿಪ್ರಾಯ ಹೇಳುತ್ತೇವೆ. ನಾನು ನನ್ನ ಅಭಿಪ್ರಾಯ ಸಭೆಯಲ್ಲಿ ಹೇಳುತ್ತೇನೆ.

ನನ್ನ ಅಭಿಪ್ರಾಯ, ಸಂಪುಟ ತೀರ್ಮಾನ ಬಗ್ಗೆ ನಂತರ ಹಂಚಿಕೊಳುತ್ತೇನೆ. ನಾನೇನೇ ಹೇಳಿದರೂ ಸರ್ಕಾರದ ಹೇಳಿಕೆ ಆಗುತ್ತೆ. ಬೇರೆ ಸಚಿವರು ಏನೇ ಅಭಿಪ್ರಾಯ ಹೇಳಿದರೂ ಸಮಚಿತ್ತದಿಂದ ಸ್ವೀಕರಿಸುತ್ತೇವೆ. ಕೊನೆಗೆ ಸಂಪುಟದಲ್ಲಿ ಏನು ತೀರ್ಮಾನ ಆಗುತ್ತದೆ ನೋಡಬೇಕು ಎಂದಿದ್ದಾರೆ.

# ಕ್ಷೀರಭಾಗ್ಯ ಹಾಲಿನ ಪುಡಿ ಜಪ್ತಿ

**ಬಾಗಲಕೋಟೆ:** ಅಕ್ರಮವಾಗಿ ಶಾಲಾ ಮಕ್ಕಳ ಕ್ಷೀರ ಭಾಗ್ಯದ ಹಾಲಿನ ಪುಡಿಯನ್ನು ಸಂಗ್ರಹಿಸಿ ಮಹಾರಾಷ್ಟ್ರಕ್ಕೆ ಸಾಗಿಸಲು ಯತ್ನಿಸುತ್ತಿದ್ದಾಗ ಪೊಲೀಸರು ದಾಳಿ ನಡೆಸಿ ಆರೋಪಿಯನ್ನು ಬಂಧಿಸಿದ ಘಟನೆ ಬಾದಾಮಿ ತಾಲೂಕಿನ ಸೂಳಿಕೇರಿ ಬಳಿ ನಡೆದಿದೆ.

ಬಾಗಲಕೋಟೆ ಸಿಇಎನ್ ಪೊಲೀಸರ ದಾಳಿ ನಡೆಸಿ ಆರೋಪಿಯನ್ನು ಬಂಧಿಸಿ ಅಪಾರ ಪ್ರಮಾಣದ ಹಾಲಿನ ಪುಡಿ ಪ್ಯಾಕೆಟ್ ಜೊತೆಗೆ ರಾಗಿಹಿಟ್ಟು, ಅಡುಗೆ ಎಣ್ಣೆಯ ಜೊತೆ ಬೊಲೆರೋ ವಾಹನವನ್ನು ಜಪ್ತಿ ಮಾಡಿದ್ದಾರೆ.

ಸಿದ್ದಪ್ಪ ಕಿತ್ತಲಿ ಬಂಧಿತ ಆರೋಪಿ. ಖಚಿತ ಮಾಹಿತಿ ಮೇರೆಗೆ ಸಿದ್ದಪ್ಪನನ್ನು ಬಂಧಿಸಿದ ಸಿಇಎನ್ ಪೊಲೀಸರು ಈಗ ವಿಚಾರಣೆ ನಡೆಸುತ್ತಿದ್ದಾರೆ. ಸಿದ್ದಪ್ಪ ಕಿತ್ತಲಿ ಮೂಲತಃ ಸೂಳಿಕೇರಿ ಗ್ರಾಮದವನಾಗಿದ್ದು, ಹುನಗುಂದ ಹಾಗೂ ಬಾದಾಮಿ ತಾಲೂಕಿನ ಶಾಲೆಗಳಿಗೆ ಹಾಲಿನ ಪೌಡರ್ ಸರಬರಾಜು ಮಾಡುವ ಸಬ್ ಲೀಸ್ ದಾರನಾಗಿದ್ದ ದಾಸ್ತಾನುಗಳನ್ನ ಶಾಲೆಗಳಿಗೆ ಸರಿಯಾಗಿ ಸರಬರಾಜು ಮಾಡದೇ, ವಂಚಿಸಿ ತನ್ನ ಮನೆ ಎದುರುಗಡೆ ಇರುವ ಶೆಡ್‌ನಲ್ಲಿ ಹಾಲಿನ ಪೌಡರ್, ಅಡುಗೆ ಎಣ್ಣೆ, ರಾಗಿಹಿಟ್ಟು ಸಂಗ್ರಹ ಮಾಡಿ ಇಟ್ಟಿದ್ದ. ಒಟ್ಟು 18.14 ಲಕ್ಷ ರೂ. ಮೌಲ್ಯದ ಹಾಲಿನ ಪುಡಿ, ರಾಗಿ ಹಿಟ್ಟು, ಅಡುಗೆ ಎಣ್ಣೆ ಪ್ಯಾಕೆಟ್‌ಗಳನ್ನು ಜಪ್ತಿ ಮಾಡಲಾಗಿದೆ. ಆರೋಪಿ ಸಿದ್ದಪ್ಪ, ಮಹಾಲಿಂಗಪುರದ ಮೂಲ ಲೀಸ್‌ದಾರ ಶ್ರೀಶೈಲ ಅಂಗಡಿ ಎನ್ನುವ ವ್ಯಕ್ತಿಯಿಂದ ಸರಬರಾಜು ಮಾಡಲು ಸಬ್ ಲೀಸ್ ಪಡೆದಿದ್ದ.

4,474 ಕೆಜಿ ಕೆಜಿ ಹಾಲಿನ ಪುಡಿ ಪಾಕೆಟ್, 325 ಕೆಜಿ ರಾಗಿ ಹಿಟ್ಟು, 50 ಕೆಜಿ ಅಡುಗೆ ಎಣ್ಣೆ ಸಂಗ್ರಹಿಸಿ ಒಂದು ಬೊಲೆರೋ ವಾಹನದಲ್ಲಿ ಮಹಾರಾಷ್ಟ್ರಕ್ಕೆ ಸಾಗಿಸಲು ಯತ್ನಿಸಿದ್ದ.



**ಮಹಾರಾಷ್ಟ್ರಕ್ಕೆ ಸಾಗಿಸುತ್ತಿದ್ದ 18.14 ಲಕ್ಷ ಮೌಲ್ಯ**

# 98 ಲಕ್ಷ ರೂ. ಮೌಲ್ಯದ ಚಿನ್ನ, ಬೆಳ್ಳಿ ಜಪ್ತಿ

**ಧಾರವಾಡ:** ಯಾವುದೇ ದಾಖಲಾತಿ ಇಲ್ಲದೇ ಮುಂಬೈನಿಂದ ಹುಬ್ಬಳ್ಳಿಗೆ ಖಾಸಗಿ ಬಸ್‌ನಲ್ಲಿ ಸಾಗಿಸುತ್ತಿದ್ದ 98 ಲಕ್ಷ ರೂ. ಮೌಲ್ಯದ ಚಿನ್ನ ಹಾಗೂ ಬೆಳ್ಳಿಯ ಆಭರಣಗಳನ್ನು ಧಾರವಾಡ ಠಾಣಾ ಪೊಲೀಸರು ಜಪ್ತಿ ಮಾಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಧಾರವಾಡದ ನರೇಂದ್ರ ಕ್ರಾಸ್ ಬಳಿ ಧಾರವಾಡ ಗ್ರಾಮೀಣ ಠಾಣೆ ಪೊಲೀಸರು ಎರಡು ದಿನಗಳ ಹಿಂದೆ ಆ ಬಸ್ ತಡೆದು ಚಿನ್ನಾಭರಣ ಸಾಗಿಸುತ್ತಿದ್ದ ವ್ಯಕ್ತಿಯನ್ನು ಬಂಧಿಸಿದ್ದಾರೆ.

ಭವರ್‌ಸಿಂಗ್ ಬಂಧಿತ ವ್ಯಕ್ತಿ. ಈತನಿಂದ ಒಬರೊಬ್ಬರಿ 98 ಲಕ್ಷ ರೂ. ಮೌಲ್ಯದ ಚಿನ್ನ ಹಾಗೂ ಬೆಳ್ಳಿಯ ಸಾಮಾನುಗಳನ್ನು ಜಪ್ತಿ ಮಾಡಲಾಗಿದೆ. ಮೇಲ್ನೋಟಕ್ಕೆ ಸುಮಾರು 2 ಕೋಟಿ ರೂ. ನಷ್ಟು ಚಿನ್ನಾಭರಣವನ್ನು ಜಪ್ತಿ ಮಾಡಲಾಗಿತ್ತು ಎಂದು ಊಹಿಸಲಾಗಿತ್ತು. ಆದರೆ, 98 ಲಕ್ಷ ರೂ. ಮೌಲ್ಯದ ಚಿನ್ನ ಮತ್ತು ಬೆಳ್ಳಿಯ ಸಾಮಾನುಗಳನ್ನು ಜಪ್ತಿ ಮಾಡಲಾಗಿದೆ ಎಂದು ಬೆಳಗಾವಿ ಉತ್ತರ ವಲಯ ಐಜಿಪಿ ವಿಕಾಸಕುಮಾರ್ ಅವರೇ ಸ್ಪಷ್ಟಪಡಿಸಿದ್ದಾರೆ.

ಮೂಲತಃ ರಾಜಸ್ಥಾನದವನಾದ ಹಾಗೂ ಹಾಲಿ ಹುಬ್ಬಳ್ಳಿಯ ದುರ್ಗದಬೈಲ್‌ನಲ್ಲಿ ವಾಸವಿದ್ದ ಭರವರಸಿಂಗ್ ಚೌಹಾಣ್ ಎಂಬಾತ ಯಾವುದೇ ದಾಖಲೆ ಇಲ್ಲದೇ ಒಂದು ಬ್ಯಾಗ್ ಹಾಗೂ ಒಂದು ಸೂಟ್‌ಕೇಸ್‌ನಲ್ಲಿ ಒಟ್ಟು 1237.20 ಗ್ರಾಂ ತೂಕದ ಚಿನ್ನದ ಆಭರಣ ಹಾಗೂ ಚಿನ್ನದ ಬಿಸ್ಕೆಟ್, 15 ಕೆಜಿ ಬೆಳ್ಳಿಯ ಗಟ್ಟಿ ಆಭರಣ ಹಾಗೂ ಸಾಮಾನುಗಳನ್ನು ಸಾಗಿಸುತ್ತಿದ್ದ. ಒಟ್ಟು 98 ಲಕ್ಷ ರೂ. ಮೌಲ್ಯದ ಚಿನ್ನ ಹಾಗೂ ಬೆಳ್ಳಿಯ ಸಾಮಾನುಗಳನ್ನು ಆತನಿಂದ ಜಪ್ತಿ ಮಾಡಲಾಗಿದೆ. ಭವರಸಿಂಗ್ ಕೊರಿಯರ್ ಸರ್ವಿಸ್ ಕೆಲಸ ಮಾಡುತ್ತಿದ್ದ. ರಾಜಸ್ತಾನ ಮೂಲದ ನರಪಲ್ ಸಿಂಗ್ ಬಾಲೋಥ್ ಕೂಡ ಕೊರಿಯರ್ ಸರ್ವಿಸ್ ಕೆಲಸ ಮಾಡುತ್ತಿದ್ದ. ನರಪಲ್ ಸಿಂಗ್ ಕೈಕೆಳಗಡೆ ಈ ಭವರ್‌ಸಿಂಗ್ ಕೆಲಸ ಮಾಡುತ್ತಿದ್ದ. ಸದ್ಯ ಭವರ್‌ಸಿಂಗ್ ಪೊಲೀಸರ ವಶದಲ್ಲಿದ್ದು, ನರಪಲ್ ಸಿಂಗ್ ನಾಪತ್ತೆಯಾಗಿದ್ದು, ಆತನ ಪತ್ತೆಗೆ ಜಾಲ ಬೀಸಲಾಗಿದೆ. ಸದ್ಯ ಧಾರವಾಡದಲ್ಲಿ ಸಿಕ್ಕ ಚಿನ್ನ ಹಾಗೂ ಬೆಳ್ಳಿಯ ಆಭರಣಕ್ಕೆ ಯಾವುದೇ ದಾಖಲೆ ಇಲ್ಲದೇ ಅಕ್ರಮವಾಗಿ ಸಾಗಾಟ ಮಾಡಲಾಗುತ್ತಿತ್ತು ಎಂಬ ಮಾಹಿತಿಯನ್ನು ಸ್ವತಃ ಐಜಿಪಿಯವರೇ ಬಿಚ್ಚಿಟ್ಟಿದ್ದಾರೆ.



# ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಲು 50 ಜನರ ಸಮಿತಿ ರಚನೆ

**ಬೆಂಗಳೂರು:** ವಿಧಾನಸೌಧದ ಮಹಾದ್ವಾರದ ಮೆಟ್ಟಿಲುಗಳ ಮೇಲೆ ನವೆಂಬರ್ 1ರಂದು ನಡೆಯಲಿರುವ 69ನೇ ಕರ್ನಾಟಕ ರಾಜ್ಯೋತ್ಸವ ಹಾಗೂ ಕರ್ನಾಟಕ ಸಂಭ್ರಮ 50ರ ಸಮಾರೋಪ ಸಮಾರಂಭ ನಡೆಯಲಿದ್ದು, ಇದೇ ವೇಳೆ ಸಾಧಕರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರಶಸ್ತಿ ಸಾಧಕರನ್ನು ಆಯ್ಕೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು, ವಿವಿಧ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿರುವ ಸದಸ್ಯರನ್ನೊಳಗೊಂಡ ಸಲಹಾ ಸಮಿತಿಯನ್ನು ರಚಿಸಿ ಆದೇಶಿಸಿದೆ.




ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ನೇತೃತ್ವದ ಸಲಹಾ ಸಮಿತಿ 36 ಸದಸ್ಯರು ಮತ್ತು 13 ಪದನಿಮಿತ್ತ ಸದಸ್ಯರನ್ನು ಒಳಗೊಂಡಿದೆ. ವಿವಿಧ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿರುವವರನ್ನು ಈ ಸಲಹಾ ಸಮಿತಿಗೆ ಸದಸ್ಯರನ್ನಾಗಿ ನೇಮಿಸಲಾಗಿದೆ. ಈಗಾಗಲೇ ಸೇವಾ ಸಿಂಧು ಪೋರ್ಟಲ್‌ನ ವೆಬ್‌ಸೈಟ್ ಮೂಲಕ ಸಾಧಕರ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಲು ಅವಕಾಶ ನೀಡಿದೆ. ರಾಜ್ಯೋತ್ಸವ ಪ್ರಶಸ್ತಿ ಆಯ್ಕೆಗೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ನೇತೃತ್ವದ ಈ ಸಲಹಾ ಸಮಿತಿ ಮುಂದಿನ ವಾರದಿಂದಲೇ ಪರಿಶೀಲನೆ ನಡೆಸಲಿದೆ. 69ನೇ ಕರ್ನಾಟಕ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಕಲೆ, ಸಾಹಿತ್ಯ, ಜಾನಪದ, ಕೃಷಿ, ಪರಿಸರ, ವಿಜ್ಞಾನ, ತಂತ್ರಜ್ಞಾನ, ಕ್ರೀಡೆ, ಸಂಗೀತ ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ 69 ಸಾಧಕರಿಗೆ ಈ ಬಾರಿ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುತ್ತದೆ. ಈ ಬಾರಿ ಕೂಡ ಸಾಧಕರ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಲು ಸೇವಾ ಸಿಂಧು ಪೋರ್ಟಲ್‌ನ ವೆಬ್‌ಸೈಟ್ https://sevasindhu.Karnataka.gov.in ಮೂಲಕ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಸೆ.30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಈ ಬಾರಿಯೂ ರಾಜ್ಯೋತ್ಸವ ಪ್ರಶಸ್ತಿ ಆಕಾಂಕ್ಷಿಗಳ ಪಟ್ಟಿ ಸಾವಿರದ ಗಡಿ ದಾಟಿದೆ. ಇದುವರೆಗೆ ಸುಮಾರು 1700ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ತಿಳಿದುಬಂದಿದೆ.

## ಮೊದಲನೇ ಪುಟದಿಂದ...

## 11 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್

ಮಂಡಿವರೆಗೆ ಮಳೆ ನೀರು ಹರಿಯುತ್ತಿದ್ದರಿಂದ ವಾಹನ ಸವಾರರು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿತ್ತು. ಸ್ಯಾಂಕಿ ರಸ್ತೆಯಲ್ಲಿ ನೀರು ನಿಂತು ಅಕ್ಷರಶಃ ಜನರು ನಲುಗಿ ಹೋದರು. ವಾಹನ ಸವಾರರು ಪರದಾಡಿದರು.

ಒಂದಡೆ ಮಳೆ, ಮತ್ತೊಂದೆಡೆ ಟ್ರಾಫಿಕ್ ಜಾಮ್ ಆಯಿತು. ಬಳ್ಳಾರಿ ರಸ್ತೆ ಮಳೆಯಿಂದಾಗಿ ಸ್ಥಬ್ದವಾಗಿತ್ತು. ಕಿಲೋಮೀಟರ್ ಗಟ್ಟಲೇ ಟ್ರಾಫಿಕ್ ಜಾಮ್ ಆಗಿತ್ತು. ಇತ್ತ ಮಲ್ಲೇಶ್ವರಂ 17 ನೇ ಕ್ರಾಸ್ ಕ್ಲಾಡ್‌ನೈನ್ ಆಸ್ಪತ್ರೆ ಎದುರು ಬೃಹತ್ ಮರವೊಂದು ಧರೆಗುರುಳಿದೆ. ಮರದಡಿ ರಸ್ತೆಯ ಪಕ್ಕ ಪಾರ್ಕ್ ಮಾಡಲಾಗಿದ್ದ ಕಾರುಗಳು ಜಖಂಗೊಂಡಿವೆ. ಕರೆಂಟ್ ಸ್ಥಗಿತಗೊಂಡು, ರಸ್ತೆ ಸಂಚಾರ ಬಂದ್ ಆಗಿತ್ತು.

ಇಂದೂ ಸಹ ಬೆಂಗಳೂರು ನಗರ, ಗ್ರಾಮಾಂತರದಲ್ಲಿ ಭಾರೀ ಮಳೆಯಾಗಲಿದ್ದು, 11 ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಕ್ಷಿಣ ಒಳನಾಡಿನ 11 ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ.

ಬೆಂಗಳೂರು ನಗರ, ಗ್ರಾಮಾಂತರ, ಕೊಡಗು, ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಅ.10 ಭಾರೀ ಮಳೆಯಾಗಬಹುದು. ಮುಂದಿನ ನಾಲ್ಕೈದು ದಿನ ಗುಡುಗು ಸಹಿತ ಭಾರೀ ಮಳೆ ಸಾಧ್ಯತೆ ಇದೆ ಎಂದು ತಿಳಿಸಿದೆ.

## ಬೆಂಗಳೂರಿನಲ್ಲಿ 36 ಮಿ.ಮೀ ಮಳೆ

ಮಡಿವಾಳ ಕೆಳಸೇತುವೆ ಜಲಾವೃತವಾಗಿದ್ದರಿಂದ ಜನರು ಅಕ್ಷರಶಃ ಸಂಕಷ್ಟ ಅನುಭವಿಸಿದರು. ವಿವೇಕ ನಗರದಲ್ಲಂತೂ ಎಲ್ಲಿ ನೋಡಿದರು ಮಳೆ ನೀರು ನಿಂತಿದ್ದರಿಂದ ದ್ವಿಚಕ್ರ ಸವಾರರು ಪರದಾಡಿದರು. ಇನ್ನು ಪಣತ್ತೂರು ರೈಲ್ವೆ ಬ್ರಿಡ್ಜ್ ಕೆಳಗೆ ನೀರು ನಿಂತಿದ್ದು ಡ್ರೈವರ್?ಗಳಿಗೆ ತಲೆನೋವು ಎನಿಸಿತು.

**2 ಸಾವಿರ ನಿವಾಸಿಗಳಿಗೆ ಜಲದಿಗ್ಬಂಧನ;** ಮಳೆಗೆ ಯಲಹಂಕದ ಕೇಂದ್ರಿಯ ವಿಹಾರ ಅಪಾರ್ಟ್‌ಮೆಂಟ್ ಜಲಾವೃತವಾಗಿದ್ದು, 603 ಫ್ಲಾಟ್‌ಗಳಿದ್ದು, 2ಸಾವಿರ ನಿವಾಸಿಗಳಿಗೆ ಜಲದಿಗ್ಬಂಧನ ಹಾಕಿತ್ತು. ಟ್ರ್ಯಾಕ್ಟರ್ ಮೂಲಕ ನಿವಾಸಿಗಳನ್ನ ಶಿಫ್ಟ್ ಮಾಡಲಾಗಿದೆ. ಯಲಹಂಕದ ಕೇಂದ್ರಿಯ ವಿಹಾರ ಅಪಾರ್ಟ್ ಮೆಂಟ್‌ನಲ್ಲಿ 80 ಕ್ಕೂ ಹೆಚ್ಚು ಕಾರು, ನೂರಕ್ಕೂ ಹೆಚ್ಚು ಬೈಕ್?ಗಳು ನೀರಿನಲ್ಲಿ ಮುಳುಗಿವೆ. ಟ್ರ್ಯಾಕ್ಟರ್, ಬೋಟ್ ಮೂಲಕ ಆಹಾರ, ನೀರನ್ನ ಪೂರೈಸಲಾಗಿದೆ.

**ವೃದ್ಧಾಶ್ರಮಕ್ಕೆ ನುಗ್ಗಿದ ನೀರು: ಪರದಾಟ:** ಮಹಾಮಳೆಯಿಂದ ಬಸವೇಶ್ವರನಗರದಲ್ಲಿರುವ ವೃದ್ಧಾಶ್ರಮಕ್ಕೆ ನೀರು ನುಗ್ಗಿತ್ತು. ಇದರಿಂದ 15ಕ್ಕೂ ಅಧಿಕ ವೃದ್ಧರು ಪರದಾಡಿದ್ದಾರೆ. ಬಸವೇಶ್ವರ ನಗರದ 8ಬಿ ಮುಖ್ಯರಸ್ತೆ ಹೊಳೆಯಂತಾಗಿತ್ತು. ಹಾಗಾಗಿ ಫ್ಲೈವುಡ್ ಹಾಗೂ ಗ್ಲಾಸ್ ಅಂಗಡಿ ಸಂಪೂರ್ಣ ಜಲಾವೃತವಾಗಿತ್ತು.

## ಶಬರಿಮಲೆ ಯಾತ್ರೆಗೆ ಆನ್‌ಲೈನ್ ಬುಕ್ಕಿಂಗ್ ಕಡ್ಡಾಯ

ಅಯ್ಯಪ್ಪ ದೇಗುಲದಲ್ಲಿ ದಿನಕ್ಕೆ ಗರಿಷ್ಠ 80,000 ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಗುವುದು. ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದಲ್ಲಿ ಮುಂಬರುವ ತೀರ್ಥಯಾತ್ರೆಯ ಸಿದ್ಧತೆಗಳ ಅವಲೋಕನದ ಮೌಲ್ಯಮಾಪನ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಸಾಂಪ್ರದಾಯಿಕ ಅರಣ್ಯ ಮಾರ್ಗದಲ್ಲಿ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು. ಜನಸಂದಣಿಯ ಸಮಯದಲ್ಲಿ ವಾಹನಗಳನ್ನು ನಿಯಂತ್ರಿಸಬೇಕಾದರೆ, ಪಾರ್ಕಿಂಗ್‌ಗೆ ಅಗತ್ಯ ಪ್ರದೇಶಗಳನ್ನು ಗುರುತಿಸಿ ಅಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ವರ್ಷ ಲಕ್ಷಾಂತರ ಭಕ್ತರು ಅಯ್ಯಪ್ಪ ದರ್ಶನಕ್ಕೆ ಆಗಮಿಸಿದ್ದರಿಂದ ಅದನ್ನು ನಿರ್ವಹಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದೇ ಇದ್ದಿದ್ದರಿಂದ ಅವ್ಯವಸ್ಥೆ ಉಂಟಾಗಿತ್ತು. ಇದರಿಂದ ಸರ್ಕಾರದ ವಿರುದ್ಧ ಭಾರಿ ಆಕ್ರೋಶ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಈ ವರ್ಷ ಭಕ್ತರ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡುವ ನಿಟ್ಟಿನಲ್ಲಿ ಆನ್‌ಲೈನ್ ಬುಕ್ ಮಾಡಿದವರಿಗೆ ಮಾತ್ರ ಅವಕಾಶ ಕಲ್ಪಿಸಲು ಸರ್ಕಾರ ತೀರ್ಮಾನಿಸಿದೆ.

ಈ ಬಾರಿ ನಿಲಕ್ಕಲ್ ಮತ್ತು ಪಂಪಾದಲ್ಲಿ ಹೆಚ್ಚಿನ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಲಾಗುತ್ತಿದೆ. 'ವಿಶುಧಿ ಸೇನಾ' ಸ್ವಯಂಸೇವಕರಿಗೆ (ಸ್ವಚ್ಛತಾ ಸ್ವಯಂಸೇವಕರು) ಆರೋಗ್ಯ ತಪಾಸಣೆ ಮತ್ತು ತರಬೇತಿಯನ್ನೂ ಏರ್ಪಡಿಸಲಾಗುವುದು. ಶಬರಿಮಲೆಯ ಶಬರಿ ಅತಿಥಿಗೃಹದ ನಿರ್ವಹಣೆ ಶೀಘ್ರದಲ್ಲೇ ಪೂರ್ಣಗೊಳ್ಳಲಿದ್ದು, ಪ್ರಣವಂ ಅತಿಥಿ ಗೃಹದ ನವೀಕರಣ ಈಗಾಗಲೇ ಪೂರ್ಣಗೊಂಡಿದೆ ಎಂದು ತಿಳಿಸಲಾಗಿದೆ.

## ದರ್ಶನ್, ಪವಿತ್ರಾಗೌಡ ಮೊಬೈಲ್ ರಿಟ್ರೀವ್ ಆಗಿಲ್ಲ!

ಹತ್ತು ಆರೋಪಿಗಳ ಪೈಕಿ ಎಲ್ಲರ ಫೋನ್‌ಗಳು ರಿಟ್ರೀವ್ ಆಗಿದ್ದು, ನಟ ದರ್ಶನ್ ಹಾಗೂ ಪವಿತ್ರಾಗೌಡ ಅವರ ಫೋನ್ ರಿಟ್ರೀವ್ ಆಗಬೇಕಿದೆ. ಎರಡು ಐಫೋನ್ ಆಗಿರುವ ಹಿನ್ನೆಲೆ ಮೊಬೈಲ್ ರಿಟ್ರೀವ್ ಕಷ್ಟವಾಗಿದೆ. ಕಳೆದ ಎರಡು ತಿಂಗಳಿನಿಂದ ಮೊಬೈಲ್ ರಿಟ್ರೀವ್‌ಗಾಗಿ ಪೊಲೀಸರು ಕಾದಿದ್ದಾರೆ. ಹೀಗಾಗಿ ತಜ್ಞರ ಅಭಿಪ್ರಾಯ ಪಡೆದು ಪೊಲೀಸರು ರಿಟ್ರೀವ್‌ಗೆ ಮುಂದಾಗಿದ್ದಾರೆ.

ಪ್ರಕರಣ ಸಂಬಂಧ ಈಗಾಗಲೇ ಚಾರ್ಜ್‌ಶೀಟ್ ಸಲ್ಲಿಕೆಯಾಗಿದ್ದರೂ ಸಿಎಫ್‌ಎಸ್‌ಎಲ್ ವರದಿ ಇನ್ನೂ ಬಂದಿಲ್ಲ. ಮೊಬೈಲ್ ರಿಟ್ರೀವ್ ಆದ ಬಳಿಕ ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಕೆಯಾಗುವ ಸಾಧ್ಯತೆಯಿದ್ದು, ಇನ್ನೊಂದು ವಾರದಲ್ಲಿ ರಿಟ್ರೀವ್ ಆಗುವ ಸಾಧ್ಯತೆಯಿದೆ ಎಂದು ತಿಳಿದು ಬಂದಿದೆ.

## ಮಾಜಿ ಶಾಸಕ ಮೊಯಿದೀನ್ ಬಾವ ಸಹೋದರ ಮುಮ್ತಾಜ್ ಅಲಿ ನಾಪತ್ತೆ

ಬಿಎಂಡಬ್ಲ್ಯೂ ಕಾರು ಡ್ಯಾಮೇಜ್ ಆದ ಸ್ಥಿತಿಯಲ್ಲಿದೆ. ಅಲಿ ಅವರು ವಿವಿಧ ಉದ್ಯಮ ಮತ್ತು ಮಸೀದಿ ಕಮಿಟಿಗಳಲ್ಲಿ ತೊಡಗಿಸಿಕೊಂಡಿದ್ದರು.

ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಮಂಗಳೂರು ನಗರ ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್ ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ. ಕಮಿಷನರ್ ಮುಂದೆ ಮಾಜಿ ಶಾಸಕ ಮೊಯಿದ್ದೀನ್ ಬಾವ ಕಣ್ಣೀರು ಹಾಕಿದ ಪ್ರಸಂಗ ನಡೆಯಿತು.

## ತಿರುಪತಿಯ ಪ್ರಸಾದದಲ್ಲಿ ಹುಳುಗಳು ಪತ್ತೆ



ವಿಷಯ ತಿಳಿದ ನಂತರ ದೇವಾಲಯದ ಸಿಬ್ಬಂದಿ ತಮ್ಮನ್ನು ನಿಂದಿಸಲು ಮತ್ತು ಬೆದರಿಸಲು ಪ್ರಯತ್ನಿಸಿದರು ಎಂದು ಭಕ್ತ ಆರೋಪಿಸಿದ್ದಾರೆ. ಸರ್ಕಾರವು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು. ನಾವು ಊಟ ಮಾಡುವಾಗ ಮಧ್ಯಾಹ್ನ 1.30 ರ ಸುಮಾರಿಗೆ ಈ ಘಟನೆ ಸಂಭವಿಸಿದೆ ಎಂದು ಚಂದು ಸೇರಿಸಲಾಗಿದೆ.

ತಿರುಪತಿ ಲಡ್ಡು ವಿವಾದದ ಬಗ್ಗೆ ಹೊಸದಾಗಿ ತನಿಖೆ ನಡೆಸುವಂತೆ ಸುಪ್ರೀಂ ಕೋರ್ಟ್ ಆದೇಶಿಸಿದೆ. ಸಿಬಿಐ, ರಾಜ್ಯ ಪೊಲೀಸ್ ಮತ್ತು ಎಫ್‌ಎಸ್‌ಎಸ್‌ಎಐ ಅಧಿಕಾರಿಗಳನ್ನು ಒಳಗೊಂಡಿರುವ ಹೊಸ ಐದು-ಸದಸ್ಯರ ಸ್ವತಂತ್ರ ಎಸ್‌ಐಟಿಯನ್ನು ರಚಿಸಲು ಸೂಚಿಸಿದೆ. ನ್ಯಾಯಮೂರ್ತಿ ಬಿಆರ್ ಗವಾಯಿ ಮತ್ತು ನ್ಯಾಯಮೂರ್ತಿ ಕೆವಿ ವಿಶ್ವನಾಥನ್ ಅವರ ಪೀಠವು ಈ ಪ್ರಕರಣದ ವಿಚಾರಣೆ ನಡೆಸುತ್ತಿದ್ದಾರೆ.

ಆಂಧ್ರಪ್ರದೇಶದ ತಿರುಮಲದಲ್ಲಿರುವ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಲಡ್ಡುಗಳನ್ನು ತಯಾರಿಸುವಲ್ಲಿ ಪ್ರಾಣಿಗಳ ಕೊಬ್ಬನ್ನು ಬಳಸಲಾಗಿದೆ ಎಂಬ ಆರೋಪದ ಕುರಿತು ನ್ಯಾಯಾಲಯದ ಮೇಲ್ವಿಚಾರಣೆಯ ತನಿಖೆಯನ್ನು ಕೋರಿ ಸಲ್ಲಿಸಲಾದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿತು. ಕೇಂದ್ರದ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಸುಪ್ರೀಂ ಕೋರ್ಟ್‌ಗೆ ಹೇಳಿಕೆ ನೀಡಿದ್ದು, ಎಸ್‌ಐಟಿಯ ಮೇಲೆ ಕೇಂದ್ರದ ಹಿರಿಯ ಅಧಿಕಾರಿ ನಿಗಾ ವಹಿಸಬೇಕು, ಇದರಿಂದ ಜನರಲ್ಲಿ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದು ಹೇಳಿದರು.

## ಹೊಸ ವರ್ಷದಿಂದ್ಲೇ ಎಲೆಕ್ಟ್ರಾನಿಕ್ ಸಿಟಿಗೆ ಮೆಟ್ರೋ

ಶನಿವಾರ ರೀಚ್ -5 (ಹಳದಿ ಮಾರ್ಗದ) ಆರ್.ವಿ ರಸ್ತೆಯಿಂದ ಬೊಮ್ಮಸಂದ್ರದವರೆಗಿನ ಪ್ರಗತಿ ಸ್ಥಿತಿಯ ಬಗ್ಗೆ ಮಾಹಿತಿ ಹಂಚಿಕೊಂಡಿದೆ. ಸಿವಿಲ್ ಅಥವಾ ಸಿಸ್ಟಂ ಕಾಮಗಾರಿಗಳು ಗಣನೀಯವಾಗಿ ಪೂರ್ಣಗೊಂಡಿವೆ. ಪ್ರೋಟೋ-ಟೈಪ್ ರೈಲಿನ ಪರೀಕ್ಷೆ ಪ್ರಗತಿಯಲ್ಲಿದ್ದು, ರೈಲ್ವೆ ಮಂಡಳಿಯು ಟ್ರಾಕ್ಷನ್ ಗೆ ಸಂಬಂಧಿಸಿದಂತೆ ತಾಂತ್ರಿಕ ಮಂಜೂರಾತಿ ನೀಡಿದೆ. ಸಿಗ್ನಲಿಂಗ್ ಸಿಸ್ಟಮ್ ಮತ್ತು ರೋಲಿಂಗ್ ಸ್ಟಾಕ್ ಪೂರ್ವಭಾವಿ ಹಂತದಲ್ಲಿದೆ ಎಂದು ತಿಳಿಸಿದೆ. ಇನ್ನೂ ನವೆಂಬರ್-ಡಿಸೆಂಬರ್ 2024ರ ವೇಳೆಗೆ 3 ರೈಲು ಸೆಟ್‌ಗಳು ಲಭ್ಯವಿರಲಿದೆ. ಜನವರಿ 2025ರ ವೇಳೆಗೆ ಈ ಮಾರ್ಗದಲ್ಲಿ 3 ರೈಲುಗಳೊಂದಿಗೆ 30 ನಿಮಿಷಗಳ ಆವರ್ತನದಲ್ಲಿ ಕಾರ್ಯಾರಂಭಿಸುವ ಗುರಿಯನ್ನು ಹೊಂದಿದೆ.

ಡಿಸೆಂಬರ್ 2024ರಲ್ಲಿ ರೈಲ್ವೆ ಸುರಕ್ಷತಾ ಆಯುಕ್ತರಿಂದ ಶಾಸನಬದ್ಧ ಪರೀಕ್ಷೆ ನಡೆಸಲು ಯೋಜಿಸಲಾಗಿದೆ. ಮಾರ್ಚ್ 2025 ರಿಂದ ಪ್ರತಿ ತಿಂಗಳು 2 ರೈಲು ಸೆಟ್‌ಗಳನ್ನ ಟಿಆರ್ ಎಸ್‌ಎಲ್ ಸಂಸ್ಥೆಯಿಂದ ಪಡೆಯಲಾಗುತ್ತದೆ ಹಾಗೂ ಹಂತ ಹಂತವಾಗಿ ಪ್ರಯಾಣದ ಆವರ್ತನವನ್ನು ಕಡಿಮೆಗೊಳಿಸಲಾಗುತ್ತದೆ. ಆಗಸ್ಟ್ 2025ರ ಒಳಗೆ ಹಳದಿ ಮಾರ್ಗಕ್ಕೆ ಬೇಕಾಗಿರುವ ಎಲ್ಲಾ 15 ರೈಲುಗಳ ಸೆಟ್‌ಗಳು ಲಭ್ಯವಿರುತ್ತವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಇದರಿಂದ ಐಟಿ-ಬಿಟಿ ಕಂಪನಿ ಉದ್ಯೋಗಿಗಳಿಗೆ ಅನುಕೂಲವಾಗಲಿದ್ದು, ಟ್ರಾಫಿಕ್ ದಟ್ಟಣೆಯೂ ಕಡಿಮೆಯಾಗಲಿದೆ.

# ಚಿಕ್ಕಬಳ್ಳಾಪುರ ಜಿಲ್ಲೆಯ 14 ವಿವಿಧ ಕಾಮಗಾರಿಗಳಿಗೆ ಚಾಲನೆ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಇಂದು ಒಟ್ಟು 14 ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಶನಿವಾರ ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಮತ್ತು ನಾಯನಹಳ್ಳಿ ಗ್ರಾಮಗಳಲ್ಲಿ ಉನ್ನತೀಕರಿಸಿದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡಗಳನ್ನು ಉದ್ಘಾಟಿಸಿ ನಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಹೆಚ್. ನರಸಿಂಹಯ್ಯ ಮಿನಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.



ಶಿಡ್ಲಘಟ್ಟದಲ್ಲಿನ ವಸತಿಗೃಹ ನಿರ್ಮಾಣಕ್ಕೆ 2.5 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ. ಬಾಗೇಪಲ್ಲಿ ಸಾರ್ವಜನಿಕಆಸ್ಪತ್ರೆ ಅಭಿವೃದ್ಧಿಗೆ180 ಲಕ್ಷರೂಗಳನ್ನು ಮಂಜೂರು ಮಾಡಲಾಗಿದೆ. ಶಿಡ್ಲಘಟ್ಟ ತಾಲ್ಲೂಕು ಮತ್ತು ಬಾಗೇಪಲ್ಲಿ ತಾಲ್ಲೂಕಿನಲ್ಲಿ ತಲಾ ಒಂದು ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಚಿಂತಾಮಣಿ ತಾಲ್ಲೂಕು ಮುರುಗಮಲ್ಲಾದಲ್ಲಿ ನಿರ್ಮಿಸಿರುವ ಮಾನಸಿಕ ಆರೋಗ್ಯ ಕೇಂದ್ರವನ್ನೂ ಇಂದು ಲೋಕಾರ್ಪಣೆ ಮಾಡಲಾಗಿದೆ. ನಟ ಪುನೀತ್ ರಾಜ್ ಕುಮಾರ್ ಹೆಸರಿನಲ್ಲಿ ಜಾರಿ ಮಾಡಿರುವ ಹೃದಯ ಜ್ಯೋತಿ ಯೋಜನೆಯಡಿ ಈವರೆಗೆ 75 ಜನರ ಪ್ರಾಣಗಳು ಉಳಿದಿವೆ. ಇದುವರೆಗೆ 1200 ಜನರು ಈ ಯೋಜನೆಯಡಿ ಚಿಕಿತ್ಸೆ ಪಡೆದಿದ್ದಾರೆ. ರಾಜ್ಯದಲ್ಲಿ ಡೆಂಗ್ಯೂ ನಿಯಂತ್ರಣದಲ್ಲಿದ್ದು, ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಮುಂದಿನ ವರ್ಷ ಡೆಂಗ್ಯೂ ಹರಡುವಿಕೆ ನಿಯಂತ್ರಿಸಲು ಮುಂಜಾಗ್ರತಾ ಕ್ರಮಗಳನ್ನು ಯೋಜಿತ ರೀತಿಯಲ್ಲಿ ಕೈಗೊಳ್ಳಲು ನಿರ್ಧರಿಸಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 28 ಉಪ ಕೇಂದ್ರಗಳನ್ನು ಹೊಸದಾಗಿ ಆರಂಭಿಸುವಂತೆ ಕೋರಿ ಜಿಲ್ಲಾಡಳಿತ ಬೇಡಿಕೆ ಸಲ್ಲಿಸಿದೆ. ಸದ್ಯ 12 ಉಪ ಕೇಂದ್ರಗಳಿಗೆ ನಿವೇಶನ ಸಿದ್ಧವಿದೆ. ಮೊದಲ ಹಂತದಲ್ಲಿ 6 ಮತ್ತು ಎರಡನೇ ಹಂತದಲ್ಲಿ 6 ಉಪಕೇಂದ್ರಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಪ್ರತಿ ಉಪ ಕೇಂದ್ರ 65 ಲಕ್ಷ ರೂಗಳಲ್ಲಿ ನಿರ್ಮಾಣವಾಗಲಿದ್ದು, 12 ಉಪ ಕೇಂದ್ರಗಳನ್ನೂ 3.50 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು. ಜಿಲ್ಲೆಯಲ್ಲಿ 4 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಬೇಡಿಕೆ ಬಂದಿದ್ದು, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ನಕಲಿ ವೈದ್ಯರ ಹಾವಳಿಯನ್ನೂ ತಡೆಯಲು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿಯೂ ಡೇ ಕೇರ್ ಕಿಮೋ ಥೆರಪಿ ಕೇಂದ್ರಗಳನ್ನು ಶೀಘ್ರದಲ್ಲಿಯೇ ಆರಂಭಿಸಲಾಗುವುದು. ವೈದ್ಯರ ಮೇಲೆ ಹಲ್ಲೆ ನಡೆಸುವವರಿಗೆ 7 ವರ್ಷ ಕಾರಾಗೃಹ ಶಿಕ್ಷೆಯ ಜೊತೆಗೆ 1.5 ಲಕ್ಷ ರೂಪಾಯಿ ದಂಡ ವಿಧಿಸುವುದಕ್ಕೂ ಕಾನೂನು ತಿದ್ದುಪಡಿ ಮಾಡಲಾಗಿದೆ. ಅಲ್ಲದೇ ವೈದ್ಯರು, ದಾದಿಗಳ ವೀಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡು ಅನುಚಿತವಾಗಿ ವರ್ತಿಸುವವರ ವಿರುದ್ಧವೂ ಕಾಯ್ದೆ ತಿದ್ದುಪಡಿ ಮಾಡಲಾಗಿದೆ. ಅಂತವರಿಗೆ 3 ತಿಂಗಳ ಕಾರಾಗೃಹ ಶಿಕ್ಷೆ ಇರುತ್ತದೆ ಎಂದರು. ಉನ್ನತ ಶಿಕ್ಷಣ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ ಸುಧಾಕರ್, ಶಾಸಕರಾದ ಪ್ರದೀಪ್ ಈಶ್ವರ್, ಗೌರಿಬಿದನೂರು ಶಾಸಕರಾದ ಕೆ.ಹೆಚ್. ಪುಟ್ಟಸ್ವಾಮಿಗೌಡ, ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್.ಕೇಶವರೆಡ್ಡಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಸ್ ಮಹೇಶ್ ಕುಮಾರ್, ಜಿಲ್ಲಾ ಶಸ್ತ್ರ ಚಿಕಿತ್ಸಕಿ ಮಂಜುಳಾದೇವಿ, ತಹಶೀಲ್ದಾರ್ ಅನಿಲ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಮಂಜುಳ ಉಪಸ್ಥಿತರಿದ್ದರು.

## ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಂತಾಮಣಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆಯರು-11, ಮಿನಿ ಅಂಗನವಾಡಿ ಕಾರ್ಯಕರ್ತೆಯರು-8 ಮತ್ತು ಸಹಾಯಕಿಯರ-47 ಹುದ್ದೆಗಳನ್ನು ಗೌರವ ಸೇವೆಯ ಆಧಾರದ ಮೇಲೆ ಭರ್ತಿ ಮಾಡಲು ಸ್ಥಳೀಯ ಅರ್ಹ ಮಹಿಳಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಸ್ಥಳೀಯರು ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಎರಡನೇ ಮಹಡಿ, ತಾಲ್ಲೂಕು ಪಂಚಾಯತ್ ಕಾರ್ಯಾಲಯ, ಚಿಂತಾಮಣಿ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಚೇರಿ ದೂರವಾಣಿ ಸಂಖ್ಯೆ 08154-255589 ಗೆ ಸಂಪರ್ಕಿಸಬಹುದು ಎಂದು ಚಿಂತಾಮಣಿ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರಿಗಾರರ ಗುರುತಿನ ಚೀಟಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಚಿಕ್ಕಬಳ್ಳಾಪುರ ಜಿಲ್ಲೆ ವತಿಯಿಂದ 2024-25 ನೇ ಸಾಲಿನಲ್ಲಿ ಸಂಚಾರಿ ಕುರಿಗಾಹಿಗಳಿಗೆ,ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಿಸುವ ಯೋಜನೆ ಅನುಷ್ಠಾನಗೊಳಿಸಲು ಕನಿಷ್ಟ 20 ಕುರಿ,ಮೇಕೆಗಳನ್ನು ಹೊಂದಿರುವ ಅರ್ಹ ಸಂಚಾರಿ ಕುರಿಗಾರರು,ವಲಸೆ ಕುರಿಗಾರರು ಈ ಸೌಲಭ್ಯ ಪಡೆಯಲು ತಮ್ಮ ವ್ಯಾಪ್ತಿಯ ಪಶು ಚಿಕಿತ್ಸಾಲಯ, ಪಶು ಆಸ್ಪತ್ರೆಯ ಪಶು ವೈದ್ಯಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು ವಲಸೆ ಹೋಗುವುದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಮಹಜರ್ ಪ್ರಮಾಣ ಪತ್ರ ಪಡೆದು ಸೂಕ್ತ ದಾಖಲಾತಿಗಳೊಂದಿಗೆ ಅಕ್ಟೋಬರ್ 21 ರೊಳಗೆ ಅರ್ಜಿ ಪಡೆದ ಕಚೇರಿಯಲ್ಲೆ ಸಲ್ಲಿಸಬೇಕೆಂದು ಕೋರಿದೆ.

ಹೆಚ್ಚಿನ ವಿವರಗಳಿಗಾಗಿ ಸ್ಥಳೀಯ ಪಶು ಚಿಕಿತ್ಸಾಲಯ, ಪಶು ಆಸ್ಪತ್ರೆಯ ಪಶು ವೈದ್ಯಾಧಿಕಾರಿ ರವರನ್ನು, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳನ್ನು ಸಂಪರ್ಕಿಸಬಹುದೆಂದು ನಿಗಮದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ನಾತಕ/ಸ್ನಾತಕೋತ್ತರ ಪ್ರವೇಶಾತಿಗೆಅರ್ಜಿಆಹ್ವಾನ

**ಮಂಡ್ಯ:** ಕರ್ನಾಟಕರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2024-2025ನೇ ಶೈಕ್ಷಣಿಕ ಸಾಲಿನ ಜುಲೈಆವೃತ್ತಿಯಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ/ಬಿಕಾಂ, ಬಿಸಿಎ/ಬಿಬಿಎ, ಬಿಎಸ್ಸಿ, ಬಿಎಸ್‌ಡಬ್ಲ್ಯೂ, ಎಂಎ/ಎಂಕಾಂ, ಎಂಬಿಎ, ಎಂಎಸ್ಸಿ, ಎಂಎಸ್‌ಡಬ್ಲ್ಯೂ, ಎಂಸಿಎ ಪ್ರಥಮ ವರ್ಷದಪ್ರವೇಶಾತಿಗೆಅರ್ಜಿಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲುನವೆಂಬರ್15 ಕೊನೆಯ ದಿನವಾಗಿದ್ದು, ಕರ್ನಾಟಕರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದಅಧಿಕೃತ ವೆಬ್ ಸೈಟ್‌ತಿತಿತಿ.ಞಠಣಟಥಿಂಡಿಜ.ಚಿಛಿ.ಟಿನಲ್ಲಿ ಪ್ರವೇಶಾತಿ ಶುಲ್ಕ, ವಿದ್ಯಾರ್ಹತೆ ಹಾಗೂ ವಿವರಣಾ ಪುಸ್ತಕ ಮತ್ತುಆನ್ ಲೈನ್‌ನಲ್ಲಿ ಪ್ರವೇಶಾತಿಅರ್ಜಿತುಂಬಿದ ನಂತರಅರ್ಜಿಯನ್ನುಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿದೂ. ಸಂ: 9741990284, 9916894579, 9902958732 ನ್ನು ಸಂಪರ್ಕಿಸಬಹುದುಎಂದುಮಂಡ್ಯಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಪ್ರಾದೇಶಿಕ ನಿರ್ದೇಶಕಿ ತಿಳಿಸಿದ್ದಾರೆ.

### ಐರಾವತ ಕ್ಲಬ್‌ಕ್ಲಾಸ್ ಹಾಗೂ ಅಂಬಾರಿ ಕ್ಲಬ್‌ಕ್ಲಾಸ್, ಪಲ್ಲಕ್ಕಿ ಸ್ಲೀಪರ್, ಅಶ್ವಮೇಧ

# ಮೈಸೂರು ದಸರಾಗೆ ವಿಶೇಷ ಸಾರಿಗೆ

**ಬೆಂಗಳೂರು:** ಮೈಸೂರು ದಸರಾ-2024ನೇ ಸಾಲಿನ ದಸರಾ ಮಹೋತ್ಸವದ ಅಂಗವಾಗಿ ರಾಜ್ಯದ ಹಾಗೂ ದೇಶದ ವಿವಿಧ ಕಡೆಗಳಿಂದ ದಸರಾ ವೀಕ್ಷಣೆಗೆ ಮೈಸೂರು ನಗರಕ್ಕೆ ಬರುವ ಪ್ರವಾಸಿಗರ ಹಾಗೂ ರಜೆಗಳ ಪ್ರಯುಕ್ತ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು, ಪ್ರಸ್ತುತ ಕಾರ್ಯಾಚರಣೆ ಮಾಡಲಾಗುತ್ತಿರುವ ಕರ್ನಾಟಕ ಸಾರಿಗೆ ವೇಗದೂತ ರಾಜಹಂಸ, ಸ್ಲೀಪರ್, ಐರಾವತ, ಮಲ್ಟಿ ಆಕ್ಸಲ್ ಐರಾವತ ಕ್ಲಬ್‌ಕ್ಲಾಸ್ ಹಾಗೂ ಅಂಬಾರಿ ಕ್ಲಬ್‌ಕ್ಲಾಸ್, ಪಲ್ಲಕ್ಕಿ ಸ್ಲೀಪರ್, ಅಶ್ವಮೇಧ ಸಾರಿಗೆ ಸೇವೆಗಳ ಜೊತೆಗೆ ವಿವಿಧ ಹೆಚ್ಚುವರಿ ಬಸ್‌ಗಳ ವಿಶೇಷ ಸಾರಿಗೆ ಸೇವೆಗಳ ವ್ಯವಸ್ಥೆಯನ್ನು ಕಲ್ಪಿಸುತ್ತಿದೆ.

ನಿಗಮದಿಂದ 2000ಕ್ಕೂ ಹೆಚ್ಚು ವಿಶೇಷ ಸಾರಿಗೆ ವ್ಯವಸ್ಥೆ: ದಸರಾ ಹಬ್ಬದ ರಜೆಗಳ ಪ್ರಯುಕ್ತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಅಕ್ಟೋಬರ್ 9 ರಿಂದ ರವರೆಗೆ ಬೆಂಗಳೂರಿನಿಂದ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಗೆ 2000ಕ್ಕೂ ಹೆಚ್ಚು ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಈ ವಾಹನಗಳನ್ನು ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುತ್ತಿದೆ. ನಂತರ ರಾಜ್ಯದ ಮತ್ತು ಅಂತರ ರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಅಕ್ಟೋಬರ್ 13 ರಿಂದ 14 ರವರೆಗೆ ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ರಾಜ್ಯದ ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ಮಡಿಕೇರಿ, ಮಂಗಳೂರು, ದಾವಣಗೆರೆ, ಗೋಕರ್ಣ, ಕೊಲ್ಲೂರು, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಕಾರವಾರ, ಬಳ್ಳಾರಿ, ಹೊಸಪೇಟೆ, ಕಲಬುರಗಿ, ರಾಯಚೂರು ಮುಂತಾದ ಸ್ಥಳಗಳಿಗೆ ಹಾಗೂ ನೆರೆರಾಜ್ಯಗಳಲ್ಲಿನ ಹೈದರಾಬಾದ್, ಚೆನ್ನೈ, ಊಟಿ, ಕೊಡೈಕೆನಾಲ್, ಸೇಲಂ, ತಿರುಚಿನಾಪಳ್ಳಿ, ಪುದುಕೋಟೆ, ಮಧುರೈ, ಪಣಜಿ, ಶಿರಡಿ, ಪೂನಾ, ಎರ್ನಾಕುಲಂ, ಪಾಲ್ಘಾಟ್ ಹಾಗೂ ಇತರೆ ಸ್ಥಳಗಳಿಗೆ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುತ್ತಿದೆ.

ಮೈಸೂರು ದಸರಾ-2024 ಪ್ರಯುಕ್ತಕರಾರಸಾ ನಿಗಮದಿಂದ660 ವಿಶೇಷ ಸಾರಿಗೆ ವ್ಯವಸ್ಥೆ / ವಿಶೇಷ ಪ್ಯಾಕೇಜ್ ಸಾರಿಗೆ ವ್ಯವಸ್ಥೆ: ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರಿಗೆ ಪ್ರತ್ಯೇಕವಾಗಿ



260 ಹೆಚ್ಚುವರಿ ವಾಹನಗಳ ಕಾರ್ಯಾಚರಣೆ ಹಾಗೂ ಮೈಸೂರಿನ ಸುತ್ತಮುತ್ತಲಿನ ಪ್ರೇಕ್ಷಣೀಯ, ಧಾರ್ಮಿಕ ಹಾಗೂ ಪ್ರವಾಸಿ ತಾಣಗಳಾದ ಚಾಮುಂಡಿ ಬೆಟ್ಟ, ಕೆ.ಆರ್.ಎಸ್.ಅಣೆಕಟ್ಟು/ಬೃಂದಾವನ, ಶ್ರೀರಂಗಪಟ್ಟಣ, ನಂಜನಗೂಡು ಸೇರಿದಂತೆ ಮಡಿಕೇರಿ, ಮಂಡ್ಯ, ಮಳವಳ್ಳಿ, ಹೆಚ್.ಡಿ.ಕೋಟೆ, ಚಾಮರಾಜನಗರ, ಹುಣಸೂರು, ಕೆ.ಆರ್.ನಗರ, ಗುಂಡ್ಲುಪೇಟೆಇತ್ಯಾದಿ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲು 400 ಹೆಚ್ಚುವರಿ ವಾಹನಗಳು ಸೇರಿ ಒಟ್ಟಾರೆ 660 ದಸರಾ ವಿಶೇಷ ವಾಹನಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದೆ.

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮೈಸೂರಿಗೆ ''ಫ್ಲೈ ಬಸ್'' ಮೂಲಕ ನೇರ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.

ಮೈಸೂರಿಗೆ ಬರುವ ಪ್ರವಾಸಿಗರ ಅನುಕೂಲಕ್ಕಾಗಿ ಕರ್ನಾಟಕ ಸಾರಿಗೆ ವಾಹನಗಳಿಂದ ಒಂದು ದಿನದ ವಿಶೇಷ ಪ್ರವಾಸ ಸಾರಿಗೆಗಳ ಕಾರ್ಯಾಚರಣೆ:

ಗಿರಿದರ್ಶಿನಿ : ಬಂಡೀಪುರ, ಗೋಪಾಲಸ್ವಾಮಿ ಬೆಟ್ಟ, ಬಿಳಿಗಿರಿರಂಗನ ಬೆಟ್ಟ, ನಂಜನಗೂಡು ಮತ್ತು ಚಾಮುಂಡಿ ಬೆಟ್ಟಕ್ಕೆ ಪ್ರಯಾಣ ದರ ವಯಸ್ಕರಿಗೆ: ರೂ.400/- ಮತ್ತು ಮಕ್ಕಳಿಗೆ: ರೂ.250/- ನಿಗಧಿಪಡಿಸಲಾಗಿದೆ.

ಜಲದರ್ಶಿನಿ : ಗೋಲ್ಡನ್ ಟೆಂಪಲ್ (ಬೈಲಕುಪ್ಪೆ), ದುಬಾರೆ ಅರಣ್ಯ ನಿಸರ್ಗಧಾಮ, ರಾಜಾಸೀಟ್, ಹಾರಂಗಿ ಜಲಾಶಯ ಮತ್ತು ಕೆ.ಆರ್.ಎಸ್. ಗೆ ಪ್ರಯಾಣದರ ವಯಸ್ಕರಿಗೆ: ರೂ.450/- ಮತ್ತು ಮಕ್ಕಳಿಗೆ: ರೂ.300/- ನಿಗಧಿಪಡಿಸಲಾಗಿದೆ.

ದೇವದರ್ಶಿನಿ : ನಂಜನಗೂಡು, ಬ್ಲಫ್, ಮುಡುಕುತೊರೆ, ತಲಕಾಡು, ಸೋಮನಾಥಪುರ, ಶ್ರೀರಂಗಪಟ್ಟಣಕ್ಕೆ ಪ್ರಯಾಣದರ ವಯಸ್ಕರಿಗೆ: ರೂ.300/-ಮತ್ತು ಮಕ್ಕಳಿಗೆ: ರೂ.200/- ನಿಗಧಿಪಡಿಸಲಾಗಿದೆ.

ಈ ಪ್ಯಾಕೇಜ್ ಸಾರಿಗೆಗಳು ಅಕ್ಟೋಬರ್ 3 ರಿಂದ 15 ರ ಅವಧಿಯಲ್ಲಿ ಕಾರ್ಯಾಚರಿಸಲಿದ್ದು, ಬೆಳಿಗ್ಗೆ ಮೈಸೂರಿನಿಂದ ಹೊರಟು ನಿಗಧಿಪಡಿಸಿದ ವಿವಿಧ ಸ್ಥಳಗಳನ್ನು ಸಂದರ್ಶಿಸಿದ ನಂತರ ಸಾಯಂಕಾಲ ಮೈಸೂರಿಗೆ ವಾಪಸ್ಸಾಗುತ್ತವೆ.

ಇ-ಟಿಕೇಟ್ ಬುಕಿಂಗ್‌ನ್ನು ತಿತಿತಿ.ಇಡಿಣಛಿ. www.ksrtc.karnataka.gov.in ವೆಬ್‌ಸೈಟ್ ಅಥವಾ ಮೊಬೈಲ್ ಮುಖಾಂತರ ಮಾಡಬಹುದಾಗಿದೆ. ಮೈಸೂರು ಗ್ರಾಮಾಂತರ ಹಾಗೂ ನಗರ ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ಹಾಗೂ ಪ್ರವಾಸಿಗರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಾರಿಗೆ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲು ''ಮಾಹಿತಿ ಕೇಂದ್ರ'' ವನ್ನು ಪ್ರತ್ಯೇಕವಾಗಿ ತೆರೆಯಲಾಗುವುದು.

ಸಾರ್ವಜನಿಕ ಪ್ರಯಾಣಿಕರು ಕರ್ನಾಟಕ ಹಾಗೂ ನೆರೆರಾಜ್ಯಗಳಾದ ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ತಮಿಳುನಾಡು, ಮಹಾರಾಷ್ಟ್ರ ಹಾಗೂ ಪುದುಚೇರಿ ರಾಜ್ಯಗಳಲ್ಲಿರುವ ಒಟ್ಟು 694 ಗಣಕೀಕೃತ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್ ಗಳ ಮೂಲಕ ನಿಗಮದ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.

ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟ್ ಕಾಯ್ದಿರಿಸಿದಲ್ಲಿ ಶೇಕಡ 5 ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡುತ್ತಿದೆ.

ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡವಾಗಿ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆಕೋರಲಾಗಿದೆ. ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು / ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುತ್ತದೆ ಎಂದು ಮುಖ್ಯ ಸಂಚಾರ ವ್ಯವಸ್ಥಾಪಕರು(ಕಾ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್ಚುವರಿ ಸಾರಿಗೆ ವ್ಯವಸ್ಥೆ

**ಬೆಂಗಳೂರು:** ಅಕ್ಟೋಬರ್ 11 ರ ಮಹಾನವಮಿ (ಆಯುಧಪೂಜೆ), ಅಕ್ಟೋಬರ್ 12 ರ ವಿಜಯದಶಮಿ, ಮತ್ತು ಅಕ್ಟೋಬರ್ 13ರ ರಂದು ಭಾನುವಾರ ಹೀಗೆ ಸಾಲು ಸಾಲು ಸರ್ಕಾರಿ ರಜೆಗಳು ಬಂದಿರುತ್ತವೆ. ಇದರ ಪ್ರಯುಕ್ತ ಬೆಂಗಳೂರುನಿಂದ ಬೆಳಗಾವಿ ವಿಭಾಗದ ವ್ಯಾಪ್ತಿಯ ಸ್ಥಳಗಳಿಗೆ ಬರುವ ಪ್ರಯಾಣಿಕರ ಜನ ದಟ್ಟಣೆಯನ್ನು ಅವಲೋಕಿಸಿ ಅಕ್ಟೋಬರ್ 10 ರಿಂದ 12 ರ ವರೆಗೆ ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣದಿಂದ ಬೆಳಗಾವಿ ಕಡೆಗೆ ವಿವಿಧ ಮಾದರಿಯ ಎ.ಸಿ ಸ್ಲೀಪರ್, ನಾನ್ ಎಸಿ ಸ್ಲೀಪರ್ ಹಾಗೂ ವೇಗದೂತ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲು ಮತ್ತು ಅದರಂತೆ ಹಬ್ಬದ ನಂತರ ಅಕ್ಟೋಬರ್ 13 ರಂದು ಮರಳಿ ಬೆಂಗಳೂರಿಗೆ ಪ್ರಯಾಣಿಸಲು ಬೆಳಗಾವಿ ಹಾಗೂ ವಿಭಾಗದ ತಾಲೂಕು ಪ್ರದೇಶಗಳಾದ ಬೈಲಹೊಂಗಲ, ಮತ್ತು ಖಾನಾಪೂರಗಳಿಂದ ಹೆಚ್ಚುವರಿ ಸಾರಿಗೆ ಕಾರ್ಯಾಚರಣೆಗೆ ವ್ಯವಸ್ಥೆ ಮಾಡಲಾಗಿದೆ. ಪ್ರಯಾಣಿಕರು ಇ-ಟಿಕೇಟನ್ನು ಆನ್‌ಲೈನ್, www.ksrtc.in, www.nwkrtc.in ಹಾಗೂ ಮೊಬೈಲ್ ಮುಖಾಂತರ ಪಡೆಯಬಹುದಾಗಿದೆ. ಅಲ್ಲದೆ ಸಂಸ್ಥೆಯಿಂದ ನಿಗದಿಪಡಿಸಿರುವ ಬೆಳಗಾವಿ ವಿವಿಧ ಸ್ಥಳದಲ್ಲಿರುವ ಸಂಸ್ಥೆಯ ಅವತಾರ ಟಿಕೇಟ್ ಬುಕ್ಕಿಂಗ್ ಏಜಂಟರಲ್ಲಿಯೂ ಮುಂಗಡ ಕಾಯ್ದಿರಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ಈ ವಿಶೇಷ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಷಲ್ ಬ್ಲೋವೆರ್ ಪಾಲಿಸಿಯ ಮಾರ್ಗಸೂಚಿಗಳು ವೆಬ್‌ಸೈಟ್‌ನಲ್ಲಿ ಲಭ್ಯ

**ಬೆಂಗಳೂರು:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಂಗಸಂಸ್ಥೆಯಾಗಿರುವ 'ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್' ಅಡಿಯಲ್ಲಿ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ-ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯ ಅನುಷ್ಠಾನದಲ್ಲಿ ಭಾಗಿಯಾಗುವ ಪಾಲುದಾರರ ವಿರುದ್ಧ ಭ್ರಷ್ಟಾಚಾರ, ಅಧಿಕಾರ ದುರುಪಯೋಗದಂತಹ ಯಾವುದೇ ಆರೋಪಗಳು ಕಂಡುಬಂದಲ್ಲಿ ಆರೋಪಿತರ ವಿರುದ್ಧ ದೂರು/ಮಾಹಿತಿ ನೀಡುವ ಯಾವುದೇ ವ್ಯಕ್ತಿಯ ಗುರುತನ್ನು ಗೌಪ್ಯವಾಗಿಟ್ಟು ಸದರಿ ಪ್ರಕರಣಗಳ ವಿಚಾರಣೆ ನಡೆಸಲು ವಿಷಲ್ ಬ್ಲೋವೆರ್ ಪಾಲಿಸಿಯ ಅನುಷ್ಠಾನ ಕುರಿತು ಸರ್ಕಾರದ ಆದೇಶವಾಗಿದೆ. ಈ ನಿಯಮದ ಮಾರ್ಗಸೂಚಿಗಳನ್ನು ವೆಬ್‌ಸೈಟ್ http://arogya.karnataka.gov.inನಲ್ಲಿ ಪಡೆಯಬಹುದಾಗಿದ್ದು, ಈ ಸಂಬಂಧ ಯಾವುದೇ ದೂರುಗಳಿದ್ದರೂ ಮೊಬೈಲ್ ಸಂಖ್ಯೆ 9480819728 ಗೆ ಕರೆಮಾಡಬಹುದು ಎಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಾರ್ಯಕಾರಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಶಂಸಾ ಪತ್ರ ವಿತರಣೆ

**ಬೆಂಗಳೂರು:** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸೆಪ್ಟೆಂಬರ್ 2024 ರ ಮಾಹೆಯಲ್ಲಿ 09 ವಿಭಾಗಗಳಲ್ಲಿ ಹುಬ್ಬಳ್ಳಿ-ಧಾರವಾಡ ನಗರ ಸಾರಿಗೆ ವಿಭಾಗವು ಉಳಿದ ವಿಭಾಗಗಳಿಗಿಂತ ನಿಗದಿಪಡಿಸಿದ ಗುರಿ ಸಾಧನೆ ಮಾಡಿರುವುದರಿಂದ ಇಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗ. ಎಂ, ಅವರು ಹುಬ್ಬಳ್ಳಿ-ಧಾರವಾಡ ನಗರ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಎಮ್ ಸಿದ್ದಲಿಂಗೇಶ, ವಿಭಾಗೀಯ ಸಂಚಾರ ಅಧಿಕಾರಿಗಳಾದ ಕೆ.ಎಲ್. ಗುಡೆಣ್ಣವರ, ವಿಭಾಗೀಯ ಯಾಂತ್ರಿಕ ಅಭಿಯಂತರರಾದ ಪ್ರವೀಣ ಈಡೂರ ರವರು ಹಾಗೂ ವಿಭಾಗದ ವ್ಯಾಪ್ತಿಯ ನಾಲ್ಕು ಘಟಕಗಳ ಘಟಕ ವ್ಯವಸ್ಥಾಪಕರರುಗಳಿಗೆ ಪ್ರಶಂಸನಾ ಪತ್ರ ವಿತರಿಸಿ ಅಭಿನಂದಿಸಿದರು. ನಂತರ ವ್ಯವಸ್ಥಾಪಕ ನಿರ್ದೇಶಕರು ಶ್ರೀಮತಿ ಪ್ರಿಯಾಂಗ. ಎಂ, ಅವರು ಮಾತನಾಡಿ, ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳಿಗೆ ಅನಾನುಕೂಲವಾಗದಂತೆ ಸಮಯಕ್ಕೆ ಸರಿಯಾಗಿ ವಾಹನಗಳ ಕಾರ್ಯಾಚರಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಈ ದಿನಗಳಲ್ಲಿ ದಸರಾ, ದೀಪಾವಳಿ ಹಾಗೂ ವಿಶೇಷ ಕಾರ್ಯಕ್ರಮಗಳ ನಿಮಿತ್ಯ ಜನ ಸಂಚಾರ ಹೆಚ್ಚಾಗಿ ಇರುವದರಿಂದ ಹಾಲಿ ಆಚರಣೆಯಲ್ಲಿರುವ ಎಲ್ಲಾ ಅನುಸೂಚಿಗಳನ್ನು ರದ್ದುಗೊಳಿಸದೇ ನಿಗದಿತ ವೇಳೆಗೆ ಆಚರಣೆ ಮಾಡುವುದು. ವಾರಾಂತ್ಯ / ವಿಶೇಷ ದಿನಗಳಲ್ಲಿ ಅವಶ್ಯಕತೆ ಹಾಗೂ ಪ್ರಯಾಣಿಕರ ಬೇಡಿಕೆಗನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಿಸುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಮುಖ್ಯ ಸಂಚಾರ ವ್ಯವಸ್ಥಾಪಕರಾದ ವಿವೇಕಾನಂದ ವಿಶ್ವಜ್ಞ, ಉಪ ಮುಖ್ಯ ಸಂಚಾರ ವ್ಯವಸ್ಥಾಪಕರಾದ, ಜಿ ವಿಜಯಕುಮಾರ ಹಾಗೂ ಅಧಿಕಾರಿಗಳಾದ ರವಿ ಅಂಚಗಾವಿ, ಎಸ್ ಎಲ್ ನಾಗಾವಿ ಉಪಸ್ಥಿತರಿದ್ದರು.

## ವ್ಯಾಪಾರಿಗಳ ನೋಂದಣಿ ಕಡ್ಡಾಯ

**ಬೆಂಗಳೂರು:** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯನ್ವಯ ತಳ್ಳುಗಾಡಿಗಳಲ್ಲಿ ಪ್ಯಾಕ್ ಮಾಡಿದ ಅಥವಾ ಸಿದ್ಧಪಡಿಸಿದ ಆಹಾರ ಪದಾರ್ಥಗಳನ್ನು ಮಾರಾಟ ಮಾಡುವ ವ್ಯಾಪಾರಿಗಳೂ ಸಹ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ನೊಂದಣಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ. ಹಾಲಿ ವರ್ಷಕ್ಕೆ ರೂ.100/-ಗಳ ಶುಲ್ಕದಂತೆ ಆಹಾರ ಉದ್ದಿಮೆದಾರರ ನೊಂದಣಿಯನ್ನು 1 ರಿಂದ 5 ವರ್ಷಗಳ ಅವಧಿಗೆ ನೊಂದಣಿ ಮಾಡಲಾಗುತ್ತಿತ್ತು. ಸಂಬಂಧಿಸಿದಂತೆ ಕೇಂದ್ರ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ನಿರ್ದೇಶಕರು ರವರು ಹೊರಡಿಸಿರುವ ಆದೇಶದಂತೆ ಸೆಪ್ಟೆಂಬರ್ 28ರಿಂದ ತಳ್ಳುಗಾಡಿಗಳಲ್ಲಿ ಪ್ಯಾಕ್ ಮಾಡಿದ ಅಥವಾ ಸಿದ್ಧಪಡಿಸಿದ ಆಹಾರ ಪದಾರ್ಥಗಳನ್ನು ಮಾರಾಟ ಮಾಡುವ ವ್ಯಾಪಾರಿಗಳಿಗೆ ನೊಂದಣಿಗಾಗಿ ವಿಧಿಸಲಾಗುತ್ತಿದ್ದ ವರ್ಷಕ್ಕೆ ರೂ.100/-ಗಳ ಶುಲ್ಕವನ್ನು ಸಂಪೂರ್ಣವಾಗಿ ಮನ್ನಾ ಮಾಡಲಾಗಿದ್ದು, ವ್ಯಾಪಾರಿಗಳು ಒಮ್ಮೆಗೆ 5 ವರ್ಷಗಳ ಅವಧಿಗೆ ನೊಂದಣಿಯನ್ನು ಪಡೆಯಲು ಅವಕಾಶವನ್ನು ಮಾಡಿಕೊಡಲಾಗಿರುತ್ತದೆ. ತಳ್ಳುಗಾಡಿಗಳಲ್ಲಿ ಪ್ಯಾಕ್ ಮಾಡಿದ ಅಥವಾ ಸಿದ್ಧಪಡಿಸಿದ ಆಹಾರ ಪದಾರ್ಥಗಳನ್ನು ಮಾರಾಟ ಮಾಡುವ ವ್ಯಾಪಾರಿಗಳು ಹಾಗೂ ಸಂಬಂಧಪಟ್ಟ ವರ್ಗದ ಎಲ್ಲಾ ವ್ಯಾಪಾರಿಗಳು ಯಾವುದೇ ಶುಲ್ಕವಿಲ್ಲದೇ ನೊಂದಣಿಯನ್ನು ಮಾಡಿಸಿಕೊಳ್ಳಲು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ''ವಡ್ಡರ್ಸೆ ರಘುರಾಮ ಶೆಟ್ಟಿ'' ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಗೆ ನಾಮನಿರ್ದೇಶನಗಳ ಅಹ್ವಾನ

**ಬೆಂಗಳೂರು:** ಹಿರಿಯ ಪತ್ರಕರ್ತ ದಿ.ವಡ್ಡರ್ಸೆ ರಘುರಾಮ ಶೆಟ್ಟಿ ಅವರ ನೆನಪಿನಾರ್ಥ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದಾರೆ. ಪ್ರಶಸ್ತಿಯು 2 ಲಕ್ಷ ರೂಪಾಯಿ ನಗದು, ಸ್ಮರಣಿಕೆ ಒಳಗೊಂಡಿದೆ. ''ವಡ್ಡರ್ಸೆ ರಘುರಾಮ ಶೆಟ್ಟಿ'' ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲು ಪತ್ರಕರ್ತರಿಂದ ಅರ್ಜಿ ಆಹ್ವಾನಿಸಲಾಗಿದೆ ಹಾಗೂ ಸಾರ್ವಜನಿಕರು, ಸಂಘ - ಸಂಸ್ಥೆಗಳು ಅರ್ಹ ಪತ್ರಕರ್ತರನ್ನು ಪ್ರಶಸ್ತಿಗೆ ನಾಮನಿರ್ದೇಶನ ಮಾಡಬಹುದಾಗಿದೆ. ವಡ್ಡರ್ಸೆ ರಘುರಾಮಶೆಟ್ಟಿ ಅವರ ಪರಿಚಯ:ಓದುಗರ ಸಂಪಾದಕ ಎಂದೇ ಹೆಸರಾಗಿದ್ದ ದಿ.ವಡ್ಡರ್ಸೆ ರಘುರಾಮ ಶೆಟ್ಟಿಯವರು. 1960ರ ದಶಕದಿಂದ ಸುಮಾರು ನಾಲ್ಕು ದಶಕಗಳ ಕಾಲ ಕನ್ನಡ ಪತ್ರಿಕೋದ್ಯಮದಲ್ಲಿ ಮಹತ್ವದ ಸೇವೆಗೈದಿದ್ದಾರೆ. ಮಾಧ್ಯಮವು ವಾಣಿಜ್ಯೋದ್ಯಮಿಗಳ ಹಾಗೂ ಈ ರಂಗದ ಪರಿಚಯವಿಲ್ಲದವರ ಆಡುಂಬೊಲವಾಗಬಾರದು ಎಂಬ ಮಹತ್ವಾಕಾಂಕ್ಷೆ ಹೊಂದಿದ್ದರು. ಸಮಾಜದ ವಂಚನೆಯ ಜಾಲಗಳನ್ನು ಬಯಲಿಗೆಳೆಯುವ ಉದ್ದೇಶದಿಂದ 1984 ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಿಂದ ''ಮುಂಗಾರು'' ದಿನಪತ್ರಿಕೆಯನ್ನು ಪ್ರಾರಂಭಿಸಿ, ನಿರ್ಭೀತ ಬರಹಗಳ ಮೂಲಕ ಪತ್ರಿಕಾ ವೃತ್ತಿಯಲ್ಲಿ ಬದಲಾವಣೆಯನ್ನು ತಂದವರು. ಕನ್ನಡ ಪತ್ರಿಕೋದ್ಯಮದಲ್ಲಿ ದೀನದಲಿತರ ಹಾಗೂ ದುರ್ಬಲ ವರ್ಗದವರ ಪರವಾಗಿ ಧ್ವನಿಯೆತ್ತುವ, ದನಿಯಿಲ್ಲದವರ ದನಿಯಾಗಿದ್ದರು. ಪಾರದರ್ಶಕ ಮತ್ತು ಜವಾಬ್ದಾರಿಯುತ ಆಡಳಿತವನ್ನು ಉತ್ತೇಜಿಸಲು ಮತ್ತು ಸಾಮಾಜಿಕ ಬದಲಾವಣೆಯನ್ನು ತರಲು ಶ್ರಮಿಸಿದರು.

### ಪ್ರಶಸ್ತಿಗೆ ಅರ್ಹತೆಗಳು

**ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮ ಕ್ಷೇತ್ರದಲ್ಲಿ ಕನಿಷ್ಠ 15 ವರ್ಷ ಸೇವಾನುಭವ ಹೊಂದಿರಬೇಕು. ಹಿರಿಯರಿಗೆ ಆದ್ಯತೆ ನೀಡಲಾಗುವುದು. ಸಾಮಾಜಿಕ ನ್ಯಾಯದ ಕಾಳಜಿ ಹೊಂದಿರುವ 10 ರಿಂದ 15 ಲೇಖನಗಳು ಪ್ರಕಟವಾಗಿರಬೇಕು ಅಥವಾ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಈ ಕುರಿತು ವಿಶೇಷ ವರದಿ, ಚರ್ಚೆ, ಸಂವಾದ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ನಿರ್ಮಿಸಿರಬೇಕು. ನಾಮನಿರ್ದೇಶನಗಳನ್ನು ಸಲ್ಲಿಸಲು 2024ನೇ ಅಕ್ಟೋಬರ್ 21 ಕೊನೆಯ ದಿನಾಂಕವಾಗಿರುತ್ತದೆ. ನಾಮನಿರ್ದೇಶನಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾಸೌಧ, ಭಗವಾನ್ ಮಹಾವೀರ ರಸ್ತೆ, (ಇನ್ ಫೆಂಟ್ರಿ ರಸ್ತೆ), ಬೆಂಗಳೂರು 560 001 ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಅಥವಾ** tsraward@gmail.com **ಇ-ಮೇಲ್ ಮೂಲಕ ಸಲ್ಲಿಸಬಹುದಾಗಿದೆ. ಇತರೆ ಜಿಲ್ಲೆಗಳ ಪತ್ರಕರ್ತರು ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಗೆ ಸಲ್ಲಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ರಂಗಪಟ್ಟಣ ದಸರಾ ಮಹೋತ್ಸವ ವಿವರ

**ಮಂಡ್ಯ:** ಜಿಲ್ಲಾಡಳಿತ ಮತ್ತುಜಿಲ್ಲಾ ಪಂಚಾಯತ್ ವತಿಯಿಂದಅಕ್ಟೋಬರ್ 4 ರಿಂದ 7 ರವರೆಗೆ ಶ್ರೀರಂಗಪಟ್ಟಣ ದಸರಾ ಮಹೋತ್ಸವ ನಡೆಯಲಿದ್ದು, ಅಕ್ಟೋಬರ್ 6 ರಂದು ನಡೆಯುವಕಾರ್ಯಕ್ರಮದ ವಿವರಇಂತಿದೆ:

ಅಕ್ಟೋಬರ್ 6 ರಂದು ಬೆಳಿಗ್ಗೆ 6:00 ಗಂಟೆಗೆ ಶ್ರೀರಂಗನಾಥ ಸ್ವಾಮಿದೇವಾಲಯದಆವರಣದ ಶ್ರೀ ರಂಗವೇದಿಕೆಯಲ್ಲಿ ಸಾಮೂಹಿಕ ಸೂರ್ಯ ನಮಸ್ಕಾರ ನಡೆಯಲಿದೆ.

ಬೆಳಿಗ್ಗೆ 10 ಗಂಟೆಯಿಂದ 12:30 ರವರೆಗೆ ಮಕ್ಕಳ ಚಲನಚಿತ್ರಗಳ ಸಿನಿಮೋತ್ಸವ ನಡೆಯಲಿದೆ. ಗಂಜಾಂ ನ ಶ್ರೀದೇವಿ ಚಿತ್ರಮಂದಿರದಲ್ಲಿ 'ಅನ್ನ', ಬಾಬುರಾಯನಕೊಪ್ಪಲುನ ಭಾರತಿಚಿತ್ರಮಂದಿರದಲ್ಲಿ 'ನಾನು ಸಚಿನ್‌ತೆಂಡೂಲ್ಕರ್‌ಅಲ್ಲ' ಹಾಗೂ ಅರಕೆರೆ ಮಂಜುನಾಥ್‌ಚಿತ್ರಮಂದಿರದಲ್ಲಿ 'ಜೀರ್ಜಿಂಬೆ' ಮಕ್ಕಳ ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ.

ಮಧ್ಯಾಹ್ನ 1:00 ಗಂಟೆಯಿಂದ 2:30 ರವರೆಗೆ ಶ್ರೀರಂಗ ವೇದಿಕೆಯಲ್ಲಿಜಿಲ್ಲಾಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ವಿಚಾರಗೋಷ್ಠಿ ನಡೆಯಲಿದೆ.

ಮಧ್ಯಾಹ್ನ 3 ಗಂಟೆಯಿಂದ ಶ್ರೀರಂಗ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಮಧ್ಯಾಹ್ನ 3:00 ರಿಂದ 3:10 ವರೆಗೆ ಭರತನಾಟ್ಯ, ಮಧ್ಯಾಹ್ನ 3:15 ರಿಂದ 3:25 ರವರೆಗೆಜನಪದಗೀತೆ,



ಮಧ್ಯಾಹ್ನ 3:30 ರಿಂದ 3:40 ವರೆಗೆಕರ್ನಾಟಕ ಶಾಸ್ತ್ರೀಯ ಸಂಗೀತ, ಮಧ್ಯಾಹ್ನ 3:45 ರಿಂದ 4:55 ರವರೆಗೆ ನೃತ್ಯ ಪ್ರದರ್ಶನ, 5:00 ರಿಂದ 5:10 ವರೆಗೆ ಸಂಗೀತ, 5:15 ರಿಂದ 5:25 ರವರೆಗೆ ಪಿಯಾನೋ, 5:30 ರಿಂದ 5:40 ವರೆಗೆ ಸುಗಮಸಂಗೀತ, 5:45 ರಿಂದ 5:55 ರವರೆಗೆರಂಗಗೀತೆ, ಸಂಜೆ 6 00 ರಿಂದ 6:10 ವರೆಗೆ ಸುಗಮಸಂಗೀತ, 6:15 ರಿಂದ 6:25 ರವರೆಗೆಜನಪದಗೀತೆ, 6:30 ರಿಂದ 6:40 ವರೆಗೆ ಸುಗಮಸಂಗೀತ, 6:45 ರಿಂದ 7:00 ವರೆಗೆ ಹಿಂದೂಸ್ತಾನಿ ತಬಲಾ ವಾದನ ಕಾರ್ಯಕ್ರಮಗಳು ನಡೆಯಲಿವೆ.

ಸಂಜೆ 7 ಗಂಟೆಗೆಕಲಾವಿದರು ಹಾಗೂ ಹಿನ್ನೆಲೆಗಾಯಕರಾದಆಲ್ ಓಕೆ ಮತ್ತುತಂಡದಿಂದ ಸಂಗೀತರಸಸಂಜೆ ನಡೆಯಲಿದೆ. ರಾತ್ರಿ 9:00 ಗಂಟೆಗೆ ಹಿನ್ನೆಲೆಗಾಯಕರಾದ ಲಗೋರಿ ಮತ್ತುತಂಡದಿಂದ ಸಂಗೀತರಸಸಂಜೆಕಾರ್ಯಕ್ರಮ ನಡೆಯಲಿದೆ.

## ಮಹಿಳಾ ದಸರಾ ಬಹುಮಾನ ವಿಜೇತರು

**ಮಂಡ್ಯ:** ರಂಗನಾಥಸ್ವಾಮಿದೇವಾಲಯದ ಶ್ರೀರಂಗ ವೇದಿಕೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಹಿಳಾ ದಸರಾಕಾರ್ಯಕ್ರಮದಅಂಗವಾಗಿ ರಂಗೋಲಿ ಸ್ಪರ್ಧೆ, ಮೆಹಂದಿ ಸ್ಪರ್ಧೆ, ಬಾಲ್ಯ ವಿವಾಹ ನಿಷೇಧಕುರಿತುಗೀತೆ, ಮಕ್ಕಳ ಕಳ್ಳ ಸಾಗಾಣಿಕೆತಡೆಗಟ್ಟುವಕುರಿತು ನಾಟಕ, ಜಾನಪದ ನೃತ್ಯ ಕಾರ್ಯಕ್ರಮಗಳು ನಡೆದವು. ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ: ಪ್ರಥಮ-ಶ್ವೇತಶ್ರೀ ಎನ್.ಜಿ, ದ್ವಿತೀಯ-ಮಾನಸಎಸ್.ಪೂರ್ಣಿಮಾ, ತೃತೀಯ-ಶಾಲಿನಿ ಅವರಿಗೆ ವೇದಿಕೆಯ ಮೇಲೆ ಪ್ರಮಾಣ ಪತ್ರ ಹಾಗೂ ನೆನಪಿನ ಕಾಣಿಕೆಯನ್ನು ನೀಡಿಗೌರವಿಸಲಾಯಿತು. ಬಾಲ್ಯ ವಿವಾಹ ನಿಷೇಧಕುರಿತುಗೀತೆ, ಮಕ್ಕಳ ಕಳ್ಳ ಸಾಗಾಣಿಕೆತಡೆಗಟ್ಟುವಕುರಿತು ನಾಟಕ, ಜಾನಪದ ನೃತ್ಯಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ವೇದಿಕೆಯ ಮೇಲೆ ಪ್ರಮಾಣ ಪತ್ರ ನೀಡಲಾಯಿತು.

**ಮೆಹೆಂದಿ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ:** ಪ್ರಥಮ-ಸಮ್ರಿನ್‌ತಾಜ್, ದ್ವಿತೀಯ-ಅನುಷಎಸ್, ತೃತೀಯ-ಶಾಲಿನಿ ಪಾಲಹಳ್ಳಿ ಅವರಿಗೆ ವೇದಿಕೆಯ ಮೇಲೆ ಪ್ರಮಾಣ ಪತ್ರ ಹಾಗೂ ನೆನಪಿನ ಕಾಣಿಕೆಯನ್ನು ನೀಡಿಗೌರವಿಸಲಾಯಿತು. ಇದರಜೊತೆಗೆ ಮ್ಯೂಸಿಕಲ್ ಚೇರ್, ಗುಂಡುಎಸೆತ, ಓಟ ಸ್ಪರ್ಧೆ, ಹಗ್ಗ ಜಗಿತ, ಮಡಿಕೆ ಹೊಡೆತ ವೇಷ ಭೂಷಣ ಹೀಗೆ ಇನ್ನಿತರ ಸ್ಪರ್ಧೆಗಳನ್ನು ಆಯೋಜನೆ ಮಾಡಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಎಸ್‌ರಾಜಮೂರ್ತಿ, ಶ್ರೀರಂಗಪಟ್ಟಣ ತಾಲೂಕು ತಹಸೀಲ್ದಾರ್ ಪರುಶುರಾಮ್ ಸತ್ತಿಗೇರಿ, ತಾಲೂಕು ಪಂಚಾಯತ್‌ಕಾರ್ಯನಿರ್ವಾಹಕಅಧಿಕಾರಿ ವೇಣು, ಸಮಾಜಕಲ್ಯಾಣಇಲಾಖೆಯ ಮೇಘ, ಪಾಂಡವಪುರತಾಲೂಕಿನ ಶಿಶು ಅಭಿವೃದ್ಧಿಯೋಜನಾಧಿಕಾರಿ ಪೂರ್ಣಿಮಾ ಉಪಸ್ಥಿತರಿದ್ದರು.

### ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಪಿ.ಸಿ ಜಾಫರ್ ಮಾರ್ಗದರ್ಶನ

# ಅನುದಾನ ಬಳಕೆಯಲ್ಲಿ ಶೇ.100 ಆರ್ಥಿಕ ಭೌತಿಕ ಪ್ರಗತಿ ಸಾಧಿಸಿ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿಗೆ ಇಲಾಖೆಗಳಿಗೆ ಬಿಡುಗಡೆಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಆಯಾ ಇಲಾಖೆಗಳು ಕ್ರಿಯಾಯೋಜನೆ, ಟೆಂಡರ್ ಪ್ರಕ್ರಿಯೆ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಬಿಡುಗಡೆಯಾಗಿರುವ ಅನುದಾನವನ್ನು ಸಂಪೂರ್ಣ ಖರ್ಚು ಮಾಡುವ ಮೂಲಕ ಶೇಕಡ 100 ರಷ್ಟು ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಿ ಎಂದು ಆರ್ಥಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಪಿ.ಸಿ ಜಾಫರ್ ಅವರು ಹೇಳಿದರು.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇಲಾಖೆಗಳಿಗೆ ಬಿಡುಗಡೆಯಾದ ಹಣವನ್ನು ಸಂಪೂರ್ಣವಾಗಿ ಖರ್ಚು ಮಾಡಬೇಕು. ಮಾರ್ಚ್ ಅಂತ್ಯದವರೆಗೆ ಕಾಯದೆ ತ್ವರಿತವಾಗಿ ಎಲ್ಲಾ ಪ್ರಕ್ರಿಯೆ ಪೂರ್ಣಗೊಳಿಸಿ ಡಿಸೆಂಬರ್ ಅಂತ್ಯ ಅಥವಾ ಜನವರಿ ಮಾಹೆಯೊಳಗೆ ಶೇಕಡ 100 ರಷ್ಟು ಆರ್ಥಿಕ ಭೌತಿಕ ಪ್ರಗತಿ ಸಾಧಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನರೇಗಾ ಯೋಜನೆಯಡಿ ಹಲವು ಇಲಾಖೆಗಳಿಗೆ ಅನುದಾನ ಬಿಡುಗಡೆ ಆಗುತ್ತದೆ. ಅನುದಾನ ಸದ್ಬಳಕೆಯಾಗಬೇಕು. ಅರಣ್ಯ ಇಲಾಖೆಯಲ್ಲಿ ನರೇಗಾ ಯೋಜನೆಯಡಿ ಗಿಡ ನೆಡುವ ಅರಣ್ಯೀಕರಣ ಕಾರ್ಯಕ್ರಮ ಒಂದು ಉತ್ತಮ ಯೋಜನೆಯಾಗಿದೆ. ಸಾಮಾಜಿಕ ಮತ್ತು ಪ್ರಾದೇಶಿಕ ಅರಣ್ಯ ವಿಭಾಗವು ಹೆಚ್ಚು ಹೆಚ್ಚು ಸಸಿಗಳನ್ನು ನಾಟಿ ಮಾಡಿ ಬೇಡಿಕೆ ಅನುಗುಣವಾಗಿ ರೈತರಿಗೆ, ಸಾರ್ವಜನಿಕರಿಗೆ ಹಂಚಬೇಕು. ಹಾಗೆಯೇ ವಿವಿಧ ವನಮಹೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸರ್ಕಾರಿ ಜಾಗಗಳಲ್ಲಿ, ಬೆಟ್ಟಗುಡ್ಡಗಳಲ್ಲಿ, ಪ್ರವಾಸಿ ತಾಣಗಳಲ್ಲಿ,



ರಸ್ತೆ ಬದಿಗಳಲ್ಲಿ ಹೆಚ್ಚೆಚ್ಚು ಸಸಿಗಳನ್ನು ನೆಡಬೇಕು. ನೆಟ್ಟ ನಂತರ ಸಸಿಗಳನ್ನು ಪೋಷಿಸಿ ಬೆಳೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಪ್ರಸ್ತುತ ಈಗಿರುವ ವಾತಾವರಣ ಪರಿಸ್ಥಿತಿಯಲ್ಲಿ ಹವಾಮಾನ ವೈಪರೀತ್ಯ, ಪರಿಸರ ಸಂರಕ್ಷಣೆ, ಪ್ರಕೃತಿ ಸಮತೋಲನ ಕಾಪಾಡಲು ಗಿಡ ಮರಗಳನ್ನು ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಉಸ್ತುವಾರಿ ಕಾರ್ಯದರ್ಶಿಗಳು ಅಭಿಪ್ರಾಯ ಪಟ್ಟರು. 024ರ ನರೇಗಾ ಯೋಜನೆಯಡಿ 5720 ಸಸಿಗಳನ್ನು ನೆಟ್ಟು 26 ಕಿ.ಮೀ ರಸ್ತೆ ಬದಿ ನೆಡುತೋಪು ನಿರ್ಮಾಣ ಮಾಡಲಾಗಿದೆ. 44.16 ಹೆಕ್ಟೇರ್ ಬ್ಲಾಕ್ ಪ್ಲಾಂಟೇಶನ್ ನೆಡುತೋಪು ನಿರ್ಮಾಣ ಮಾಡಲಾಗಿದೆ. 2025ರ ವೇಳೆಗೆ 42840 ಸಸಿ ನೆಡುವುದು, ಸಾರ್ವಜನಿಕರ ವಿತರಣೆಗಾಗಿ 1,28,660 ಸಸಿಗಳನ್ನು ತಾಲ್ಲೂಕು ನರ್ಸರಿಗಳಲ್ಲಿ ಬೆಳೆಸಲಾಗುತ್ತಿದೆ ಎಂದು ಅರಣ್ಯಾಧಿಕಾರಿ ಮಾಹಿತಿ ನೀಡಿದರು.

ಜಿಲ್ಲೆಗೆ ಬೇರೆ ಪ್ರದೇಶದಿಂದ, ಬೇರೆ ರಾಜ್ಯದಿಂದ ಅಥವಾ ಬೇರೆ ರಾಷ್ಟ್ರಗಳಿಂದ ಉದ್ಯೋಗಕ್ಕೆ ಅಥವಾ ಇನ್ನಿತರ ಕಾರ್ಯ ಚಟುವಟಿಕೆಗಳಿಗೆ ಆಗಮಿಸುವ ವಲಸಿಗರ ಬಗ್ಗೆ ನಿಗಾ ವಹಿಸಿ. ಜಿಲ್ಲೆಯ ಯಾವ ಪ್ರದೇಶಗಳಲ್ಲಿ ವಲಸಿಗರು ವಾಸವಾಗಿದ್ದಾರೆ ಎಂಬ ಮಾಹಿತಿಯನ್ನು ಕಲೆ ಹಾಕಿ ಯಾವ ಉದ್ದೇಶಕ್ಕಾಗಿ ಬಂದಿದ್ದಾರೆ, ಆರ್ಥಿಕ ಸ್ಥಿತಿಗತಿ, ಆರೋಗ್ಯ, ಶಿಕ್ಷಣ ಇವುಗಳ ಬಗ್ಗೆ ಮಾಹಿತಿ ಕಲೆ ಹಾಕಲು ಆರೋಗ್ಯ, ಕಾರ್ಮಿಕ, ಪೊಲೀಸ್ ಇಲಾಖೆಗೆ ಸೂಚಿಸಿದರು.

ಸೆಪ್ಟೆಂಬರ್ ತಿಂಗಳಲ್ಲಿ ಕಡಿಮೆ ಮಳೆ: ಪ್ರಸ್ತುತ ಸಾಲಿನಲ್ಲಿ ಜನವರಿ 01 ರಿಂದ ಸೆಪ್ಟೆಂಬರ್ 25 ರ ವರೆಗೆ 557 ಮಿ.ಮೀ ವಾಡಿಕೆ ಮಳೆಗೆ 535 ಮಿ.ಮೀ ಮಳೆಯಾಗಿದೆ. ಕಳೆದ ಏಳು ದಿನಗಳಲ್ಲಿ ಅಂದರೆ ಸೆಪ್ಟೆಂಬರ್ 19 ರಿಂದ 25 ರವರೆಗೆ 47.01 ಮಿ.ಮೀ ವಾಡಿಕೆ ಮಳೆಗೆ 23.04 ಮಿ.ಮೀ ಮಳೆಯಾಗಿದೆ ಎಂದು ಕೃಷಿ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು. ಎಸ್.ಎಸ್.ಎಲ್.ಸಿ, ಪಿಯುಸಿ ಯಲ್ಲಿ ಈ ವರ್ಷ ಉತ್ತಮ ಫಲಿತಾಂಶ ಬರಲು ಯೋಜನೆ ರೂಪಿಸಿ. ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸರ್ಕಾರಿ ಶಾಲೆಗಳನ್ನು ದತ್ತು ನೀಡಿ. ಶಾಲಾ ಕಾಲೇಜು ಶಿಕ್ಷಕರಿಗೆ, ಮುಖ್ಯೋಪಾಧ್ಯಾಯರಾಗಿ, ಪ್ರಾಂಶುಪಾಲರಿಗೆ ಸೂಕ್ತ ತರಬೇತಿ, ಮಾರ್ಗಸೂಚಿಗಳನ್ನು ನೀಡಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಕೆ.ಎನ್ ಅನುರಾಧ, ಅಪರ ಪೊಲೀಸ್ ವರಿಷ್ಠಾಧಿಕಾರಿ ನಾಗರಾಜ್, ಪ್ರಾದೇಶಿಕ ಅರಣ್ಯ ವಿಭಾಗದ ಉಪವಿಭಾಗಾಧಿಕಾರಿ ಸರೀನಾ ಸಿಕ್ಕಲಿಗಾರ್, ಉಪವಿಭಾಗಾಧಿಕಾರಿ ಎನ್. ದುರ್ಗಶ್ರೀ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೆ.ರಮೇಶ್, ಜಿಲ್ಲಾ ಮಟ್ಟದ ಅಧಿಕಾರಿಗಳು, ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

## ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನಾಂಕವಾಗಿದ್ದು, ಆನ್ ಲೈನ್ ನಲ್ಲಿ https://shp.karnataka.gov.in/bcwde ಅನ್ನು ಸಂಪರ್ಕಿಸಿ ಹಾಗೂ ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ https://bcwd.karnataka.gov.in ಅನ್ನು ನೋಡಬಹುದು.ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಹಾಗೂ ಸಹಾಯವಾಣಿ ಸಂಖ್ಯೆ: 080-8050370006, ದೂ.ಸಂ: 08156-277053 ಗೆ ಸಂಪರ್ಕಿಸಬಹುದು.

## ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಅಕ್ಟೋಬರ್ 30 ರೊಳಗೆ ಸಲ್ಲಿಸಬೇಕು.ಅರ್ಜಿ ಸಲ್ಲಿಸಲು https://shp.karnataka.gov.in/bcwde ಸಂಪರ್ಕಿಸಿ ಹಾಗೂ ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಹಾಗೂ ಸಹಾಯವಾಣಿ ಸಂಖ್ಯೆ: 8050370004, 8050370005 ದೂ.ಸಂ: 08156-200160 ಗೆ ಸಂಪರ್ಕಿಸಬಹುದು.

## ಪುಸ್ತಕ ಪ್ರದರ್ಶನ: ಆಕ್ಷೇಪಣೆಗೆ ಅ.9 ರವರೆಗೆ ಅವಕಾಶ

**ಚಿಕ್ಕಬಳ್ಳಾಪುರ:** 2021ರಲ್ಲಿ ಪ್ರಥಮವಾಗಿ ಮುದ್ರಣಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಪುಸ್ತಕಗಳ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಹಾಗೂ ಆಯ್ಕೆಯಾಗದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ಹಾಗೂ ಸದರಿ ಪುಸ್ತಕಗಳ ಪ್ರದರ್ಶನವನ್ನು 2024ರ ಅಕ್ಟೋಬರ್ 4 ಮತ್ತು 5 ರಂದು ''ಗ್ರಂಥಾಂಗಣ'', ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ, ಬೆಂಗಳೂರು ಇಲ್ಲಿ ಏರ್ಪಡಿಸಲಾಗಿದ್ದು ಹಾಗೂ ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧಿಕೃತ ವೆಬ್ ಸೈಟ್ dpl.karnataka.gov.in ಪ್ರದರ್ಶಿಸಲಾಗಿರುತ್ತದೆ. ಅದರಿಂದ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು/ಲೇಖಕ ಪ್ರಕಾಶಕರು ಹಾಗೂ ಪುಸ್ತಕ ಮಾರಾಟಗಾರರು, ಆಕ್ಷೇಪಣೆಗಳಿದ್ದಲ್ಲಿ ಅಕ್ಟೋಬರ್ 9 ರ ಸಂಜೆ 5:30 ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ.ಅಂಬೇಡ್ಕರ್ ವೀದಿ, ಬೆಂಗಳೂರು-560001 ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸತಕ್ಕದ್ದು ನಂತರ ಬಂದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸುವುದಿಲ್ಲ.

## ದರಪಟ್ಟಿ ಆಹ್ವಾನ

**ಮೈಸೂರು:** ಕೇಂದ್ರ ಕಾರಾಗೃಹದ ಸಂಸ್ಥೆಯಲ್ಲಿರುವ 25 ಸಂಖ್ಯೆ ವಾಕಿಟಾಕಿ ಉಪಕರಣಗಳನ್ನು ಖರೀದಿಸಲು ಸ್ಥಳೀಯ ವರ್ತಕರಿಂದ ಜಿಎಸ್‌ಟಿ ಸಹಿತ ದರಪಟ್ಟಿ ಆಹ್ವಾನಿಸಲಾಗಿದೆ. ಇಚ್ಛೆಯುಳ್ಳ ಸಂಸ್ಥೆ ಹಾಗೂ ವರ್ತಕರು ಜಿಎಸ್‌ಟಿ ಸಹಿತ ದರ ಪಟ್ಟಿಗಳನ್ನು ಅಕ್ಟೋಬರ್ 18 ರ ಸಂಜೆ 4 ಗಂಟೆಯೊಳಗೆ ಮೈಸೂರಿನ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರ ಕಚೇರಿಗೆ ಸಲ್ಲಿಸಬೇಕು. ದರಪಟ್ಟಿಗಳನ್ನು ಅಕ್ಟೋಬರ್ 18 ರಂದು ಸಂಜೆ 5.30 ಗಂಟೆಗೆ ತೆರೆಯಲಾಗುವುದು ಎಂದು ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಥಪೂರ್ಣ ಕಳೆದುಕೊಂಡ ಶ್ರೀರಂಗಪಟ್ಟಣ ದಸರಾ

**ಮಂಡ್ಯ:** ಶ್ರೀರಂಗಪಟ್ಟಣ ಐತಿಹಾಸಿಕ ದಸರಾವನ್ನು ಅರ್ಥಪೂರ್ಣವಾಗಿ, ವ್ಯವಸ್ಥಿತವಾಗಿ ಆಚರಣೆ ಮಾಡಲು ಜಿಲ್ಲಾಡಳಿತ, ತಾಲ್ಲೂಕು ಆಡಳಿತ, ಕ್ಷೇತ್ರದ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು ವಿಫಲರಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತಸಂಘದ ಮುಖಂಡರಾದ ಕಿರಂಗೂರು ಪಾಪು ಉ. ಮೋಹನ್ಕುಮಾರ್ ಆರೋಪಿಸಿದ್ದಾರೆ.

ಸಾರ್ವಜನಿಕ ತೆರಿಗೆ ಹಣ ಶ್ರೀರಂಗಪಟ್ಟಣ ದಸರಾಗೆ 3 ಕೋಟಿಗೂ ಅಧಿಕ ಅನುದಾನ ಬಂದಿದ್ದರೂ ಸರಿಯಾದ ರೀತಿಯಲ್ಲಿ ದೀಪಲಾಂಕಾರಗಳು ಇಲ್ಲ, ಚಾಮುಂಡಿ ದೇವರನ್ನು ಹೊತ್ತ ಅಂಬಾರಿ ಮೆರವಣಿಗೆಯಲ್ಲಿ ಆಕರ್ಷಕವಾದ ಅರ್ಥಪೂರ್ಣವಾದ ಜಾನಪದ ಸ್ತಬ್ಧಚಿತ್ರಗಳು, ಕಲಾತಂಡಗಳೂ ಇಲ್ಲ...ಕೋಟೆ ಪಟ್ಟಣದಲ್ಲಿ ಕೋಟೆಗಳ ಮೇಲೆ ಗಿಡಗೆಂಟೆಗಳು ಬೆಳೆದು, ಕೋಟೆ ಕೆಳಗಡೆ ಗಬ್ಬುನಾರುತ್ತಿದ್ದರೂ ಅದನ್ನು ಸ್ವಚ್ಛ ಮಾಡಿಸದೆ ಕೋಟೆಗಳ ಗೋಡೆಯ ಮೇಲೆ ಹಳೆಯ ಬಣ್ಣಬಣ್ಣದ ಬಟ್ಟೆ ಹಾಕಿ ತೇಪೆ ಹಾಕಿರುವುದು ಅದು ನೋಡುವವರನ್ನು ಆಕರ್ಷಿಸುವುದೇ? 'ಒಳಗೆಲ್ಲಾ ಉಳುಕು ಮೇಲೆಲ್ಲಾ ಥಳಕು' ಎಂಬ ಗಾದೆಮಾತು ಇಲ್ಲಿ ಅನ್ವಯವಾಗುತ್ತದೆ ಎನ್ನಬಹುದು.

ರಂಗನಾಥ ಸ್ವಾಮಿಯ ವೇದಿಕೆಯ ಮೇಲೆ ಗುಣಮಟ್ಟದ ಅರ್ಥಪೂರ್ಣವಾದ ಕಾರ್ಯಕ್ರಮಗಳು ವ್ಯವಸ್ಥಿತವಾಗಿ ಮಾಡಲು ಕೂಡ ವಿಫಲರಾಗಿದ್ದಾರೆ. ವ್ಯವಸ್ಥಿತವಾಗಿ ದಸರಾ ಅಂಬಾರಿ ಮೆರವಣಿಗೆಗೆ ಆಗಮಿಸುವ ಸಾರ್ವಜನಿಕರಿಗೆ, ಪ್ರೇಕ್ಷಕರಿಗೆ, ಬಿಸಿಲಿನ ಬೇಗೆಯಿಂದ ನಿಂತಿರುವವರಿಗೆ ನೀರು, ಮಜ್ಜಿಗೆ, ಪಾನಕ, ಲಘು ಉಪಹಾರದಂಥ ವ್ಯವಸ್ಥೆಗಳೂ ಇಲ್ಲ. ಗ್ರಾಮೀಣ ಪ್ರದೇಶದಿಂದ ಬರುವ ರೈತರು, ಜನಸಾಮಾನ್ಯರಿಗೆ ಪ್ರಚಾರದ ಕೊರತೆಯೂ ಎದ್ದುಕಾಣುತ್ತಿತ್ತು ಹಾಗೂ ಅಲ್ಲಿ ಸಾರಿಗೆ ವ್ಯವಸ್ಥೆ ಕೂಡ ಸಮರ್ಪಕವಾಗಿ ಮಾಡಿರಲಿಲ್ಲ. ಆಕರ್ಷಕವಾದ ಗ್ರಾಮೀಣ ಕ್ರೀಡೆಗಳು, ರೈತ ದಸರಾ, ಯುವ ದಸರಾ, ಮಹಿಳಾ ದಸರಾ, ಆಟೋಪಚಾರಗಳು ಮನಸೂರೆಗೊಳ್ಳುವಂಥ ಕಾರ್ಯಕ್ರಮಗಳನ್ನು ಆಯ್ಕೆ ಮಾಡಲು ವಿಫಲರಾಗಿದ್ದಾರೆ.

ಕಿರಂಗೂರು ಬನ್ನಿಮಂಟಪಕ್ಕೆ ಯಾವುದೇ ಸೀರಿಯಲ್ ಸೆಟ್ ಹಾಗೂ ವಿದ್ಯುತ್ ಅಲಂಕಾರ ಇಲ್ಲದೆ ಬಿಕೋ ಎನ್ನುತ್ತಿತ್ತು. ಬನ್ನಿಮಂಟಪದ ಸ್ಥಳದಿಂದ ದಸರಾ ಆನೆ ಅಂಬಾರಿ ಹೊರಟ ಮೇಲೆ ಅಲ್ಲಿ ಬೆಳಕಿನ ವ್ಯವಸ್ಥೆ ಇಲ್ಲದೆ ಕತ್ತಲೆಯಲ್ಲಿ ಮುಳುಗಿತ್ತು. ಶ್ರೀರಂಗಪಟ್ಟಣ ದಸರಾ ಯಾವುದೋ ಒಂದು ಪಕ್ಷದ ಆಯೋಜನೆ ಮಾಡಿದಂತೆ ಎದ್ದುಕಾಣುತ್ತಿತ್ತು. ಪಕ್ಷಾತೀತವಾಗಿ ಸಂಘಸಂಸ್ಥೆ, ಸಾರ್ವಜನಿಕರ, ರೈತ ಸಮೂಹವನ್ನು ಕರೆದುಕೊಂಡು ದಸರಾ ಮಾಡಿದಂತೆ ಕಾಣುತ್ತಿಲ್ಲ. ತಮ್ಮ ಹಿತ ಕಾಯುವವರಿಗೆ ಮಾತ್ರ ಶ್ರೀರಂಗಪಟ್ಟಣ ದಸರಾ ಎಂದು ಎದ್ದು ತೋರುತ್ತಿತ್ತು. ಸಾರ್ವಜನಿಕರ ಕೋಟ್ಯಂತರ ತೆರಿಗೆ ಹಣದ ರೂಪದಲ್ಲಿ ಸರ್ಕಾರ ಅನುದಾನ ಕೊಟ್ಟಿದ್ದರೂ ಸಮರ್ಪಕವಾಗಿ ಬಳಕೆಯಾಗಿಲ್ಲ ಎಂದು ಸ್ಪಷ್ಟವಾಗುತ್ತಿತ್ತು. ಒಂದು ರೀತಿಯಲ್ಲಿ ಶ್ರೀರಂಗಪಟ್ಟಣ ದಸರಾ ಅರ್ಥಪೂರ್ಣತೆಯನ್ನು ಕಳೆದುಕೊಂಡಿತ್ತು. ಇದರಿಂದ ಜನತೆಗೆ ಹಾಗೂ ರೈತಸಮುದಾಯಕ್ಕೆ ಬೇಸರವಾಗಿದೆ. ಶಾಸಕರ ಸರ್ವಾಧಿಕಾರಿ ಧೋರಣೆ ಇದೇ ರೀತಿ ಮುಂದುವರಿದರೆ ಮುಂದಿನ ದಿನಗಳಲ್ಲಿ ತಕ್ಕಪಾಠ ಕಲಿಸಬೇಕಾಗುತ್ತದೆ. ಮುಂದಿನ ದಿನದಲ್ಲಿ ದಸರಾಗೆ ಬಿಡುಗಡೆಯಾಗಿರುವ ಹಣವೆಷ್ಟು? ವೆಚ್ಚಗಳನ್ನು ಸಾರ್ವಜನಿಕರ ಮುಂದಿಡಬೇಕೆಂದು ಜಿಲ್ಲಾಡಳಿತ, ತಾಲ್ಲೂಕು ಆಡಳಿತವನ್ನು ಕ್ಷೇತ್ರದ ಜನತೆಯ ಪರವಾಗಿ ಪಾಪು ಅವರು ಒತ್ತಾಯಿಸಿದ್ದಾರೆ.

## ವಸತಿ ಸಹಿತ ಕಮ್ಮಟಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ಬಂಜಾರ ಸಂಸ್ಕೃತಿ ಹಾಗೂ ಭಾಷಾ ಅಕಾಡೆಮಿಯ ಹಾಗೂ ಕೃಷ್ಣಾಪುರದೊಡ್ಡಿಯ ಕೆಎಸ್ ಮುದ್ದಪ್ಪ ಸ್ಮಾರಕ ಟ್ರಸ್ಟ್ ಸಂಯುಕ್ತವಾಗಿ ಅಕ್ಟೋಬರ್ ತಿಂಗಳ ಕೊನೇ ವಾರದಲ್ಲಿ ಹದಿನೈದು ದಿನಗಳ ಬಂಜಾರ ನಾಟಕ ಸಾಹತ್ಯ ಹಾಗೂ ಕಾವ್ಯಕಮ್ಮಟವನ್ನು ಹಮ್ಮಿಕೊಂಡಿದೆ. 20ರಿಂದ 50 ವರ್ಷದೊಳಗಿನ ಆಸಕ್ತರು ಕೂಡಲೇ ತಮ್ಮ ಹೆಸರು ನೋಂದಾಯಿಸಬಹುದು. ಬಂಜಾರ ಸಮುದಾಯದ ಅಭ್ಯರ್ಥಿಗಳಿಗೆ, ಕವಿ, ಸಾಹಿತಿಗಳಿಗೆ ಮೊದಲ ಆದ್ಯತೆ. ಉಳಿದಂತೆ ಶೇ. 10% ಇತರೆ ವರ್ಗದವರು ಪಾಲ್ಗೊಳ್ಳಲು ಅವಕಾಶವಿದೆ. ತಮ್ಮ ಸ್ವಹಸ್ತದಿಂದ ಬರೆದ ಅರ್ಜಿಯನ್ನು ಈ ಕೂಡಲೇ ಅಧ್ಯಕ್ಷರು/ರಿಜಿಸ್ಟ್ರಾರ್, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ, ಕನ್ನಡಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ ಬೆಂಗಳೂರು ಇವರಿಗೆ ತಲುಪುವಂತೆ ಕಳುಹಿಸಬಹುದು. ಹೆಚ್ಚಿನ ವಿವರಗಳಿಗೆ ಡಾ. ಎ.ಆರ್. ಗೋವಿಂದಸ್ವಾಮಿ ಅಧ್ಯಕ್ಷರು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ()9448462620/9113243344 ಹಾಗೂ ಡಾ. ಎಂ. ಬೈರೇಗೌಡ, ಕಾರ್ಯದರ್ಶಿಗಳು ಕೆಎಸ್ ಮುದ್ದಪ್ಪ ಸ್ಮಾರಕ ಟ್ರಸ್ಟ್ 9448102158/7899906116 ಇವರನ್ನು ಸಂಪರ್ಕಿಸಬಹುದು ಎಂದು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಸಿಕ ಕೆ.ಡಿ.ಪಿ ಸಭೆ

**ಚಾಮರಾಜನಗರ:** ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತ ಮಾಸಿಕ ಕೆ.ಡಿ.ಪಿ ಸಭೆಯನ್ನು ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಕಾರ್ಯದರ್ಶಿಗಳಾದ ಪಿ. ಮೇಜರ್ ಮಣಿವಣ್ಣನ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ನೂತನ ಕೆ.ಡಿ.ಪಿ ಸಭಾಂಗಣದಲ್ಲಿ ಅಕ್ಟೋಬರ್ 10 ರಂದು ಬೆಳಿಗ್ಗೆ 11 ಗಂಟೆಗೆ ಪೂರ್ವ ನಿಗಧಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಮಕೂರಿನಲ್ಲಿ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸಿದ್ಧತೆ

**ತುಮಕೂರು:** 39ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಕಲ್ಪತರ ನಾಡು ತುಮಕೂರಿನಲ್ಲಿ ಸಂಭ್ರಮ ಸಡಗರದ ವಾತಾವರಣದಲ್ಲಿ ವೃತ್ತಿಪರ ಮತ್ತು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ.



ತುಮಕೂರು ಪತ್ರಕರ್ತರ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಸಿದ್ಧತೆಗಳ ಕುರಿತು ಸವಿವಿಸ್ತಾರವಾಗಿ ಚರ್ಚೆ ನಡೆಸಲಾಯಿತು.

ಸಮ್ಮೇಳನಕ್ಕೆ ಸಂಬಂದಿಸಿದಂತೆ ಸ್ವಾಗತ ಸಮಿತಿ, ಉಪ ಸಮಿತಿಗಳನ್ನು ಶೀಘ್ರದಲ್ಲಿಯೇ ರಚನೆ ಮಾಡಲು ಅಧ್ಯಕ್ಷ ಚಿ.ನಿ.ಪುರುಷೋತ್ತಮ ಅವರ ಸಮ್ಮುಖದಲ್ಲಿ ನಡೆದ ಜಿಲ್ಲಾ ಕಾರ್ಯಕಾರಿ ಸಮಿತಿ ಸಭೆಯಲ್ಲಿ ನಿರ್ಣಯಿಸಲಾಯಿತು. ಸಮ್ಮೇಳನ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಶಿವಾನಂದ ತಗಡೂರು, ತುಮಕೂರು ಜಿಲ್ಲೆ ದಾಸೋಹ, ಶಿಕ್ಷಣ, ಸಾಹಿತ್ಯ, ಕಲೆಗೆ ಹೆಸರಾದ ಜಿಲ್ಲೆ, ನಾಡಿನ ಅನೇಕ ಹೆಸರಾಂತ ಪತ್ರಕರ್ತರು ಜಿಲ್ಲೆಯವರಾಗಿರುವುದು ಹೆಮ್ಮೆ ಪಡುವ ಸಂಗತಿ. ತುಮಕೂರಿನಲ್ಲಿ ನಡೆದ ಎರಡು ರಾಷ್ಟ್ರೀಯ ಸಮ್ಮೇಳನಗಳು ಅತ್ಯಂತ ಯಶಸ್ವಿಯಾಗಿ ನೆರವೇರಿವೆ. ರಾಜ್ಯ ಸಮ್ಮೇಳನವೂ ಯಶಸ್ವಿಯಾಗಿ ನಡೆಸುವ ಜವಬ್ದಾರಿ ನಿಮ್ಮೆಲ್ಲರ ಮೇಲಿದೆ ಎಂದರು.

ಡಿಸೆಂಬರ್ ಇಲ್ಲವೇ ಜನವರಿಯೊಳಗೆ ಎರಡು ದಿನ ಸಮ್ಮೇಳನ ನಡೆಸಲು ಅಗತ್ಯ ಸಿದ್ಧತೆಗೆ ಇಂದಿನಿಂದಲೇ ಚಾಲನೆ ಕೊಟ್ಟು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಪ್ರಭಾವಿ ಸಚಿವರಾದ ಜಿ.ಪರಮೇಶ್ವರ್, ಕೆ.ಎನ್. ರಾಜಣ್ಣ, ಕೇಂದ್ರ ಸಚಿವ ವಿ.ಸೋಮಣ್ಣ ಸೇರಿದಂತೆ, ಪ್ರಭಾವಿ ಶಾಸಕರುಗಳಿದ್ದಾರೆ. ಸಿದ್ದಗಂಗಾ ಮಠ, ಜಿಲ್ಲಾಡಳಿತ, ಸಂಘ ಸಂಸ್ಥೆಗಳು ಸೇರಿದಂತೆ ಎಲ್ಲರ ಸಹಕಾರ ಪಡೆದು ಸ್ವಾಗತ ಸಮಿತಿ ರಚಿಸಬೇಕು. ಕಾರ್ಯನಿರತ ಕ್ರಿಯಾಶೀಲ ಪತ್ರಕರ್ತರನ್ನೊಳಗೊಂಡ ಆಹಾರ, ಸಾರಿಗೆ, ವಸತಿ. ಅತಿಥಿ ಸತ್ಕಾರ ಹೀಗೆ ಅಗತ್ಯವಾದ ಉಪಸಮಿತಿಗಳನ್ನು ರಚಿಸಿ ಅವರಿಗೆ ಜವಾಬ್ದಾರಿ ವಹಿಸಬೇಕು ಎಂದರು.

ಸಮ್ಮೇಳನ ಸ್ಮರಣ ಸಂಚಿಕೆ ಹಾಗೂ ಹಿರಿಯ ಪತ್ರಕರ್ತರು, ಸಾಧಕರನ್ನು ಪರಿಚಯಿಸುವ ಸಂಚಿಕೆಯನ್ನು ಹೊರತರಬೇಕಿದೆ. ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳು ಇರುವುದು, ಬರುವುದು ಸಹಜ. ಜಿಲ್ಲೆಗೆ ಕೀರ್ತಿ ಬರುವಂತೆ ಸಮ್ಮೇಳನ ಯಶಸ್ಸಿಗೆ ಎಲ್ಲರೂ ಕೈಜೋಡಿಸಬೇಕು. ಸಂಘದವರು ಸಹ ಎಲ್ಲರನ್ನು ವಿಶ್ವಾಸಕ್ಕೆ ಪಡೆದು ವ್ಯವಸ್ಥಿತವಾಗಿ ಆಯೋಜನೆ ಮಾಡಬೇಕೆಂದರು. ರಾಜ್ಯ ಪ್ರಧಾನ ಕಾರ್ಯದರ್ಶಿ ಲೋಕೇಶ್ ಮಾತನಾಡಿ ದಾವಣಗೆರೆಯಲ್ಲಿ ನಡೆದ ಸಮ್ಮೇಳನದ ದಾಖಲೆ ಮುರಿಯುವಂತೆ ತುಮಕೂರು ಸಮ್ಮೇಳನ ಜರುಗಬೇಕು ಎಂದು ಕರೆ ನೀಡಿದರು.

ಸಂಘದ ಜಿಲ್ಲಾಧ್ಯಕ್ಷ ಚಿ.ನಿ.ಪುರುಷೋತ್ತಮ್ ಮಾತನಾಡಿ, ಸಮ್ಮೇಳನ ಕುರಿತಾಗಿ ಮೊದಲ ಚರ್ಚೆಯನ್ನು ಕಾರ್ಯಕಾರಿ ಮಂಡಳಿಯಲ್ಲಿ ಮಾಡಲಾಗಿದೆ. ಮುಂದಿನ ಸಭೆಗೆ ಕಾರ್ಯಕಾರಿ ಮಂಡಳಿ ಜೊತೆಗೆ ಜಿಲ್ಲೆಯ ಸಂಪಾದಕರು, ಪತ್ರಕರ್ತರು ಜಿಲ್ಲಾಡಳಿತವನ್ನು ಭಾಗಿಯಾಗಿಸಿಕೊಂಡು ಆಯೋಜಿಸಲಾಗುವುದು ಎಂದರು. ಸಮ್ಮೇಳನದ ರೂಪುರೇಷ ತಯಾರಿಸುವ ಜೊತೆಗೆ ವಿವಿಧ ಸಮಿತಿಗಳಿಗೆ ಅರ್ಹ ಕ್ರಿಯಾಶೀಲ ಪತ್ರಕರ್ತರನ್ನು ನಿಯೋಜಿಸಲಾಗುವುದು. ತುಮಕೂರು ಸಂಘ ಮೊದಲಿನಿಂದಲೂ ರಾಷ್ಟ್ರೀಯ ಸಮ್ಮೇಳನವಿರಲಿ, ಕಾರ್ಯಾಗಾರಗಳಿರಲಿ ಯಾವುದೇ ಕಾರ್ಯಕ್ರಮ ಮಾಡಿದರೂ ವ್ಯವಸ್ಥಿತವಾಗಿ ಮಾಡುತ್ತಾ ಬಂದಿದೆ. ರಾಜ್ಯ ಸಮ್ಮೇಳನವನ್ನು ಅತ್ಯಂತ ಯಶಸ್ವಿಯಾಗಿ ನೆರವೇರಿಸಿಕೊಡುತ್ತೇವೆ ಎಂದರು. ಈಗಾಗಲೇ ಈ ನಿಟ್ಟಿನಲ್ಲಿ ಉಸ್ತುವಾರ ಸಚಿವ ಡಾ.ಜಿ.ಪರಮೇಶ್ವರ್, ಸಚಿವರಾದ ಕೆ.ಎನ್.ರಾಜಣ್ಣ, ವಿ.ಸೋಮಣ್ಣ ಅವರ ಜೊತೆಗೆ ಚರ್ಚೆ ಮಾಡಲಾಗಿದೆ. ಜನಪ್ರತಿನಿಧಿಗಳು, ದಾನಿಗಳ ಸಹಕಾರ ಪಡೆದು ಸಮ್ಮೇಳನವನ್ನು ಸಂಘಟಿಸಲಾಗುವುದು ಎಂದರು. ರಾಷ್ಟ್ರೀಯ ಮಂಡಳಿ ಸದಸ್ಯರಾದ ಟಿ.ಎನ್.ಮಧುಕರ್, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಡಿ.ಎಂ.ಸತೀಶ್ ಅವರು ಮಾತನಾಡಿ ರಾಷ್ಟ್ರೀಯ ಸಮ್ಮೇಳನಗಳು ಅತ್ಯುತ್ತಮವಾಗಿ ಅಂದಿನ ಹಿರಿಯರು ಸಂಘಟಿಸಿದನ್ನು ಈಗಲೂ ಎಲ್ಲರೂ ನೆನಪಿಸಿಕೊಳ್ಳುತ್ತಾರೆ. ರಾಜ್ಯ ಸಮ್ಮೇಳನವನ್ನು ಇದಕ್ಕಿಂತಲೂ ಮಿಗಿಲಾಗಿ ಸಂಘಟಿಸಲಾಗುವುದು ಎಂದರು.

## ಸ್ಟೇ ಫಿಟ್ ಜಿಮ್ ಉದ್ಘಾಟಿಸಿದ ಯುವರಾಜ್

**ಮಂಡ್ಯ:** ಯುವಕರು ವಿನೂತನ ಫಿಟ್ನೆಸ್ ಉಪಕರಣಗಳನ್ನು ಹೊಂದಿರುವ ಸ್ಟೇ ಫಿಟ್ ಜಿಮ್ ನಲ್ಲಿ ಸೇರಿ ಉತ್ತಮ ದೇಹವನ್ನು ಕಾಪಾಡಿಕೊಳ್ಳಿ ಎಂದು ದೊಡ್ಮನೆ ಹುಡುಗ ಯುವರಾಜ್ ಸಲಹೆ ನೀಡಿದರು.

ಅಶೋಕನಗರದ ಸ್ಟೇ ಫಿಟ್ ಜಿಮ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಿನಿಮಾ ಸ್ಟಾರ್ ಗಳು ಕೂಡ ದೇಹ ದಂಡಿಸಿ ತಮ್ಮ ದೇಹವನ್ನು ಸುಂದರವಾಗಿ ಕಾಣುವಂತೆ ನೋಡಿಕೊಳ್ಳುತ್ತಾರೆ ಇದರಿಂದ ಅವರ ನಟನೆಗಳಿಗೂ ದೇಹ ಹೊಂದಿಕೊಳ್ಳುತ್ತದೆ ಆಸಕ್ತಿಯುಳ್ಳ ಯುವಕರು ಸ್ಟೇ ಫಿಟ್ ಜಿಮ್ ಗೆಸೇರಿ ಇದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಶುಭ ಹಾರೈಸಿದರು.

ನಗರಸಭೆ ಅಧ್ಯಕ್ಷ ಪ್ರಕಾಶ್ ಮಾತನಾಡಿ ಎಲ್ಲರಿಗೂ ಆರೋಗ್ಯ ಮುಖ್ಯ ನಮ್ಮ ಪ್ರತಿನಿತ್ಯದ ಕೆಲಸದಲ್ಲಿ ಕೆಲ ಸಮಯವನ್ನು ಮೀಸಲಿಡುವುದರಿಂದ ಆರೋಗ್ಯವಂತ ಜೀವನ ನಡೆಸಲು ಸಹಕಾರಿಯಾಗುತ್ತದೆ ಎಂದರು.

ಮುಖಂಡ ಬಿ ಆರ್ ರಾಮಚಂದ್ರ ಮಾತನಾಡಿ ಯುವಕರಿಗೆ ಸಹಕಾರಿಯಾಗಲಿ ಎಂದು ನೂತನ ಜಿಮ್ ಮಾಡಿದ್ದಾರೆ ಯುವಕರು ಮತ್ತು ಮಹಿಳೆಯರು ಪ್ರತ್ಯೇಕ ಸಮಯದಲ್ಲಿ ಬಂದು ತರಬೇತಿಯನ್ನು ಪಡೆದು ಉತ್ತಮ ರೀತಿಯಲ್ಲಿ ಬಳಸಿಕೊಳ್ಳಿ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು ಕಾರ್ಯಕ್ರಮದಲ್ಲಿ ನಗರಸಭೆ ಉಪಾಧ್ಯಕ್ಷ ಅರುಣ್ ಕುಮಾರ್ ಕಿರಣ್ ಹಾಗೂ ಪ್ರಭ ಮುಖಂಡರಾದ ವಸಂತ್ ಕುಮಾರ್ ,ಸುರೇಶ್, ತಗ್ಗಳ್ಳಿ ಪ್ರಸನ್ನ ,ಪಾನಾ ಸುರೇಶ್, ಆದಿತ್ಯ, ಚೇತನ್ ಭಾಗವಹಿಸಿದ್ದರು.





ವಿಜಯಪುರ ಪಟ್ಟಣದ ಎಸ್ ಎಲ್ ವಿ ಅಂತರ ರಾಷ್ಟ್ರೀಯ ಶಾಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶಿಕ್ಷಣ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ 2024 25ನೇ ಸಾಲಿನ ಜಿಲ್ಲಾಮಟ್ಟದ ಬ್ಯಾಸ್ಕೆಟ್ಬಾಲ್ ಪಂದ್ಯಾವಳಿಗಳಲ್ಲಿ ಎಸ್ ಎಲ್ ವಿ ಶಾಲೆಯ ವಿದ್ಯಾರ್ಥಿಗಳು ವಿಜೇತರಾಗಿ ವಿಭಾಗಿಯ ಮಟ್ಟಕ್ಕೆ ಆಯ್ಕೆಯಾಗಿರುವರು. 14ರ ವಯೋಮಿತಿಯಲ್ಲಿ ಬಾಲಕಿಯರು ಮತ್ತು ಬಾಲಕರು ಪ್ರಥಮ ಸ್ಥಾನ ಪಡೆದರೆ, 17ರ ವಯೋಮಿತಿಯಲ್ಲಿನ ಬಾಲಕಿಯರು ಮತ್ತು ಬಾಲಕರು ದ್ವಿತೀಯ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿರುವರೆಂದು ಶಾಲೆಯ ಸಂಸ್ಥಾಪಕರಾದ ಗೋಪಾಲಗೌಡರವರು ತಿಳಿಸಿ ಮಕ್ಕಳಿಗೆ ಆಕರ್ಷಕ ಟ್ರೋಫಿಯನ್ನು ವಿತರಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾಯನಿ ಅನುರಾಧ, ಶಾಲಾ ಕಾರ್ಯದರ್ಶಿ ರೂಪದೇವಿ, ಹಾಗೂ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

# ಕಬ್ಬಿಗೆ ವೈಜ್ಞಾನಿಕ ಬೆಲೆ ನೀಡಿ

**ಮಂಡ:** ನಗರದ ಜೆಸಿ ವೃತದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಒಂದು ಟನ್ ಕಬ್ಬಿಗೆ 5000 ರೂ ನಿಗದಿ ಮಾಡುವಂತೆ ಒತ್ತಾಯಿಸಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.7, 8 ವರ್ಷಗಳಿಂದ ರೈತರ ಕಬ್ಬಿಗೆ ಬೆಂಬಲ ಬೆಲೆ ನಿಗದಿ ಮಾಡದೆ ರೈತರು ತುಂಬಾ ಸಂಕಷ್ಟಕ್ಕೆ ತುತ್ತಾಗಿದ್ದಾರೆ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು ಇನ್ನಾದರೂ ರೈತರ ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿ ಪಡಿಸಿ ರೈತರ ರಕ್ಷಣೆ ಮಾಡಬೇಕು ಹಾಗೂ ಮಂಡ್ಯ ಜಿಲ್ಲೆಯಲ್ಲಿ ರೈತರು ಬೆಳೆದ ಕಬ್ಬು 18 ತಿಂಗಳು ತುಂಬಿದ್ದರು ಕಾರ್ಖಾನೆ ಅವರು ಕಬ್ಬು ತೆಗೆದುಕೊಳ್ಳಲು ವಿಳಂಬ ಧೋರಣೆ ತೋರುತ್ತಿದ್ದಾರೆ ಸೂಕ್ತ ಸಮಯಕ್ಕೆ ಕಬ್ಬು ಕಟಾವು ಮಾಡಿಸಲು ಜಿಲ್ಲಾಡಳಿತ ಕ್ರಮ ತೆಗೆದುಕೊಳ್ಳಬೇಕು ಎಂದು ಮಂಡ್ಯ ತಾಲೂಕು ರೈತ ಸಂಘದ ಕಾರ್ಯಕರ್ತರು ಆಗ್ರಹ ಪಡಿಸಿದರು,

ಈ ಸಮಯದಲ್ಲಿ ಕನಿಷ್ಠ 5ಸಾವಿರ ರೂ ಕೊಡಲೇಬೇಕು ಇಲ್ಲದಿದ್ದರೆ ರೈತರು ಬೀದಿಗೆ ಇಳಿದು ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದ್ದಾರೆ. ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಶಿವಳ್ಳಿ ಚಂದ್ರು, ರಾಮಲಿಂಗೇಗೌಡ, ಕೋಣನಹಳ್ಳಿ ಮಂಜು, ನಿಂಗೇಗೌಡ, ಚೆಲುವರಾಜು, ಗಂಗರಾಜು, ಶ್ರೀನಿವಾಸ್, ಪುಟ್ಟೇಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.



# ಸಿಟಿ ಬಸ್‌ಗಳಿಗೆ ಕನಿಷ್ಠ ವೇಗದ ಮಿತಿ ನಿಗದಿಪಡಿಸಿ

**ಚಿತ್ರದುರ್ಗ:** ಭದ್ರಾವತಿ ನಗರದಲ್ಲಿ ಪ್ರಯಾಣ ಮಾಡಲು ಹೋದಾಗ ಅಲ್ಲಿರುವ ಸಿಟಿ ಬಸ್ಸುಗಳಲ್ಲಿ ಹತ್ತಿ ಕುಳಿತರೆ ಒಂದು ಜಾಗದಿಂದ ಇನ್ನೊಂದು ಜಾಗಕ್ಕೆ ಪ್ರಯಾಣಿಸಲು ಕನಿಷ್ಠಪಕ್ಷ ಮುಕ್ಕಾಲರಿಂದ ಒಂದು ಗಂಟೆಯಷ್ಟು ಸಮಯ ತೆಗೆದುಕೊಳ್ಳುತ್ತಿರುವುದರಿಂದ, ನಿಧಾನಗತಿಯಲ್ಲಿ, ಆಮೆಗತಿಯಲ್ಲಿ ಚಲಿಸುವ ಸಿಟಿ ಬಸ್ಸುಗಳಿಗೆ ಕನಿಷ್ಠ ವೇಗದ ಮಿತಿಯನ್ನಾ ನಿಗದಿಪಡಿಸಿ ಪ್ರಯಾಣಿಕರಿಗೆ ನಿರ್ದಿಷ್ಟ ಸಮಯದಲ್ಲಿ ಸ್ಥಳಗಳನ್ನ ಮುಟ್ಟಲು ಮತ್ತು ಅವರ ಕೆಲಸ ಕಾರ್ಯಗಳಿಗೆ ಹಾಜರಾಗಲು ಅನುಕೂಲ ಮಾಡಿಕೊಡಿ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಎಚ್ ಕೆ ಎಸ್ ಸ್ವಾಮಿಯವರು ಶಿವಮೊಗ್ಗ ಜಿಲ್ಲಾಡಳಿತಕ್ಕೆ ವಿನಂತಿಸಿಕೊಂಡಿದ್ದಾರೆ.

ಭದ್ರಾವತಿ ನಗರದಲ್ಲಿ ಚಲಿಸುತ್ತಿರುವ ಸಿಟಿ ಬಸ್ಸುಗಳು ಬಹಳ ನಿಧಾನಗತಿಯಲ್ಲಿ ಚಲಿಸುತ್ತಿದ್ದು ಪ್ರತಿ 100 ಮೀಟರಿಗೆ ಒಂದೊಂದು ನಿಲ್ದಾಣ ಮಾಡಿಕೊಂಡು, ಪ್ರತಿ ನಿಲ್ದಾಣದಲ್ಲಿ 5 ರಿಂದ 10 ನಿಮಿಷ ಸಮಯ ಕಳೆದು, ಆಮೆ ವೇಗದಲ್ಲಿ ಚಲಿಸುತ್ತಿರುವುದರಿಂದ, ಒಳಗೆ ಕುಳಿತ ಪ್ರಯಾಣಿಕರಿಗೆ ಕಿರಿಕಿರಿಯಾಗುತ್ತಿದ್ದು ನಾವು ಯಾಕಾದರೂ ಈ ಸಿಟಿ ಬಸ್ಸನ್ನು ಹತ್ತಿದೆವೋ, ಆಟೋದಲ್ಲಾದರೂ ಹೋಗಿದ್ದರೆ ಕೆಲಸಗಳು ಆಗುತ್ತಿದ್ದವು ಎಂದು ಪ್ರಯಾಣಿಕರು ಪರಿತಪಿಸುತ್ತಿದ್ದಾರೆ. ಇಲ್ಲಿ ನಾವು ಹಣ ನೀಡಿ ನಿಧಾನ ಗತಿಯಲ್ಲಿ ಚಲಿಸುವುದರಿಂದ ನಮ್ಮ ಸಮಯವು ವ್ಯರ್ಥವಾಗುತ್ತಿದೆ ಹಾಗೂ ನಿರ್ದಿಷ್ಟ ಸಮಯದಲ್ಲಿ ಕೆಲಸಕ್ಕೆ ಹಾಜರಾಗಲು ತೊಂದರೆಯಾಗುತ್ತಿದೆ ಎಂದು ಪ್ರಯಾಣಿಕರು ದೂರುತ್ತಿರುವುದರಿಂದ, ನಗರಸಭೆಯವರು ನಗರಾಡಳಿತದವರು ಇದನ್ನ ಗಂಭೀರವಾಗಿ ಪರಿಗಣಿಸಿ, ನಗರದಲ್ಲಿ ಸಂಚರಿಸುವ ಸಿಟಿ ಬಸ್ಸುಗಳಿಗೆ ನಿರ್ದಿಷ್ಟ ವೇಗದಲ್ಲಿ ಚಲಿಸುವಂತೆ, ಕನಿಷ್ಠ ವೇಗದಲ್ಲಿ ಚಲಿಸುವಂತಾದರೂ ಅವರಿಗೆ ಆದೇಶ ನೀಡಿ, ಆಮೆ ವೇಗದಲ್ಲಿ ಚಲಿಸುವ ಸಿಟಿ ಬಸ್ಸುಗಳನ್ನ ಕನಿಷ್ಠ ವೇಗದಲ್ಲಾದರೂ ಸ್ಥಳಗಳನ್ನು ಮುಟ್ಟುವಂತೆ ನಿಗದಿಪಡಿಸಬೇಕೆಂದು ವಿನಂತಿಸಿಕೊಂಡಿದ್ದಾರೆ.

ಜನರು ಸಿಟಿ ಬಸ್ಸುಗಳನ್ನು ನಗರಗಳಲ್ಲಿ ಬಳಕೆ ಮಾಡುವುದು ಸಮಯಕ್ಕೆ ಸರಿಯಾಗಿ ನಮ್ಮನ್ನು ಮುಟ್ಟಿಸುತ್ತಾರೆ ಎಂಬ ಭಾವನೆಯಿಂದ. ಆದರೆ ಖಾಸಗಿ ಸಿಟಿ ಬಸ್ಸುಗಳು ಜನರ ಹತ್ತುವಿಕೆಗಾಗಿ ಗಂಟೆಗಟ್ಟಲೆ ನಿಲ್ದಾಣದಲ್ಲಿ ಕಾಯುವುದು, ನಿಧಾನವಾಗಿ ಬಸ್ಸನ್ನ ಚಲಾಯಿಸುವುದು, ಅದು ಗುರಿ ಮುಟ್ಟಲು ಒಂದು ಗಂಟೆ ತೆಗೆದುಕೊಳ್ಳುವುದರಿಂದ, ಹತ್ತಿ ಕುಳಿತ ಬೇರೆ ಊರಿನ ಪ್ರಯಾಣಿಕರಿಗೆ ಇದ್ಯಾವ ವ್ಯವಸ್ಥೆ ಎಂದು ಆಶ್ಚರ್ಯವಾಗುತ್ತದೆ. ಅದೇ ಊರಿನ ಜನರಾದರೂ ಅದಕ್ಕೆ ಹೊಂದಿಕೊಂಡಿರುತ್ತಾರೆ, ಆದರೆ ಬೇರೆ ಊರಿನ ಜನ ಭದ್ರಾವತಿಯನ್ನು ವೀಕ್ಷಿಸಲು ಬಂದರೆ, ಅವರಿಗೆ ನಿರಾಸೆಯಾಗುವುದು ಖಂಡಿತ. ಏಕೆಂದರೆ ವಿಐಎಸ್ಎಲ್ ಫ್ಯಾಕ್ಟರಿನ ವೀಕ್ಷಣೆ ಮಾಡಿ, ಬೇರೆ ವಿಭಾಗದ ದೇವಸ್ಥಾನಗಳಿಗೆ ಬರಬೇಕೆಂದರೆ, ಹೊಸ ಮನೆಗೆ ಬರಬೇಕೆಂದರೆ, ಒಂದರಿಂದ ಒಂದೂವರೆ ಗಂಟೆಯಷ್ಟು ಸಮಯ ತೆಗೆದುಕೊಳ್ಳುವ ಸಿಟಿ ಬಸ್ಸುಗಳು ಉಂಟು. ಹಾಗಾಗಿ ಜನರು ಸಿಟಿ ಬಸ್ಸುಗಳನ್ನ ಬಿಟ್ಟು ಆಟೋದಲ್ಲಿ ಓಡಾಡುವುದನ್ನು ರೂಢಿ ಮಾಡಿಕೊಳ್ಳುತ್ತಿದ್ದಾರೆ. ಅದಕ್ಕಾಗಿ ನಗರ ಸಾರಿಗೆಯವರು ಸಿಟಿ ಬಸ್ಸಿನ ವೇಗದ ಮಿತಿಯನ್ನ ಸ್ವಲ್ಪ ಹೆಚ್ಚಿಸಿ, ಸಮಯಕ್ಕೆ ಸರಿಯಾಗಿ ಗಾಡಿಗಳನ್ನು ನಿರ್ದಿಷ್ಟ ಜಾಗಕ್ಕೆ ತಲುಪಿಸುವಂತೆ ಮಾಡಬೇಕು ಎಂದರು.

ಸಿಟಿ ಬಸ್ಸಿನಲ್ಲಿ ಪ್ರಯಾಣಿಸುವವರಿಗೆ ಖಂಡಿತ ಅವರಿಗೆ ರೈಲು ಸಿಗುವುದಿಲ್ಲ, ಹಾಗೆ ಅವರಿಗೆ ಸಮಯಕ್ಕೆ ಸರಿಯಾಗಿ ಕೆಲಸಕ್ಕೂ ಹಾಜರಾಗಲು ಸಾಧ್ಯವಿಲ್ಲ, ಹತ್ತಿದ ಜನರು ನಮ್ಮ ಕಥೆ ಮುಗಿಯಿತು ಎಂದು ಕಂಡಕ್ಟರ್ ಮತ್ತು ಡ್ರೈವರ್ ಜೊತೆ ಜಗಳವಾಡಲು ಪ್ರಾರಂಭಿಸುತ್ತಾರೆ. ಅವರುಗಳು ಒಂದಿಷ್ಟು ನಿರ್ದಿಷ್ಟ ವೇಗದಲ್ಲಿ ಗಾಡಿ ಚಲಾಯಿಸುವುದೇ ಇಲ್ಲ, ನಿಧಾನಗತಿಯಲ್ಲಿ ಪ್ರತಿ ಹೆಜ್ಜೆ ಹೆಜ್ಜೆಗೂ ನಿಲ್ಲಿಸಿ, ನಿಲ್ಲಿಸಿ, ಬಸ್ಸನ್ನ ಚಲಾಯಿಸುವುದರಿಂದ, ಆ ಬಸ್ಸಿನ ಜೊತೆ ನಾವು ನಡೆದಾಡಿಕೊಂಡು ಹೋಗಿ ಸ್ಥಳವನ್ನು ಮುಟ್ಟಬಹುದು. ಅದಕ್ಕಾಗಿ ನಗರ ಸಾರಿಗೆಯವರು, ಜಿಲ್ಲಾಡಳಿತದವರು ಈ ಬಸ್ಸಿನ ವೇಗದ ಮಿತಿಯನ್ನು ನಿಗದಿಪಡಿಸಿ ಎಷ್ಟು ಸಮಯಕ್ಕೆ ಇದು ಮೊದಲ ನಿಲ್ದಾಣವನ್ನು ಬಿಡುತ್ತದೆ ಹಾಗೂ ಎಷ್ಟು ಸಮಯಕ್ಕೆ ಇದು ಕೊನೆ ನಿಲ್ದಾಣವನ್ನು ಮುಟ್ಟುತ್ತದೆ, ಮಧ್ಯೆ ಎಷ್ಟು ನಿಲ್ದಾಣಗಳಿವೆ ಎಂಬುದನ್ನು ನಿಗದಿಪಡಿಸಬೇಕಾಗುತ್ತದೆ. ಇಲ್ಲದಿದ್ದರೆ ಆಮೆಗತಿಯಲ್ಲಿ ಓಡಾಡುವ ಸಿಟಿ ಬಸ್ಸುಗಳನ್ನು ನಂಬಿಕೊಂಡು ಜನರು, ವೇಗವಾಗಿ ಬದುಕುತ್ತಿರುವ ಇಂದಿನ ಸಮಾಜದಲ್ಲಿ ಸಿಟಿ ಬಸ್ಸುಗಳು ಅಂತ ಹಂತವಾಗಿ ನಿಲುಗಡೆ ಹೊಂದುತ್ತವೆ. ಹಾಗಾಗಿ ಸಿಟಿ ಬಸ್ಸುಗಳು ಕನಿಷ್ಠ ವೇಗವಾಗಿ ಚಲಿಸಿ, ಜನರನ್ನ ಗುರಿಯನ್ನ ಮುಟ್ಟಿಸಿ ಮತ್ತೆ ಬೇಕಾದಷ್ಟು ಟ್ರಿಪ್ ಗಳನ್ನ ಮಾಡಿಕೊಳ್ಳಬಹುದು. ಆದರೆ ಇವು ದಿನಕ್ಕೆ ನಾಲ್ಕೆ ಟ್ರಿಪ್ ಹೊಡೆಯುವುದು, ಗಂಟೆಗಟ್ಟಲೆ ನಿಧಾನವಾಗಿ ಗಾಡಿ ಚಲಾಯಿಸುವುದನ್ನು ನೋಡಿದರೆ, ಇವರ ಜಾಣತನಕ್ಕೆ ನಾವೆಲ್ಲರೂ ತಲೆ ತೂಗಬೇಕಾಗಿದೆ. ಹಾಗಾಗಿ ಆದಷ್ಟು ಶೀಘ್ರವಾಗಿ ಇದರ ವೇಗವನ್ನ ಮಿತಿಯನ್ನು ಹೆಚ್ಚಿಸಿ ಜನರಿಗೆ ಅನುಕೂಲ ಮಾಡಿಕೊಡಿ ಎಂದು ನಾಗರಿಕರ ಪರವಾಗಿ ವಿನಂತಿಸಿಕೊಂಡಿದ್ದಾರೆ ಮೊದಲೆಲ್ಲಾ ಸಿಟಿ ಬಸ್ಸಿನಲ್ಲಿ ಜನ ತುಂಬಿರುತ್ತಿದ್ದರು, ಕಾರಣ ಸಮಯಕ್ಕೆ ಸರಿಯಾಗಿ ನಮ್ಮನ್ನು ಗುರಿಮುಟ್ಟಿಸುತ್ತಾರೆ ಎಂದು. ಈಗ ನಿಧಾನಗತಿಯಲ್ಲಿ ಚಲಿಸುವ ಸಿಟಿ ಬಸ್ಸುಗಳು 25ಕ್ಕಿಂತ ಹೆಚ್ಚು ನಿಲ್ದಾಣಗಳಲ್ಲಿ ನಿಂತುಕೊಂಡು, ಚಲಿಸುವ ಸಿಟಿ ಬಸ್ಗಳನ್ನ ನಂಬಿಕೊಂಡು ಜನರು ಜೀವನ ಮಾಡಲಾರದೆ ಸ್ವಂತ ವಾಹನಗಳನ್ನು ಕೊಂಡುಕೊಂಡು, ಪೆಟ್ರೋಲನ್ನ ವೆಚ್ಚ ಮಾಡಿ, ಪರಿಸರ ಮಾಲಿನ್ಯ ಉಂಟು ಮಾಡಿ, ಜೀವನ ನಡೆಸುವ ಪರಿಸ್ಥಿತಿಗೆ ಬಂದು ನಿಂತಿದ್ದಾರೆ. ನಗರ ಸಾರಿಗೆ ಉದ್ದೇಶವೇ ಖಾಸಗಿ ಮತ್ತು ಸ್ವಂತ ವಾಹನಗಳನ್ನು ಕಡಿಮೆಗೊಳಿಸಿ, ಜನರು ಪರಿಸರ ಸ್ನೇಹಿಯಾಗಿ ಜೀವನ ನಡೆಸುವಂತೆ ಅನುಕೂಲ ಮಾಡಿಕೊಡುವುದು ಸಿಟಿ ಬಸ್ಸಿನ ಉದ್ದೇಶವಾಗಿದೆ, ಹಾಗಾಗಿ ನಿಧಾನಗತಿ ಚಲಿಸುವ ಸಿಟಿ ಬಸ್ಸುಗಳಿಂದ ಈ ಉದ್ದೇಶ ಘಾಸಿಕೊಳ್ಳುತ್ತಿದೆ. ಇದರ ಬಗ್ಗೆ ನಾಗರಿಕರು ಸಹ ಹೆಚ್ಚಿನ ಮಟ್ಟದಲ್ಲಿ ಅಧಿಕಾರಿಗಳ ಗಮನ ಸೆಳೆಯಬೇಕಾಗಿತ್ತು, ಈಗಲಾದರೂ ಜನರು ಎಚ್ಚೆತ್ತುಕೊಂಡು ಸಿಟಿ ಬಸ್ಸಿನ ವೇಗವನ್ನ ನಿಗದಿಪಡಿಸಿಕೊಂಡು, ಸಿಟಿ ಬಸ್ಸನ್ನು ಹೆಚ್ಚಿನ ಬಳಕೆ ಮಾಡಿ, ಮಾಲಿನ್ಯವನ್ನು ಸಹ ಕಡಿಮೆ ಮಾಡಿ, ಹಣ ಉಳಿತಾಯ ಮಾಡಿಕೊಳ್ಳಿ ಎಂಬ ವಿನಂತಿಯನ್ನು ಮಾಡಿಕೊಂಡಿದ್ದಾರೆ.

# ನವಕನ್ನಿಕಾ ಪೂಜೆ ಸಡಗರ

**ಚಾಮರಾಜನಗರ:** ನವರಾತ್ರಿ ಹಬ್ಬದ ವಿಶೇಷ ನವಕನ್ನಿಕಾ ಪೂಜೆಯ ಬಹಳ ಶ್ರದ್ಧಾ ಭಕ್ತಿಯಿಂದ ಬ್ರಾಹ್ಮಿ ಮಹಿಳಾ ಸಂಘದ ಆಶ್ರಯದಲ್ಲಿ ಋಗ್ವೇದಿ ಕುಟೀರದಲ್ಲಿ ನಡೆಯಿತು.

ಬ್ರಾಹ್ಮಿ ಮಹಿಳಾ ಸಂಘದ ಕಾರ್ಯದರ್ಶಿ ಶ್ರೀಮತಿ ರೇಖಾ ರಂಗನಾಥ್ ಮಾತನಾಡಿ ನವರಾತ್ರಿಯ ವಿಶೇಷವಾಗಿ ನವ ದುರ್ಗೆಯ ಸ್ವರೂಪದಲ್ಲಿ ಒಂಬತ್ತು ಮಕ್ಕಳಿಗೆ ಪಾದ ತೊಳದು ,ಫಲ ತಾಂಬೂಲಗಳನ್ನು ನೀಡಿ ಪೂಜಿಸಿ ಆಶೀರ್ವಾದ ಪಡೆಯುವ ಪದ್ಧತಿ ನವರಾತ್ರಿ ಸಂದರ್ಭದಲ್ಲಿ ನಡೆಯುತ್ತದೆ. ದೇವಿಯ ಸ್ವರೂಪದಲ್ಲಿ ಮಕ್ಕಳನ್ನು ಕೂರಿಸಿ ಪೂಜಿಸಿ, ಶಕ್ತಿ ಸ್ವರೂಪವನ್ನು ಸ್ವೀಕಾರ ಮಾಡುವ ವಿಶೇಷ ಕಾರ್ಯಕ್ರಮ ನವ ಕನ್ನಿಕಾ ಪೂಜೆಯಾಗಿದೆ ಎಂದು ತಿಳಿಸಿದರು.

ದಸರಾ ಹಾಗೂ ನವರಾತ್ರಿ ಹಬ್ಬದ ವಿಶೇಷ ಉಪನ್ಯಾಸ ನೀಡಿದ ಸಂಸ್ಕೃತಿ ಚಿಂತಕ ಸುರೇಶ್ ಎನ್ ಋಗ್ವೇದಿ ಮಾತನಾಡಿ ಹಲವು ದಶಕಗಳಿಂದ ಬ್ರಾಹ್ಮಿ ಮಹಿಳಾ ಸಂಘ ನವರಾತ್ರಿಯ ಸಂದರ್ಭದಲ್ಲಿ ನವಕನ್ನಿಕಾ ಪೂಜೆಯನ್ನು ನೆರವೇರಿಸಿಕೊಂಡು ಸಂಸ್ಕೃತಿಯನ್ನು ಉಳಿಸುವ ಕಾರ್ಯವನ್ನು ಮಾಡುತ್ತಿದೆ. ಮಕ್ಕಳಲ್ಲಿ ಆಧ್ಯಾತ್ಮಿಕ ಪದ್ಧತಿ ಹಾಗೂ ಅದರ ಮೌಲ್ಯಗಳನ್ನು ತಿಳಿಸುವ ಮೂಲಕ ಸದ್ಭಾವನೆಯನ್ನು ಬೆಳೆಸಬೇಕಾಗಿದೆ. ಆಧ್ಯಾತ್ಮಿಕತೆಯು ಜೀವನದ ಮೌಲ್ಯವನ್ನು ಹೆಚ್ಚಿಸಿ ಶ್ರೇಷ್ಠ ವ್ಯಕ್ತಿತ್ವವನ್ನು ರೂಪಿಸುತ್ತದೆ. ಧಾರ್ಮಿಕ ಪರಂಪರೆಯ ಎಲ್ಲಾ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಮಾಡಬೇಕಾಗಿದೆ. ಮಕ್ಕಳಲ್ಲಿ ಭಾರತೀಯ ಸಂಸ್ಕೃತಿಯ ವಿಶೇಷ ಅರ್ಥವನ್ನು ತಿಳಿಸಿದಾಗ ಅದರ ಬಗ್ಗೆ ಗೌರವ ಉಂಟಾಗಿ ಅದರಂತೆ ನಡೆಯುವ ಭಾವನೆಯು ಮೂಡುತ್ತದೆ..ದಸರಾ ವೈಭವವನ್ನು ಪೋಷಕರು, ಸಂಘಟನೆಗಳು ತಿಳಿಸಬೇಕು. ಬ್ರಾಹ್ಮಿ ಮಹಿಳಾ ಸಂಘ ನಿರಂತರವಾಗಿ ಈ ಪದ್ಧತಿಯನ್ನು ಬೆಳೆಸಿಕೊಂಡು ಬರುತ್ತಿರುವುದು ಬಹಳ ಸಂತೋಷ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಬ್ರಾಹ್ಮಿ ಮಹಿಳಾ ಸಂಘದ ವತ್ಸಲಾರಾಜಗೋಪಾಲ್, ಭಾನುಮತಿ, ರೇಖಾ, ವಿಜಯಲಕ್ಷ್ಮಿ, ಪಾರ್ವತಿ, ರಾಧಾ, ಋಗ್ವೇದಿ ಯೂತ್ ಕ್ಲಬ್ ಕುಸುಮ ಋಗ್ವೇದಿ, ಶರಣ್ಯ , ಶ್ರಾವ್ಯ, ಸುಪ್ರಿಯಾ, ಮೇಘನಾ, ಮುಂತಾದವರು ಉಪಸ್ಥಿತರಿದ್ದರು.



# ಚಿಕ್ಕಬಳ್ಳಾಪುರಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗ ಭೇಟಿ

**ಚಿಕ್ಕಬಳ್ಳಾಪುರ:** ರಾಜ್ಯ ಮಾನವ ಹಕ್ಕುಗಳ ಆಯೋಗದಲ್ಲಿ ಕಳೆದ ವರ್ಷದ ನವೆಂಬರ್ ಮಾಹೆಯಲ್ಲಿ 8054 ಪ್ರಕರಣಗಳು ಬಾಕಿ ಇದ್ದವು , ಅವುಗಳ ಪೈಕಿ 5,456 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ, ಪ್ರಸ್ತುತ 2,598 ಪ್ರಕರಣಗಳು ವಿಲೇವಾರಿಗೆ ಬಾಕಿ ಇವೆ ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಹಂಗಾಮಿ ಅಧ್ಯಕ್ಷರಾದ ಟಿ. ಶ್ಯಾಮ್ ಭಟ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಹೆಚ್ ನರಸಿಂಹಯ್ಯ ಸಭಾಂಗಣದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳು ಹೆಚ್ಚಾಗಿ ಪೊಲೀಸ್ ಇಲಾಖೆಗೆಸಂಬಂಧಿಸಿದಪ್ರಕರಣಗಳು ದಾಖಲಾಗಿವೆ. ನಂತರದ ಸ್ಥಾನದಲ್ಲಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಸಂಬಂಧಿಸಿದ ಪ್ರಕರಣಗಳು ಇವೆ. ಅನ್ಯಾಯಕ್ಕೆ ಒಳಗಾದವರು ಅರ್ಜಿಗಳನ್ನು ರಾಜ್ಯದ ಮೂಲೆ ಮೂಲೆಗಳಿಂದ ಬೆಂಗಳೂರಿಗೆ ಬಂದು ದೂರು ನೀಡಿ ಇತ್ಯರ್ಥಪಡಿಸಿಕೊಳ್ಳಲು ಕಷ್ಟಸಾಧ್ಯವಾಗುತ್ತಿದ್ದನ್ನು ಅರಿತ ಆಯೋಗವು ಕಳೆದ ಎಂಟು ತಿಂಗಳಿನಿಂದ 14 ಜಿಲ್ಲೆಗಳಿಗೆ ಭೇಟಿ ನೀಡಿ ಜಿಲ್ಲೆಗೆ ಸಂಬಂಧ ಪಟ್ಟ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳ ಅರ್ಜಿಗಳನ್ನು ಜಿಲ್ಲಾ ಕೇಂದ್ರಗಳಲ್ಲೇ ಬಗೆಹರಿಸುವ ಪ್ರಯತ್ನವನ್ನು ಮಾಡುತ್ತಿದೆ ಅಲ್ಲದೆ ಹೊಸ ದೂರು ಮತ್ತು ಅಹವಾಲು ಅರ್ಜಿಗಳನ್ನು ಸಹ ಸ್ವೀಕರಿಸಿ ವಿಲೆಗೆ ಅಗತ್ಯ ಕ್ರಮ ವಹಿಸುತ್ತಿದ್ದೇವೆ ಜೊತೆಗೆ ಸರ್ಕಾರಿ ಆಡಳಿತ ವ್ಯವಸ್ಥೆಗಳ ಮೂಲಕ ಸಾರ್ವಜನಿಕ ಸೇವೆ ನೀಡುವ ಸರ್ಕಾರಿ ಸಂಸ್ಥೆಗಳಿಗೆ ಹಾಗೂ ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳ ಬಗ್ಗೆ ಅಲ್ಲಿ ದೊರಕುವ ಸರ್ಕಾರಿ ಸೌಲಭ್ಯಗಳ ಬಗ್ಗೆ ಹಾಗೂ ಕುಂದು ಕೊರತೆಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ. ಸರ್ಕಾರಿ ಸಂಸ್ಥೆಗಳಿಂದ ಅಥವಾ ಅಧಿಕಾರಿ/ಸಿಬ್ಬಂದಿಯ ಲೋಪಗಳಿಂದ ಮಾನವ ಹಕ್ಕುಗಳ ಉಲ್ಲಂಘನೆಯಾಗಿದ್ದಲ್ಲಿ ಸಂಬಂಧಪಟ್ಟವರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸು ಮಾಡಲಾಗುತ್ತಿದೆ ಹಾಗೆಯೇ ನೊಂದವರಿಗೆ ಪರಿಹಾರ ನೀಡಲು ಸಹ ತಿಳಿಸಲಾಗಿದೆ ಎಂದರು.



ಸಾಮಾಜಿಕ ಬಹಿಷ್ಕಾರ, ಭ್ರೂಣ ಹತ್ಯೆ ಹಾಗೂ ಇನ್ನಿತರ ವಿಷಯಗಳಿಗೆ ಸಂಬಂಧಪಟ್ಟಂತೆ ಮಾಧ್ಯಮಗಳಲ್ಲಿ ವರದಿಯಾದ ಆಧಾರದ ಮೇಲೆ ಆಯೋಗವು ಪ್ರಕರಣಗಳನ್ನು ಸ್ವಯಂ ದಾಖಲಿಸಿಕೊಂಡು ಅಗತ್ಯ ಕ್ರಮ ಕೈಗೊಳ್ಳುತ್ತಿದೆ. ಮಾನವ ಹಕ್ಕುಗಳ ಉಲ್ಲಂಘನೆಗೆ ಒಳಗಾದವರು ಅಥವಾ ಅವರ ಪರವಾಗಿ ಇನ್ನೊಬ್ಬರು ದೂರನ್ನು ನೇರವಾಗಿ ಆಯೋಗಕ್ಕೆ ಅಥವಾ ಇ-ಮೇಲ್ ಮತ್ತು ಅಂಚೆ ಮೂಲಕ ಸಲ್ಲಿಸಬಹುದು ಇಲ್ಲವೇ ಈ ಬಗ್ಗೆ ಮಾಧ್ಯಮಗಳು ಬೆಳಕು ಚೆಲ್ಲಿದಲ್ಲಿ ಸ್ವಯಂ ದೂರು ದಾಖಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಆಯೋಗವು ಸದಾ ಜಾಗೃತ ವಾಗಿರುತ್ತದೆ ಎಂದರು

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾದ ಎಸ್.ಕೆ. ವಂಟಿಗೋಡಿ ಅವರು ಮಾತನಾಡಿ ಸಾರ್ವಜನಿಕ ಸ್ಥಳಗಳಲ್ಲಿ, ಸರ್ಕಾರಿ ಆಸ್ಪತ್ರೆ, ಹಾಸ್ಟೆಲ್ ಗಳು, ಜೈಲು, ಪೊಲೀಸ್ ಠಾಣೆಯಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳನ್ನು ತಡೆಗಟ್ಟುವುದಕ್ಕೆ ಏನೇನು ಕ್ರಮ ತೆಗೆದುಕೊಳ್ಳಬೇಕು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಮಾನವನ ಹಕ್ಕುಗಳ ಆಯೋಗದ ಅಗತ್ಯ ಕ್ರಮ ವಹಿಸುತ್ತಿದೆ.ಸರ್ಕಾರದ ಮೂಲಭೂತ ಸೌಕರ್ಯಗಳಿಂದ ವಂಚಿತರಾದವರು ಆಯೋಗಕ್ಕೆ ದೂರು ಸಲ್ಲಿಸಿ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಗೂ ಮುನ್ನ ಆಯೋಗದ ಅಧ್ಯಕ್ಷರು, ಸದಸ್ಯರು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದ ವಿವಿಧ ಸಾರ್ವಜನಿಕ ಸರ್ಕಾರಿ ಸಂಸ್ಥೆಗಳಿಗೆ, ಸ್ಥಳಗಳಿಗೆ ಪ್ರವಾಸವನ್ನು ಕೈಗೊಂಡು ಪರಿಶೀಲಿಸಿದರು . ಮೊದಲಿಗೆ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳು ಹಾಗೂ ಅಲ್ಲಿನ ಸ್ವಚ್ಚತೆ ಬಗ್ಗೆ ವೀಕ್ಷಣೆ ಮಾಡಿ ಹೆಚ್ಚುವರಿಯಾಗಿ ಸಿ.ಸಿ.ಟಿ.ವಿ ಕ್ಯಾಮರಾ ಗಳನ್ನು ಅಳವಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಬಿ. ಸಿ. ಎಂ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಯನ್ನು ಆಲಿಸಿದರು. ಸಕಾಲಕ್ಕೆ ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಕಲ್ಪಿಸಲು ಸಾರಿಗೆ ಅಧಿಕಾರಿಗಳಿಗೆ ತಿಳಿಸಿದರು.ಆನಂತರ ಚಿಕ್ಕಬಳ್ಳಾಪುರ ನಗರದ ಕೆ.ಎಸ್. ಆರ್.ಟಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ಬೇಕರಿ ಮತ್ತು ತಿನಿಸು ಮಳಿಗೆಗಳಲ್ಲಿ ಅವಧಿ ಮೀರಿದ ಅನಾರೋಗ್ಯಕಾರಿ ಆಹಾರ ಪದಾರ್ಥಗಳನ್ನು ಹಾಗೂ ತಂಪು ಪಾನೀಯಗಳನ್ನು ಮಾರಟ ಮಾಡುತ್ತಿರುವುದನ್ನು ಗಮನಿಸಿದ ಅಧ್ಯಕ್ಷರು. ಮಳಿಗೆಗಳ ಮಾಲೀಕರನ್ನು ತರಾಟೆಗೆ ತೆಗೆದುಕೊಂಡರು ಜೊತೆಗೆ ಜಿಲ್ಲೆಯಾದ್ಯಂತ ಇಂತಹ ಮಳಿಗೆಗಳನ್ನು ಪರಿಶೀಲಿಸಿ ವರದಿ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಯಾಣಿಕರೊಂದಿಗೆ ಸಂವಾದ ನಡೆಸಿ ಪ್ರಯಾಣಿಕರ ಸಮಸ್ಯೆಗಳನ್ನು ಆಲಿಸಿದರು ಚಿಕ್ಕಬಳ್ಳಾಪುರ ತಾಲೂಕಿನ ಕೊರ್ಲ ಹಳ್ಳಿ ಮಾರ್ಗವಾಗಿ ಚಲಿಸುವ ಸರ್ಕಾರಿ ಬಸ್ ಗಳನ್ನು ನಿಯಮಿತವಾಗಿ ಹೆಚ್ಚಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಚಿಕ್ಕಬಳ್ಳಾಪುರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ರೋಗಿಗಳೊಂದಿಗೆ ಸಂವಾದ ನಡೆಸಿದರು. ಅಲ್ಲಿನ ಸಮಸ್ಯೆ, ಸ್ವಚ್ಚತೆ ಹಾಗೂ ಸೌಕರ್ಯಗಳನ್ನು ವೀಕ್ಷಣೆ ಮಾಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್. ಭಾಸ್ಕರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಆರ್ .ಐ ಖಾಸಿಂ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಬಸವರಾಜ, ಸಮಾಜ ಕಲ್ಯಾಣ ಇಲಾಖೆಯ ತೇಜಾನಂದ ರೆಡ್ಡಿ, ನಿವಾಸಿ ವೈದ್ಯ ರಮೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಮಾನವ ಹಕ್ಕುಗಳ ಆಯೋಗದ ಅಧಿಕಾರಿಗಳು ಮತ್ತು ಸಾರ್ವಜನಿಕರು ಹಾಜರಿದ್ದರು.

# ಜನ ಜಾಗೃತಿಗೆ ಬೀದಿನಾಟಕ ಪ್ರದರ್ಶನಕ್ಕೆ ಚಾಲನೆ



**ಚಿಕ್ಕಬಳ್ಳಾಪುರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕ್ಷೇತ್ರ ಪ್ರಚಾರ ಕಾರ್ಯಕ್ರಮದಡಿ ಜಾನಪದ ಸಂಗೀತ ಮತ್ತು ಬೀದಿನಾಟಕ ಪ್ರದರ್ಶನದ ಮೂಲಕ ಸರ್ಕಾರದ ವಿವಿಧ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಜನ ಸಾಮಾನ್ಯರಿಗೆ ಅರಿವು ಮೂಡಿಸುವ ಉದ್ದೇಶದಿಂದ ಶುಕ್ರವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಆಯೋಜಿಸಿದ್ದ, ಬೀದಿ ನಾಟಕ ಮತ್ತು ಜಾನಪದ ಸಂಗೀತ ಕಾರ್ಯಕ್ರಮಕ್ಕೆ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಹಾಗೂ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ. ಹರೀಶ್ ರವರು ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಮತ್ತು ವಿವಿಧ ಅಭಿವೃದ್ಧಿ ಯೋಜನೆಗಳು ಹಾಗೂ ಹಲವು ಕಾರ್ಯಕ್ರಮಗಳ ಬಗ್ಗೆ ಗ್ರಾಮೀಣರಿಗೆ ಅರಿವು ಮೂಡಿಸುವ ಉದ್ದೇಶದಿಂದ ಚಿಂತಾಮಣಿ ತಾಲ್ಲೂಕಿನ ಸಿದ್ದಾರ್ಥ ಯುವ ಕ್ರೀಡಾ ಸಾಂಸ್ಕೃತಿಕ ಅಭಿವೃದ್ಧಿ ಸಂಘ ಮತ್ತು ಡಾ. ಭೀಮ್ ಟ್ರಸ್ಟ್ ಕಲಾತಂಡಗಳಿಂದ ಜಾನಪದ ಸಂಗೀತ ಕಾರ್ಯಕ್ರಮ ಮತ್ತು ಬೀದಿ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಚಿಂತಾಮಣಿ ತಾಲ್ಲೂಕಿನ ಕೈವಾರ, ಬಟ್ಲಹಳ್ಳಿ, ಬುರುಡುಗುಂಟೆ, ಇರಗಂಪಲ್ಲಿ, ಮುರಗಮಲ್ಲ, ನಂದಿಗಾನಹಳ್ಳಿ, ಭೂಮಿಶೆಟ್ಟಿಹಳ್ಳಿ, ಕೆಂಚಾರ್ಲಹಳ್ಳಿ, ರಾಗುಟ್ಟಹಳ್ಳಿ, ಕೋಟಗಲ್ಲು ಮತ್ತು ಬಾಗೇಪಲ್ಲಿ ತಾಲ್ಲೂಕಿನ ನಲ್ಲಗುಟ್ಲಪಲ್ಲಿ, ರಾಚ್ಚೇರುವು, ಪುಲಗಲ್ಲು, ಮಿಟ್ಟೇಮರಿ, ಸೋಮನಾಥಪುರ, ಬಿಳ್ಳೂರು, ನಾರೇಮದ್ದೇಪಲ್ಲಿ, ಪಾಳ್ಯಕೆರೆ, ಚಾಕವೇಲು, ಚೇಳೂರು ಗ್ರಾಮಗಳಲ್ಲಿ ಜಾನಪದ ಸಂಗೀತ ಮತ್ತು ಬೀದಿ ನಾಟಕ ಪ್ರದರ್ಶಿಸಲಿದ್ದಾರೆ ಎಂದು ತಿಳಿಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಜುಂಜಣ್ಣ, ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್, ಜಿಲ್ಲಾ ಅಂತರ್ಜಲ ಮತ್ತು ಭೂ ವಿಜ್ಞಾನ ಇಲಾಖೆಯ ಜಿಲ್ಲಾ ಹಿರಿಯ ವಿಜ್ಞಾನಿ ಬೋರಪ್ಪ, ಕಲಾತಂಡಗಳ ನಾಯಕರಾದ ಮಂಜುನಾಥ, ನಾರಾಯಣಸ್ವಾಮಿ ಇದ್ದರು.

# ಯೋಜನೆ, ಕಾನೂನಿನ ಬಗ್ಗೆ ಕಾರ್ಮಿಕರಲ್ಲಿ ಅರಿವು ಅತ್ಯವಶ್ಯ

**ಕೋಲಾರ:** ಕಾರ್ಮಿಕ ಸಂಘಟನೆಗಳು, ಸಾರ್ವಜನಿಕರು, ಉದ್ಯೋಗದಾತರು ಹಾಗೂ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿರುವ ಸಂಘಟನೆಯ ಪಾದಾಧಿಕಾರಿಗಳಿಗೆ ಯೋಜನೆ ಮತ್ತು ಕಾನೂನು ಬಗ್ಗೆ ಅರಿವು ಮೂಡಿಸುವಂತಹ ಕಾರ್ಯಕ್ರಮವನ್ನು ಕಾರ್ಮಿಕ ಇಲಾಖೆಯಿಂದ ಏರ್ಪಡಿಸಲಾಗುತ್ತಿದ್ದು, ಇದರ ಪ್ರಯೋಜನ ಪಡೆಯಬೇಕೆಂದು ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷರವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಕಾರ್ಖಾನೆಗಳು ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಉದ್ಯೋಗಿಗಳ ರಾಜ್ಯ ವಿಮಾ ನಿಗಮ, ಉದ್ಯೋಗಿಗಳ ಭವಿ?ನಿಧಿ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಡಳಿತ ಆಡಿಟೋರಿಯಂ ಭವನದಲ್ಲಿ ಹಮ್ಮಿಕೊಂಡಿದ್ದ, ಜಿಲ್ಲಾ ಕಾರ್ಮಿಕ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆ/ ಕಾನೂನುಗಳ ಅರಿವು ಹಾಗೂ ಅಭಿಪ್ರಾಯ ಸಂಗ್ರಹ ಸಂಬಂಧಿತ ಜಿಲ್ಲಾ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರವು ಕಾರ್ಮಿಕರ ಶ್ರೇಯೋಭಿವೃದ್ಧಿಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಕಾರ್ಮಿಕರ ಕೌಶಲ್ಯವನ್ನು ಹೆಚ್ಚಿಸಲು ಹಲವಾರು ಕಾನೂನು ಹಾಗೂ ನಿಯಮಗಳನ್ನು ಜಾರಿಗೆ ಮಾಡಲಾಗಿದೆ. ಈ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ರೂಪಿಸಿದರೆ ಮಾತ್ರ ಜನರಲ್ಲಿ ಜಾಗೃತಿ ಮೂಡುತ್ತದೆ ಎಂದರು. ಕರೋನ ಸಂದರ್ಭದಲ್ಲಿ ಕಾರ್ಮಿಕರು ತುಂಬಾ ಸಮಸ್ಯೆಗಳನ್ನು ಎದುರಿಸಿದ ಘಟನೆಗಳನ್ನು



ನೆನೆಯುತ್ತಾ ಆ ಸಮಯದಲ್ಲಿ ಕಾರ್ಮಿಕ ಇಲಾಖೆಯ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದ ಸಂದರ್ಭವನ್ನು ನೆನಪಿಸಿಕೊಂಡರು. ಸುಮಾರು 5 ಲಕ್ಷ ಬೇರೆ ರಾಜ್ಯದ ಉದ್ಯೋಗಿಗಳಿಗೆ ಆಹಾರ ಹಾಗೂ ತಮ್ಮ ತಮ್ಮ ಊರುಗಳಿಗೆ ಹೋಗಲು ರೈಲು ಸಂಚಾರ ಒದಗಿಸಿದ್ದೆವು ಎಂದರು. ಕಾರ್ಮಿಕರಿಗೆ ಸಂಬಳ ಕೊಡಿಸುವುದರಲ್ಲಿ ಅವರ ಹಿತರಕ್ಷಣೆಯನ್ನು ಕಾಪಾಡುವುದರಲ್ಲಿ ಕಾರ್ಮಿಕ ಅಧಿಕಾರಿಗಳು ಹಿಂಜರಿಯುವುದಿಲ್ಲ ಹಾಗೂ ಹಲವಾರು ಸ್ಕಾಲರ್‌ಶಿಪ್ ನೀಡುತ್ತಿದ್ದು, ಕಾರ್ಮಿಕ ಮಕ್ಕಳು ಕಾರ್ಮಿಕರಾಗಬಾರದು ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ್ ಎಸ್ ಹೊಸಮನಿ ಅವರು ಮಾತನಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಕಾರ್ಮಿಕರಿಗೆ 31 ಕಾನೂನುಗಳು ಇದ್ದರೂ ಸಹ ಅವುಗಳ ಅರಿವಿಲ್ಲದಿರುವುದು ದುರದೃಷ್ಟ ಸಂಗತಿ ಎಂದರು.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಮಂಡಳಿಯಿಂದ ಪಿಂಚಣಿ ಸೌಲಭ್ಯ, ಕುಟುಂಬ ಪಿಂಚಣಿ ಸೌಲಭ್ಯ, ದುರ್ಬಲತೆ ಪಿಂಚಣಿ, ಟೂಲ್ ಕಿಟ್ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ ಶೈಕ್ಷಣಿಕ ಸಹಾಯಧನ, ಅಪಘಾತ ಪರಿಹಾರ ಪ್ರಮುಖ ವೈದ್ಯಕೀಯ ಸಹಾಯಧನ, ಮದುವೆ ಸಹಾಯಧನ ಹಾಗೂ ತಾಯಿ-ಮಗು ಸಹಾಯ ಹಸ್ತ ಸೌಲಭ್ಯಗಳನ್ನು ಮತ್ತು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಿಂದ ಅಪಘಾತ ಪರಿಹಾರ ಸೌಲಭ್ಯ ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚ ಸೌಲಭ್ಯಗಳು ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಅಪಘಾತ ಪರಿಹಾರ ಶೈಕ್ಷಣಿಕ ಧನ ಸಹಾಯ, ಅಪಘಾತ ಜೀವ ರಕ್ಷಕ ಕಾರ್ಯಕ್ರಮಗಳನ್ನು ಪಡೆದುಕೊಂಡು ತಮ್ಮ ಜೀವನವನ್ನು ಉತ್ತಮಪಡಿಸಿಕೊಳ್ಳಬೇಕೆಂದರು.

# ಶಾಲಾ ಮಕ್ಕಳಿಗಾಗಿ ವಿಶೇಷ ಕಾರ್ಯಾಗಾರ

**ಬೆಂಗಳೂರು:** ವಿದ್ಯಾರ್ಥಿಗಳು ದಸರಾ ರಜೆಯನ್ನು ಸದ್ಬಳಕೆ ಮಾಡಿಕೊಳ್ಳಲು Educafé Student Solutions Pvt Ltd ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗಾಗಿ ವಿಶೇಷ ಕಾರ್ಯಗಾರವನ್ನು ಯೋಜಿಸಿದೆ. 6, 7 ಮತ್ತು 8ನೇ ತರಗತಿಯ ಮಕ್ಕಳಿಗಾಗಿ ಇದನ್ನು ವಿಭಿನ್ನವಾಗಿ ರೂಪಿಸಲಾಗಿದೆ. ಎಡುಕೆಫೆ ಶಿಕ್ಷಣ ಮಾರ್ಗದರ್ಶಿ ಸಂಸ್ಥೆಯಾಗಿದ್ದು, ವಿದ್ಯಾರ್ಥಿಗಳ ಕೌಶಲ್ಯ ವೃದ್ಧಿ, ಶೈಕ್ಷಣಿಕ ಗುರಿ ಸಾಧಿಸಲು ವೈಜ್ಞಾನಿಕ ಮಾದರಿಯಲ್ಲಿ ಆಪ್ತಸಮಾಲೋಚನೆಯನ್ನು ಮಾಡುತ್ತಿದೆ. ಪ್ರಸ್ತುತ ಅನುಭವಿ ತರಬೇತುದಾರರ ನೇತೃತ್ವದಲ್ಲಿ ಅಕ್ಟೋಬರ್ 14, 15 ಮತ್ತು 16ನೇ ತಾರೀಕಿನಂದು ಮೂರು ದಿನಗಳ ಕಾಲ ಈ ಕಾರ್ಯಾಗಾರವನ್ನು ಹಮ್ಮಿಕೊಂಡಿದೆ. ಈ ಕಾರ್ಯಗಾರದಲ್ಲಿ ಪರಿಣಾಮಕಾರಿಯಾಗಿ ಸಂವಹನ ಮಾಡುವ ರೀತಿ, ಸಾರ್ವಜನಿಕ ಸಭೆ ಸಮಾರಂಭಗಳನ್ನು ಉದ್ದೇಶಿಸಿ ಮಾತನಾಡುವ ಕಲೆ, ಸಮಕಾಲೀನ ಸಂದರ್ಭಕ್ಕೆ ಅಗತ್ಯ ಕೌಶಲ್ಯ ಮತ್ತು ಜೀವನ ಮೌಲ್ಯವನ್ನು ಕೇಂದ್ರೀಕರಿಸಿ ಅರಿವು ಮೂಡಿಸಲಾಗುವುದು. ಉದ್ದೇಶಿತ ಕಾರ್ಯಗಾರ ಸಂವಾದ ಮಾದರಿಯಲ್ಲಿ ವಿನ್ಯಾಸ ಮಾಡಲಾಗಿದ್ದು, ವಿದ್ಯಾರ್ಥಿಗಳಿಗೆ ಎದುರಾಗುವ ಸಮಸ್ಯೆ ಮತ್ತು ಅದರ ಪರಿಹಾರ ಮಾರ್ಗಗಳನ್ನು ಸೂಚಿಸಲಾಗುವುದು. ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ವ್ಯಕ್ತಿತ್ವ ಬೆಳವಣಿಗೆಗೆ ಸಹಕಾರಿಯಾಗುವ ಈ ಕಾರ್ಯಗಾರವನ್ನು ವಿದ್ಯಾರ್ಥಿಗಳು ಸದುಪಯೋಗ ಮಾಡಿಕೊಳ್ಳಬೇಕೆಂದು ಎಡುಕೆಫೆ ಮುಖ್ಯಸ್ಥರಾದ ಡಾ. ಸುಧಾ ಭೋಗ್ಲೆ ಪ್ರಕಟಣೆಯಲ್ಲಿ ಕೋರಿದ್ದಾರೆ.

**ಕಾರ್ಯಾಗಾರದ ವಿವರ:** ದಿನಾಂಕ: 14, 15 ಮತ್ತು 16ನೇ ಅಕ್ಟೋಬರ್ 2024, ಸಮಯ: ಬೆಳಿಗ್ಗೆ 10.30 - ಮಧ್ಯಾಹ್ನ 1.00, ಸ್ಥಳ: ಮಿಡಾಸ್ (ಒಖಆಂಖ) ಸ್ಕೂಲ್ ಆಫ್ ಎಂಟರ್ ಪ್ರೆನ್ಯೂರ್ ಶಿಪ್, ನಂ. 10, ಶೇಷಾದ್ರಿಪುರಂ ಮುಖ್ಯ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು, ಕರ್ನಾಟಕ 560020 ಹೆಚ್ಚಿನ ಮಾಹಿತಿಗಾಗಿ ಅಥವಾ ನೋಂದಾಯಿಸಲು, ದಯವಿಟ್ಟು ಈ URL ಅನ್ನು ಬಳಸಿ https://forms.gle/LYgja1PvW5XRfNcr9ದೂರವಾಣಿ ಸಂಖ್ಯೆ: 080-41244184 /+91 9740583531 / +91 99866 97973 ವೆಬ್ಸೈಟ್: www.educafe.com ಸಂಪರ್ಕಿಸಬಹುದು.

# ಹಲ್ಲುಗಳು ಹಾಳಾಗುವ ಮುನ್ನ ಎಚ್ಚರವಹಿಸಿ

**ವಿಜಯಪುರ:** ಹಲ್ಲುಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಇಲ್ಲದಿರುವುದೇ ಹಲ್ಲುಗಳು ಹಾಳಾಗಲು ಕಾರಣವೆಂದು ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ದಂತ ವೈದ್ಯರಾದ ಡಾ. ಉದಯ್ ತಿಳಿಸಿದರು.




ವಿಜಯಪುರ ಹೋಬಳಿಯ ಕೋರಮಂಗಲ ಬಯಲು ಬಂದಿ ಖಾನೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶ್ರೀ ಕೃಷ್ಣದೇವರಾಯ ದಂತ ವೈದ್ಯಕೀಯ ಸಂಸ್ಥೆ, ದೇವನಹಳ್ಳಿ ಲಯನ್ ಸಂಸ್ಥೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬಂದಿಖಾನೆಯಲ್ಲಿರುವವರಿಗೆ ಹಾಗೂ ಪೊಲೀಸ್ ಸಿಬ್ಬಂದಿ ವರ್ಗದವರಿಗೆ ದಂತ ತಪಾಸಣೆ ಮತ್ತು ಬಾಯಿಯ ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಪ್ರತಿಯೊಬ್ಬರು ಪ್ರತಿದಿನ ಬೆಳಗ್ಗೆ ಹಾಗೂ ರಾತ್ರಿ ಎರಡು ಬಾರಿ ಹಲ್ಲುಗಳನ್ನು ಸ್ವಚ್ಛಗೊಳಿಸುವುದರೊಂದಿಗೆ, ಯಾವುದೇ ಸಿಹಿ ಅಂಟು ಪದಾರ್ಥಗಳನ್ನು ತಿಂದ ಕೂಡಲೇ ಬಾಯಿಯನ್ನು ಸ್ವಚ್ಛಗೊಳಿಸಬೇಕೆಂದು, ವಸಡುಗಳಲ್ಲಿ ಊತ, ರಕ್ತಸ್ರಾವ, ಹಲ್ಲು ಬಣ್ಣ ಬದಲಾವಣೆಯಾಗುವುದು, ಹುಳುಕಲ್ಲು ಮುಂತಾದ ಯಾವುದೇ ಸಂದರ್ಭದಲ್ಲಿಯೂ ಹತ್ತಿರದಲ್ಲಿನ ಸರ್ಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೋರಮಂಗಲ ಬಯಲು ಬಂಧಿಖಾನೆಯ ಸೂಪರಿಡೆಂಟ್ ಮಂಜುನಾಥ್ ಎಂ ಹುಬ್ಬಳ್ಳಿ, ದಂತ ವೈದ್ಯರುಗಳಾದ ಗ್ಯಾನಕುಮಾರ್, ವೀಣಾ, ಅಮಿತಾ, ಮಾಲಿನಿ, ಶ್ರೀ ಕೃಷ್ಣದೇವರಾಯ ದಂತ ವೈದ್ಯಕೀಯ ಸಂಸ್ಥೆಯ ವೈದ್ಯರುಗಳಾದ ಡಾಕ್ಟರ್ ಮುರಳಿ, ಡಾಕ್ಟರ್ ಸುಚೇತ, ಹಾಗೂ ಕೋರಮಂಗಲ ಬಯಲು ಬಂಧಿಖಾನೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಶಿಬಿರದಲ್ಲಿ 40 ಮಂದಿಗೆ ದಂತ ತಪಾಸಣೆ ನಡೆಸದುದಲ್ಲದೆ ಇವರಿಗೆ ಹಲ್ಲು ಕೀಳುವುದರೊಂದಿಗೆ ಹಲ್ಲುಗಳ ಫಿಲ್ಲಿಂಗು ಹಾಗೂ ಸ್ವಚ್ಛಗೊಳಿಸುವಿಕೆ ನಡೆಸಲಾಗಿದ್ದು ಹೆಚ್ಚಿನ ಅವಶ್ಯಕತೆ ಇರುವವರಿಗೆ ದೇವನಹಳ್ಳಿ ಹಾಗೂ ವಿಜಯಪುರದ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರೆದುಕೊಡಲಾಯಿತು.

# ಗ್ರಾಮ ಪಂಚಾಯಿತಿ ವಿವಿಧ ಪ್ರಶಸ್ತಿ

**ಯಳಂದೂರು:** ತಾಲೂಕಿನ ಬಿಳಿಗಿರಿರಂಗನಬೆಟ್ಟದಲ್ಲಿರುವ ಗ್ರಾಮ ಪಂಚಾಯಿತಿಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆವತಿಯಿಂದ 2023-24 ನೇ ಸಾಲಿನಲ್ಲಿ ವಿವಿಧ ಸೇವೆಗಳ ಆಧಾರದ ಮೇಲೆ ನೀಡಿರುವ ಹಲವು ಪ್ರಶಸ್ತಿಗಳನ್ನು ಪಡೆದುಕೊಂಡಿದೆ.

ತಾಲೂಕಿನ ಬಿಳಿಗಿರಿರಂಗನಬೆಟ್ಟದ ಗ್ರಾಮ ಪಂಚಾಯಿತಿಗೆ 2023-24 ನೇ ಸಾಲಿನ ತೆರಿಗೆ ಪರಿಷ್ಕರಣೆ ಮತ್ತು ತೆರಿಗೆ ಸಮೀಕ್ಷೆ, ಉತ್ತಮವಾಗಿ ಕರ್ತವ್ಯ ನಿರ್ವಹಿಸುವಲ್ಲಿ ಪಿಡಿಒ ಕಾವ್ಯ ಕಾರ್ಯದರ್ಶಿ ನಟರಾಜು ಹಾಗೂ ಬಿಲ್ ಕಲೆಕ್ಟರ್ ನಾಗೇಂದ್ರ, ಸೇವೆಯನ್ನು ಪರಿಗಣಿಸಿ ಚಾಮರಾಜನಗರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾರೌತ್ ಹಾಗೂ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಪ್ರಶಸ್ತಿ ಪತ್ರವನ್ನು ನೀಡಿ ಅಭಿನಂದಿಸಿದ್ದಾರೆ.

ಪಿಡಿಒ ಸಿ.ಎನ್. ಕಾವ್ಯ : ತಾಲೂಕಿನ ಬಿಳಿಗಿರಿರಂಗನಬೆಟ್ಟ ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಸಿಬ್ಬಂದಿಗಳು ಹಾಗೂ ಗ್ರಾಮ ಪಂಚಾಯಿತಿ ಎಲ್ಲಾ ಚುನಾಯಿತ ಸದಸ್ಯರ,



ಸಾರ್ವಜನಿಕರ ಸಹಕಾರದಿಂದ ತೆರಿಗೆ ಪರಿಷ್ಕರಣೆಯನ್ನು ಆಲ್‌ಲೈನ್ ಮೂಲಕ ಮಾಡಿ ಜಿಲ್ಲೆಗೆ ಮಾದರಿಯಾಗಿ ಸಮೀಕ್ಷೆ ಮಾಡಲಾಗಿದೆ. ತೆರಿಗೆಯನ್ನು ಪಾವತಿಸಿದ್ದು, ಉತ್ತಮವಾಗಿ ಕಚೇರಿಯ ನಿರ್ವಹಣೆ ಹಣ ಕಾಸಿನ ಚೆಕ್ ಪುಸ್ತಕ, ಕಂದಾಯ ವಸೂಲಾತಿ ಸೇರಿದಂತೆ ಇತರೆ ಸೇವೆಗಳನ್ನು ಪರಿಗಣಿಸಿ ನೀಡಿರುವುದು ಶ್ಲಾಘನೀಯವಾಗಿದ್ದು ಇದು ನಾವು ಮುಂದೆ ಇನ್ನೂ ಉತ್ತಮ ಕರ್ತವ್ಯ ನಿರ್ವಹಿಸಲು ಇದು ಸ್ಫೂರ್ತಿ ತಂದಿದೆ ಎಂದರು.

# ದಸರಾ ಹಿನ್ನೆಲೆ ಆರೋಗ್ಯವಂತ ಶಿಶುಗಳ ಸ್ಪರ್ಧೆ

**ಯಳಂದೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಆಡಳಿತ ಮತ್ತು ಶಿಶು ಅಭಿವೃದ್ಧಿ ಇಲಾಖೆಯ ವತಿಯಿಂದ ಪಟ್ಟಣದ ಕುಂಬಾರಗುಂಡಿಯಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಶುಕ್ರವಾರ ದಸರಾ ನಿಮಿತ್ತ ಆರೋಗ್ಯವಂತ ಶಿಶುಗಳ ಸ್ಪರ್ಧೆ ನಡೆಯಿತು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಇಲಾಖೆಯ ಮಹಿಳಾ ಮೇಲ್ವಿಚಾರಕಿ ಸರಸ್ವತಿ ಮಾತನಾಡಿ, ಮಹಿಳಾ ದಸರಾ ಹಿನ್ನೆಲೆಯಲ್ಲಿ ಬೇಟಿ ಪಡಾವೋ ಬೇಟ ಬಚಾವೋ ಯೋಜನೆಯಡಿಯಲ್ಲಿ ಜಿಲ್ಲಾಡಳಿತ ಹಾಗೂ ನಮ್ಮ ಇಲಾಖೆಯ ನಿರ್ದೇಶನದಂತೆ ತಾಲೂಕಿನ 6 ತಿಂಗಳಿಂದ ರಿಂದ 2 ವರ್ಷದೊಳಗಿನ ಮಕ್ಕಳಿಗೆ ಈ ಶಿಶು ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ನಮ್ಮ ತಾಲೂಕು ವ್ಯಾಪ್ತಿಗೆ ಒಳಪಡುವ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೂ ಮಾಹಿತಿ ನೀಡಿದ್ದು ತಾಲೂಕಿನಲ್ಲಿ 200 ಕ್ಕೂ ಹೆಚ್ಚು ಶಿಶುಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ. ಇಲ್ಲಿ ತಜ್ಞ ವೈದ್ಯರ ತಂಡ ಭಾಗವಹಿಸಿ ಅವರು ಎಲ್ಲಾ ಮಕ್ಕಳ ಪರೀಕ್ಷೆಯನ್ನು ಮಾಡಲಿದ್ದಾರೆ. ಇದರೊಂದಿಗೆ ಮಕ್ಕಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಎಲ್ಲಾ ಲಸಿಕೆಗಳನ್ನು ನೀಡಿರಬೇಕು, ವಯಸ್ಸಿಗೆ ತಕ್ಕ ತೂಕವನ್ನು ಹೊಂದಿರಬೇಕು, ಲವಲವಿಕೆಯಿಂದ ಇವರಬೇಕು, ಇವರು ಆರೋಗ್ಯವಂತವಾಗಿರಬೇಕು ಎಂಬ ಷರತ್ತು ಇದ್ದು ಇಂತಹ ಮಕ್ಕಳನ್ನು ಇಲಾಖೆಯ ವೈದ್ಯರು ಹಾಗೂ ಶುಶ್ರೂಷಕಿಯರ ತಂಡ ಪರೀಕ್ಷೆ ನಡೆಸಲಿದೆ. ಇದರಲ್ಲಿ ಆಯ್ಕೆಯಾದ 13 ಮಕ್ಕಳನ್ನು ನಾವು ಜಿಲ್ಲಾ ಮಟ್ಟಕ್ಕೆ ಕಳುಹಿಸುತ್ತೇವೆ ಅಲ್ಲಿ ಅವರಿಗೆ ಜಿಲ್ಲಾಡಳಿತದ ವತಿಯಿಂದ ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾಧಾನಕರ ಬಹುಮಾನಗಳನ್ನು ನೀಡಲಾಗುತ್ತದೆ ಎಂದರು.



ಆರೋಗ್ಯ ಇಲಾಖೆಯ ವೈದ್ಯರಾದ ಡಾ. ಪ್ರವೀಣ್, ಡಾ. ನವ್ಯ ನಾಗರತ್ನ, ಪ್ರೀತಿ ಇಲಾಖೆಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ರೇಣುಕಾ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಹಾಗೂ ವಿವಿಧ ಗ್ರಾಮಗಳಿಂದ ಬಂದಿದ್ದ ಮಕ್ಕಳು ಹಾಗೂ ಪೋಷಕರು ಇದ್ದರು.

## ವಿಷಲ್ ಬ್ಲೋವೆರ್ ಪಾಲಿಸಿಯ ಮಾರ್ಗಸೂಚಿ ವೆಬ್‌ಸೈಟ್‌ನಲ್ಲಿ ಲಭ್ಯ

**ಬೆಂಗಳೂರು:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಂಗಸಂಸ್ಥೆಯಾಗಿರುವ 'ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್' ಅಡಿಯಲ್ಲಿ ಆಯು?ಾ್ಮನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ-ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯ ಅನುಷ್ಠಾನದಲ್ಲಿ ಭಾಗಿಯಾಗುವ ಪಾಲುದಾರರ ವಿರುದ್ಧ ಭ್ರ?ಾ್ಟಚಾರ, ಅಧಿಕಾರ ದುರುಪಯೋಗದಂತಹ ಯಾವುದೇ ಆರೋಪಗಳು ಕಂಡುಬಂದಲ್ಲಿ ಆರೋಪಿತರ ವಿರುದ್ಧ ದೂರು/ಮಾಹಿತಿ ನೀಡುವ ಯಾವುದೇ ವ್ಯಕ್ತಿಯ ಗುರುತನ್ನು ಗೌಪ್ಯವಾಗಿಟ್ಟು ಸದರಿ ಪ್ರಕರಣಗಳ ವಿಚಾರಣೆ ನಡೆಸಲು ವಿಷಲ್ ಬ್ಲೋವೆರ್ ಪಾಲಿಸಿಯ ಅನುಷ್ಠಾನ ಕುರಿತು ಸರ್ಕಾರದ ಆದೇಶವಾಗಿದೆ. ಮಾರ್ಗಸೂಚಿಗಳನ್ನು ವೆಬ್‌ಸೈಟ್ http://arogya.karnataka.gov.in ನಲ್ಲಿ ಪಡೆಯಬಹುದಾಗಿದ್ದು, ಈ ಸಂಬಂಧ ಯಾವುದೇ ದೂರುಗಳಿದ್ದರೂ ಮೊಬೈಲ್ ಸಂಖ್ಯೆ 9480819728 ಗೆ ಕರೆಮಾಡಬಹುದು ಎಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಾರ್ಯಕಾರಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 70ನೇ ವನ್ಯಜೀವಿ ಸಪ್ತಾಹ ಆಚರಣೆ:ಛಾಯಾಗ್ರಹಣ ಸ್ಪರ್ಧೆ ವಿಜೇತರ ಘೋಷಣೆ

**ಬೆಂಗಳೂರು:** ಮೈಸೂರು ಮೃಗಾಲಯವು 70 ನೇ ವನ್ಯಜೀವಿ ಸಪ್ತಾಹ ಆಚರಣೆಯ ನಿಮಿತ್ತ ನಡೆದ ಛಾಯಾಚಿತ್ರ ಸ್ಪರ್ಧೆಯ ಇನ್-ಸಿಟ್ಯು ಪ್ರವರ್ಗ ಮತ್ತು ಎಕ್ಸ್-ಸಿಟ್ಯು ಪ್ರವರ್ಗದಲ್ಲಿ ವಿಜೇತರನ್ನು ಘೋಷಿಸಿದೆ. ಇನ್-ಸಿಟ್ಯು ಪ್ರವರ್ಗದಲ್ಲಿ ಶಿವಕುಮಾರ್ ಬಿ ಪ್ರಥಮ ಬಹುಮಾನ, ಶ್ರೀನಿವಾಸ ನಾಯಕ ಆರ್. ದ್ವಿತೀಯ ಬಹುಮಾನ, ಮಧುಸೂಧನ ಎಸ್.ಆರ್. ಅರ್ಹತೆಯ ಪ್ರಮಾಣಪತ್ರ, ಲಂಚನಾ ಎಸ್ ಅರ್ಹತೆಯ ಪ್ರಮಾಣಪತ್ರ ಮತ್ತು ವಿಶ್ರುತ್ ಸಿ ಅರ್ಹತೆಯ ಪ್ರಮಾಣಪತ್ರ, ಹಾಗೂ ಎಕ್ಸ್-ಸಿಟ್ಯು ಪ್ರವರ್ಗದಲ್ಲಿ ಅಮಿತ್ ಎಲ್ ಪ್ರಥಮ ಬಹುಮಾನ, ಲಂಚನಾ ಎಸ್ ದ್ವಿತೀಯ ಬಹುಮಾನ, ಶಿವಕುಮಾರ್ ಬಿ ಅರ್ಹತೆಯ ಪ್ರಮಾಣಪತ್ರ, ಎಂ.ಎಸ್.ಬಸವಣ್ಣ ಅರ್ಹತೆಯ ಪ್ರಮಾಣಪತ್ರ, ಮತ್ತು ಮಧುಸೂದನ ಎಸ್ ಆರ್. ಅವರಿಗೆ ಅರ್ಹತೆಯ ಪ್ರಮಾಣಪತ್ರ ಲಭಿಸಿದ್ದು, ಮೈಸೂರು ಮೃಗಾಲಯವು ಎಲ್ಲಾ ವಿಜೇತರನ್ನು ಅಭಿನಂದಿಸುತ್ತದೆ ಎಂದು ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಯಿ ಮಗುವಿನ ಪತ್ತೆಗಾಗಿ

**ಮಂಡ್ಯ:** ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ದುರಗಮ್ಮ ಗುಡಿ ಹತ್ತಿರ ವಡ್ಡರ ಓಣಿಯ ಮಂಜುಳ (25) ಹಾಗೂ ದೇವರಾಜು (07) ಎಂಬ ತಾಯಿ ಮಗ ಇಬ್ಬರು ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ತಾಯಿ ಮಂಜುಳರವರುಚಹರೆ: 5.2 ಅಡಿ ಎತ್ತರ, ಗೋಧಿ ಮೈಬಣ್ಣ, ಕೋಲು ಮುಖ, ಸಾಧಾರಣ ಶರೀರ, ಕಾಣೆಯಾದ ದಿನ ಕೆಂಪು ಬಣ್ಣದ ಸೀರೆ ರವಿಕೆ ಧರಿಸಿರುತ್ತಾರೆ. ಕಾಣೆಯಾದಮಗ ದೇವರಾಜು ಚಹರೆ:3.0 ಅಡಿ ಎತ್ತೆ, ಗೋಧಿ ಮೈಬಣ್ಣ, ಕೋಲು ಮುಖ, ಸಾಧಾರಣ ಶರೀರ, ಕಾಣೆಯಾದ ದಿನ ನೀಲಿ ಮತ್ತು ಬಿಳಿ ಬಣ್ಣದ ಚೆಕ್ಸ್ ಶರ್ಟ್, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ವ್ಯಕ್ತಿಯ ಸುಳಿವು ಸಿಕ್ಕಲ್ಲಿ ದೂ.ಸಂ: 08232-22488, 9480804800, 9480804855 ಅನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ತಿಳಿಸಿದ್ದಾರೆ.

## ಮಂಡ್ಯದ ಯುವ ಸಾಹಿತಿ ಕಟ್ಟೆ ಕೃಷ್ಣಸ್ವಾಮಿಗೆ ಅಭಿನವಶ್ರೀ ಪ್ರಶಸ್ತಿ

**ಬೀದರ:** ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠ, ಅಭಿನವ ಶ್ರೀ ಪ್ರಕಾಶನ, ಅಭಿನವಶ್ರೀಗಳ 38ನೇ ಜನ್ಮ ದಿನೋತ್ಸವ, 19ನೇ ಪಟ್ಟಾಧಿಕಾರ ವರ್ಧಂತಿ ಮಹೋತ್ಸವ ಹಾಗೂ ಗ್ರಂಥಗಳ ಲೋಕಾರ್ಪಣೆ ಸಮಾರಂಭ ಇತ್ತೀಚೆಗೆ ಬೀದರ್ ಜಿಲ್ಲೆಯ ಬಸವಕಲ್ಯಾಣದ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ನೆರವೇರಿತು. ಈ ಕಾರ್ಯಕ್ರಮದಲ್ಲಿ ಶ್ರೀ ಮಠದ ವತಿಯಿಂದ ಕೊಡಮಾಡುವ ಅಭಿನವಶ್ರೀ ಪ್ರಶಸ್ತಿ ಮಂಡ್ಯದ ಯುವ ಸಾಹಿತಿ ಕಟ್ಟೆ ಕೃಷ್ಣಸ್ವಾಮಿ ಅವರಿಗೆ ಲಭಿಸಿದೆ. ಅಭಿನವಶ್ರೀಗಳ ಮೊಬೈಲ್ ಜಾಗೃತಿ ಪಾದಯಾತ್ರೆ, ಕೃತಿಯಲ್ಲಿ ಉತ್ತಮವಾದ ಕವನ ರಚನೆ ಜೊತೆಗೆ ಯುವ ಬರಹಗಾರನಾಗಿ ಸಾಹಿತ್ಯ ಕೃಷಿಯಲ್ಲಿ ತೊಡಗಿಕೊಂಡು ಹಲವು ಸಾಹಿತ್ಯ ಕೃತಿಗಳನ್ನು ರಚಿಸಿದ್ದಾರೆ. ಅವರ ಸಾಹಿತ್ಯ ಸೇವೆಯನ್ನು ಪರಿಗಣಿಸಿ ಕಟ್ಟೆ ಕೃಷ್ಣಸ್ವಾಮಿ ಅವರಿಗೆ 'ಅಭಿನವಶ್ರೀ ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ ಎಂದು ಶ್ರೀ ವೀರಶೆಟ್ಟಿ ಪಾಟೀಲ್ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮಂಡ್ಯ ತಾಲೂಕಿನ ಮೆಟ್ರಿಕ್ ನಂತರದ ವೃತ್ತಿಪರ ಕೋರ್ಸ್ ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳಿಗೆ 2024-25 ನೇ ಸಾಲಿಗೆ ಬಾಲಕ / ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ -1, 2ಎ, 2ಬಿ, 3ಎ,3ಬಿ,ಪರಿಶಿಷಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರ ಜನಾಂಗದ ವಿದ್ಯಾರ್ಥಿಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅಕ್ಟೋಬರ್ 30ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ.ಸಂ. 8050770004,8050770005 ಅಥವಾಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವೆಬ್ ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ನೆಟ್‌ವರ್ಕ್ ಸುರಕ್ಷತೆ ಬಲಪಡಿಸಿದ ವೊಡಾಫೋನ್ ಐಡಿಯಾ

ಭಾರತದ ಅತಿದೊಡ್ಡ ದೂರಸಂಪರ್ಕ ಸೇವಾ ಸಂಸ್ಥೆಗಳಲ್ಲಿ ಒಂದಾಗಿರುವ ವೊಡಾಫೋನ್ ಐಡಿಯಾ, ತನ್ನ ಗ್ರಾಹಕರ ಮತ್ತು ಉದ್ಯಮ ಗ್ರಾಹಕರಿಗೆ ಹೆಚ್ಚುತ್ತಿರುವ ಸೈಬರ್ ಬೆದರಿಕೆಗಳು ಮತ್ತು ಭದ್ರತಾ ಲೋಪಗಳ ವಿರುದ್ಧ ಸಂಪರ್ಕಜಾಲ ಸುರಕ್ಷತೆಯನ್ನು ಬಲಪಡಿಸಲು ನೋಕಿಯಾ ನೆಟ್ಗಾರ್ಡ್ ಎಂಡ್ಪಾಯಿಂಟ್ ಡಿಟೆಕ್ಷನ್ ಮತ್ತು ರೆಸ್ಪಾನ್ಸ್‌ಸೌಲಭ್ಯ ಅಳವಡಿಸಿಕೊಂಡಿದೆ. ನೆಟ್ಗಾರ್ಡ್ ಇಡಿಆರ್, ದೂರಸಂಪರ್ಕ ಸೌಲಭ್ಯದ ನಿರ್ದಿಷ್ಟ ಬೆದರಿಕೆಯನ್ನು ಪತ್ತೆಹಚ್ಚುವ ಸೌಲಭ್ಯವಾಗಿದ್ದು, ವೊಡಾಫೋನ್ ಐಡಿಯಾಗೆ ಎಂಡ್ ಪಾಯಿಂಟ್ಗೆ ಸಂಬಂಧಿಸಿದ ಸುರಕ್ಷತಾ ದೋಷಗಳನ್ನು ನೈಜ-ಸಮಯದಲ್ಲಿ ಸ್ವಯಂಚಾಲಿತ ಮೇಲ್ವಿಚಾರಣೆ ನೆರವಿನಿಂದ ತ್ವರಿತವಾಗಿ ಪತ್ತೆಹಚ್ಚಲು ಮತ್ತು ದೋಷಗಳ ತೀವ್ರತೆ ತಗ್ಗಿಸಲು ಅವಕಾಶ ನೀಡಲಿದೆ. ಇದು ಸಂಪೂರ್ಣ ಕಾರ್ಯನಿರ್ವಹಣಾ ತಂತ್ರಜ್ಞಾನ ಸಂಪರ್ಕಜಾಲದಲ್ಲಿ ನಿರಂತರ ಸೇವಾ ಲಭ್ಯತೆ ಮತ್ತು ಸಂರಕ್ಷಿತ ಎಂಡ್ಪಾಯಿಂಟ್ಗಳ ಕಾರ್ಯಕ್ಷಮತೆಯನ್ನು ಕಾಪಾಡಿಕೊಳ್ಳುವಾಗ ಭದ್ರತಾ ಲೋಪ ಹಾಗೂ ವ್ಯಾಪಕವಾದ ಪರೀಕ್ಷೆಯ ಅಗತ್ಯವನ್ನು ಕಡಿಮೆ ಮಾಡುತ್ತದೆ ಮತ್ತು ಕಾರ್ಯಾಚರಣೆಯ ವೆಚ್ಚಗಳನ್ನು ಕಡಿಮೆಗೊಳಿಸುತ್ತದೆ.

ನೆಟ್ಗಾರ್ಡ್ ಇಡಿಆರ್-ನ ಸಾಮರ್ಥ್ಯಗಳು ವೊಡಾಫೋನ್ ಐಡಿಯಾ ದ ಅಸ್ತಿತ್ವದಲ್ಲಿರುವ ಭದ್ರತಾ ಪರಿಕರಗಳು ಮತ್ತು ಪ್ರಕ್ರಿಯೆಗಳೊಂದಿಗೆ ಪರಿಪೂರ್ಣವಾಗಿ ಹೊಂದಿಕೊಳ್ಳುತ್ತವೆ. ದೂರಸಂಪರ್ಕ ಸೇವಾಸಂಸ್ಥೆಯ ಸಂಪರ್ಕಜಾಲದ ಭದ್ರತೆಯನ್ನು ಬಲಪಡಿಸುತ್ತವೆ. ಅತ್ಯಾಧುನಿಕ ಸುರಕ್ಷತಾ ಕಾರ್ಯಾಚರಣೆ ಕೇಂದ್ರವನ್ನು ನಿರ್ಮಿಸುವ ವೊಡಾಫೋನ್ ಐಡಿಯಾ-ದ ಕೆಲಸವನ್ನು ಮತ್ತಷ್ಟು ಹೆಚ್ಚಿಸುತ್ತದೆ. ನೆಟ್ಗಾರ್ಡ್ ಇಡಿಆರ್ ಅಳವಡಿಕೆಯ ಆರಂಭದಲ್ಲಿ ವೊಡಾಫೋನ್ ಐಡಿಯಾದ 4ಜಿ ಸಂಪರ್ಕಜಾಲವನ್ನು ಮತ್ತು ಅಂತಿಮವಾಗಿ ಸೇವಾಸಂಸ್ಥೆಯ 5ಜಿ ಸಂಪರ್ಕಜಾಲವನ್ನು ಒಳಗೊಂಡಿದೆ. ವೊಡಾಫೋನ್ ಐಡಿಯಾದ ಮುಖ್ಯ ತಂತ್ರಜ್ಞಾನ ಅಧಿಕಾರಿ ಜಗ್ಬೀರ್ ಸಿಂಗ್ ಅವರು ಮಾತನಾಡಿ, ''ನಮ್ಮ ಸುಧಾರಿತ ಪರಿಹಾರಗಳು ಸರಿಸಾಟಿಯಿಲ್ಲದ ಸಂಪರ್ಕ ಮತ್ತು ಸುರಕ್ಷತೆ ಎರಡನ್ನೂ ಒದಗಿಸುವುದನ್ನು ಖಚಿತಪಡಿಸಿಕೊಳ್ಳುವ ಮುಂದಿನ ಹಂತದ ಸಂಪರ್ಕಜಾಲ ಅಳವಡಿಕೆಗೆ ಚಾಲನೆ ನೀಡುವುದಕ್ಕೆ ವೊಡಾಫೋನ್ ಐಡಿಯಾ ಸಂಪೂರ್ಣವಾಗಿ ಬದ್ಧವಾಗಿದೆಎಂದು ಹೇಳಿದ್ದಾರೆ.

## ಬೇಬಿ ಕಾರ್ನ್ 'ಪಕೋಡ'

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

5 ಬೇಬಿ ಕಾರ್ನ್, ಕಡಲೇ ಹಿಟ್ಟು-2 ಟೇಬಲ್ ಸ್ಪೂನ್, ಅಕ್ಕಿಹಿಟ್ಟು-1 ಟೇಬಲ್ ಸ್ಪೂನ್, ಕೆಂಪು ಮೆಣಸು ಪುಡಿ-1/2 ಟೀ ಸ್ಪೂನ್, ಪುದೀನಾ ಸೊಪ್ಪು-ಸಣ್ಣಗೆ ಹೆಚ್ಚಿದ್ದು. ರುಚಿಗೆ ತಕ್ಕಷ್ಟು ಉಪ್ಪು, ಎಣ್ಣೆ-ಕರಿಯಲು.

### ಮಾಡುವ ವಿಧಾನ

ಮೊದಲು ಬೇಬಿ ಕಾರ್ನ್ ಅನ್ನು ಉದ್ದಕ್ಕೆ ನಾಲ್ಕು ಭಾಗವಾಗಿ ಸೀಳಿಕೊಳ್ಳಿ. ನಂತರ ಅದನ್ನು ಹದ ಗಾತ್ರದ ಚಿಕ್ಕ ತುಂಡುಗಳಾಗಿ ಕತ್ತರಿಸಿಕೊಳ್ಳಿ. ಒಂದು ಬೌಲ್ ಗೆ ಕಡಲೆ ಹಿಟ್ಟು, ಅಕ್ಕಿ ಹಿಟ್ಟು, ಸಣ್ಣಗೆ ಕತ್ತರಿಸಿದ ಪುದೀನಾ ಸೊಪ್ಪು, ಕೆಂಪು ಮೆಣಸಿನ ಪುಡಿ, ಉಪ್ಪು ಹಾಕಿ ನಂತರ ಅದಕ್ಕೆ ಬೇಬಿ ಕಾರ್ನ್ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಸ್ವಲ್ಪ ನೀರು ಚಿಮುಕಿಸಿ ಚೆನ್ನಾಗಿ ಮಿಶ್ರಣ ಮಾಡಿ. ಇದು ತುಂಬಾ ನೀರಾಗಬಾರದು. ನಂತರ ಕುದಿವ ಎಣ್ಣೆಗೆ ಇದನ್ನು ಹಾಕಿ ಡೀಪ್ ಫ್ರೈ ಮಾಡಿದರೆ ರುಚಿಕರವಾದ ಬೇಬಿ ಕಾರ್ನ್ ಪಕೋಡ ಸವಿಯಲು ಸಿದ್ಧ.

## ದಾಖಲೆ ಮುರಿಯುತ್ತಾ ವಿಜಯ್ ದಳಪತಿ 69?



ತಮಿಳಿನ ಸ್ಟಾರ್ ಹೀರೋ ವಿಜಯ್ ದಳಪತಿ ರಾಜಕೀಯದಲ್ಲಿ ಸಕ್ರಿಯರಾಗಲಿದ್ದಾರೆ. ಸಿನಿರಂಗಕ್ಕೆ ಶಾಶ್ವತವಾಗಿ ಬ್ರೇಕ್ ನೀಡುವುದಾಗಿ ಘೋಷಿಸಿದ್ದಾರೆ. ದಳಪತಿ 69 ಅವರ ವೃತ್ತಿಜೀವನದ ಕೊನೆಯ ಚಿತ್ರವಾಗಲಿದೆ. ಹೀಗಾಗಿ ಅವರ ಕೊನೆಯ ಚಿತ್ರದ ಬಗ್ಗೆ ಅಭಿಮಾನಿಗಳಲ್ಲಿ ಹಾಗೂ ಚಿತ್ರರಂಗದಲ್ಲಿ ಕುತೂಹಲ ಮೂಡಿಸಿದೆ..

69 ತಮಿಳು ಸಿನಿಮಾಗಳ ಮೂಲಕ ದಾಖಲೆಗಳನ್ನು ಮುರಿದು ಸಿನಿರಂಗಕ್ಕೆ ಸ್ಮರಣೀಯ ಕೊಡುಗೆ ನೀಡಿರುವ ದಳಪತಿ ವಿಜಯ್ ಈ ರೀತಿ ಯೋಜಿಸುತ್ತಿದ್ದಾರೆಂದು ಯಾರಿಗೂ ಗೊತ್ತಿರಲಿಲ್ಲ.. ಅಷ್ಟೇ ಅಲ್ಲ ಇದುವರೆಗೆ ಅವರ ವೃತ್ತಿ ಜೀವನದಲ್ಲಿ ಅವರ ಯಾವ ಸಿನಿಮಾ ಸಹ 1000 ಕೋಟಿ ಗಳಿಸಿಲ್ಲ.. ಈಗ ಪ್ಯಾನ್ ಇಂಡಿಯಾ ಸಿನಿಮಾಗಳು ಅದರಲ್ಲೂ ತೆಲುಗಿನ ಸ್ಟಾರ್ ಹೀರೋ ಸಿನಿಮಾಗಳು 1000 ಕೋಟಿ ಗುರಿ ತಲುಪುತ್ತಿರುವಾಗ... ಆ ದಾಖಲೆಯನ್ನು ತಮ್ಮ ಮುಂದಿನ ಸಿನಿಮಾ ದಾಟುವ ನಿರೀಕ್ಷೆಯಲ್ಲಿದ್ದಾರೆ ದಳಪತಿ.

ರಾಜಮೌಳಿ ನಿರ್ದೇಶನದ ಬಾಹುಬಲಿ 2 ಚಿತ್ರ ಭಾರತೀಯ ಚಿತ್ರರಂಗದ ಎಲ್ಲಾ ದಾಖಲೆಗಳನ್ನು ಮುರಿದಿದೆ. ಬಾಹುಬಲಿ ತಮಿಳಿನಲ್ಲೂ ಬಿಡುಗಡೆಯಾಗಿ 1000 ಕೋಟಿ ಗಡಿ ದಾಟಿದೆ. ಆದರೆ ಇದುವರೆಗೆ ಯಾವುದೇ ಸಂಪೂರ್ಣ ತಮಿಳು ಚಿತ್ರ ಇಂತಹ ದಾಖಲೆಯನ್ನು ಸಾಧಿಸಿಲ್ಲ.

ಈ ಮೈಲಿಗಲ್ಲು ದಾಟುವ ಮೂಲಕ ತಮ್ಮ ಸಿನಿಮಾ ಅಭಿಮಾನಿಗಳನ್ನು ಸಂತೋಷಪಡಿಸಲು ವಿಜಯ್ ಸಿದ್ಧರಾಗಿದ್ದಾರೆ. ವಿಜಯ್ ಅಭಿನಯದ ಅತಿ ದೊಡ್ಡ ಹಿಟ್ ಚಿತ್ರ ಲಿಯೋ ವಿಶ್ವಾದ್ಯಂತ 620 ಕೋಟಿಗೂ ಹೆಚ್ಚು ಕಲೆಕ್ಷನ್ ಮಾಡಿತ್ತು.. ಸಾವಿರ ಕೋಟಿಯ ಹತ್ತಿರ ಬಂದಿತ್ತು. ಹೀಗಾಗಿ ಅವರ ಕೊನೆಯ ಸಿನಿಮಾವನ್ನು ಇನ್ನಷ್ಟು ಜಾಗರೂಕತೆಯಿಂದ ಪ್ಲಾನ್ ಮಾಡಿದರೆ ಈ ದಾಖಲೆ ದೊಡ್ಡ ಸವಾಲಾಗಲಾರದು.

ಈ ಚಿತ್ರವನ್ನು ಹೆಚ್ ವಿನೋದ್ ನಿರ್ದೇಶಿಸಿದ್ದಾರೆ. ದಳಪತಿ 69ನೇ ಚಿತ್ರದ ಮೂಲಕ 1000 ಕೋಟಿ ದಾಟಿ ವಿಜಯ್ಗೆ ಮತ್ತೊಂದು ದೊಡ್ಡ ಯಶಸ್ಸನ್ನು ನೀಡುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ. ದಳಪತಿ 69 ಸಿನಿಮಾದ ಶೂಟಿಂಗ್ ಶುರುವಾಗಿದ್ದು, ಸದ್ಯ ಅದ್ದೂರಿ ಸೆಟ್ನಲ್ಲಿ ಹಾಡಿನ ಚಿತ್ರೀಕರಣ ನಡೆಯುತ್ತಿದೆ ಎನ್ನಲಾಗಿದೆ. ಈ ಹಾಡಿಗೆ ಶೇಖರ್ ಮಾಸ್ಟರ್ ನೃತ್ಯ ನಿರ್ದೇಶನ ಮಾಡುತ್ತಿದ್ದಾರೆ.. ದಳಪತಿ 69 ಚಿತ್ರಕ್ಕೆ ಅನಿರುದ್ಧ್ ರವಿಚಂದರ್ ಸಂಗೀತ ನೀಡಿದ್ದಾರೆ. ಮಮಿತಾ, ನರೇಶ್, ಪೂಜಾ ಹೆಗ್ಡೆ, ಪ್ರಕಾಶ್ ರಾಜ್, ಗೌತಮ್ ವಾಸುದೇವ್ ಮೆನನ್, ಪ್ರಿಯಾಮಣಿ, ಮೋನಿಶಾ ಬ್ಲಾಸಿ ಮತ್ತು ಪ್ರಕಾಶ್ ರಾಜ್ ಚಿತ್ರದಲ್ಲಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ಚಿತ್ರಕ್ಕೆ ಸತ್ಯನ್ ಸೂರ್ಯನ್ ಛಾಯಾಗ್ರಹಣ ಇದೆ.

## ಬೆಲ್ಲ - ಕಡಲೆ ಕಾಳು ಪ್ರಯೋಜನ

### ಹೆಲ್ತ್ ಟಿಪ್ಸ್



ಕೆಲವು ರೀತಿಯ ನೈಸರ್ಗಿಕ ಪದಾರ್ಥಗಳು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ ಎಂದು ತಜ್ಞರು ಹೇಳುತ್ತಾರೆ. ಅಂತಹವುಗಳಲ್ಲಿ ಬೆಲ್ಲವು ಒಂದು. ಬೆಲ್ಲವು ಹಲವಾರು ಆರೋಗ್ಯಕಾರಿ ಪ್ರಯೋಜನಗಳನ್ನ ಹೊಂದಿದೆ ಎಂದು ಹೇಳಬೇಕಾಗಿಲ್ಲ. ಆದ್ರೆ, ಬೆಲ್ಲ ಮತ್ತು ಬೇಳೆಕಾಳುಗಳನ್ನು ಒಟ್ಟಿಗೆ ಸೇವಿಸುವುದರಿಂದ ದೇಹದಲ್ಲಿ ಅದ್ಭುತ ಬದಲಾವಣೆಗಳಾಗುತ್ತವೆ ಎನ್ನುತ್ತಾರೆ ತಜ್ಞರು.

ಕಡಲೆ ಮತ್ತು ಬೆಲ್ಲವನ್ನ ಒಟ್ಟಿಗೆ ಸೇವಿಸುವುದರಿಂದ ದೇಹದಲ್ಲಿ ಏನೆಲ್ಲಾ ಬದಲಾವಣೆಗಳು ಆಗುತ್ತವೆ ಎಂಬುದನ್ನ ಈಗ ತಿಳಿದುಕೊಳ್ಳೋಣ.

ಬೆಲ್ಲವು ಆರೋಗ್ಯಕ್ಕೆ ಉತ್ತಮವಾದ ಆಂಟಿಆಕ್ಸಿಡೆಂಟ್ ಮತ್ತು ಸೆಲೆನಿಯಂನಂತಹ ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಕಡಲೆಯನ್ನು ಬೆಲ್ಲದೊಂದಿಗೆ ತಿನ್ನುವುದರಿಂದ ದೇಹದಲ್ಲಿ ಹಿಮೋಗ್ಲೋಬಿನ್ ಹೆಚ್ಚಾಗ್ತುತ್ತದೆ. ರಕ್ತಹೀನತೆಯಿಂದ ಬಳಲುತ್ತಿರುವವರಿಗೆ ಇದು ರಾಮಬಾಣ ಎಂದೇ ಹೇಳಬಹುದು. ಅದರಲ್ಲೂ ತರಾತುರಿಯಲ್ಲಿ ತೆಗೆದುಕೊಂಡರೆ ಲಾಭ ಹೆಚ್ಚು ಎನ್ನುತ್ತಾರೆ. ಪ್ರತಿರಕ್ಷಣಾ ವ್ಯವಸ್ಥೆಯನ್ನ ಬಲಪಡಿಸುವಲ್ಲಿ ಉಪಯುಕ್ತವಾಗಿದೆ. ಇದರಿಂದ ಋತುಮಾನದ ರೋಗಗಳನ್ನ ತಡೆಯಬಹುದು. ಆಗಾಗ್ಗೆ ಕಾಯಿಲೆಗಳಿಂದ ಬಳಲುತ್ತಿರುವವರು ಕಡಲೆಯನ್ನು ಬೆಲ್ಲದೊಂದಿಗೆ ಬೆರೆಸಿ ಸೇವಿಸುವುದರಿಂದ ರೋಗನಿರೋಧಕ ಶಕ್ತಿ ಬಲಗೊಳ್ಳುತ್ತದೆ.

ಬೆಲ್ಲ ಮತ್ತು ಬೀನ್ಸ್ ಕೂಡ ಮೂಳೆಗಳನ್ನ ಗಟ್ಟಿಯಾಗಿಸಲು ಸಹಾಯ ಮಾಡುತ್ತದೆ ಎಂದು ತಜ್ಞರು ಹೇಳುತ್ತಾರೆ. ಬೆಲ್ಲದಲ್ಲಿರುವ ಕ್ಯಾಲ್ಸಿಯಂ ಮೂಳೆಗಳನ್ನ ಬಲಪಡಿಸುತ್ತದೆ. ಬೆಲ್ಲ ಮತ್ತು ಕಡಲೆ ಮೆದುಳಿನ ಆರೋಗ್ಯವನ್ನ ಕಾಪಾಡಿಕೊಳ್ಳಲು ಸಹ ಉಪಯುಕ್ತವಾಗಿದೆ. ಇದು ಸ್ಮರಣೆಯನ್ನು ಸುಧಾರಿಸುತ್ತದೆ. ಇದನ್ನು ವಿಶೇಷವಾಗಿ ಮಕ್ಕಳಿಗೆ ನೀಡುವುದರಿಂದ ಜ್ಞಾಪಕಶಕ್ತಿ ವೃದ್ಧಿಸುತ್ತದೆ.

ನೀವು ತೂಕ ಇಳಿಸಿಕೊಳ್ಳಲು ಬಯಸಿದರೆ, ನೀವು ಪ್ರತಿದಿನ ಬೆಳಿಗ್ಗೆ ಬೆಲ್ಲ ಮತ್ತು ಮೆಂತ್ಯದ ಮಿಶ್ರಣವನ್ನ ತೆಗೆದುಕೊಳ್ಳಬೇಕು ಎಂದು ತಜ್ಞರು ಹೇಳುತ್ತಾರೆ. ಇದು ತ್ವರಿತವಾಗಿ ಪೂರ್ಣತೆಯ ಭಾವನೆಯನ್ನ ಉಂಟು ಮಾಡುತ್ತದೆ. ಇದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ. ಬೆಲ್ಲ ಮತ್ತು ಕಡಲೆ ಕೂಡ ಮಲಬದ್ಧತೆಯನ್ನ ನಿಯಂತ್ರಿಸಲು ಸಹಾಯ ಮಾಡುತ್ತದೆ.

## ರಾಮನಗರ ಜಿಲ್ಲೆಯ ಎರಡು ಸರ್ಕಾರಿ ಶಾಲೆಗಳ ಶೈಕ್ಷಣಿಕ ಮೂಲ ಸೌಲಭ್ಯ ಹೆಚ್ಚಿಸಿದ ಟಿಕೆಎಂ



ಗ್ರಾಮೀಣ ಪ್ರದೇಶಗಳಲ್ಲಿ ಅತ್ಯುತ್ತಮ ಅತ್ಯಾಧುನಿಕ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಮಹತ್ತರ ಕೆಲಸ ಮಾಡುತ್ತಿರುವ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ) ಸಂಸ್ಥೆಯು ಇಂದು ರಾಮನಗರ ಜಿಲ್ಲೆಯ ಎರಡು ಸರ್ಕಾರಿ ಶಾಲೆಗಳಲ್ಲಿ ಹೊಸದಾಗಿ ಆಧುನೀಕರಿಸಿದ ಮೂಲ ಸೌಲಭ್ಯಗಳನ್ನು ಪೂರ್ಣಗೊಳಿಸಿ ಶಾಲೆಗಳಿಗೆ ಹಸ್ತಾಂತರಿಸಿದೆ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಕ್ಕರೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೋಡಂಬಳ್ಳಿಯ ಆಧುನಿಕ ಮೂಲ ಸೌಲಭ್ಯಗಳ ಹಸ್ತಾಂತರ ಕಾರ್ಯಕ್ರಮವು ಕರ್ನಾಟಕ ಸರ್ಕಾರದ ಗೌರವಾನ್ವಿತ ಉಪಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರ ಉಪಸ್ಥಿತಿಯಲ್ಲಿ ನಡೆಯಿತು. ಸ್ಥಳೀಯ ಜನರಿಗೆ ಅಗತ್ಯವಿರು ಅತ್ಯಾಧುನಿಕ ಕಲಿಕೆಯ ಪರಿಸರವನ್ನು ಒದಗಿಸುವ ಟಿಕೆಎಂ ಸಂಸ್ಥೆಯ ಬದ್ಧತೆಯನ್ನು ಈ ಯೋಜನೆಯು ತೋರಿಸಿಕೊಟ್ಟಿದೆ. ಟಿಕೆಎಂ ಸಂಸ್ಥೆಯು ಈಗಾಗಲೇ 13 ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಲಭ್ಯ ಆಧುನೀಕರಣಗೊಳಿಸುವ ಯೋಜನೆಗಳನ್ನು ಪೂರ್ಣಗೊಳಿಸಿದೆ.

ಆಧುನೀಕರಣ ಯೋಜನೆಯ ಮೂಲಕ ಆಧುನಿಕ ತರಗತಿ ಕೊಠಡಿಗಳು, ಸಿಬ್ಬಂದಿ ಕೊಠಡಿ, ಅಡುಗೆ ಕೋಣೆ, ಅತ್ಯಾಧುನಿಕ ವಿಜ್ಞಾನ ಪ್ರಯೋಗಾಲಯ, ಕಂಪ್ಯೂಟರ್ ಕೊಠಡಿ, ಕ್ರೀಡಾ ಕೊಠಡಿ ಮತ್ತು ಬಾಲಕ ಬಾಲಕಿಯರಿಗಾಗಿ ಪ್ರತ್ಯೇಕ ಶೌಚಾಲಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಶಾಲೆಗೆ ಸಂಪೂರ್ಣವಾಗಿ ಬೆಂಚುಗಳು, ಡೆಸ್ಕ್ ಗಳು, ಕುರ್ಚಿಗಳು, ಮೇಜುಗಳು, ಗ್ರಂಥಾಲಯದ ರಾಕ್ ಗಳು ಮತ್ತು ಪ್ರಯೋಗಾಲಯದ ಪೀಠೋಪಕರಣಗಳು ಇತ್ಯಾದಿಗಳನ್ನು ಒದಗಿಸಲಾಗಿದ್ದು, ಮಕ್ಕಳಿಗೆ ಅನುಕೂಲಕರ ಕಲಿಕಾ ವಾತಾವರಣವನ್ನು ಸೃಷ್ಟಿಸಲಾಗಿದೆ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಕ್ಕರೆಯಲ್ಲಿ 1 ರಿಂದ 7ನೇ ತರಗತಿಗಳಲ್ಲಿ 424 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಈ ಶಾಲೆಯು 14408 ಚದರ ಅಡಿಗಳಷ್ಟು ವಿಸ್ತಾರವಾದ ಜಾಗವನ್ನು ಹೊಂದಿದೆ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೋಡಂಬಳ್ಳಿಯಲ್ಲಿ 1ರಿಂದ 10ನೇ ತರವತಿವರೆಗೆ 765ರಷ್ಟು ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಈ ಶಾಲೆಯು 20178 ಚದರ ಅಡಿಗಳಷ್ಟು ವಿಸ್ತಾರ ಪ್ರದೇಶವನ್ನು ಹೊಂದಿದೆ. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಕ್ಕರೆ ಅಭಿವೃದ್ಧಿ ಯೋಜನೆಗೆ ರೂ. 4.35 ಕೋಟಿ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೋಡಂಬಳ್ಳಿ ಅಭಿವೃದ್ಧಿ ಯೋಜನೆಗೆ ರೂ. 5.14 ಕೋಟಿ ಹಣವನ್ನು ಟಿಕೆಎಂ ನೀಡಿದೆ. ಈ ಮೂಲಕ ಶಾಲೆಯ ನಿರ್ದಿಷ್ಟ ಅಗತ್ಯತೆಗಳನ್ನು ಪೂರೈಸಲಾಗಿದೆ ಮತ್ತು ಎರಡೂ ಶಾಲೆಗಳು ತಮ್ಮ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡಲು ಸಜ್ಜಾಗಿರುವಂತೆ ನೋಡಿಕೊಳ್ಳಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಟಿಕೆಎಂ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಮತ್ತು ಮುಖ್ಯ ಸಂವಹನ ಅಧಿಕಾರಿ ಶ್ರೀ ಸುದೀಪ್ ದಳವಿ ಅವರು, ''ಶಿಕ್ಷಣವು ಬಹಳ ಮುಖ್ಯ ಮತ್ತು ಪ್ರಗತಿಪರ ಜನಸಮುದಾಯಕ್ಕೆ ಗಟ್ಟಿ ಅಡಿಪಾಯ ಎಂಬುದನ್ನು ಟಿಕೆಎಂ ನಂಬುತ್ತದೆ. ಒಂದು ಜವಾಬ್ದಾರಿಯುತ ಸಂಸ್ಥೆಯಾಗಿ ನಾವು ರಾಜ್ಯ ಮತ್ತು ರಾಷ್ಟ್ರದ ಒಟ್ಟಾರೆ ಅಭಿವೃದ್ಧಿಯಲ್ಲಿ ಶಿಕ್ಷಣದ ಪಾತ್ರದ ಪ್ರಾಮುಖ್ಯತೆಯನ್ನು ಅರಿತುಕೊಂಡು ಗ್ರಾಮೀಣ ಪ್ರದೇಶದ ಶಿಕ್ಷಣ ವ್ಯವಸ್ಥೆಯನ್ನು ಅಭಿವೃದ್ಧಿಗೊಳಿಸಲು ಬದ್ಧರಾಗಿದ್ದೇವೆ. ಶಾಲೆಗಳಾದ್ಯಂತ ಅತ್ಯಾಧುನಿಕ ಸೌಲಭ್ಯಗಳನ್ನು ಒದಗಿಸುವ ಮೂಲಕ, ಕುತೂಹಲಕ್ಕೆ ನೀರೆರೆಯುವ, ಕಲಿಕೆಗೆ ಪ್ರೋತ್ಸಾಹಿಸುವ ಮತ್ತು ವಿದ್ಯಾರ್ಥಿಗಳು ಯಶಸ್ವಿಯಾಗಲು ಅಗತ್ಯವಿರುವ ಸಾಧನಗಳಿರುವ ಕಲಿಕಾ ವಾತಾವರಣವನ್ನು ಸೃಷ್ಟಿಸುವ ಗುರಿಯನ್ನು ನಾವು ಹೊಂದಿದ್ದೇವೆ. ರಾಮನಗರದಲ್ಲಿ ನಮ್ಮ ಸಂಸ್ಥೆಯು ಸಹಯೋಗದ ಕೆಲಸಗಳಿಂದ ಮುನ್ನಡೆಯುತ್ತಿದೆ'' ಎಂದು ಹೇಳಿದರು.

2001ರಿಂದಲೂ ಸಿಎಸ್‌ಆರ್ ಯೋಜನೆಗಳು ಟಿಕೆಎಂ ಸಂಸ್ಥೆಯ ಫಿಲಾಸಫಿಯ ಅವಿಭಾಜ್ಯ ಅಂಗವಾಗಿದೆ. ಶಿಕ್ಷಣ, ಪರಿಸರ, ನೈರ್ಮಲ್ಯ, ಆರೋಗ್ಯ, ರಸ್ತೆ ಸುರಕ್ಷತೆ ಮತ್ತು ಕೌಶಲ್ಯ ಅಭಿವೃದ್ಧಿ ವಿಚಾರಗಳಲ್ಲಿ ಮಹತ್ವದ ಕೊಡುಗೆಯನ್ನು ನೀಡುತ್ತಿದೆ. ಹಲವು ವರ್ಷಗಳಿಂದ ಕರ್ನಾಟಕದಲ್ಲಿ ಗುಣಮಟ್ಟದ ಶಿಕ್ಷಣ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಟಿಕೆಎಂ ಹಲವಾರು ಯೋಜನೆಗಳನ್ನು ಕೈಗೊಂಡಿದೆ.

## ಪಾದದ ಬಿರುಕಿಗೆ ಮನೆ ಮದ್ದು

### ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ಪಾದದ ರಕ್ಷಣೆ ಬಹಳ ಮುಖ್ಯ. ಬಿರುಕು ಬಿಟ್ಟ ಪಾದಗಳು ಯಮ ಹಿಂಸೆ ನೀಡುತ್ವೆ. ಚಳಿಗಾಲ ಮುಗಿದ್ರೆ ಸಾಕು ಎನ್ನುವ ಪರಿಸ್ಥಿತಿ ಕೆಲವರಿಗಿರುತ್ತದೆ. ಹಾಗಾಗಿ ಚಳಿಗಾಲದಲ್ಲಿ ಪಾದಗಳ ಬಗ್ಗೆ ವಿಶೇಷ ಗಮನ ನೀಡಬೇಕಾಗುತ್ತದೆ. ಕೆಲಸದ ಒತ್ತಡದ ಮಧ್ಯೆಯೂ ಪಾದಗಳ ಆರೈಕೆ ಮಾಡಿಕೊಳ್ಳಬೇಕು. ಸಮಯ-ಸಮಯಕ್ಕೆ ಪೆಡಿಕ್ಯೂರ್ ಮಾಡಿಕೊಳ್ಳಬೇಕು. ಅದಕ್ಕಾಗಿ ನೀವು ಬ್ಯೂಟಿ ಪಾರ್ಲರ್ ಗೆ ಹೋಗಬೇಕೆಂದೇನಿಲ್ಲ. ಮನೆಯಲ್ಲಿ ಸುಲಭವಾಗಿ ಮಾಡಿಕೊಳ್ಳಬಹುದು. ಬಿಸಿ ನೀರಿಗೆ ಸ್ವಲ್ಪ ಶಾಂಪೂ ಬೆರೆಸಿ ಅದರಲ್ಲಿ ಪಾದವನ್ನಿಡಿ. ಇದರಿಂದ ಡೆಡ್ ಸ್ಕಿನ್ ದೂರವಾಗುವ ಜೊತೆಗೆ ಬಿರುಕಿನಲ್ಲಿ ಸಿಲುಕಿರುವ ಕೆಸರು ಹೋಗುತ್ತದೆ. ಅರಿಶಿನ ಹಾಗೂ ಆಲಿವ್ ಆಯಿಲ್ ಒಡಕು ನಿವಾರಣೆಗೆ ಮನೆ ಮದ್ದು. ಅರಿಶಿನ ಪುಡಿಗೆ ಆಲಿವ್ ಆಯಿಲ್ ಸೇರಿಸಿ ಪೇಸ್ಟ್ ಸಿದ್ಧಪಡಿಸಿಕೊಳ್ಳಿ. ನಂತ್ರ ಅದನ್ನು ಒಡೆದ ಪಾದಗಳಿಗೆ ಹಚ್ಚಿಕೊಳ್ಳಿ. ಕೆಲವು ದಿನ ಹೀಗೆ ಮಾಡುತ್ತ ಬಂದಲ್ಲಿ ನಿಮ್ಮ ಪಾದ ಕೋಮಲ ಹಾಗೂ ಮೃದುವಾಗುತ್ತದೆ. ವ್ಯಾಕ್ಸ್ ಮತ್ತು ತೆಂಗಿನೆಣ್ಣೆ ಸೇರಿಸಿ ಮಾಡಿದ ಮಿಶ್ರಣವನ್ನೂ ನೀವು ಪಾದಗಳಿಗೆ ಹಚ್ಚಬಹುದು. ಇದು ಪಾದಗಳ ಉರಿಯನ್ನು ಕಡಿಮೆ ಮಾಡುತ್ತದೆ. ವ್ಯಾಕ್ಸ್ ಹಾಗೂ ತೆಂಗಿನೆಣ್ಣೆಯನ್ನು ಸ್ವಲ್ಪ ಕುದಿಸಿ. ತಣ್ಣಗಾದ ನಂತ್ರ ರಾತ್ರಿ ಹಚ್ಚಿ ಮಲಗುವುದು ಬಹಳ ಒಳ್ಳೆಯದು. ಗ್ಲಿಸರಿನ್ ಹಾಗೂ ರೋಸ್ ವಾಟರ್ ಮಿಶ್ರಣವನ್ನು ಸಿದ್ಧಮಾಡಿಕೊಳ್ಳಿ. ಒಂದು ಚಮಚ ಗ್ಲಿಸರಿನ್ ಗೆ 2 ಚಮಚ ರೋಸ್ ವಾಟರ್ ಅಳತೆಯಂತೆ ನಿಮಗೆ ಎಷ್ಟು ಬೇಕು ಅಷ್ಟು ಮಿಶ್ರಣವನ್ನು ಸಿದ್ಧಪಡಿಸಿ ಒಂದು ಬಾಟಲಿಯಲ್ಲಿ ಹಾಕಿಟ್ಟುಕೊಳ್ಳಿ. ಪ್ರತಿದಿನ ರಾತ್ರಿ ಪಾದಗಳಿಗೆ ಹಚ್ಚಿ. ನಾಲ್ಕೈದು ದಿನದಲ್ಲಿ ಪರಿಣಾಮ ಕಾಣುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅಧಿಕ ಧನಾಗಮನ, ಪ್ರೀತಿ ಪ್ರೇಮ ವಿಶ್ವಾಸಕ್ಕೆ ದ್ರೋಹ, ಮಕ್ಕಳ ನಡತೆಯಿಂದ ಆತಂಕ.

**ವೃಷಭ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಶತ್ರುಗಳಿಂದ ನೋವು, ಸಾಲ ಮಾಡುವ ಸನ್ನಿವೇಶ, ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಪ್ರೀತಿ ಪ್ರೇಮ ವಿಷಯದಲ್ಲಿ ಆತಂಕ, ಅಧಿಕ ಖರ್ಚು, ಅತಿಯಾದ ಭಾವನೆಗಳು ಕಾಡುವುದು.

**ಕಟಕ:** ಸ್ನೇಹಿತರಿಂದ ಆರ್ಥಿಕ ನಷ್ಟ, ಗುಪ್ತ ವಿಷಯಗಳಿಂದ ಸಮಸ್ಯೆ , ಸ್ಥಿರಾಸ್ತಿ ಅಥವಾ ವಾಹನದಿಂದ ಮೋಸ.

**ಸಿಂಹ:** ಉದ್ಯೋಗ ಸ್ಥಳದಲ್ಲಿ ನೋವು, ಬಂಧು ಬಾಂಧವರಿಂದ ಸಮಸ್ಯೆ, ವಿಲಾಸಿ ಜೀವನಕ್ಕೆ ಬಲಿಯಾಗುವಿರಿ.

**ಕನ್ಯಾ:** ಸ್ನೇಹಿತರಿಂದ ಆರ್ಥಿಕ ನೆರವು, ದೂರ ಪ್ರದೇಶದಲ್ಲಿ ಉದ್ಯೋಗ ಲಾಭ, ಸ್ವಂತ ಉದ್ಯೋಗದವರಿಗೆ ಅನುಕೂಲ, ಉತ್ತಮ ಅವಕಾಶ.

**ತುಲಾ:** ಅನಿರೀಕ್ಷಿತವಾಗಿ ಮಿತ್ರರ ಭೇಟಿ, ಭಾವನೆ ಕಲ್ಪನೆಗಳಲ್ಲಿ ವಿಹರಿಸುವಿರಿ, ವ್ಯವಹಾರ ಕ್ಷೇತ್ರದಲ್ಲಿ ಅನುಕೂಲ.

**ವೃಶ್ಚಿಕ:** ಸಂಗಾತಿಯಿಂದ ಸಮಸ್ಯೆ, ಆಕಸ್ಮಿಕ ಅವಘಡ, ಪ್ರಯಾಣದಿಂದ ನಷ್ಟ, ಉದ್ಯೋಗ ಸ್ಥಳದಲ್ಲಿ ಸಂಶಯ

**ಧನಸ್ಸು:** ಅನಾರೋಗ್ಯ ಸಮಸ್ಯೆ, ಸಾಲಭಾದೆ ಮತ್ತು ಶತ್ರು ಕಾಟ, ಭವಿಷ್ಯದ ಚಿಂತೆ ಕಾಡುವುದು, ಬಂಧುಗಳಿಂದ ಲಾಭ

**ಮಕರ:** ಪ್ರೀತಿಯ ಬಲೆಯಲ್ಲಿ ಸಿಲುಕುವಿರಿ, ಉದ್ಯೋಗದಲ್ಲಿ ಅನುಕೂಲ, ಉತ್ತಮ ಹೆಸರು, ಅಧಿಕ ಖರ್ಚು

**ಕುಂಭ :** ಮಕ್ಕಳು ವಾಹನದ ಅಭಿಲಾಷೆ ವ್ಯಕ್ತಪಡಿಸುವರು, ಪ್ರಯಾಣದಲ್ಲಿ ಶತ್ರು ಕಾಟ, ತಂದೆಯಿಂದ ಅನುಕೂಲ, ಉನ್ನತ ವಿದ್ಯಾ ಯೋಗ

**ಮೀನ:** ಮಕ್ಕಳಿಂದ ಆಕಸ್ಮಿಕ ಅವಘಡ, ಬಂಧುಗಳೊಂದಿಗೆ ಉತ್ತಮ ಬಾಂಧವ್ಯ , ವಿನಾಕಾರಣ ಕಲಹಗಳು, ಆಯುಷ್ಯ ಜ್ಞಾನದ ಬಗ್ಗೆ ಚಿಂತೆ

## ಶೂನ್ಯ ಇನ್‌ಬಾಕ್ಸ್ ದಿನ

ಪ್ರತಿ ವರ್ಷ, ಅಕ್ಟೋಬರ್ 6 ರಂದು ಶೂನ್ಯ ಇನ್ಬಾಕ್ಸ್ ದಿನವು ಜನರಿಗೆ, ವಿಶೇಷವಾಗಿ ಕಾರ್ಯನಿರತ ವೃತ್ತಿಪರರು ಮತ್ತು ಕಾರ್ಯನಿರ್ವಾಹಕರಿಗೆ, ದೈನಂದಿನ ಇಮೇಲ್ಗಳ ಅಂತ್ಯವಿಲ್ಲದ ವಾಗ್ದಾಳಿಯಿಂದ ಮುಳುಗುವುದನ್ನು ತಪ್ಪಿಸಲು ಹೊಸ ಮಾರ್ಗಗಳನ್ನು ಕಲಿಯುವ ಅವಕಾಶವನ್ನು ನೀಡುತ್ತದೆ. ಜನರು ಸಾಮಾನ್ಯವಾಗಿ ಬಹು ಇಮೇಲ್ ಖಾತೆಗಳನ್ನು ಹೊಂದಿರುತ್ತಾರೆ ಮತ್ತು ಒಂದು ದಿನದಲ್ಲಿ ಹಲವಾರು ಇಮೇಲ್ಗಳನ್ನು ಸ್ವೀಕರಿಸುತ್ತಾರೆ. ಪ್ರಮುಖವಲ್ಲದ ಇಮೇಲ್ಗಳನ್ನು ಪ್ರತ್ಯೇಕಿಸಲು ಇದು ಸಮಯ ತೆಗೆದುಕೊಳ್ಳುತ್ತದೆ ಮತ್ತು ಒತ್ತಡವನ್ನು ಉಂಟುಮಾಡಬಹುದು. ವಿಭಿನ್ನ ತಂತ್ರಗಳು ಮತ್ತು ಅಪ್ಲಿಕೇಶನ್ಗಳನ್ನು ಅನ್ವೇಷಿಸುವುದು ಇಮೇಲ್ಗಳ ಸಮುದ್ರದ ಮೂಲಕ ನ್ಯಾವಿಗೇಟ್ ಮಾಡಲು ನಮಗೆ ಸಹಾಯ ಮಾಡುತ್ತದೆ, ಸಾಕಷ್ಟು ಸಮಯ ಮತ್ತು ಶಕ್ತಿಯನ್ನು ಉಳಿಸುತ್ತದೆ.

ಶೂನ್ಯ ಇನ್ಬಾಕ್ಸ್ ದಿನವು ಬಹಳ ಇತ್ತೀಚಿನ ಈವೆಂಟ್ ಆಗಿದ್ದು, ಜನರು ತಮ್ಮ ಸಮಯದೊಂದಿಗೆ ಹೆಚ್ಚು ಉತ್ಪಾದಕರಾಗಲು ಇದು ಸಹಾಯ ಮಾಡುತ್ತದೆ.ಅಪ್ಲಿಕೇಶನ್ ಡೆವಲಪರ್ ಸೂಪರ್ಹ್ಯೂಮನ್ ಅವರು ಅಕ್ಟೋಬರ್ 2020 ರಲ್ಲಿ ಇನ್ಬಾಕ್ಸ್ ಶೂನ್ಯ ದಿನವನ್ನು ಪ್ರಾರಂಭಿಸಿದರು. ಉದ್ಯಮಶೀಲತೆಯ ಬೆಳವಣಿಗೆ ಮತ್ತು ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನರು ತಮ್ಮ ವ್ಯವಹಾರಗಳನ್ನು ಆನ್ಲೈನ್ನಲ್ಲಿ ನಡೆಸುತ್ತಿರುವ ಕಾರಣ ಇತ್ತೀಚಿನ ದಿನಗಳಲ್ಲಿ ಈ ದಿನದ ಪ್ರಾಮುಖ್ಯತೆ ಹೆಚ್ಚಾಗಿದೆ. ಪರಿಣಾಮವಾಗಿ, ಜನರು ಕೆಲವು ವರ್ಷಗಳ ಹಿಂದೆ ಬಳಸಿದ್ದಕ್ಕಿಂತ ಹೆಚ್ಚಿನ ಇಮೇಲ್ಗಳನ್ನು ಸಾಮಾನ್ಯ ದಿನದಂದು ಸ್ವೀಕರಿಸುತ್ತಿದ್ದಾರೆ.

ಯುವ ವಾಣಿಜ್ಯೋದ್ಯಮಿ ಅಥವಾ ಅನುಭವಿ ಕಚೇರಿ ಕಾರ್ಯ ನಿರ್ವಾಹಕರು ಉದ್ಯಮಶೀಲತೆಯ ಜಗತ್ತಿನಲ್ಲಿ ಹೆಜ್ಜೆ ಹಾಕಿದರೆ, ಇವೆಲ್ಲವೂ ಸಾಕಷ್ಟು ಬೆದರಿಸುತ್ತವೆ. ಬೆಳಿಗ್ಗೆ ಇನ್ಬಾಕ್ಸ್ ತೆರೆಯುವುದು ಮತ್ತು ಎಲ್ಲಾ ಇಮೇಲ್ಗಳನ್ನು ಒಂದೊಂದಾಗಿ ನೋಡುವುದು ಅನಗತ್ಯವಾಗಿ ಸಮಯ ತೆಗೆದುಕೊಳ್ಳುತ್ತದೆ. ಮುಂಜಾನೆ ತಂಡದ ಕ್ಯಾಚ್-ಅಪ್ಗಳು ಅಥವಾ ಪ್ರಮುಖ ಸಭೆಗಳನ್ನು ಕಳೆಯುವುದು ಉತ್ತಮ. ಹೀಗಾಗಿ, ಗ್ರಾಹಕರು ತಮ್ಮ ಇಮೇಲ್ಗಳನ್ನು ಫಿಲ್ಟರ್ ಮಾಡಲು, ವಿಂಗಡಿಸಲು, ನಿರ್ವಹಿಸಲು ಮತ್ತು ಆದ್ಯತೆ ನೀಡಲು ಸಹಾಯ ಮಾಡಲು ಅನೇಕ ಕಂಪನಿಗಳು ಮತ್ತು ಸ್ಟಾರ್ಟ್‌ಅಪ್ಗಳು ಹೊಸ ಅಪ್ಲಿಕೇಶನ್ಗಳು ಮತ್ತು ಸೇವೆಗಳೊಂದಿಗೆ ಬರಲು ಪ್ರಾರಂಭಿಸಿದಾಗ ಇನ್ಬಾಕ್ಸ್ ಶೂನ್ಯ ದಿನವನ್ನು ಆಚರಿಸುವ ಅಗತ್ಯವನ್ನು ಅನುಭವಿಸಲಾಯಿತು.

ಈ ಸೇವೆಗಳ ಜನಪ್ರಿಯತೆ ಹೆಚ್ಚಾದಂತೆ, ಕ್ಲೈಂಟ್ಗಳು ಶೂನ್ಯ ಇನ್ಬಾಕ್ಸ್ ಅನ್ನು ನಿರ್ವಹಿಸುವ ಪ್ರಯೋಜನಗಳನ್ನು ಅನುಭವಿಸಲು ಪ್ರಾರಂಭಿಸಿದರು, ವಿವಿಧ ಸಾಧನಗಳಲ್ಲಿ ತಮ್ಮ ಇಮೇಲ್ಗಳನ್ನು ಪರಿಶೀಲಿಸಲು ದಿನದ ಅತ್ಯುತ್ತಮ ಸಮಯವನ್ನು ಗುರುತಿಸುತ್ತಾರೆ ಮತ್ತು ಅವುಗಳಿಗೆ ಯಾವಾಗ ಪ್ರತಿಕ್ರಿಯಿಸಬೇಕು ಎಂದು ತಿಳಿದುಕೊಳ್ಳುತ್ತಾರೆ. ಈ ಅಪ್ಲಿಕೇಶನ್ಗಳ ಯಶಸ್ಸು ಎಂದರೆ ಮುಂದಿನ ಕೆಲವು ವರ್ಷಗಳಲ್ಲಿ ಇನ್ಬಾಕ್ಸ್ ಝೀರೋ ಡೇ ಹೆಚ್ಚು ಉತ್ತೇಜಕ ಮತ್ತು ಸ್ಪರ್ಧಾತ್ಮಕವಾಗಲಿದ್ದು, ಹೆಚ್ಚಿನ ಕಂಪನಿಗಳು ಈ ಪ್ರವೃತ್ತಿಯನ್ನು ಸೆಳೆಯುತ್ತವೆ ಮತ್ತು ವ್ಯವಹಾರಗಳು ತಮ್ಮ ಉದ್ಯೋಗಿಗಳಿಗೆ ಉತ್ತಮ ಇನ್ಬಾಕ್ಸ್ ನಿರ್ವಹಣೆ ತಂತ್ರಗಳಲ್ಲಿ ತರಬೇತಿ ನೀಡುವ ಮೌಲ್ಯವನ್ನು ಅರಿತುಕೊಳ್ಳುತ್ತವೆ.

ಸಂಜೆ ಮುಗಿಲು
ಭಾನುವಾರ
6.10.2024



# ಬುರ್ಕಿನಫಾಸೋದಲ್ಲಿ ಒಂದೇ ಗಂಟೆಯಲ್ಲಿ 600 ಮಂದಿ ಹತ್ಯೆ



**ಬುರ್ಕಿನಫಾಸೋ:** ಪಶ್ಚಿಮ ಆಫ್ರಿಕಾದ ಬಡ ರಾಷ್ಟ್ರ ಬುರ್ಕಿನಫಾಸೋದಲ್ಲಿ ಅಲ್ಖೈದಾ ಬೆಂಬಲಿತ ಉಗ್ರರು ಅಟ್ಟಹಾಸ ಮೆರೆದಿದ್ದು ಒಂದೇ ಗಂಟೆಯಲ್ಲಿ 600 ಜನರನ್ನು ಕೊಂದು ಪರಾರಿಯಾಗಿದ್ದಾರೆ.

ಈ ಘಟನೆ ತಡವಾಗಿ ಜಗತ್ತಿನ ಗಮನಕ್ಕೆ ಬಂದಿದ್ದು ಆಗಸ್ಟ್ 24ರಂದು ಬೈಕಿನಲ್ಲಿ ಬಂದ ಅಲ್ಖೈದಾ ಬೆಂಬಲಿತ ಜಮಾತ್ ನುಸ್ರತ್ ಅಲ್-ಇಸ್ಲಾಂ ವಲ್-ಮುಸ್ಲಿಮೀನ್ ಸಂಘಟನೆಯ ಉಗ್ರರು ಬರ್ಸಲ್ಹೋ ಎಂಬ ಪಟ್ಟಣದ ಹೊರವಲಯಕ್ಕೆ ನುಗ್ಗಿ ಮನಬಂದಂತೆ ಗುಂಡು ಹಾರಿಸಿ 600 ಜನರನ್ನು ಕೊಂದಿದ್ದಾರೆ.

ಸತ್ತವರಲ್ಲಿ ಬಹುತೇಕರು ಮಹಿಳೆಯರು ಮತ್ತು ಮಕ್ಕಳು ಎಂದು ತಿಳಿದುಬಂದಿದೆ. ಪಕ್ಕದ ಮಾಲಿ ದೇಶದಲ್ಲಿ ನೆಲೆ ನಿಂತಿರುವ ಈ ಉಗ್ರರು ಬುರ್ಕಿನಫಾಸೋದಲ್ಲಿ ಸದಾ ಉಪಟಳ ನೀಡುತ್ತಿದ್ದಾರೆ.

# ಉತ್ತರ ಲೆಬನಾನ್ ಮೇಲೆ ಇಸ್ರೇಲ್ ವಾಯುದಾಳಿ ಹಮಾಸ್ ಟಾಪ್ ಕಮಾಂಡರ್ ಹತ್ಯೆ

**ಬೈರೂತ್:** ಇಸ್ರೇಲ್ ಮತ್ತು ಇರಾನ್ ನಡುವೆ ಸೇಡು, ಪ್ರತೀಕಾರದ ದಾಳಿಗಳು ತೀವ್ರಗೊಳ್ಳುತ್ತಿವೆ. ಬೈರೂತ್ ನಗರದ ಮೇಲೆ ಇಸ್ರೇಲ್‌ನ ಪಡೆಗಳು ವೈಮಾನಿಕ ದಾಳಿ ಮುಂದುವರಿಸಿವೆ. ಇರಾನ್ ಸುಪ್ರೀಂ ಲೀಡರ್ ಇಸ್ರೇಲ್ ವಿರುದ್ಧ ಗುಡುಗಿದ ಬಳಿಕ ಇಸ್ರೇಲ್ ತನ್ನ ವಾಯುದಾಳಿಯನ್ನು ಮತ್ತಷ್ಟು ತೀವ್ರಗೊಳಿಸಿದೆ. ದಕ್ಷಿಣ ಲೆಬನಾನ್ ಬಳಿಕ ಹಿಜ್ಬುಲ್ಲಾ ಭಯೋತ್ಪಾದಕರ ಗುಂಪನ್ನು ಗುರಿಯಾಗಿಸಿ ಉತ್ತರ ಲೆಬನಾನ್ ಮೇಲೆ ಇಸ್ರೇಲ್ ವಾಯುದಾಳಿ ನಡೆಸಿದೆ. ಟ್ರಿಪೋಲಿ ಶನಿವಾರ ಟ್ರಿಪೋಲಿ ನಗರದ ಮೇಲೆ ದಾಳಿ ನಡೆಸಿ, ಹಮಾಸ್‌ನ ಚೀಫ್ ಕಮಾಂಡರ್ ಹಾಗೂ ಆತನ ಕುಟುಂಬವನ್ನು ಹತ್ಯೆಗೈದಿದೆ.

ಈ ಬೆನ್ನಲ್ಲೇ ಇಸ್ರೇಲ್ ಸೇನೆಯು ಇನ್ನಷ್ಟು ಪ್ರದೇಶಗಳ ಮೇಲೆ ದಾಳಿ ನಡೆಸುವ ಎಚ್ಚರಿಕೆ ನೀಡಿದ್ದು, ತಕ್ಷಣವೇ ಆ ಪ್ರದೇಶದ ನಿವಾಸಿಗಳು ಸ್ಥಳದಿಂದ ಎತ್ತಂಗಡಿ ಮಾಡುವಂತೆ ಎಚ್ಚರಿಸಿದೆ.

**250 ಹಿಜ್ಬುಲ್ಲಾ ಭಯೋತ್ಪಾದಕರ ಹತ್ಯೆ:** ಶುಕ್ರವಾರವಷ್ಟೇ ಹಿಜ್ಬುಲ್ಲಾ ಭಯೋತ್ಪಾದಕರನ್ನು ಹತ್ಯೆಗೈದಿರುವ ಬಗ್ಗೆ ಇಸ್ರೇಲ್ ಮಾಹಿತಿ ಹಂಚಿಕೊಂಡಿತ್ತು. ಕಳೆದ ಒಂದು ವಾರದಲ್ಲಿ ಇಸ್ರೇಲ್ ಹಿಜ್ಬುಲ್ಲಾದ 2,000ಕ್ಕೂ ಹೆಚ್ಚು ಸೇನಾ ನೆಲೆಗಳ ಗುರಿಯಾಗಿಸಿ ದಾಳಿ ನಡೆಸಿದ್ದು, 250ಕ್ಕೂ ಹೆಚ್ಚು ಮಂದಿಯನ್ನು ಹತ್ಯೆಗೈದಿದೆ. ಇದರಲ್ಲಿ 5 ಬೆಟಾಲಿಯನ್ ಕಮಾಂಡರ್, 10 ಕಂಪನಿ ಕಮಾಂಡರ್ ಹಾಗೂ 6 ಪ್ಲಟೂನ್ ಕಮಾಂಡರ್‌ಗಳನ್ನ ಕೊಂದಿರುವುದಾಗಿ ಹೇಳಿಕೊಂಡಿತ್ತು.

**ಇರಾನ್ ಸುಪ್ರೀಂ ಲೀಡರ್ ಯುದ್ಧಕ್ಕೆ ಕರೆ:** ಟೆಗ್ರಾನ್ ನಗರದ ಕೇಂದ್ರ ಭಾಗದಲ್ಲಿರುವ ಇಮಾಮ್ ಖೊಮೇನಿ ಗ್ರ್ಯಾಂಡ್ ಮೊಸಲ್ಲಾ ಮಸೀದಿಯಲ್ಲಿ ಲಕ್ಷಾಂತರ ಸಂಖ್ಯೆಯಲ್ಲಿ ಜನರು ಸೇರಿದ್ದರು. ಈ ವೇಳೆ ಮಾತನಾಡಿದ ಇರಾನ್ ಸರ್ವೋಚ್ಚ ನಾಯಕ ಹಾಗೂ ಧರ್ಮ ಗುರು ಅಯತೊಲ್ಲಾ ಅಲಿ ಖಮೇನಿ, 'ವಿಶ್ವಾದ್ಯಂತ ಇರುವ ಮುಸ್ಲಿಮರಿಗೆ ಶತ್ರುಗಳು ಇದ್ದಾರೆ. ನಾವೆಲ್ಲರೂ ಒಂದಾಗಿ ಸೇರಿ ಆ ಶತ್ರುವನ್ನು ಮಣಿಸಬೇಕು. ಎಲ್ಲರೂ ಒಂದಾಗಿ ನಮ್ಮ ಶತ್ರುವನ್ನು ಮಣಿಸೋಣ ಎಂದು ಕರೆ ಕೊಟ್ಟಿದ್ದರು.

# ಕೇವಲ ಅಧಿಕಾರಕ್ಕಾಗಿ ಬಿಜೆಪಿ ಜೊತೆ ಸರ್ಕಾರ ರಚಿಸಲ್ಲ: ಫಾರೂಕ್ ಅಬ್ದುಲ್ಲಾ !



**ಜಮ್ಮು ಕಾಶ್ಮೀರ:** J & K ಚುನಾವಣೆ ಪೂರ್ಣಗೊಂಡಿದ್ದು, ಯಾವುದೇ ಸಂದರ್ಭದಲ್ಲೂ ನಮ್ಮ ನ್ಯಾಷನಲ್ ಕಾನ್ಫರೆನ್ಸ್ ಪಕ್ಷ ಚುನಾವಣೆಯ ನಂತರದಲ್ಲಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವುದಿಲ್ಲ ಎಂದು ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅಧಿಕೃತವಾಗಿ ಘೋಷಿಸಿದ್ದಾರೆ. ಕಾಶ್ಮೀರದಲ್ಲಿ ಸರ್ಕಾರ ರಚನೆಗೆ ಬಿಜೆಪಿ ಜೊತೆ ನ್ಯಾಷನಲ್ ಕಾನ್ಫರೆನ್ಸ್ ಪಕ್ಷ ಕೈಜೋಡಿಸಲಿದೆ ಎಂಬ ವದಂತಿ ಬೆನ್ನಲ್ಲೇ ಅಬ್ದುಲ್ಲ ಸ್ಪಷ್ಟನೆ ನೀಡಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಈ ಬಾರಿಯ ಚುನಾವಣೆಯ ಬಿಜೆಪಿ ವಿರೋಧಿ ಮತಗಳು ನಮ್ಮ ನ್ಯಾಷನಲ್ ಕಾನ್ಫರೆನ್ಸ್ ಪಕ್ಷಕ್ಕೆ ಬಂದಿವೆ. ಹೀಗಾಗಿ ಯಾವುದೇ ಸಂದರ್ಭದಲ್ಲಿ ಬಿಜೆಪಿ ಜೊತೆ ನಾವು ಮೈತ್ರಿಯಾಗುವುದಿಲ್ಲ ಎಂದಿದ್ದಾರೆ.ಬಿಜೆಪಿಯವರು ನಮ್ಮ ಮುಸ್ಲಿಮರ ಮನೆಗಳು, ಮಸೀದಿ ಮತ್ತು ಶಾಲೆಗಳ ಮೇಲೆ ಬುಲ್ಡೋಜರ್ ಕಾರ್ಯಾಚರಣೆ ನಡೆಸಿದ್ದಾರೆ. ಹೀಗಾಗಿ ನಾವು ಬಿಜೆಪಿಯೊಂದಿಗೆ ಹೋಗಲು ಹೇಗೆ ಸಾಧ್ಯ ಎಂದು ಹೇಳಿದ್ದಾರೆ.

# ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಆಲ್ ಟೈಮ್ ಪ್ಲಾಸ್ಟಿಕ್ಸ್

alltime

**ಮೈಸೂರು:** ಆರಂಭಿಕ ಷೇರು ಬಿಡುಗಡೆ ಅಥವಾ ಸಾರ್ವಜನಿಕ ಷೇರು ಮಾರಾಟ ಕೊಡುಗೆ(ಐಪಿಒ) ಬಿಡುಗಡೆ ಮಾಡಲು ಮುಂದಾಗಿರುವ ''ಆಲ್ ಟೈಮ್ ಪ್ಲಾಸ್ಟಿಕ್ಸ್ ಲಿಮಿಟೆಡ್'' ಕಂಪನಿಯು, ತನ್ನ ವ್ಯಾಪಾರ ವಹಿವಾಟಿನ ಸಂಕ್ಷಿಪ್ತ ವಿವರಗಳ ದಾಖಲೆಪತ್ರ(ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್-ಡಿಆರ್ ಎಚ್ ಪಿ)ಗಳನ್ನು ಬಂಡವಾಳ ಮಾರುಕಟ್ಟೆ ನಿಯಂತ್ರಕ ಸಂಸ್ಥೆ ''ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ-ಸೆಬಿ''ಗೆ ಸಲ್ಲಿಸಿದೆ. ಕಂಪನಿಯು 350 ಕೋಟಿ ರೂ. ವರೆಗಿನ ಈಕ್ವಿಟಿ ಷೇರುಗಳನ್ನು ತಾಜಾ ವಿತರಣೆ ಮೂಲಕ ಹಾಗೂ ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ(ಒಎಫ್ ಎಸ್) ಮೂಲಕ 52,50,000 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಯೋಜಿಸಿದೆ.

ಕಂಪನಿಯು ಐಪಿಒ ಕೊಡುಗೆಯಿಂದ ಬರುವ ನಿವ್ವಳ ಆದಾಯವನ್ನು 1. ಕಂಪನಿಯು ಪಡೆದಿರುವ 120 ಕೋಟಿ ರೂ. ಮೊತ್ತದ ಎಲ್ಲಾ ಅಥವಾ ಕೆಲವು ಬಾಕಿ ಸಾಲಗಳ ಒಂದು ಭಾಗವನ್ನು ಪೂರ್ವಪಾವತಿ ಅಥವಾ ಮರುಪಾವತಿ ಮಾಡಲು ಬಳಸಿಕೊಳ್ಳಲು ಪ್ರಸ್ತಾಪಿಸಿದೆ. 2. ಮುಂಬರುವ ಮಾನೆಕ್ಪುರ ಸೌಲಭ್ಯ ಘಟಕಕ್ಕೆ ಉಪಕರಣಗಳು ಮತ್ತು ಯಂತ್ರೋಪಕರಣಗಳ ಖರೀದಿಗೆ 133.73 ಕೋಟಿ ರೂ. ಬಳಸಿಕೊಳ್ಳಲು ಮತ್ತು ಇನ್ನುಳಿದ ಹಣವನ್ನು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಲು ಯೋಜಿಸಿದೆ.

2023ರ ಹಣಕಾಸು ವರ್ಷದ ಆದಾಯದ ಪ್ರಕಾರ, ಕಂಪನಿಯು ಭಾರತದ ಪ್ಲಾಸ್ಟಿಕ್ ಗ್ರಾಹಕ ಸಾಧನ ಉದ್ಯಮದಲ್ಲಿ 2ನೇ ಅತಿ ದೊಡ್ಡ ಬಿ2ಬಿ(ಬಿಸಿನೆಸ್ ಟು ಬಿಸಿನೆಸ್) ವ್ಯವಹಾರ ನಡೆಸುತ್ತಿರುವ ಬೃಹತ್ ಉದ್ಯಮವಾಗಿದೆ(ಮೂಲ: ಟೆಕ್ನೋಪಾಕ್ ವರದಿ). ಇದು 13 ವರ್ಷಗಳ ಪರಿಣತಿ ಹೊಂದಿದೆ. ಸಾಮಾನ್ಯ ಗೃಹ ಬಳಕೆಯ ಪ್ಲಾಸ್ಟಿಕ್ ಗ್ರಾಹಕ ಸರಕುಗಳ ತಯಾರಿಕಾ ಕಂಪನಿ ಇದಾಗಿದೆ. 2024 ಮಾರ್ಚ್ 31ಕ್ಕೆ ಅನ್ವಯವಾಗುವಂತೆ, ಕಂಪನಿಯು 8 ವಿಭಾಗಗಳಲ್ಲಿ 1,608 ಸ್ಟಾಕ್-ಕೀಪಿಂಗ್ ಘಟಕಗಳನ್ನು ಹೊಂದಿದೆ. ಪೂರ್ವಸಿದ್ಧತಾ ಸಮಯ(ಅಡುಗೆ ಪದಾರ್ಥಗಳನ್ನು ತಯಾರಿಸುವ ಅಡುಗೆ ಉಪಕರಣಗಳು), ಧಾರಕಗಳು(ಆಹಾರ ಶೇಖರಣಾ ಪಾತ್ರೆಗಳು), ಸಂಸ್ಥೆ(ವಿವಿಧ ಶೇಖರಣಾ ಪಾತ್ರೆಗಳು), ಹ್ಯಾಂಗರ್ ಗಳು(ವಿವಿಧ ರೀತಿಯ ಹ್ಯಾಂಗರ್ ಗಳು), ಊಟದ ಸಮಯ(ಅಡುಗೆ ಪಾತ್ರೆ), ಶುಚಿಗೊಳಿಸುವ ಸಮಯ (ಶುಚಿಗೊಳಿಸುವ ಉಪಕರಣ), ಸ್ನಾನದ ಸಮಯ (ಬಾತ್ ರೂಮ್ ಉತ್ಪನ್ನಗಳು) ಮತ್ತು ಜೂನಿಯರ್ (ಮಕ್ಕಳ ಸ್ನೇಹಿ ಟೇಬಲ್ ವೇರ್, ಚಾಕು ಕತ್ತರಿಗಳು ಮತ್ತು ಇತರೆ ವಸ್ತುಗಳು) ಇತ್ಯಾದಿ ದಿನ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳ ತಯಾರಿಕೆಯಲ್ಲಿ ಕಂಪನಿ ತೊಡಗಿಸಿಕೊಂಡಿದೆ.

# ಮಹಾರಾಷ್ಟ್ರದಲ್ಲಿ ವಿದ್ಯಾರ್ಥಿಗಳೊಂದಿಗೆ ಮೆಟ್ರೋ ರೈಲು ಸವಾರಿ ಮಾಡಿದ ಮೋದಿ



**ಮಹಾರಾಷ್ಟ್ರ:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಥಾಣೆ ರಿಂಗ್ ಮೆಟ್ರೋ ಯೋಜನೆಗೆ ಶಂಕುಸ್ಥಾಪನೆ ಮಾಡುವ ಮೂಲಕ ಮುಂಬೈ ಮೆಟ್ರೋ ಲೈನ್-3 ಅನ್ನು ಉದ್ಘಾಟಿಸಿದರು.

ಚಾಲನೆ ಬಳಿಕ BKC to Aarey JVLR ನಡುವೆ ಮೋದಿ ಪ್ರಯಾಣಿಸಿದ್ದು, ಈ ವೇಳೆ ರೈಲಿನಲ್ಲಿ ವಿದ್ಯಾರ್ಥಿ ಹಾಗೂ ಮಹಿಳಾ ಸಿಬ್ಬಂದಿ ಜೊತೆ ಸಂವಾದ ನಡೆಸಿದರು.

ಥಾಣೆ ಇಂಟಿಗ್ರಲ್ ರಿಂಗ್ ಮೆಟ್ರೋ ರೈಲು ಯೋಜನೆ ಮತ್ತು ಎಲಿವೇಟೆಡ್ ಈಸ್ಟರ್ನ್ ಫ್ರೀವೇ ವಿಸ್ತರಣೆ ಸೇರಿ ಒಟ್ಟು 32,800 ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಮೋದಿ ಅವರು ಶಂಕುಸ್ಥಾಪನೆ ನೆರವೇರಿಸಿದರು. 14,120 ಕೋಟಿ ರೂಪಾಯಿ ವೆಚ್ಚದ ಮುಂಬೈ ಮೆಟ್ರೋ ಲೈನ್-3ರ ಬಿಕೆಸಿ BKC DgE JVLRವಿಭಾಗವು 10 ನಿಲ್ದಾಣಗಳನ್ನು ಹೊಂದಿದೆ.

# ಇಸ್ರೇಲ್‌ಗೆ ಶಸ್ತ್ರಾಸ್ತ್ರ ಪೂರೈಕೆ ಸಗಿತಗೊಳಿಸಬೇಕು : ಫ್ರಾನ್ಸ್ ಆಧ್ಯಕ್ಷ ಆಗ್ರಹ

**ಪ್ಯಾರಿಸ್:** ಗಾಝಾ ಮೇಲೆ ಪ್ರತೀಕಾರ ತೀರಿಸಿಕೊಳ್ಳಲು ಸೇನಾ ಕಾರ್ಯಾಚರಣೆ ನಡೆಸುತ್ತಿದೆ ಎಂಬ ಟೀಕೆಗೆ ಗುರಿಯಾಗಿರುವ ಇಸ್ರೇಲ್ ಗೆ ಶಸ್ತ್ರಾಸ್ತ್ರಗಳ ಪೂರೈಕೆಯನ್ನು ಸ್ಥಗಿತಗೊಳಿಸಬೇಕು ಎಂದು ಶನಿವಾರ ಫ್ರಾನ್ಸ್ ಅಧ್ಯಕ್ಷ ಎಮ್ಯಾನ್ಯುಯೆಲ್ ಮ್ಯಾಕ್ರನ್ ಆಗ್ರಹಿಸಿದ್ದಾರೆ.ಬ್ರಾಡ್ ಕಾಸ್ಟರ್ ಫ್ರಾನ್ಸ್ ಇಂಟರ್ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿರುವ ಮ್ಯಾಕ್ರನ್, ಇಂದಿನ ಆದ್ಯತೆ ರಾಜಕೀಯ ಪರಿಹಾರವಾಗಿದ್ದು, ಗಾಝಾದಲ್ಲಿನ ಯುದ್ಧಕ್ಕೆ ಶಸ್ತ್ರಾಸ್ತ್ರಗಳ ಪೂರೈಕೆಯನ್ನು ಸ್ಥಗಿತಗೊಳಿಸಬೇಕು ಎಂಬುದು ನನ್ನ ಅನಿಸಿಕೆಯಾಗಿದೆ ಎಂದು ತಿಳಿಸಿದ್ದಾರೆ. ಫ್ರಾನ್ಸ್ ಯಾವುದೇ ಶಸ್ತ್ರಾಸ್ತ್ರಗಳನ್ನು ಪೂರೈಸುತ್ತಿಲ್ಲ ಎಂದೂ ಅವರು ಈ ವಾರದ ಆರಂಭದಲ್ಲಿ ಚಿತ್ರೀಕರಿಸಿಕೊಂಡಿರುವ ಸಂದರ್ಶನದಲ್ಲಿ ಸ್ಪಷ್ಟಪಡಿಸಿದ್ದಾರೆ. ಅಮೆರಿಕವು ಪ್ರತಿ ವರ್ಷ ಇಸ್ರೇಲ್ ಗೆ 3 ಬಿಲಿಯನ್ ಡಾಲರ್ ಮೌಲ್ಯದ ಶಸ್ತ್ರಾಸ್ತ್ರಗಳನ್ನು ಪೂರೈಸುತ್ತಿದೆ. ಇಸ್ರೇಲ್ ಗೆ ಶಸ್ತ್ರಾಸ್ತ್ರಗಳ ಸರಬರಾಜನ್ನು ಸ್ಥಗಿತಗೊಳಿಸಲು ಸಾಕಷ್ಟು ಪುರಾವೆ ದೊರೆತಿಲ್ಲ ಎಂದು ಮೇ ತಿಂಗಳಲ್ಲಿ ಅಮೆರಿಕ ಹೇಳಿತ್ತು. ಸೆಪ್ಟೆಂಬರ್ ತಿಂಗಳಲ್ಲಿ ಇಸ್ರೇಲ್ ಗೆ ಕೆಲವು ಶಸ್ತ್ರಾಸ್ತ್ರಗಳ ರಫ್ತನ್ನು ಅಮಾನತುಗೊಳಿಸಿರುವುದಾಗಿ ಬ್ರಿಟನ್ ಹೇಳಿತ್ತು. ಆ ಶಸ್ತ್ರಾಸ್ತ್ರಗಳನ್ನು ಅಂತಾರಾಷ್ಟ್ರೀಯ ಮಾನವೀಯ ಕಾಯ್ದೆಗಳನ್ನು ತೀವ್ರ ಸ್ವರೂಪದಲ್ಲಿ ಉಲ್ಲಂಘಿಸಿ ಬಳಸುವ ಸ್ಪಷ್ಟ ಅಪಾಯವಿದೆ ಎಂದು ಅದು ಉಲ್ಲೇಖಿಸಿತ್ತು.



# ಇಂಡಿಗೋ ಸರ್ವರ್ ಸಿಸ್ಟಮ್ ಸ್ಥಗಿತ - ವಿಮಾನ ನಿಲ್ದಾಣದಲ್ಲೇ ಪರದಾಡಿದ ಪ್ರಯಾಣಿಕರು!

**ದೆಹಲಿ:** ಇಂಡಿಗೋ ವಿಮಾನಯಾನ ಸಂಸ್ಥೆಯ ಸಿಸ್ಟಂಗಳು ಇಂದು ಬೆಳಿಗ್ಗೆಯಿಂದ ಕಾರ್ಯ ನಿರ್ವಹಿಸದೆ ಧಿಡೀರ್ ಸ್ಥಗಿತಗೊಂಡಿದ್ದು,ಈ ವಿಮಾನಗಳನ್ನು ಅವಲಂಭಿಸಿದ್ದ ಪ್ರಯಾಣಿಕರು ವಿಮಾನ ನಿಲ್ದಾಣದಲ್ಲಿ ದಿನವಿಡೀ ಪರದಾಡುವ ಸನ್ನಿವೇಶ ಸೃಷ್ಟಿಯಾಗಿದೆ.

ಇನ್ನು ಈ ಕ್ಷಣಕ್ಕೂ ಪರಿಸ್ಥಿತಿ ಹೀಗೆ ಮುಂದುವರೆದಿದ್ದು, ಸಾವಿರಾರು ಪ್ರಯಾಣಿಕರು ಸಂಕಷ್ಟದಲ್ಲಿ ಸಿಲುಕಿದ್ದಾರೆ.

ಹೀಗಾಗಿ ಇಂಡಿಗೋ ವಿಮಾನಗಳನ್ನು ಅವಲಂಭಿಸಿದ್ದ ಪ್ರಯಾಣಿಕರು ಇಂದು ಇಡೀ ದಿನ ವಿಮಾನ ನಿಲ್ದಾಣಗಳಲ್ಲಿ ಸಿಲುಕಿ, ಇಡೀ ದಿನ ಅವರ ಪಾಲಿಗೆ ದುಃಸ್ವಪ್ನವಾಗಿ ಮಾರ್ಪಟ್ಟಿವೆ.

ಈ ರೀತಿಯ ತಾಂತ್ರಿಕ ದೋಷದಿಂದ ಪ್ರಯಾಣಿಕರಿಗೆ ಸಾಕಷ್ಟು ತೊಂದರೆಯಾಗಿದ್ದು, ಇಂಡಿಗೋ ವಿಮಾನಯಾನ ಸಂಸ್ಥೆ ಇದುವರೆಗೂ ಪ್ರಯಾಣಿಕರಿಗೆ ಎದುರಾದ ಅನಾನುಕೂಲತೆಯ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.



# ಇರಾನ್ ಅಣ್ವಸ್ತ್ರ ಕೇಂದ್ರದ ಮೇಲೆ ದಾಳಿ ಮಾಡಿ: ಟ್ರಂಪ್

**ವಾಷಿಂಗ್ಟನ್:** ಇತ್ತೀಚೆಗೆ ಇಸ್ರೇಲ್ ಮೇಲೆ ಇರಾನ್ ಕೈಗೊಂಡ ಕ್ಷಿಪಣಿ ದಾಳಿಗೆ ಪ್ರತಿಯಾಗಿ ಇರಾನ್ ಅಣ್ವಸ್ತ್ರ ಕೇಂದ್ರಗಳ ಮೇಲೆ ಇಸ್ರೇಲ್ ದಾಳಿ ಮಾಡಬೇಕು ಎಂದು ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಚುನಾವಣ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ನಮಗಿರುವ ಅತೀದೊಡ್ಡ ಭೀತಿಯೆಂದರೆ ಅದು ಅಣ್ವಸ್ತ್ರ. ಹೀಗಾಗಿ ಮೊದಲು ಅಣ್ವಸ್ತ್ರ ಕೇಂದ್ರದ ಮೇಲೆ ದಾಳಿ ಮಾಡಬೇಕು. ಆದರೆ ಇದಕ್ಕೆ ಬೈಡೆನ್ ಅವಕಾಶ ಕೊಡುವುದಿಲ್ಲ ಎಂದು ಹೇಳಿದರು. ಇರಾನ್ನ ಕಚ್ಚಾತೈಲ ಕೇಂದ್ರಗಳ ಮೇಲೆ ಇಸ್ರೇಲ್ ದಾಳಿ ಮಾಡುವುದನ್ನು ಅಮೆರಿಕ ಖಂಡಿಸುತ್ತದೆ ಎಂದು ಅಧ್ಯಕ್ಷ ಜೋ ಬೈಡೆನ್ ಹೇಳಿದ್ದಾರೆ. ಇರಾನ್‌ಮೇಲಿನ ದಾಳಿಗೆ ಸಂಬಂಧಿಸಿ ಮಾತುಕತೆ ನಡೆಸುತ್ತಿದ್ದೇವೆ. ನಾವು ಇಸ್ರೇಲ್ನ ಜಾಗದಲ್ಲಿದ್ದರೆ ಕಚ್ಚಾತೈಲ ಘಟಕಗಳ ಮೇಲೆ ದಾಳಿ ನಡೆಸುವ ಬದಲು ಬೇರೆ ಮಾರ್ಗ ಹುಡುಕುತ್ತಿದ್ದೆವು ಎಂದು ಹೇಳಿದ್ದಾರೆ.



# ವಿಮಾನದಲ್ಲಿ ಪೇಜರ್, ವಾಕಿ-ಟಾಕಿ ನಿಷೇಧಿಸಿದ ಎಮಿರೇಟ್ಸ್

**ದುಬೈ:** ಲೆಬನಾನ್ನಲ್ಲಿ ವಿಧ್ವಂಸಕ ದಾಳಿಯ ಹಿನ್ನೆಲೆಯಲ್ಲಿ ದುಬೈ ಮೂಲದ ವಿಮಾನಯಾನ ಸಂಸ್ಥೆ ವಿಮಾನದಲ್ಲಿ ಎಮಿರೇಟ್ಸ್ ಪೇಜರ್ ಗಳು ಹಾಗೂ ವಾಕಿ-ಟಾಕಿಗಳನ್ನು ನಿಷೇಧಿಸಿದೆ.

ಜತೆಗೆ, ಪ್ರಾದೇಶಿಕ ಉಲ್ಬಣದಿಂದಾಗಿ ಮಧ್ಯಪ್ರಾಚ್ಯ ಸ್ಥಳಗಳಿಗೆ ವಿಮಾನ ರದ್ದತಿಯನ್ನು ಅ. 15ರವರೆಗೆ ವಿಸ್ತರಿಸಲಾಗಿದೆ. ಆದರೆ ಜೋರ್ಡಾನ್ಗೆ ವಿಮಾನ ಪ್ರಯಾಣ ರವಿವಾರದಿಂದ ಪುನರಾರಂಭಗೊಳ್ಳಲಿದೆ . 'ದುಬೈಯಿಂದ ಬರುವ ಅಥವಾ ದುಬೈಗೆ ಬರುವ ಎಲ್ಲಾ ಪ್ರಯಾಣಿಕರೂ ವಿಮಾನದಲ್ಲಿ ಪೇಜರ್ ಮತ್ತು ವಾಕಿ-ಟಾಕಿ ಸಾಗಿಸುವುದನ್ನು ನಿಷೇಧಿಸಲಾಗಿದೆ. ಪ್ರಯಾಣಿಕರ ಹ್ಯಾಂಡ್ ಲಗೇಜ್ ಅಥವಾ ಪರಿಶೀಲಿಸಿದ ಬ್ಯಾಗ್ಗಳಲ್ಲಿ ಇಂತಹ ವಸ್ತುಗಳಿದ್ದರೆ ದುಬೈ ಪೊಲೀಸರು ಜಪ್ತಿ ಮಾಡಿಕೊಳ್ಳುತ್ತಾರೆ' ಎಂದು ಎಮಿರೇಟ್ಸ್ ಹೇಳಿದೆ.




# 600 ಕೋಟಿ ಮೌಲ್ಯದ ಬುಕಿಂಗ್ ಗಳಿಸಿ ಸಾಧನೆ ಮಾಡಿದ ಬಿರ್ಲಾ ಎಸ್ಟೇಟ್ಸ್

BIRLA ESTATES
ADITYA BIRLA GROUP | REAL ESTATE

**ಬೆಂಗಳೂರು:** ಆದಿತ್ಯ ಬಿರ್ಲಾ ರಿಯಲ್ ಎಸ್ಟೇಟ್ ಲಿಮಿಟೆಡ್ ನ (ಹಿಂದೆ ಸೆಂಚುರಿ ಟೆಕ್ಸ್‌ಟೈಲ್ಸ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್) ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಬಿರ್ಲಾ ಎಸ್ಟೇಟ್ಸ್ ಪ್ರೈವೇಟ್ ಲಿಮಿಟೆಡ್ ಇಂದು ತನ್ನ ಹೊಸ ವಸತಿ ಸ್ಥಳ ಬಿರ್ಲಾ ತ್ರಿಮಯ ಹಂತ 2- ದಿ ಪಾರ್ಕ್ ನ ಶೇ.95ರಷ್ಟು ಮಾರಾಟಗೊಂಡಿದ್ದು, ಈ ಪ್ರಾಜೆಕ್ಟ್ ಅನಾವರಣಗೊಳಿಸಿದ ಕೇವಲ 24 ಗಂಟೆಗಳಲ್ಲಿ ಅಂದಾಜು ? 600 ಕೋಟಿ ಮೌಲ್ಯದ ಬುಕಿಂಗ್ ಗಳಿಸಿದ ಸಾಧನೆ ಮಾಡಿದೆ ಎಂದು ಘೋಷಿಸಿದೆ. ಈ ಮಾರಾಟವು ಬಿರ್ಲಾ ತ್ರಿಮಯ ಹಂತ 1ರ ಮಾರಾಟ ದಾಖಲೆಯನ್ನು ಮುರಿದಿದೆ. ಒಂದನೇ ಹಂತದ ಬಿರ್ಲಾ ತ್ರಿಮಯ ಪ್ರಾಜೆಕ್ಟ್ ಅನಾವರಣಗೊಳಿಸಿದ ಕೇವಲ 36 ಗಂಟೆಗಳ ಒಳಗೆ ಸುಮಾರು ?500 ಕೋಟಿ ಮೌಲ್ಯದ ಬುಕಿಂಗ್ ಪಡೆದುಕೊಂಡಿತ್ತು ಎಂಬುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಒಟ್ಟಾರೆ ಇಲ್ಲಿಯವರೆಗೆ ಗಳಿಸಿರುವ ಸಂಚಿತ ಬುಕಿಂಗ್ ಮೌಲ್ಯವು ಅಂದಾಜು ? 1,100 ಕೋಟಿ ಆಗಿದೆ ಮತ್ತು 52 ಎಕರೆ ವಿಸ್ತಾರದಲ್ಲಿರುವ ಈ ಸಂಪೂರ್ಣ ಯೋಜನೆಯು ಸುಮಾರು ? 3,000 ಕೋಟಿ ಆದಾಯವನ್ನು ಉತ್ಪಾದಿಸುವ ಸಾಮರ್ಥ್ಯ ಹೊಂದಿರುವ ನಿರೀಕ್ಷೆಯಿದೆ.

ಬೆಂಗಳೂರು ಉತ್ತರದ ದೇವನಹಳ್ಳಿಯ ಶೆಟ್ಟಿಗೆರೆ ರಸ್ತೆಯ ಪ್ರಮುಖ ಸ್ಥಳದಲ್ಲಿರುವ ಈ ಯೋಜನೆಯು ವಿಸ್ತಾರವಾದ 52 ಎಕರೆ ಭೂಪ್ರದೇಶದಲ್ಲಿ ಹರಡಿದೆ. ಬಿರ್ಲಾ ತ್ರಿಮಯ ಹಂತ 1ರ ಯಶಸ್ವಿ ನಿರ್ಮಾಣದ ಬಳಿಕ ಹಂತ 2 ದಿ ಪಾರ್ಕ್ ನಿರ್ಮಾಣ ಶುರುವಾಗಿದೆ. ದಿ ಪಾರ್ಕ್ ನಲ್ಲಿ ಸೊಗಸಾಗಿ ಸಿದ್ಧಪಡಿಸಿದ ಅಪಾರ್ಟ್ ಮೆಂಟ್ ಗಳು, ಸಾಲು ಮನೆಗಳು ಮತ್ತು ಡ್ಯುಪ್ಲೆಕ್ಸ್ ಮನೆಗಳ ಸಂಗ್ರಹವಿದೆ.

ಈ ಕುರಿತು ಮಾತನಾಡಿರುವ ಬಿರ್ಲಾ ಎಸ್ಟೇಟ್ ನ ಎಂಡಿ ಮತ್ತು ಸಿಇಒ ಕೆ.ಟಿ. ಜಿತೇಂದ್ರನ್ ಅವರು, ''ಬಿರ್ಲಾ ತ್ರಿಮಯ ಪ್ರಾಜೆಕ್ಟ್ ನ ಎರಡೂ ಹಂತಗಳಲ್ಲಿ ಅತ್ಯುತ್ತಮ ಬುಕಿಂಗ್ ಆಗಿದ್ದು, ಗ್ರಾಹಕರ ಆದ್ಯತೆ ಮತ್ತು ಅವರ ನಿರ್ದಿಷ್ಟ ಅಗತ್ಯಗಳಿಗೆ ಸೂಕ್ತವಾಗಿ ಸಿದ್ಧಗೊಂಡ ಗುಣಮಟ್ಟದ ವಸತಿ ಸ್ಥಳಗಳನ್ನು ರಚಿಸುವ ನಮ್ಮ ಬದ್ಧತೆಗೆ ಇದು ಸಾಕ್ಷಿಯಾಗಿದೆ. ವಿಶಿಷ್ಟ ವಿನ್ಯಾಸದ ಮೇಲೆ ನಾವು ಗಮನ ಹರಿಸಿದ್ದೇವೆ ಮತ್ತು ಮಾರುಕಟ್ಟೆಯ ಕುರಿತ ಆಳವಾದ ತಿಳುವಳಿಕೆಯ ಮೇಲೆ ನಾವು ಗಮನ ಹರಿಸಿ ರಚಿಸಿರುಪ ಈ ಪ್ರಾಜೆಕ್ಟ್ ಹೊಸ ಮಾನದಂಡವನ್ನು ಸೃಷ್ಟಿಸಿದೆಎಂದು ಹೇಳಿದರು.

# ಮಗುಚಿ ಬಿದ್ದ ಹಡಗು: 78 ಮಂದಿ ಜಲ ಸಮಾಧಿ

**ಕಾಂಗೋ:** ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಹಡಗೊಂದು ನೋಡ ನೋಡುತ್ತಿದ್ದಂತೆ ಮಗುಚಿ ಬಿದ್ದ ಘಟನೆ ಪೂರ್ವ ಕಾಂಗೋದ ಕಿವು ಸರೋವರದಲ್ಲಿ ನಡೆದಿದೆ. ಈ ಭೀಕರ ದುರಂತದಲ್ಲಿ ಬರೋಬ್ಬರಿ 78 ಮಂದಿ ಮೃತಪಟ್ಟಿದ್ದಾರೆ. ಪೂರ್ವ ಕಾಂಗೋದ ಕಿವು ಸರೋವರದಲ್ಲಿ ಸುಮಾರು 278 ಪ್ರಯಾಣಿಕರಿದ್ದ ದೋಣಿ ಮಗುಚಿ ಬಿದ್ದ ಪರಿಣಾಮ 78 ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಗವರ್ನರ್ ಮಾಹಿತಿ ನೀಡಿದ್ದಾರೆ. ಇನ್ನೂ ಈ ಸಾವಿನ ಸಂಖ್ಯೆ ಇನ್ನೂ ಏರಿಕೆ ಆಗುವ ಸಾಧ್ಯತೆಗಳಿವೆ ಎಂದು ದಕ್ಷಿಣ ಕಿವು ಪ್ರಾಂತ್ಯದ ಗವರ್ನರ್ ಜೀನ್-ಜಾಕ್ವೆಸ್ ಪುರುಸಿ ಹೇಳಿದ್ದಾರೆ. 278 ಪ್ರಯಾಣಿಕರಿಂದ ತುಂಬಿದ್ದ ದೋಣಿಯು ನೋಡ ನೋಡುತ್ತಲೇ ಟೈಟಾನಿಕ್ ಬೋಟ್ ರೀತಿಯಲ್ಲೇ ಮಗುಚಿ ಬಿದ್ದಿದೆ. ಇದು ದಕ್ಷಿಣ ಕಿವು ಪ್ರಾಂತ್ಯದ ಮಿನೋವಾದಿಂದ ಉತ್ತರ ಕಿವು ಪ್ರಾಂತ್ಯದ ಗೋಮಾಗೆ ಪ್ರಯಾಣ ಮಾಡುತ್ತಿತ್ತು ಎಂದು ಹೇಳಲಾಗುತ್ತದೆ. ಆದರೆ ಈ ಘಟನೆ ನಡೆದಿದ್ದು ಗೋಮಾ ಕಾಂಗೋದಲ್ಲಿ ಆದ್ರೆ ಸಾಮಾಜಿಕ ಜಾಲತಾಣದಲ್ಲಿ ಗೋವಾದಲ್ಲಿ ಈ ದುರಂತ ನಡೆದಿದೆ ಎಂದು ವೈರಲ್ ಮಾಡುತ್ತಿದ್ದಾರೆ. ಆದರೆ, ಇದು ಸುಳ್ಳು ಸುದ್ದಿ ಎಂದು ಗೋವಾ ಪೊಲೀಸರು ಸ್ಪಷ್ಟಪಡಿಸಿದ್ದು, ವಿಡಿಯೋ ಕಾಂಗೋದಿಂದ ಬಂದಿದೆ. ಇನ್ನೂ, ದೋಣಿ ಮುಳುಗಿದ ಸುದ್ದಿ ತಿಳಿದ ಕೂಡಲೇ ತಕ್ಷಣವೇ ಸ್ಥಳಕ್ಕೆ ರಕ್ಷಣಾ ಸಿಬ್ಬಂದಿ ದೌಡಾಯಿಸಿ ಸುಮಾರು 10 ಮಂದಿಯನ್ನು ರಕ್ಷಣೆ ಮಾಡುವಲ್ಲಿ ಯಶಸ್ವಿಯಾಗಿದೆ. ದೋಣಿಯಿಂದ ಕನಿಷ್ಠ 50 ಶವಗಳನ್ನು ಹೊರತೆಗೆಯಲಾಗಿದೆ ಶೋಧ ಕಾರ್ಯಾಚರಣೆ ಮುಂದುವರೆದಿದೆ.



# ಬಾಂಗ್ಲಾದೇಶ: ದುರ್ಗಾ ಪೂಜೆಗೂ ಮುನ್ನ 16 ಮೂರ್ತಿಗಳ ಧ್ವಂಸ

**ಢಾಕಾ (ಬಾಂಗ್ಲಾದೇಶ):** ಬಾಂಗ್ಲಾದೇಶದಲ್ಲಿ ಪಬನ ಜಿಲ್ಲೆಯ ಸುಜಾನಗರ ಉಪಜಿಲ್ಲೆಯಲ್ಲಿನ 'ಖುಷಿಪರಾ ಬರವಾರಿ ಪೂಜಾ ಮಂಟಪ' ಮತ್ತು 'ಮಾಣಿಕಾದಿ ಪಾಲಪಾರಾ ಬಾರವಾರಿ ಪೂಜಾ ಮಂಟಪ'ದಲ್ಲಿನ ಹಿಂದೂ ದೇವತೆಗಳ ಮೂರ್ತಿಗಳನ್ನು ಧ್ವಂಸಗೊಳಿಸಲಾಗಿದೆ. ಖುಷಿಪಾರಾ ಮಂಟಪದಲ್ಲಿನ 4, ಮಾಣಿಕಡಿ ಮಂಟಪದಲ್ಲಿನ 5 ಮೂರ್ತಿಗಳನ್ನು ಧ್ವಂಸಗೊಳಿಸಲಾಗಿದೆ.



ಈ ಘಟನೆಯಿಂದ ಅಲ್ಲಿನ ಹಿಂದೂಗಳಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಬಾಂಗ್ಲಾದೇಶದ ಭದ್ರತಾ ಇಲಾಖೆ ಮತ್ತು ಸ್ಥಳೀಯ ಸರ್ಕಾರವು ಕೂಡಲೇ ಮಧ್ಯಸ್ಥಿಕೆ ವಹಿಸಬೇಕೆಂದು ಸ್ಥಳೀಯ ಹಿಂದೂಗಳು ಕೋರಿದ್ದಾರೆ. ವಿಚಿತ್ರವೆಂದರೆ, ಪದೇ ಪದೇ ಪೊಲೀಸರಿಗೆ ಕರೆ ಮಾಡಿದರೂ ಸಹ ಈ ಘಟನೆಯನ್ನು ತಡೆಯಲು ಪೊಲೀಸರು ಸಮಯಕ್ಕೆ ತಲುಪಲಿಲ್ಲ. ಘಟನೆಯ ನಂತರ ಪೊಲೀಸರು ಮತ್ತು ಇತರ ಭದ್ರತಾ ದಳ ತಲುಪಿತು.

ಬಾಂಗ್ಲಾದೇಶದ ಸುಜಾನಗರ ಉಪಜಿಲ್ಲೆಯಲ್ಲಿರುವ 51 ದೇವಸ್ಥಾನಗಳಲ್ಲಿ ದುರ್ಗಾಪೂಜಾ ಹಬ್ಬವನ್ನು ಆಚರಿಸಲಾಗುತ್ತಿದೆ; ಆದರೆ ಈ ಘಟನೆಯಿಂದ ಹಿಂದೂಗಳಲ್ಲಿ ಭಯ ನಿರ್ಮಾಣವಾಗಿದೆ. ಸುಜಾನಗರ ಉಪಜಿಲ್ಲಾ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ರಶೀದುಜ್ಜಮಾನ ಈ ಬಗ್ಗೆ ಮಾತನಾಡಿ, ತಪ್ಪಿತಸ್ಥರ ವಿರುದ್ಧ ಕಾನೂನುರೀತ್ಯಾ ಕ್ರಮ ಕೈಕೊಳ್ಳಲು ಅವರನ್ನು ನಾವು ಹುಡುಕಾಡುತ್ತಿದ್ದೇವೆ ಎಂದು ಹೇಳಿದರು. ಸದ್ಯ ಪ್ರತಿಯೊಂದು ದೇವಸ್ಥಾನದ ಭದ್ರತೆಗಾಗಿ ಸ್ಥಳೀಯ ಜನರ ಒಂದು ಸಮಿತಿಯನ್ನು ಸ್ಥಾಪಿಸಲಾಗಿದೆ.

ಢಾಕಾದ ಕಿಶೋರೆಗಂಜ್ನಲ್ಲಿರುವ ಗೋಪಿನಾಥ ಜಿಉರ ಅಖಾಡ ದುರ್ಗಾ ಪೂಜಾ ಮಂಟಪದಲ್ಲಿ ಹಿಂದೂಗಳ ದೇವತೆಗಳ 7 ಮೂರ್ತಿಗಳನ್ನು ಧ್ವಂಸಗೊಳಿಸಲಾಗಿದೆ. ದೇವಸ್ಥಾನದ ಭದ್ರತೆಗೆ ನಿಯೋಜನೆಗೊಂಡಿದ್ದ ಕಾವಲುಗಾರ ಮಲಗಿದ್ದಾಗ ಈ ಘಟನೆ ನಡೆದಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ನಾಳೆ ಭೈರತಿ ರಣಗಲ್ ಚಿತ್ರದ 'ಕಾವಲಿಗ' ಲಿರಿಕಲ್ ಸಾಂಗ್



ಶಿವರಾಜ್ ಕುಮಾರ್ ನಟನೆಯ ಭೈರತಿ ರಣಗಲ್ ಸಿನಿಮಾದ ಕಾವಲಿಗ ಲಿರಿಕಲ್ ಸಾಂಗ್ ಇದೇ ಅಕ್ಟೋಬರ್ 7ರಂದು ಸಂಜೆ 6.03ಕ್ಕೆ ಬಿಡುಗಡೆ ಆಗಲಿದೆ. 'ಮಾಯದಿರೋ ಮನದ ಗಾಯಕೆ, ಮಮತೆ ಮದ್ದು ಹಚ್ಚೋ ಸೇವಕ' ಸಾಹಿತ್ಯದಲ್ಲಿ ಈ ಹಾಡು ಮೂಡಿ ಬಂದಿದೆ. ಇತ್ತೀಚೆಗಷ್ಟೇ ಚಿತ್ರದ ಶೀರ್ಷಿಕೆ ಗೀತೆ ಬಿಡುಗಡೆಯಾಗಿತ್ತು. ಕಿನ್ನಾಳ್ ರಾಜ್ ಅವರು ಬರೆದಿರುವ ''ಇತಿಹಾಸವೇ ನಿಬ್ಬೆರಗಿಸುವ ಎತ್ತಿ ಹಿಡಿಯುವ ಮೈಲಿಗಲ್ಲು'' ಎಂಬ ಭೈರತಿ ರಣಗಲ್ ಸಿನಿಮಾದ ಶೀರ್ಷಿಕೆ ಗೀತೆಗೆ ಅಭಿಮಾನಿಗಳು ಫಿದಾ ಆಗಿದ್ದರು. ಖ್ಯಾತ ಸಂಗೀತ ನಿರ್ದೇಶಕ ರವಿ ಬಸ್ರೂರು ಸಂಗೀತ ನೀಡಿದ್ದಾರೆ. ಸಂತೋಷ್ ವೆಂಕಿ ಹಾಡಿದ್ದಾರೆ. ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿರುವ ಈ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬಂದಿತ್ತು. ನರ್ತನ್ ಹಾಗೂ ಶಿವಣ್ಣ ಅವರ ಕಾಂಬಿನೇಶನ್ ನಲ್ಲಿ ಬಂದಿದ್ದ ''ಮಫ್ತಿ'' ಚಿತ್ರದ ಪ್ರೀಕ್ವೆಲ್ ಆಗಿರುವ ''ಭೈರತಿ ರಣಗಲ್'' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಈಗಾಗಲೇ ಬಿಡುಗಡೆಯಾಗಿರುವ ಟೀಸರ್ ಹಾಗೂ ಹಾಡಿನ ಮೂಲಕ ಜನಪ್ರಿಯವಾಗಿರುವ ಈ ಚಿತ್ರದ ಬಿಡುಗಡೆಗೆ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಶಿವರಾಜಕುಮಾರ್ ಅವರಿಗೆ ನಾಯಕಿಯಾಗಿ ರುಕ್ಮಿಣಿ ವಸಂತ್ ಅಭಿನಯಿಸಿದ್ದಾರೆ. ನವೀನ್ ಕುಮಾರ್ ಛಾಯಾಗ್ರಹಣ, ಆಕಾಶ್ ಹಿರೇಮಠ ಸಂಕಲನ, ಗುಣ ಕಲಾ ನಿರ್ದೇಶನ ಹಾಗೂ ದಿಲೀಪ್ ಸುಬ್ರಹ್ಮಣ್ಯ, ಚೇತನ್ ಡಿಸೋಜ ಸಾಹಸ ನಿರ್ದೇಶನ ''ಭೈರತಿ ರಣಗಲ್'' ಚಿತ್ರಕ್ಕಿದೆ.

# 'ವೃತ್ತ'ಗೆ ಪ್ರಸೆಂಟ್ ಮಾಡಲು ಬಂದ ನೀನಾಸಂ ಸತೀಶ್



**ಲಿಖಿಕ್ ಕುಮಾರ್ ಎಸ್ ಕನ್ನಡ ಸಿನಿಮಾರಂಗಕ್ಕೆ ನಿರ್ದೇಶಕನಾಗಿ ಎಂಟ್ರಿ**

ಪ್ರತಿ ದಿನ ಹೊಸ ಸಿನಿಮಾ ಸೆಟ್ಟೇರೋದು ಟ್ರೇಲರ್ ಟೀಸರ್ ಬಿಡುಗಡೆ ಆಗೋದು ಹೊಸತೇನಲ್ಲ. ಆದರೆ ಬಿಡುಗಡೆ ಆದ ಕೆಲವೇ ಕೆಲವು ಸಿನಿಮಾ ಟೀಸರ್ ಪ್ರೇಕ್ಷಕರ ಗಮನ ಸೆಳೆಯುತ್ತವೆ. ಸದ್ಯ ಈಗ ಸಿನಿ ಪ್ರೇಮಿಗಳ ಗಮನ ಸೆಳೆದಿರುವ ಟೀಸರ್ ವೃತ್ತ. ವೃತ್ತ ಅಂದ ತಕ್ಷಣ ಒಂದು ಸರ್ಕಲ್ ನಲ್ಲಿ ನಡೆಯೋ ಸ್ಟೋರಿ ಇರಬೇಕು ಅನ್ನೋದು ಮೊದಲಿಗೆ ಅನ್ನಿಸುತ್ತೆ ಆದ್ರೆ ಈ ವೃತ್ತ ಸಿನಿಮಾದ ಕಾನ್ಸೆಪ್ಟ್ ಬೇರೆ. ಸಿನಿಮಾ ಕಂಪ್ಲೀಟ್ ಮಾಡಿ ಟೀಸರ್ ಬಿಡುಗಡೆ ಮಾಡಿರೋ ವೃತ್ತ ತಂಡಕ್ಕೆ ನಟ ನೀನಾಸಂ ಸತೀಶ್ ಸಾಥ್ ಸಿಕ್ಕಿದೆ. ಸಿನಿಮಾ ಟೀಸರ್, ಟ್ರೇಲರ್ ನೋಡಿ ಚಿತ್ರವನ್ನ ತಮ್ಮದೇ ಬ್ಯಾನರ್ ಅಡಿಯಲ್ಲಿ ಪ್ರಸೆಂಟ್ ಮಾಡೋದಕ್ಕೆ ಸತೀಶ್ ನಿರ್ಧಾರ ಮಾಡಿದ್ದಾರೆ ಟೀಸರ್ ಲಾಂಚ್ ಗೆ ಬಂದು ಹೊಸಬರ ಪ್ರಯತ್ನಕ್ಕೆ ಸಾಥ್ ಕೊಟ್ರು. ಹೊಸ ತಂಡವಾದ್ರು ಎಲ್ಲಾ ರೀತಿಯಲ್ಲೂ ತಯಾರಿ ಮಾಡಿಕೊಂಡೆ ಬಂದಿದ್ದಾರೆ ಅನ್ನೋದು ಟೀಸರ್ ನೋಡಿದ್ರೆ ತಿಳಿಯುತ್ತೆ.

ವೃತ್ತ ಸಿನಿಮಾವನ್ನ ನಿರ್ದೇಶನ ಮಾಡುವುದರ ಜೊತೆಗೆ ಲಿಖಿಕ್ ಕುಮಾರ್ ಎಸ್ ಕನ್ನಡ ಸಿನಿಮಾರಂಗಕ್ಕೆ ನಿರ್ದೇಶಕನಾಗಿ ಕಾಲಿಡುತ್ತಿದ್ದಾರೆ. ಇನ್ನು ಚಿತ್ರವನ್ನ ಲಕ್ಷ್ಯ ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ಟಿ ಶಿವಕುಮಾರ್ ನಿರ್ಮಾಣ ಮಾಡಿದ್ದಾರೆ.. ಚಿತ್ರದ ವಿಶೇಷ ಅಂದ್ರೆ ನಾಯಕ ಒಬ್ಬನ ಸುತ್ತಲೇ ಕಥೆ ಕೇಂದ್ರೀಕೃತವಾಗಿರುತ್ತಂತೆ. ಚಿತ್ರಕ್ಕೆ ಸಿಂಕ್ರೋನೈಸ್ ಮಾಡಿದ ಧ್ವನಿಯನ್ನ ಬಳಸಲಾಗಿದೆ. ಸಿನಿಮಾಗೆ ಯೋಗೀಶ್ ಗೌಡ ಚಿತ್ರಕಥೆ ಬರೆದಿದ್ದಾರೆ ಸುರೇಶ್ ಆರ್ಮುಗಂ ಸಂಕಲನ, ಶಂಕರ್ ರಾಮನ್ ಅವರ ಸಂಭಾಷಣೆ, ಗೌತಮ್ ಕೃಷ್ಣ ಅವರ ಛಾಯಾಗ್ರಹಣ ಮತ್ತು ಆಂಟನಿ ಹಾಗೂ ಹರಿ ಕ್ರಿಶಾಂತ್ ಎಸ್ ಅವರ ಸಂಗೀತ ಚಿತ್ರಕ್ಕಿದೆ..ಬಹುತೇಕ ಹೊಸಬರೇ ಕೂಡಿ ಮಾಡಿರೋ ಚಿತ್ರ ಇದಾಗಿದ್ದು, ಟೆಕ್ನಿಕಲಿ ಸ್ಟ್ರಾಂಗ್ ಆಗಿ ಇದ್ದರೆ ಸಿನಿಮಾ ಕೂಡ ಚೆನ್ನಾಗಿ ಇರುತ್ತೆ ಅನ್ನೋದು ಸಿನಿಮಾತಂಡದ ಮಾತು?

ಚಿತ್ರದ ತಾರಾಗಣದಲ್ಲಿ ನಾಯಕನಾಗಿ ಮಾಹಿರ್ ಮೊಹಿದ್ದೀನ್ , ಚೈತ್ರಾ ಜೆ ಆಚಾರ್ , ಹತಿಣೆ ಸುಂದರ ರಾಜನ್ ಅಭಿನಯ ಮಾಡಿದ್ದಾರೆ ..ನಾಯಕನಾಗಿ ಕಾಣಿಸಿಕೊಳ್ತಿರೋ ಮಾಹಿರ್ ಸಾಕಷ್ಟು ವರ್ಷಗಳಿಂದ ರಂಗಭೂಮಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಟೀಸರ್ ನಲ್ಲಿ ಮಾಹಿರ್ ಅಭಿನಯ ಗಮನ ಸೆಳೆದಿದ್ದು ಮುಂದಿನ ದಿನಗಳಲ್ಲಿ ಮಾಹಿರ್ ಅದ್ಭುತ ಕಲಾವಿದನಾಗಿ ಚಿತ್ರರಂಗದಲ್ಲಿ ಉಳಿದುಕೊಳ್ಳುವ ಎಲ್ಲಾ ಭರವಸೆಗಳು ಕಾಣ್ತಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಾಯಕ ಮಾಹೀರ್ ನಟನೆ ನನ್ನ ಬಹು ದಿನದ ಕನಸು ಅದನ್ನ ನಾಟಕಗಳ ಮೂಲಕ ನನಸು ಮಾಡಿಕೊಳ್ಳುತ್ತಿದ್ದೆ ಈಗ ವೃತ್ತ ಸಿನಿಮಾ ಮೂಲಕ ದೊಡ್ಡ ಪರದೆಗೆ ಬರುತ್ತಿರೋದು ಮತ್ತಷ್ಟು ಖುಷಿಕೊಟ್ಟಿದೆ ಎಂದರು..ನಿರ್ದೇಶಕ ಲಿಖಿತ್ ಮಾತನಾಡಿ ಹೊಸ ಸಿನಿಮಾಗೆ ಸತೀಶ್ ಅವರ ಸಪೋರ್ಟ್ ಸಿಕ್ಕಿರೋದು ಖುಷಿ ತಂದಿದೆ.. ಕಿರು ಚಿತ್ರಗಳನ್ನ ಮಾಡುತ್ತಾ ಇದ್ದ ತಂಡ ಇವತ್ತು ಸಿನಿಮಾ ಮೂಲಕ ಪ್ರೇಕ್ಷಕರ ಮುಂದೆ ಬರಲು ಸಿದ್ದರಾಗಿಗಿದ್ದೇವೆ ಎಂದರು.

# ದೀಪಿಕಾ ದಾಸ್ ನಟನೆಯ 'ಪಾರು ಪಾರ್ವತಿ' ಸಾಂಗ್ ರಿಲೀಸ್



ಪಿ.ಬಿ.ಪ್ರೇಂನಾಥ್ ಅವರು ನಿರ್ಮಿಸಿರುವ, ರೋಹಿತ್ ಕೀರ್ತಿ ನಿರ್ದೇಶನದಲ್ಲಿ ''ಬಿಗ್ ಬಾಸ್'' ಖ್ಯಾತಿಯ ದೀಪಿಕಾ ದಾಸ್, ಪೂನಂ ಸರನಾಯಕ್ ಹಾಗೂ ಫವಾಜ್ ಅಶ್ರಫ್ ಅವರು ಪ್ರಮುಖಪಾತ್ರದಲ್ಲಿ ನಟಿಸಿರುವ ''ಪಾರು ಪಾರ್ವತಿ'' ಚಿತ್ರದ ಹಾಡುಗಳ ಬಿಡುಗಡೆ ಸಮಾರಂಭ ಇತ್ತೀಚಿಗೆ ನೆರವೇರಿತು. ಲಹರಿ ವೇಲು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಲಹರಿ ವೇಲು ಹಾಗೂ ಚಿತ್ರತಂಡದ ಸದಸ್ಯರು ಸೇರಿ ವಿನೂತನ ಶೈಲಿಯಲ್ಲಿ ಹಾಡುಗಳನ್ನು ಲೋಕಾರ್ಪಣೆ ಮಾಡಿದ್ದು ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳು ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ಕೆಲವು ದಿನಗಳ ಹಿಂದೆ ಈ ಚಿತ್ರತಂಡದವರು ನನ್ನನ್ನು ಭೇಟಿಯಾಗಿ, ಹಾಡುಗಳನ್ನು ಕೇಳಿಸಿದರು. ಆರ್ ಹರಿ ಸಂಗೀತ ಸಂಯೋಜಿಸಿರುವ ಎಲ್ಲಾ ಹಾಡುಗಳು ಚೆನ್ನಾಗಿದೆ. ಚಿತ್ರ ಯಶಸ್ವಿಯಾಗಲಿ ಎಂದು ಲಹರಿ ವೇಲು ತಿಳಿಸಿದರು. ನಾನು ಮೊದಲೇ ತಿಳಿಸಿದ ಹಾಗೆ ಪಿ.ವಾಸು, ಎಂ ಮನೋನ್, ಅರವಿಂದ್ ಶಾಸ್ತ್ರಿ, ಸಿಂಪಲ್ ಸುನಿ ಮುಂತಾದ ನಿರ್ದೇಶಕರ ಸಿನಿಮಾಗಳಿಗೆ ನಿರ್ದೇಶನ ವಿಭಾಗದಲ್ಲಿ ಕೆಲಸ ಮಾಡಿರುವ ಅನುಭವವಿದೆ. ನನಗೆ ಇದು ಮೊದಲ ನಿರ್ದೇಶನದ ಚಿತ್ರ. ಅವಕಾಶ ನೀಡಿದ ಪ್ರೇಂನಾಥ್ ಅವರಿಗೆ ಅಭಿನಂದನೆ. ಇದೊಂದು ಟ್ರಾವೆಲ್, ಅಡ್ವೆಂಚರ್ ಡ್ರಾಮ ಜಾನರ್ ನ ಚಿತ್ರ. ಇದರಲ್ಲಿ ಹಾಡುಗಳು ಪ್ರಮುಖಪಾತ್ರವಹಿಸಿದೆ. ಆರ್ ಹರಿ ಸಂಗೀತ ಸಂಯೋಜಿಸಿರುವ ಐದು ಹಾಡುಗಳು ಹಾಗೂ ನಾಲ್ಕು ಬಿಟ್ ಗಳು ಚಿತ್ರದಲ್ಲಿದೆ. ಆದರೆ ಜ್ಯೂಕ್ ಬಾಕ್ಸ್ ನಲ್ಲಿ ಹನ್ನೆರಡು ಹಾಡುಗಳು ಬಿಡುಗಡೆಯಾಗಿದೆ. ನಾಗಾರ್ಜುನ್ ಶರ್ಮಾ ಅವರು ಐದು ಹಾಡುಗಳನ್ನು ಬರೆದಿದ್ದಾರೆ. ಜೆಸ್ಸಿ ಗಿಫ್ಟ್, ವಿಜಯ್ ಜೇಸುದಾಸ್, ಆಂಟೋನಿ ಮೈಕಿಯಾನ್ (ಐರೀಶ್ ಗಾಯಕ), ಔರಾ, ಎಂ.ಸಿ.ಬಿಜ್ಜು, ಚೇತನ್ ನಾಯಕ್, ದಿಯಾ ಹೆಗ್ಡೆ ಸೇರಿದಂತೆ ಹದಿಮೂರು ಜನ ಗಾಯಕರು ಈ ಚಿತ್ರದ ಹಾಡುಗಳನ್ನು ಹಾಡಿದ್ದಾರೆ. ಎಂ.ಆರ್.ಟಿ ಮ್ಯೂಸಿಕ್ ಮೂಲಕ ನಮ್ಮ ಚಿತ್ರದ ಹಾಡುಗಳು ಬಿಡುಗಡೆಯಾಗಿದೆ. ಕಲಾವಿದರು ಹಾಗೂ ತಂತ್ರಜ್ಞರ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ ಎಂದು ನಿರ್ದೇಶಕ ರೋಹಿತ್ ಕೀರ್ತಿ ತಿಳಿಸಿದರು. ಪ್ರವಾಸ ಕಥನ. ಬೆಂಗಳೂರು, ಗೋವಾ, ಮಹಾರಾಷ್ಟ್ರ, ರಾಜಸ್ಥಾನ ಹಾಗೂ ಉತ್ತರಕಾಂಡ್ ನಲ್ಲಿ ಚಿತ್ರೀಕರಣ ನಡೆದಿದೆ. ಮೂರು ಮುಖ್ಯಪಾತ್ರಗಳ ಸುತ್ತ ಸಿನಿಮಾ ಕಥೆ ಸಾಗುತ್ತದೆ. ಪಾಯಲ್ ಎಂಬ ಪಾತ್ರದಲ್ಲಿ ದೀಪಿಕಾ ದಾಸ್ ಕಾಣಿಸಿಕೊಂಡಿದ್ದಾರೆ. ನಿಜಜೀವನದಲ್ಲೂ ಅಡ್ವೆಂಚರ್ಸ್ ಹಾಗೂ ಟ್ರಾವೆಲ್ನಲ್ಲಿ ಆಸಕ್ತಿಯಿರುವ ದೀಪಿಕಾ ದಾಸ್ ಅವರಿಗೆ ಇದು ಹೇಳಿ ಮಾಡಿಸಿದ ಪಾತ್ರ. ಈವರೆಗೂ ನೀವು ನೋಡಿರದ ದೀಪಿಕಾ ದಾಸ್ ಅವರನ್ನು ಈ ಚಿತ್ರದಲ್ಲಿ ನೋಡಬಹುದು. ಇನ್ನೆರಡು ಪ್ರಮುಖ ಪಾತ್ರಗಳ ಬಗ್ಗೆ ಮುಂದಿನ ದಿನಗಳಲ್ಲಿ ತಿಳಿಸುತ್ತೇನೆ. ಚಿತ್ರೀಕರಣ ಮುಗಿಸಿರುವ ನಮ್ಮ ಚಿತ್ರ ಈಗ ಪೋಸ್ಟ್ ಪ್ರೊಡಕ್ಷನ್ ನಲ್ಲಿ ಬ್ಯುಸಿಯಾಗಿದೆ ಎಂದು ನಿರ್ದೇಶಕ ರೋಹಿತ್ ಕೀರ್ತಿ ತಿಳಿಸಿದರು. ನಾನು ಮೊದಲ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದಂತೆ ಇದೊಂದು ಪ್ರಯಾಣ ಹಾಗೂ ಅಡ್ವೆಂಚರ್ಸ್ ಕಥನಾ. ಈ ಚಿತ್ರದಲ್ಲಿ ನಟಿಸಿದ್ದು ಖುಷಿಯಾಗಿದೆ. ಇಂದು ಹಾಡುಗಳ ಮೂಲಕ ನಮ್ಮ ಚಿತ್ರ ಜನರನ್ನು ತಲುಪುತ್ತಿದೆ ಎಂದು ದೀಪಿಕಾ ದಾಸ್ ತಿಳಿಸಿದರು. ಇದು ನಾನು ನಟಿಸಿರುವ ಮೊದಲ ದಕ್ಷಿಣ ಭಾರತದ ಚಿತ್ರ ಎಂದರು ನಟಿ ಪೂನಂ ಸರ್ ನಾಯಕ್. ನನ್ನ ಪಾತ್ರ ಕೂಡ ಚೆನ್ನಾಗಿದೆ ಎಂದು ಕೇರಳ ಮೂಲದ ನಟ ಫವಾಝ್ ಅಶ್ರಫ್ ಹೇಳಿದರು. ಚಿತ್ರಕ್ಕೆ ಎಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ಮಾಪಕ ಪಿ.ಬಿ.ಪ್ರೇಂನಾಥ್ ಮನವಿ ಮಾಡಿದರು. ಛಾಯಾಗ್ರಾಹಕ ಅಬಿನ್ ರಾಜೇಶ್, ಸಂಗೀತ ನಿರ್ದೇಶಕ ಆರ್ ಹರಿ, ಸಂಕಲನಕಾರ ಸಿ.ಕೆ.ಕುಮಾರ್, ಗೀತರಚನೆಕಾರ ನಾಗಾರ್ಜುನ್ ಶರ್ಮಾ, ಗಾಯಕರಾದ ಚೇತನ್ ನಾಯಕ್, ಔರಾ, ಎಂ ಸಿ ಬಿಜ್ಜು, ಆಂಟೋನಿ ಮೈಕಿಯಾನ್, ಚೇತನ್ ನಾಯಕ್ ಹಾಗೂ ಕಲಾ ನಿರ್ದೇಶಕ ರಾಘು ಮೈಸೂರು ಚಿತ್ರದ ಕುರಿತು ಮಾತನಾಡಿದರು.

ಂ

# ಐಪಿಎಲ್ ಫ್ರಾಂಚೈಸಿಗಳ ಚಿಂತೆ ಹೆಚ್ಚಿಸಿದ ಹೊಸ ರೂಲ್ಸ್




ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18ರ ಮೆಗಾ ಹರಾಜಿಗಾಗಿ ಸಿದ್ಧತೆಗಳು ಶುರುವಾಗಿದೆ. ಇದರ ಮೊದಲ ಹೆಜ್ಜೆಯಾಗಿ ಇದೀಗ ಆಟಗಾರರ ರಿಟೈನ್ ನಿಯಮವನ್ನು ಪ್ರಕಟಿಸಲಾಗಿದೆ. ಈ ನಿಯಮದಂತೆ ಮೆಗಾ ಹರಾಜಿಗೂ ಮುನ್ನ ಗರಿಷ್ಠ 6 ಆಟಗಾರರನ್ನು ತಂಡದಲ್ಲೇ ಉಳಿಸಿಕೊಳ್ಳಬಹುದು.

ಹಾಗೆಯೇ ಉಳಿಸಿಕೊಳ್ಳಲು ಬಯಸದಿದ್ದರೂ ರೈಟ್ ಟು ಮ್ಯಾಚ್ ಕಾರ್ಡ್ ಮೂಲಕ ಗರಿಷ್ಠ 6 ಆಟಗಾರರನ್ನು ಹರಾಜಿಗೆ ಬಿಡುಗಡೆ ಮಾಡಲು ಸಹ ಅವಕಾಶ ನೀಡಲಾಗಿದೆ. ಅಂದರೆ ಇಲ್ಲಿ ಆರ್‌ಟಿಎಂ ಕಾರ್ಡ್ ಬಳಸಿದ ಆಟಗಾರರು ಹರಾಜಿನಲ್ಲಿ ಕಾಣಿಸಿಕೊಂಡರೂ ಅವರ ಮೇಲಿನ ಹಕ್ಕು ಹಳೆಯ ಫ್ರಾಂಚೈಸಿಯ ಕೈಯಲ್ಲೇ ಇರಲಿದೆ.

ಉದಾಹರಣೆಗೆ ಆರ್‌ಸಿಬಿ ತಂಡವು ಮೊಹಮ್ಮದ್ ಸಿರಾಜ್ ಅವರನ್ನು ಹರಾಜಿಗಾಗಿ ರಿಲೀಸ್ ಮಾಡಿದೆ ಎಂದಿಟ್ಟುಕೊಳ್ಳಿ. ಆದರೆ ಬಿಡುಗಡೆಗೂ ಮುನ್ನ ಆರ್‌ಟಿಎಂ ಆಯ್ಕೆ ಬಳಸಿ ಮೆಗಾ ಹರಾಜಿಗಾಗಿ ರಿಲೀಸ್ ಮಾಡಿದರೆ, ಸಿರಾಜ್ ಮೇಲಿನ ಹಕ್ಕು ಆರ್‌ಸಿಬಿ ಬಳಿಯೇ ಇರುತ್ತದೆ.

ಅದರಂತೆ ಮೆಗಾ ಹರಾಜಿನಲ್ಲಿ ಕಾಣಿಸಿಕೊಂಡ ಮೊಹಮ್ಮದ್ ಸಿರಾಜ್ (ಆರ್‌ಟಿಎಂ) ಅವರ ಖರೀದಿಗೆ ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು 10 ಕೋಟಿ ರೂ.ವರೆಗೆ ಬಿಡ್ ಮಾಡಿತು ಎಂದಿಟ್ಟುಕೊಳ್ಳಿ. ಈ ವೇಳೆ ಆ ಮೊತ್ತವನ್ನು ತಾವೇ ನೀಡುತ್ತೇವೆ ಎಂದು ಸಿರಾಜ್ ಅವರನ್ನು ಆರ್‌ಸಿಬಿ ಮರಳಿ ಖರೀದಿಸಬಹುದು.

ಒಂದು ವೇಳೆ ಬಿಡುಗಡೆ ಮಾಡಿದ ತಂಡವು ಮರಳಿ ಖರೀದಿಸಲು ಇಚ್ಛಿಸದಿದ್ದರೆ ಮಾತ್ರ ಆರ್‌ಟಿಎಂ ಆಯ್ಕೆಯಲ್ಲಿ ಕಾಣಿಸಿಕೊಂಡ ಆಟಗಾರರು ಕೊನೆಯದಾಗಿ ಬಿಡ್ ಮಾಡಿದ ತಂಡದ ಪಾಲಾಗಲಿದ್ದಾರೆ. ಆದರೆ ಈ ಆಯ್ಕೆಯೊಂದಿಗೆ ಬಿಸಿಸಿಐ ಪರಿಚಯಿಸಿದ ಹೊಸ ರೂಲ್ಸ್ ಈಗ ಫ್ರಾಂಚೈಸಿಗಳ ಚಿಂತೆಗೆ ಕಾರಣವಾಗಿದೆ.

ಅಂದರೆ ಇಲ್ಲಿ ಆರ್‌ಟಿಎಂ ಆಯ್ಕೆಯಲ್ಲಿ ಮೆಗಾ ಹರಾಜಿನಲ್ಲಿ ಕಾಣಿಸಿಕೊಂಡ ಆಟಗಾರನ ಖರೀದಿಗೆ ಫ್ರಾಂಚೈಸಿಯೊಂದು ಕೊನೆಯದಾಗಿ 10 ಕೋಟಿ ರೂ. ಬಿಡ್ಡಿಂಗ್ ಮಾಡಿದ್ರೆ, ಆರ್‌ಟಿಎಂ ಬಳಸಿದ ಫ್ರಾಂಚೈಸಿಗೆ ನೀವು ಈ ಆಟಗಾರನನ್ನು ಉಳಿಸಿಕೊಳ್ಳಲು ಬಯಸುತ್ತೀರಾ ಎಂದು ಕೇಳಲಾಗುತ್ತದೆ. ಈ ವೇಳೆ ಎಸ್.. ಎಂದರೆ... ಕೊನೆದಾಗಿ ಬಿಡ್ ಮಾಡಿದ ಫ್ರಾಂಚೈಸಿಗೆ ಮತ್ತೊಂದು ಬಿಡ್ಡಿಂಗ್‌ಗೆ ಅವಕಾಶ ನೀಡಲಾಗುತ್ತದೆ. ಈ ನಿಯಮದ ಬಗ್ಗೆ ಇದೀಗ ಫ್ರಾಂಚೈಸಿಗಳು ಅಸಮಾಧಾನ ಹೊರಹಾಕಿದ್ದಾರೆ.

ಹೀಗೆ ಸಿಗುವ ಅವಕಾಶದಲ್ಲಿ ಎದುರಾಳಿ ಫ್ರಾಂಚೈಸಿ ತನ್ನ ಮೊತ್ತವನ್ನು ಡಬಲ್ ಮಾಡಬಹುದು. ಉದಾಹರಣೆಗೆ, ಪಾಟಿದಾರ್‌ಗೆ 10 ಕೋಟಿ ರೂ. ವರೆಗೆ ಬಿಡ್ ಮಾಡಿದ್ದ ಸಿಎಸ್‌ಕೆ ಫ್ರಾಂಚೈಸಿ ತನಗೆ ಆ ಆಟಗಾರ ಸಿಗಲ್ಲ ಎಂದು ಗೊತ್ತಾದ ಮೇಲೆ ಕೊನೆಯ ಬಿಡ್ ಅನ್ನು ಏಕಾಏಕಿ 15 ಕೋಟಿ ರೂ. ಗೆ ಹೆಚ್ಚಿಸಬಹುದು. ಇದರಿಂದ ಆರ್‌ಟಿಎಂ ಬಳಸಿದ ಫ್ರಾಂಚೈಸಿ 15 ಕೋಟಿ ರೂ. ನೀಡಬೇಕಾಗುತ್ತದೆ. ಹೀಗಾಗಿ ಈ ನಿಯಮವನ್ನು ಫ್ರಾಂಚೈಸಿಗಳು ದುರುಪಯೋಗ ಪಡಿಸಿಕೊಳ್ಳುವ ಸಾಧ್ಯತೆ ಹೆಚ್ಚಿದೆ.

ಇದೇ ಕಾರಣದಿಂದ ಇದೀಗ ಕೊಲ್ಕತ್ತಾ ನೈಟ್ ರೈಡರ್ಸ್ ಸೇರಿದಂತೆ ಕೆಲ ಫ್ರಾಂಚೈಸಿಗಳು ರೈಟ್ ಟು ಮ್ಯಾಚ್ (ಆರ್‌ಟಿಎಂ) ಹೊಸ ನಿಯಮದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಅಲ್ಲದೆ ಈ ನಿಯಮವನ್ನು ಬದಲಿಸುವಂತೆ ಬಿಸಿಸಿಐಗೆ ಪತ್ರದ ಮೂಲಕ ಮನವಿ ಮಾಡಿದೆ ಎಂದು ವರದಿಯಾಗಿದೆ.

# ಮಿಸ್ಟರ್ 360 ಮೇಲೆ ಆರ್‌ಸಿಬಿ ಕಣ್ಣು



**ಮುಂಬೈ:** ವಿಶ್ವದ ಶ್ರೀಮಂತ ಕ್ರಿಕೆಟ್ ಲೀಗ್ ಎಂದೇ ಗುರುತಿಸಿಕೊಂಡಿರುವ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ (ಐಪಿಎಲ್ 2025) ಈ ಬಾರಿ ಮಹತ್ವದ ಬದಲಾವಣೆ ಕಂಡುಬರುತ್ತಿದೆ. 17 ಆವೃತ್ತಿ ಕಳೆದರೂ ಒಂದೇ ಒಂದು ಬಾರಿಯೂ ಕಪ್ ಗೆಲ್ಲದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಈ ಬಾರಿ ಟ್ರೋಫಿ ಎತ್ತಿಹಿಡಿಯುವುದಕ್ಕಾಗಿಯೇ ಬಲಿಷ್ಠ ತಂಡ ಕಟ್ಟಲು ಸಜ್ಜಾಗಿದೆ. ಅದಕ್ಕಾಗಿ ಮುಂಬೈ ಇಂಡಿಯನ್ಸ್ ತಂಡ ಸೂಪರ್ ಸ್ಟಾರ್ ಬ್ಯಾಟರ್ ಗಳಾದ ಸೂರ್ಯಕುಮಾರ್ ಯಾದವ್ ಮತ್ತು ಟಿಮ್ ಡೇವಿಡ್ ಅವರ ಮೇಲೆ ಕಣ್ಣಿಟ್ಟಿದೆ ಎಂದು ಮೂಲಗಳು ತಿಳಿಸಿವೆ.

ಈಗಾಗಲೇ ಬಿಸಿಸಿಐ 2025-27 ಐಪಿಎಲ್ ಆವೃತ್ತಿಗಳಿಗೆ ಸಂಬಂಧಿಸಿದಂತೆ ಹಲವು ನಿಯಮಗಳನ್ನು ಜಾರಿಗೊಳಿಸಿದೆ. ಈ ಬಾರಿ ಮೆಗಾ ಹರಾಜು ನಡೆಯುತ್ತಿರುವುದರಿಂದ 5 ಆಟಗಾರರನ್ನು ಉಳಿಸಿಕೊಳ್ಳಲು ಬಿಸಿಸಿಐ ಅನುಮತಿ ನೀಡಿದೆ. ಅಲ್ಲದೇ ಒಂದು ಆರ್‌ಟಿಎಂ ಕಾರ್ಡ್ ಬಳಕೆಗೂ ಅಸ್ತು ಎಂದಿದೆ. ಹಾಗಾಗಿ ಈ ಬಾರಿ ಟ್ರೇಡ್ ಇನ್ ವಿಂಡೋ ಅಥವಾ ಆರ್‌ಟಿಎಂ ಕಾರ್ಡ್ ನಿಯಮದಲ್ಲಿ ಇಬ್ಬರು ಬ್ಯಾಟರ್‌ಗಳನ್ನು ತಂಡಕ್ಕೆ ಕರೆತರಲು ಆರ್‌ಸಿಬಿ ಪ್ಲ್ಯಾನ್ ಮಾಡಿದೆ ಎಂದು ಹೇಳಲಾಗುತ್ತಿದೆ. ಆದ್ರೆ ಫ್ರಾಂಚೈಸಿಗಳು ಈ ಬಗ್ಗೆ ಅಧಿಕೃತ ಹೇಳಿಕೆ ನೀಡಿಲ್ಲ.

**ಮುಂಬೈನಲ್ಲಿ ಸೂರ್ಯನ ಸಾಧನೆ:** 2011ರಿಂದಲೂ ಮುಂಬೈ ಇಂಡಿಯನ್ಸ್ ತಂಡದಲ್ಲೇ ಇರುವ ಸೂರ್ಯಕುಮಾರ್ ಯಾದವ್ 150 ಪಂದ್ಯಗಳಲ್ಲಿ 3,594 ರನ್ ಗಳಿಸಿದ್ದಾರೆ. ಇದರಲ್ಲಿ 2 ಶತಕ, 24 ಅರ್ಧಶತಕ, 385 ಬೌಂಡರಿಗಳು ಹಾಗೂ 130 ಸಿಕ್ಸರ್‌ಗಳೂ ಸೇರಿವೆ. ಇನ್ನೂ ಈವರೆಗೆ 38 ಪಂದ್ಯಗಳನ್ನಾಡಿರುವ ಎಲೆಕ್ಟ್ರಿಕ್ ಸ್ಟ್ರೈಕರ್ ಟಿಮ್ ಡೇವಿಡ್ 659 ರನ್‌ಗಳನ್ನ ಗಳಿಸಿದ್ದಾರೆ. ಇದರಲ್ಲಿ 38 ಬೌಂಡರಿ, 46 ಸಿಕ್ಸರ್‌ಗಳು ಸೇರಿವೆ.

## ದಸರಾ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ

# 2000ಕ್ಕೂ ಹೆಚ್ಚು ವಿಶೇಷ ಸಾರಿಗೆ ವ್ಯವಸ್ಥೆ!



**ಬೆಂಗಳೂರು:** ಮೈಸೂರು ದಸರಾ-2024 ಮತ್ತು ದಸರಾ ರಜೆಗಳ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ಅಕ್ಟೋಬರ್ 9ರಿಂದ 12ರವರೆಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಬೆಂಗಳೂರಿನಿಂದ ರಾಜ್ಯ ಮತ್ತು ಅಂತರ್‌ರಾಜ್ಯದ ವಿವಿಧ ಸ್ಥಳಗಳಿಗೆ 2000ಕ್ಕೂ ಹೆಚ್ಚು ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಿದೆ. ರಾಜ್ಯ ಹಾಗೂ ದೇಶದ ವಿವಿಧೆಡೆಗಳಿಂದ ದಸರಾ ವೀಕ್ಷಣೆಗೆ ಮೈಸೂರು ನಗರಕ್ಕೆ ಬರುವ ಪ್ರವಾಸಿಗರು ಹಾಗೂ ರಜೆಗಳ ಪ್ರಯುಕ್ತ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ನಿಗಮ, ಪ್ರಸ್ತುತ ಕಾರ್ಯಾಚರಿಸುತ್ತಿರುವ ವೇಗದೂತ, ರಾಜಹಂಸ, ಸ್ಲೀಪರ್, ಐರಾವತ, ಐರಾವತ ಕ್ಲಬ್ ಕ್ಲಾಸ್ (ಮಲ್ಟಿ ಆಕ್ಸಲ್) ಹಾಗೂ ಅಂಬಾರಿ ಕ್ಲಬ್ ಕ್ಲಾಸ್, ಪಲ್ಲಕ್ಕಿ ಸ್ಲೀಪರ್, ಅಶ್ವಮೇಧ ಸಾರಿಗೆ ಸೇವೆಗಳ ಜೊತೆಗೆ ಹೆಚ್ಚುವರಿ ಬಸ್ ಸೌಲಭ್ಯ ಒದಗಿಸಲು ಕ್ರಮ ಕೈಗೊಂಡಿದೆ.

09/10/2024 ರಿಂದ 12/10/2024ರವರೆಗೆ ಬೆಂಗಳೂರಿನಿಂದ ರಾಜ್ಯದ ಮತ್ತು ಅಂತರ್ ರಾಜ್ಯದ ವಿವಿಧ ಸ್ಥಳಗಳಿಗೆ 2000ಕ್ಕೂ ಹೆಚ್ಚು ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ಈ ಬಸ್‌ಗಳು ಹೊರಡಲಿವೆ. ನಂತರ ರಾಜ್ಯದ ಮತ್ತು ಅಂತರ್‌ರಾಜ್ಯದ ವಿವಿಧ ಸ್ಥಳಗಳಿಂದ ವಾಪಸ್ ಬೆಂಗಳೂರಿಗೆ ಬರಲು 13/10/2024ರಿಂದ 14/10/2024ರವರೆಗೆ ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆ ತಿಳಿಸಿದೆ.

**ಮೈಸೂರಿಗೆ ಪ್ರತ್ಯೇಕ ವಿಶೇಷ ಬಸ್:** ಇನ್ನುಮೈಸೂರು ದಸರಾ ನೋಡಲು ಹೋಗುವವರೆಗೂ ಸಹ ಹೆಚ್ಚುವರಿ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರಿಗೆ ಪ್ರತ್ಯೇಕವಾಗಿ 260 ಹೆಚ್ಚುವರಿ ಬಸ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ.

ಮೈಸೂರಿನ ಸುತ್ತಮುತ್ತಲಿನ ಪ್ರೇಕ್ಷಣೀಯ, ಧಾರ್ಮಿಕ ಹಾಗೂ ಪ್ರವಾಸಿ ತಾಣಗಳಾದ ಚಾಮುಂಡಿ ಬೆಟ್ಟ, ಕೆ.ಆರ್.ಎಸ್ ಅಣೆಕಟ್ಟು/ಬೃಂದಾವನ, ಶ್ರೀರಂಗಪಟ್ಟಣ, ನಂಜನಗೂಡು ಸೇರಿದಂತೆ ಮಡಿಕೇರಿ, ಮಂಡ್ಯ, ಮಳವಳ್ಳಿ, ಹೆಚ್.ಡಿ ಕೋಟೆ, ಚಾಮರಾಜನಗರ, ಹುಣಸೂರು. ಕೆ.ಆರ್.ನಗರ, ಗುಂಡ್ಲುಪೇಟೆ ಇತ್ಯಾದಿ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲು 400 ಹೆಚ್ಚುವರಿ ವಾಹನಗಳು ಸೇರಿ ಒಟ್ಟಾರೆ 660 ದಸರಾ ವಿಶೇಷ ವಾಹನಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದೆ. ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮೈಸೂರಿಗೆ ಫ್ಲೈ ಬಸ್ ಮೂಲಕ ನೇರ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ನಿಗಮ ತಿಳಿಸಿದೆ.

### ವಿಶೇಷ ಬಸ್‌ಗಳು ಎಲ್ಲೆಲ್ಲಿಗೆ?

ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ಮಡಿಕೇರಿ, ಮಂಗಳೂರು, ದಾವಣಗೆರೆ, ಗೋಕರ್ಣ, ಕೊಲ್ಲೂರು, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಕಾರವಾರ, ಬಳ್ಳಾರಿ, ಹೊಸಪೇಟೆ, ಕಲಬುರಗಿ, ರಾಯಚೂರು ಮುಂತಾದ ಸ್ಥಳಗಳಿಗೆ ಹಾಗೂ ನೆರೆರಾಜ್ಯಗಳಲ್ಲಿನ ಹೈದರಾಬಾದ್, ಚೆನ್ನೈ, ಊಟಿ, ಕೊಡೈಕೆನಾಲ್, ಸೇಲಂ, ತಿರುಚಿನಾಪಳ್ಳಿ, ಪುದುಕೋಟೆ, ಮಧುರೈ, ಪಣಜಿ, ಶಿರಡಿ, ಪೂನಾ, ಎರ್ನಾಕುಲಂ, ಪಾಲ್ಘಾಟ್ ಹಾಗೂ ಇತರೆ ಸ್ಥಳಗಳಿಗೆ ಈ ವಿಶೇಷ ಬಸ್ ವ್ಯವಸ್ಥೆ ಮಾಡಲಾಗಿದೆ.

## ಅಪ್ರಾಪ್ತೆ ಜೊತೆ ಲವ್, ಬಳಿಕ ಜೂಟ್!

# ಮಗ ಮಾಡಿದ ತಪ್ಪಿಗೆ ತಾಯಿಗೆ ಶಿಕ್ಷೆ



**ಬೆಂಗಳೂರು:** ಈ ಪ್ರೀತಿ ಅನ್ನೋದೇ ಹಾಗೆ ಕಣ್ರೀ, ಯಾವಾಗ ಯಾರ ಹೃದಯದಲ್ಲಿ ಪ್ರೇಮಗೀತೆ ಶುರುವಾಗುತ್ತೋ ಗೊತ್ತೇ ಆಗಲ್ಲ. ಅದಕ್ಕೆ ಕಾರಣನೂ ಬೇಕಿಲ್ಲ. ಒಮ್ಮೆ ಬಂದು ಹೃದಯದ ಅರಮನೆ ಸೇರಿದರೆ ಮತ್ತೆ ವಾಪಸ್ ಹೋಗೋದೂ ಇಲ್ಲ. ಆದರೆ ಕೆಲವರ ಪ್ರೀತಿಗೆ ಪೋಷಕರೇ ವಿಲನ್ ಆಗ್ಬಿಡ್ತಾರೆ. ಇನ್ನು ಕೆಲವರ ಪ್ರೀತಿ ಹೆತ್ತವರನ್ನೇ ಸಂಕಷ್ಟದ ಸುಳಿಗೆ ಸಿಲುಕಿಸಿ ಬಿಡುತ್ತದೆ. ಬೆಂಗಳೂರಿನ ಕೆಂಪತಿಮ್ಮನಹಳ್ಳಿಯಲ್ಲೂ ಆಗಿದ್ದೂ ಇದೆ. ಮಗನ ಪ್ರೀತಿಯಿಂದ ತಾಯಿ ಕಣ್ಣೀರು ಹಾಕುವಂತಾಗಿದೆ.

ಸಾಯ್ತೀನಿ ಅಂದವಳ ಜೊತೆ ಓಡಿ ಹೋದ ಯುವಕ. ಆತ ಕೆಂಪತಿಮ್ಮನಹಳ್ಳಿ ನಿವಾಸಿ, ಕೆಲ ತಿಂಗಳಿಂದ ಪಕ್ಕದ ಗ್ರಾಮದ ಅಪ್ರಾಪ್ತೆಯನ್ನ ಪ್ರೀತಿ ಮಾಡ್ತಿದ್ದ. ಆಕೆಗೂ ಇವನು ಅಂದ್ರೆ ಪ್ರಾಣ, ಮೊದ್ಲೇ ಪ್ರೀತಿ ಉಕ್ಕುವ ವಯಸ್ಸು. ಪ್ರೀತಿನೇ ಪ್ರಪಂಚ ಅನ್ನೋ ಮನಸ್ಸು. ಹಾಗೆ ಕೊನೆವರೆಗೂ ಜೊತೆಗೆ ಇರ್ಬೇಕು ಅಂದುಕೊಂಡಿದ್ದ ಈ ಜೋಡಿ, ಮದುವೆಯಾಗಲು ನಿರ್ಧರಿಸಿದ್ದರು.

ಮನೆಯಲ್ಲಿ ತಮ್ಮ ಪ್ರೀತಿಯ ವಿಷ್ಯವನ್ನೂ ಹೇಳಿಕೊಂಡಿದ್ದರು. ಆದರೆ ಇದಕ್ಕೆ ಪೋಷಕರು ಬಿಲ್‌ಕುಲ್ ಒಪ್ಪಿರಲಿಲ್ಲ. ಅದರಲ್ಲೂ ಅಪ್ರಾಪ್ತೆ ಪೋಷಕರಂತೂ ಉರಿದುರಿದು ಬಿದ್ದಿದ್ದರು. ಆದರೆ ಆಕೆ ಮಾತ್ರ ಅವನಿಲ್ಲದೇ ಬದುಕೋದೇ ಇಲ್ಲ ಅಂತ ಪಟ್ಟು ಹಿಡಿದಿದ್ಲು. ನೀನು ಬರದಿದ್ದರೆ ಕತ್ತರಿಯಿಂದ ಕೈ ಕುಯ್ದುಕೊಂಡು ಸಾಯ್ತೀನಿ ಅಂತ ಯುವತಿ ಕರೆ ಮಾಡಿದ್ದಳಂತೆ. ಹೀಗಾಗಿ ಯುವಕ ಆಕೆಯನ್ನ ಕರೆದುಕೊಂಡು ಓಡಿ ಹೋಗಿದ್ದಾನೆ.

ಯಾವಾಗ ಮನೆಯಲ್ಲಿ ಮಗಳು ಇಲ್ಲ ಅಂತ ಗೊತ್ತಾಯ್ತೋ ಪೋಷಕರು ಕೆರಳಿ ಕೆಂಡವಾಗಿದ್ದರು. ರಾತ್ರೋರಾತ್ರಿ ಎರಡು ಕಾರಿನಲ್ಲಿ ಯುವಕನ ಮನೆಗೆ ಬಂದಿದ್ದಾರೆ. ಈ ವೇಳೆ ಯುವಕನ ತಾಯಿ ಹಾಗೂ ಮಾವನ ಮೇಲೆ ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ. ನಮಗೆ ಏನೂ ಗೊತ್ತಿಲ್ಲ ಅಂದ್ರೂ ಹಿಗ್ಗಾಮುಗ್ಗಾ ಥಳಿಸಿದ್ದಾರಂತೆ. ಇದರಿಂದ ಯುವಕ ತಾಯಿಗೆ ಗಾಯಗಳಾಗಿದ್ದು, ನ್ಯಾಯ ಕೊಡಿಸುವಂತೆ ಅಂಗಲಾಚುತ್ತಿದ್ದಾರೆ.ಅ

ಟೈಲರಿಂಗ್ ಮಾಡಿ ಮಗನ ಸಾಕಿದ್ದ ತಾಯಿ ಕಣ್ಣೀರು ಹಾಕಿದ್ದಾರೆ. ಹೇಳದೇ ಕೇಳದೇ ಈ ರೀತಿ ಮಾಡಿದ್ದಕ್ಕೆ ಅಸಮಾಧಾನ ಹೊರಹಾಕಿದ್ದಾರೆ. ಅಷ್ಟೆಲ್ಲಾ ಗಲಾಟೆ ಆದರೂ ಗ್ರಾಮಸ್ಥರು ಸಹಾಯಕ್ಕೆ ಬರಲಿಲ್ಲ ಅಂತ ಅಳಲು ತೋಡಿಕೊಂಡಿದ್ದಾರೆ. ಒಟ್ಟಾರೆ ಮಗಳ ಪ್ರೀತಿ ಪೋಷಕರ ಆಕ್ರೋಶಕ್ಕೆ ಕಾರಣವಾದರೆ, ಮಗನ ಪ್ರೀತಿ ತಾಯಿಗೆ ಪಜೀತಿ ತಂದಿಟ್ಟಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com